


ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ
ಡಿಸೆಂಬರ್ 26 ಮಂಗಳವಾರ 2023
ಸಂಪುಟ: 44 | ಸಂಚಿಕೆ: 249 | ಪುಟಗಳು: 12
ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com
₹4



ಒಳಪುಟಗಳಲ್ಲಿ



ಕೋಟಿ ಕೋಟಿ ಸುರಿದು ರೂಪಿಸಿದ ಮಹತ್ವದ ಮೈಸೂರಿನ ಸಿಂಥೆಟಿಕ್ ಸೈಕಲ್ ಟ್ರ್ಯಾಕ್ ನಿರರ್ಥಕವಾಯ್ತು! ಆದರೆ ವಾಹನ ನಿಲುಗಡೆಗೆ ಪ್ರಶಸ್ತ ಸ್ಥಳವಾಯ್ತು...!!



- ಟ್ರ್ಯಾಕ್‌ನಲ್ಲಿ ಸೈಕಲ್ ಸಾಗಲು ಜಾಗವೇ ಇಲ್ಲ
- ಹಳ್ಳ ಹಿಡಿದ ದೇಶದ ಮಾದರಿ ಯೋಜನೆ
- ಎರಡೇ ತಿಂಗಳಿಗೆ ನೂರಾರು ಟ್ರಾಫಿಕ್ ಕೋನ್ ನೆಲಸಮ
- ವ್ಯವಸ್ಥೆ ವಿರುದ್ಧ ಸೈಕಲ್ ಪ್ರಿಯರ ಆಕ್ರೋಶ
- ಜನರ ತೆರಿಗೆ ಹಣ ತಲೆಬುಡ ಇಲ್ಲದ ಇಂತಹ ಯೋಜನೆಗೆ ಬಳಕೆ



> “ಸಿಂಥೆಟಿಕ್ ಸೈಕಲ್ ಟ್ರ್ಯಾಕ್ ವಿದೇಶದಲ್ಲಿರುವ ಸಂಚಾರ ವ್ಯವಸ್ಥೆಯ ಒಂದು ಭಾಗ. ಇದನ್ನು ಮೈಸೂರಿನಲ್ಲಿ ಮೊದಲ ಬಾರಿಗೆ ಪರಿಚಯಿಸಲಾಗಿದೆ. ಇದರ ಬಗ್ಗೆ ಮೈಸೂರು ಜನರಿಗೆ ಇನ್ನು ಸ್ಪಷ್ಟ ಮಾಹಿತಿ ಇಲ್ಲ. ಆದ ಕಾರಣ ಸಿಂಥೆಟಿಕ್ ಸೈಕಲ್ ಟ್ರ್ಯಾಕ್ ಮಾರ್ಗದಲ್ಲಿ ಮಾಹಿತಿ ಫಲಕಗಳನ್ನು ಅಳಡಿಸಲಾಗುವುದು. ಜೊತೆಗೆ ಜಾಗೃತಿ ಮೂಡಿಸಲಾಗುವುದು. ಯಾವ ಉದ್ದೇಶಕ್ಕೆ ಇದನ್ನು ನಿರ್ಮಾಣ ಮಾಡಲಾಗಿದೆ ಎಂಬುದರ ಬಗ್ಗೆ ಜನರಲ್ಲಿ ಅರಿವು ಮೂಡಿಸಿದರೆ ಪ್ರಾಯಶಃ ಟ್ರ್ಯಾಕ್‌ನಲ್ಲಿ ವಾಹನಗಳನ್ನು ನಿಲುಗಡೆ ಮಾಡುವುದಿಲ್ಲ.
> –ಆಶಾದ್ ಉರ್ ರೆಹಮಾನ್ ಷರೀಫ್, ನಗರಪಾಲಿಕೆ ಆಯುಕ್ತ

ಮೈಸೂರು, ಡಿ.25(ಬಿಎಲ್‌ಯು)– ಪರಿಸರ ಸ್ನೇಹಿ ಹಾಗೂ ಆರೋಗ್ಯ ದಾಯಕ ಸೈಕಲ್ ಬಳಕೆ ಉತ್ತೇಜಿಸುವ ನಿಟ್ಟಿನಲ್ಲಿ ಮೈಸೂರಿನಲ್ಲಿ ನಿರ್ಮಿಸಿರುವ ದೇಶಕ್ಕೆ ಮಾದರಿಯಾದ ಸಿಂಥೆಟಿಕ್ ಸೈಕಲ್ ಟ್ರ್ಯಾಕ್ ಯೋಜನೆ ನಿರೀಕ್ಷೆಯಂತೆ! ಹಳ್ಳ ಹಿಡಿದಿದೆ.

ಮೈಸೂರಿನ ಹಲವು ರಸ್ತೆಗಳಲ್ಲಿ ನಿರ್ಮಾಣ ಮಾಡಿರುವ ಈ ಸೈಕಲ್ ಟ್ರ್ಯಾಕ್‌ಗಳನ್ನು ಜನರು ವಾಹನ ನಿಲುಗಡೆಗೆ ಬಳಸಿಕೊಳ್ಳುತ್ತಿದ್ದಾರೆ. ಇದರಿಂದ ಮಹಾಉದ್ದೇಶ ಮಣ್ಣು ಪಾಲಾಗಿದೆ. ಜೊತೆಗೆ ಬೆಲೆ ಬಾಳುವ ಟ್ರಾಫಿಕ್ ಕೋನ್‌ಗಳು ಅಡ್ಡಾದಿಡ್ಡಿಯಾಗಿ ವಾಹನ ಚಲಿಸಿ, ಹರಿಸಿದ್ದರಿಂದ ಹಾನಿಯಾಗಿವೆ.

ಬಸ್ಸು, ಲಾರಿ, ಕಾರು, ಸ್ಕೂಟರ್ ಸೇರಿದಂತೆ ಇತರೆ ವಾಹನಗಳಿಂದ ಆಗುತ್ತಿರುವ ಪರಿಸರ ಮಾಲಿನ್ಯ ತಡೆಗಟ್ಟುವುದು ಹಾಗೂ ಸೈಕಲ್ ಬಳಕೆ ಮೂಲಕ ಪರಿಸರ ಸ್ನೇಹಿ, ಆರೋಗ್ಯದಾಯಕ ಸಾರಿಗೆ ಉತ್ತೇಜಿಸುವ ನಿಟ್ಟಿನಲ್ಲಿ ಮೈಸೂರಿನಲ್ಲಿ ದೇಶದಲ್ಲೇ ಮೊದಲ ಬಾರಿಗೆ ಟ್ರಿಣ್ ಟ್ರಿಣ್ ಸೈಕಲ್ ಸೌಲಭ್ಯ ಪರಿಚಯಿಸಿ ಅದರಲ್ಲಿ ಯಶಸ್ವಿಯಾಗಿದೆ. ದೇಶದಲ್ಲೇ ಮೊದಲು ವಿದೇಶಿ ಮಾದರಿಯ ಮತ್ತೊಂದು ಯೋಜನೆಯನ್ನು ಕೈಗೆತ್ತಿಕೊಂಡ ಸರ್ಕಾರ ಮೈಸೂರಿನಲ್ಲಿ ಸಿಂಥೆಟಿಕ್ ಸೈಕಲ್ ಟ್ರ್ಯಾಕ್ ನಿರ್ಮಾಣ ಮಾಡಿದೆ. ನಗರಪಾಲಿಕೆಯು ನಗರದ ಹಲವು ಸ್ಥಳಗಳಲ್ಲಿ ಸಿಂಥೆಟಿಕ್ ಸೈಕಲ್ ಟ್ರ್ಯಾಕ್‌ನ್ನು ಕಳೆದ ಎರಡು ತಿಂಗಳ ಹಿಂದೆ ಲಕ್ಷ ಲಕ್ಷ ಹಣ ಸುರಿದು ನಿರ್ಮಾಣ ಮಾಡಿತ್ತು. ಒಟ್ಟು 8.72 ಕಿಲೋ ಮೀಟರ್ ರಸ್ತೆಯಲ್ಲಿ ಟ್ರಾಫಿಕ್ ಕೋನ್‌ಗಳನ್ನು ಅಳವಡಿಸಲಾಗಿತ್ತು. ಇದಕ್ಕೆ 3,65,60,000 ರೂಪಾಯಿ ವೆಚ್ಚ ಮಾಡಲಾಗಿದೆ. ಸೈಕಲ್ ಸವಾರರ ಪ್ರತ್ಯೇಕ ಸುರಕ್ಷಿತ ಸಂಚಾರಕ್ಕೆ ಅನುವಾಗುವಂತೆ ● 9ನೇ ಪುಟಕ್ಕೆ

ವಾಣಿಜ್ಯ ಮಳಿಗೆ ಫಲಕಗಳಲ್ಲಿ ಶೇ.60 ಕನ್ನಡ ಕಡ್ಡಾಯ



ಬೆಂಗಳೂರು: ಬೆಂಗಳೂರಿನ ವಾಣಿಜ್ಯ ಮಳಿಗೆಗಳ ನಾಮಫಲಕದಲ್ಲಿ ಶೇ.60 ಕನ್ನಡ ಅಕ್ಷರಗಳ ಬಳಕೆ ಕಡ್ಡಾಯಗೊಳಿಸಲಾಗಿದೆ. ಇದಕ್ಕೆ ಫೆ.28 ಕಡೆಯ ದಿನವಾಗಿದ್ದು, ಕನ್ನಡವನ್ನು ಉಳಿಸಿ, ಕನ್ನಡತನವನ್ನು ಬೆಳೆಸುವ ಸಲುವಾಗಿ ಈ ನಿಯಮ ತರಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಈ ಬಗ್ಗೆ ಫೇಸ್‌ಬುಕ್‌ನಲ್ಲಿ ಪೋಸ್ಟ್ ಮಾಡಿ ಮನವಿ ಮಾಡಿಕೊಂಡಿರುವ ಅವರು, ಕರ್ನಾಟಕದಲ್ಲಿ ಹುಟ್ಟಿ ಬೆಳೆದವರು, ಹೊರರಾಜ್ಯದಿಂದ ಇಲ್ಲಿಗೆ ಬಂದು ಬದುಕು ಕಟ್ಟಿಕೊಂಡವರನ್ನು ನಾವು "ಕನ್ನಡಿಗ"ರೇ ಎಂದು ಭಾವಿಸಿದ್ದೇವೆ. ಕನ್ನಡ ನೆಲದಲ್ಲಿ ಕನ್ನಡಕ್ಕೇ ಮೊದಲ ಪ್ರಾಶಸ್ತ್ಯ. ಅನ್ನ ಕೊಡುವ ಈ ನೆಲದ ನಿಯಮ ಪಾಲನೆ ಮಾಡಬೇಕಿರುವುದು ಪ್ರತಿಯೊಬ್ಬರ ಕರ್ತವ್ಯ ಕೂಡ. ಕನ್ನಡವನ್ನು ಉಳಿಸಿ, ಕನ್ನಡತನವನ್ನು ಬೆಳೆಸುವ ಸಲುವಾಗಿ ಬೆಂಗಳೂರಿನ ವಾಣಿಜ್ಯ ಮಳಿಗೆಗಳ ನಾಮಫಲಕದಲ್ಲಿ ಶೇ.60 ಕನ್ನಡ ಅಕ್ಷರಗಳ ಬಳಕೆ ಕಡ್ಡಾಯಗೊಳಿಸಲಾಗಿದೆ. ಇದಕ್ಕೆ ಫೆಬ್ರವರಿ 28 ಕಡೆಯ ದಿನವಾಗಿದ್ದು, ನಿಯಮ ಪಾಲನೆ ಮಾಡಿ "ಹೆಮ್ಮೆಯ ಕನ್ನಡಿಗ"ರಾಗಿ ಎಂದು ಸಂದೇಶ ರವಾನಿಸಿದ್ದಾರೆ. ವಾಣಿಜ್ಯ ಮಳಿಗೆಗಳ ನಾಮ ಫಲಕಗಳಲ್ಲಿ ಕಡ್ಡಾಯವಾಗಿ ಕನ್ನಡ ಬಳಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಸದಸ್ಯರು ಈ ಹಿಂದೆ ಮನವಿ ಮಾಡಿದ್ದರು.

ಮೂವರು ಡಿಸಿಎಂ ಮತ್ತೆ ಮುನ್ನೆಲೆಗೆ

- ಹಾಲಿ ಡಿಸಿಎಂ ಡಿ.ಕೆ.ಶಿವಕುಮಾರ್‌ಗೆ ಬ್ರೇಕ್ ಹಾಕಲು ಬಣ ತಂತ್ರ
- ದೆಹಲಿ ವರಿಷ್ಠರ ಮೇಲೆ ಸತೀಶ್ ಜಾರಕಿಹೊಳಿ ಒತ್ತಡ
- ಪರಿಶಿಷ್ಟ ಜಾತಿ, ವರ್ಗ, ವೀರಶೈವ ಸಮುದಾಯಕ್ಕೆ ತಲಾ ಒಂದು ಉಪಮುಖ್ಯಮಂತ್ರಿ ಸ್ಥಾನ ಪ್ರಸ್ತಾಪ



ಬೆಂಗಳೂರು, ಡಿ.25 (ಕೆಎಂಶಿ)– ಪಂಚರಾಜ್ಯಗಳ ವಿಧಾನಸಭಾ ಚುನಾವಣೆ ಮುಗಿಯುತ್ತಿದ್ದಂತೆ ಸಿದ್ದರಾಮಯ್ಯ ಸಂಪುಟವನ್ನು ಪುನರ್ ರಚಿಸಿ ಹೊಸದಾಗಿ ಮೂವರು ಉಪಮುಖ್ಯಮಂತ್ರಿಗಳಿಗೆ ಅವಕಾಶ ಮಾಡಿಕೊಡುವಂತೆ ಕಾಂಗ್ರೆಸ್ ವರಿಷ್ಠರ ಮೇಲೆ ಮತ್ತೆ ಒತ್ತಡ ಹಾಕಲಾಗುತ್ತಿದೆ.

ಚುನಾವಣೆ ಸಮಯದಲ್ಲಿ ಮೌನವಾಗಿದ್ದ ಕೆಲವು ಮುಖಂಡರು ಮತ್ತೆ ಉಪಮುಖ್ಯಮಂತ್ರಿ ನೇಮಕಾತಿಯನ್ನು ಮುನ್ನೆಲೆಗೆ ತಂದಿದ್ದಾರೆ. ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಮ್ಮ ನಿಲುವನ್ನು ಮುಂದಿಟ್ಟುಕೊಂಡು ವರಿಷ್ಠರ ಮೇಲೆ ಒತ್ತಡ ಹೇರುತ್ತಿದ್ದು, ಇದಕ್ಕೆ ಕಾಂಗ್ರೆಸ್‌ನ ಕೆಲವು ಶಾಸಕರು ಬೆನ್ನೆಲುಬಾಗಿ ನಿಂತಿದ್ದಾರೆ.




ಮುಂಬರುವ ಲೋಕಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಪರಿಶಿಷ್ಟ ಜಾತಿ, ವರ್ಗ ಹಾಗೂ ವೀರಶೈವ ಸಮುದಾಯದ ತಲಾ ಒಬ್ಬರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಿ ಎಂದು ವರಿಷ್ಠರ ಮೇಲೆ ಸತೀಶ್ ಒತ್ತಡ ಹೇರಿದ್ದಾರೆ. ತಮ್ಮ ಆಪ್ತರ ಜೊತೆಗೂಡಿ ಕಳೆದ ಕೆಲವು ದಿನಗಳಿಂದ ದೆಹಲಿಯಲ್ಲಿ ಬಿಡಾರ ಹೂಡಿದ್ದ ಸತೀಶ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಸೇರಿದಂತೆ ಕೆಲವು ಮುಖಂಡರನ್ನು ಭೇಟಿ ಮಾಡಿ ತಮಗೆ ಸಚಿವ ಸ್ಥಾನದಿಂದ ಬಡ್ತಿ ನೀಡುವಂತೆ ಮನವಿ ಮಾಡಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ನೀವು ನೀಡಿರುವ ಗುರಿ ಮುಟ್ಟಲು ಕರ್ನಾಟಕದಲ್ಲಿ ಜಾತಿ ಸಮೀಕರಣ ಅಗತ್ಯವಿದೆ.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಗ್ಯಾರಂಟಿ ಯೋಜನೆಗಳ ಭರವಸೆ ಜೊತೆಗೆ ಜಾತಿಗಳ ಸಮೀಕರಣದಿಂದ ಕರ್ನಾಟಕದಲ್ಲಿ ಅಧಿಕಾರಕ್ಕೆ ಬಂದಿದ್ದೇವೆ. ಲೋಕಸಭಾ ಚುನಾವಣೆಯಲ್ಲಿ ಹೆಚ್ಚು ಸ್ಥಾನ ಗಳಿಸಬೇಕಾದರೆ ಈ ಮೂರು ವರ್ಗಗಳಿಗೆ ಸೇರಿದ ಹಿರಿಯ ಶಾಸಕರಲ್ಲಿ ತಲಾ ಒಬ್ಬರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಿ. ಇದರಿಂದ ನಮಗೆ ಮತ ● 9ನೇ ಪುಟಕ್ಕೆ

ವಿಧಾನಪರಿಷತ್ ವಿಪಕ್ಷ ನಾಯಕರಾಗಿ ಕೋಟಾ ಶ್ರೀನಿವಾಸ ಪೂಜಾರಿ

ಅರವಿಂದ ಬೆಲ್ಲದ್ ವಿಧಾನಸಭೆ ವಿಪಕ್ಷದ ಉಪನಾಯಕ




ಬೆಂಗಳೂರು, ಡಿ.25(ಕೆಎಂಶಿ)–ವಿಧಾನ ಪರಿಷತ್ತಿನ ಪ್ರತಿಪಕ್ಷದ ನಾಯಕರಾಗಿ ಕೋಟಾ ಶ್ರೀನಿವಾಸ ಪೂಜಾರಿ, ಉಪನಾಯಕರಾಗಿ ಸುನೀಲ್ ವಲ್ಯಾಪುರೆ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇಮಿಸಿದ್ದಾರೆ.

ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರ ಸೂಚನೆ ಮೇರೆಗೆ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ವಿವಿಧ ಹುದ್ದೆಗಳಿಗೆ ನಿಯುಕ್ತಿ ಮಾಡಲಾಗಿದೆ ಎಂದು ಹೇಳಿಕೆಯಲ್ಲಿ ರಾಜ್ಯಾಧ್ಯಕ್ಷರು ತಿಳಿಸಿದ್ದಾರೆ. ವಿಧಾನಪರಿಷತ್ತಿನ ಮುಖ್ಯ ಸಚೇತಕ ಸ್ಥಾನಕ್ಕೆ ಎಸ್.ರವಿಕುಮಾರ್ ಅವರನ್ನು ನಿಯುಕ್ತಿ ಮಾಡಿದ್ದು, ವಿಧಾನಸಭೆಯ ವಿರೋಧ ಪಕ್ಷದ ಉಪನಾಯಕ ಸ್ಥಾನಕ್ಕೆ ಅರವಿಂದ ಬೆಲ್ಲದ್, ಮುಖ್ಯ ಸಚೇತಕ ಸ್ಥಾನಕ್ಕೆ ದೊಡ್ಡನಗೌಡ ಜಿ.ಪಾಟೀಲ್ ಅವರನ್ನು ನೇಮಿಸಲಾಗಿದೆ.





ವಾಜಪೇಯಿ ಜನ್ಮ ದಿನೋತ್ಸವದ ಅಂಗವಾಗಿ ಸಸಿ ನೆಡುವ ಕಾರ್ಯಕ್ರಮ



ಮೈಸೂರು, ಡಿ. 25– ಭಾರತರತ್ನ, ಅಜಾತಶತ್ರು ದೇಶದ ಮಾಜಿ ಪ್ರಧಾನಿಗಳಾದ ಅಟಲ್ ಬಿಹಾರಿ ವಾಜಪೇಯಿ ಅವರ 99ನೇ ಜನ್ಮದಿನೋತ್ಸವದ ಅಂಗವಾಗಿ ಬಿಜೆಪಿ ಮುಖಂಡರಾದ ಸಿ. ಸಂದೀಪ್ ನೇತೃತ್ವದಲ್ಲಿ ಚಾಮುಂಡಿಪುರಂ ವೃತ್ತದಲ್ಲಿರುವ ತಗಡೂರು ರಾಮಚಂದ್ರ ರಾವ್ ಉದ್ಯಾನದಲ್ಲಿ ಮಕ್ಕಳಿಂದ ಚಿತ್ರ ಬಿಡಿಸುವ ಸ್ಪರ್ಧೆ ಹಾಗೂ ಹಸಿರೇ ಉಸಿರು ಸಸಿ ನೆಡುವ ಕಾರ್ಯಕ್ರಮಕ್ಕೆ ಕೃಷ್ಣರಾಜ ಕ್ಷೇತ್ರದ ಶಾಸಕ ಟಿಎಸ್.ಶ್ರೀವತ್ಸ ಸಸಿ ನೆಡುವ ಮೂಲಕ ಚಾಲನೆ ನೀಡಿದರು.

110 ಮಕ್ಕಳು ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ನಂತರ ಶಾಸಕ ಟಿ.ಎಸ್. ಶ್ರೀವತ್ಸ ಮಾತನಾಡಿ, ದೇಶದ ಪ್ರಧಾನಿಯಾಗಿದ್ದ ಅಟಲ್ ಬಿಹಾರಿ ವಾಜಪೇಯಿ ಅವರು ದೇಶದಲ್ಲಿ ಉನ್ನತ ಸ್ಥಾನಕ್ಕೇರಿದರೂ ಸಹ ಸರಳ ಸಜ್ಜನಿಕೆಯೊಂದಿಗೆ ಸಾಮಾನ್ಯ ವ್ಯಕ್ತಿಯಂತೆ ಬದುಕಿದ್ದರು. ಇಂದಿನ ಯುವಪೀಳಿಗೆಗೆ ಆದರ್ಶವಾಗಿದ್ದಾರೆ. ಅವರು ವಿದೇಶಾಂಗ ಸಚಿವರಾಗಿ, ವಿರೋಧ ಪಕ್ಷದ ನಾಯಕರಾಗಿ ಕಾರ್ಯ ನಿರ್ವಹಿಸಿದ್ದಾರೆ. ಗ್ರಾಮ ಸಡಕ್ ಯೋಜನೆಯಲ್ಲಿ ರಸ್ತೆಗಳ ಅಭಿವೃದ್ಧಿ ವಿಶೇಷವಾಗಿದ್ದವು. ಇವರು ತಮ್ಮ ಸಭ್ಯತೆ, ಹಾಸ್ಯಪ್ರಜ್ಞೆ, ಉದಾರ ವ್ಯಕ್ತಿತ್ವ ಮತ್ತು ನಡವಳಿಕೆಗಳಿಂದ ಅತ್ಯಂತ ಜನಪ್ರಿಯ ನಾಯಕರಾಗಿದ್ದರು, ಇವರ ಮಾಡಿರುವ ಸೇವೆ ಮತ್ತು ಯೋಜನೆಗಳು ನಮ್ಮೆಲ್ಲರಿಗೆ ಮಾರ್ಗದರ್ಶನ, ಅವರ ಹುಟ್ಟಿದ ದಿನವನ್ನು ಇಂದಿಗೂ ಉತ್ತಮ ಆಡಳಿತ ದಿನವಾಗಿ ದೇಶದೆಲ್ಲೆಡೆ ಆಚರಿಸಲಾಗುತ್ತದೆ ಎಂದು ತಿಳಿಸಿದರು.

ನಗರಪಾಲಿಕೆ ಮಾಜಿ ಸದಸ್ಯ ರಾಮಪ್ರಸಾದ್, ಮುಖಂಡರಾದ ಉಮೇಶ್, ವಿದ್ಯಾ ಅರಸ್, ಗೋಪಾಲ್‌ರಾಜ್ ಅರಸ್, ಪುರುಷೋತ್ತಮ್, ಶಿವಪ್ಪ, ಅಜಯ್ ಶಾಸ್ತ್ರಿ, ಮಂಜುಳಾ, ಲಲಿತಾಂಬ, ಧರ್ಮೇಂದ್ರ, ಶಿವಲಿಂಗ ಆಚಾರ್, ಸೂರ್ಯ, ಬಸವರಾಜು, ಮಂಜು, ದೀಪಕ್, ಆನಂದ್, ಅಂಬಳೆ ಶಿವಣ್ಣ, ಧನುಷ್, ಕಿಶೋರ್, ರಾಜಶೇಖರ್, ರವಿ, ಸುರೇಶ್ ಸೇರಿದಂತೆ ಮತ್ತಿತರರು ಹಾಜರಿದ್ದರು.

ಜನತೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ಮೋದಿ ಕ್ರಿಸ್‌ಮಸ್ ಶುಭಾಶಯ





ನವದೆಹಲಿ: ದೇಶದಾದ್ಯಂತ ಕ್ರಿಸ್‌ಮಸ್ ಹಬ್ಬದ ಸಂಭ್ರಮ ಮನೆ ಮಾಡಿದ್ದು, ಈ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಜನತೆಗೆ ಶುಭಾಶಯ ಕೋರಿದ್ದಾರೆ.

ಸಾಮಾಜಿಕ ಜಾಲತಾಣ ಟ್ವಿಟ್ಟರ್ ಟ್ವೀಟ್ ಮಾಡಿ ದೇಶದ ಜನತೆಗೆ ಶುಭಾಶಯಗಳನ್ನು ಕೋರಿರುವ ಪ್ರಧಾನಿ ಮೋದಿಯವರು, ಎಲ್ಲರಿಗೂ ಮೇರಿ ಕ್ರಿಸ್ಮಸ್ ಶುಭಾಶಯಗಳು. ಈ ಶುಭ ಸಂದರ್ಭದಲ್ಲಿ ಎಲ್ಲರಿಗೂ ಸಂತೋಷ, ಶಾಂತಿ ಹಾಗೂ ಸಮೃದ್ಧಿ ತರಲಿ. ಸೌಹಾರ್ದತೆ ಮತ್ತು ಸಹಾನುಭೂತಿಯ ಮನೋಭಾವವನ್ನು ಈ ಹಬ್ಬ ಸಂಕೇತಿಸುತ್ತದೆ. ಉತ್ತಮ ಸಮಾಜ ನಿರ್ಮಿಸಲು ಹಾಗೂ ಅಭಿವೃದ್ಧಿ ಕಡೆಗೆ ಕೆಲಸ ಮಾಡೋಣ. ಯೇಸು ಕ್ರಿಸ್ತನ ಬೋಧನೆಗಳನ್ನು ಸದಾ ನೆನಪಿಸಿಕೊಳ್ಳೋಣ ಎಂದಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಟ್ವೀಟ್ ಮಾಡಿ, ಎಲ್ಲರಿಗೂ ಕ್ರಿಸ್‌ಮಸ್ ಶುಭಾಶಯಗಳು. ಈ ಸಂತೋಷದ ಹಬ್ಬವು ಸಾಮರಸ್ಯ, ಪ್ರೀತಿ ಮತ್ತು ಸಹಾನುಭೂತಿ ಸಂದೇಶವನ್ನು ಹರಡುತ್ತದೆ. ನಾವು ಯೇಸು ಕ್ರಿಸ್ತನ ಬೋಧನೆಗಳನ್ನು ನೆನಪಿಸಿಕೊಳ್ಳೋಣ ಮತ್ತು ಎಲ್ಲರ ಯೋಗಕ್ಷೇಮ ಮತ್ತು ಸಮೃದ್ಧಿಗಾಗಿ ಒಟ್ಟಾಗಿ ಕೆಲಸ ಮಾಡಲು ಸಂಕಲ್ಪ ಮಾಡೋಣ ಎಂದಿದ್ದಾರೆ.

ವಿಶ್ವದಾದ್ಯಂತ ಕ್ರಿಸ್‌ಮಸ್ ಹಬ್ಬವನ್ನು ಸಡಗರ ಹಾಗೂ ಸಂಭ್ರಮದಿಂದ ಆಚರಿಸಲಾಗುತ್ತಿದ್ದು, ರಾತ್ರಿಯಿಂದಲೇ ಚರ್ಚ್‌ಗಳಿಗೆ ತೆರಳಿ ಪ್ರಾರ್ಥನೆಗಳನ್ನು ಸಲ್ಲಿಸಲಾಗುತ್ತಿದೆ. ಕ್ರಿಸ್‌ಮಸ್ ಅಂಗವಾಗಿ ಚರ್ಚ್‌ಗಳಿಗೆ ದೀಪಾಲಂಕಾರ ಮಾಡಲಾಗಿದ್ದು, ರಾತ್ರಿಯಿಂದಲೇ ಚರ್ಚ್‌ಗಳಲ್ಲಿ ವಿಶೇಷ ಪ್ರವಚನ ನಡೆಸಲಾಗುತ್ತಿದೆ. ಯೇಸು ಪ್ರಭುವಿಗೆ ನಮನಗಳನ್ನು ಸಲ್ಲಿಸಲಾಗುತ್ತಿದೆ.

ಮೈಸೂರಲ್ಲಿ ಸದ್ಯ 4 ಮಂದಿಗೆ ಕೋವಿಡ್ ಜೆಎನ್.1

ಸೋಂಕಿತರಲ್ಲಿ ಸಣ್ಣಪುಟ್ಟ ಅನಾರೋಗ್ಯ ಸಮಸ್ಯೆಯಷ್ಟೇ, ಯಾವುದೇ ಆತಂಕದ ಸ್ಥಿತಿಯಿಲ್ಲ; ಡಿಹೆಚ್‌ಓ ಡಾ.ಪಿ.ಸಿ.ಕುಮಾರಸ್ವಾಮಿ




ಮೈಸೂರು, ಡಿ.25(ಪಿಎಂ)– ಮೈಸೂರು ಜಿಲ್ಲೆಯಲ್ಲಿ ಕೋವಿಡ್ ರೂಪಾಂತರಿ ಜೆಎನ್.1 ಸದ್ಯ ನಾಲ್ಕು ಮಂದಿಯಲ್ಲಿ ಕಂಡು ಬಂದಿದ್ದು, ಈ ಯಾರಿಗೂ ತೀವ್ರತರದ ಅನಾರೋಗ್ಯ ಸಮಸ್ಯೆಗಳು ಉಂಟಾಗಿಲ್ಲ. ಆತಂಕಪಡುವ ಸ್ಥಿತಿ ಜಿಲ್ಲೆಯಲ್ಲಿಲ್ಲ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಪಿ.ಸಿ.ಕುಮಾರಸ್ವಾಮಿ ತಿಳಿಸಿದರು.

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಅವರು, ಮೈಸೂರು ಜಿಲ್ಲೆಯಲ್ಲಿ ಕಂಡು ಬಂದಿರುವ ನಾಲ್ಕು ಪ್ರಕರಣಗಳ ಪೈಕಿ ಇಬ್ಬರಿಗೆ ಯುಎಸ್‌ಎ ಟ್ರಾವೆಲ್ ಹಿಸ್ಟರಿ ಇದೆ. ಇಬ್ಬರು ಕೊಮೊರ್ಬಿಡಿಟಿ ಸಮಸ್ಯೆ ಹೊಂದಿರುವವರು. ಜೊತೆಗೆ ಮೈಸೂರು ವೈದ್ಯಕೀಯ ಕಾಲೇಜಿನಲ್ಲಿ ಪರೀಕ್ಷೆಗೆ ಒಳಪಟ್ಟ ನೆರೆ ಜಿಲ್ಲೆಯ ನಾಲ್ವರಲ್ಲಿಯೂ (ಮಂಡ್ಯದ ಇಬ್ಬರು, ಕೊಡಗು ಮತ್ತು ಚಾಮರಾಜನಗರದ ತಲಾ ಒಬ್ಬರು) ಕೋವಿಡ್ ಜೆಎನ್.1 ದೃಢಪಟ್ಟಿದೆ ಎಂದು ಹೇಳಿದರು.

ಈ ಎಲ್ಲಾ 8 ಮಂದಿಯಲ್ಲಿಯೂ ಯಾವುದೇ ಗಂಭೀರ ಅನಾರೋಗ್ಯ ಸಮಸ್ಯೆಗಳು ಕಂಡು ಬಂದಿಲ್ಲ. ಎಲ್ಲರೂ ಹೋಂ ಐಸೋಲೇಷನ್‌ನಲ್ಲಿದ್ದಾರೆ. ಕೋವಿಡ್ ಜೆಎನ್.1 ನಿಯಂತ್ರಣ ಸಂಬಂಧ ಎಲ್ಲಾ ರೀತಿಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಸದ್ಯ ಪತ್ತೆಯಾಗಿರುವ ಎಲ್ಲವೂ ಮೈಲ್ಡ್ (ಗಂಭೀರವಲ್ಲದ) ಪ್ರಕರಣಗಳಾಗಿದ್ದು, ಕೇವಲ ಚಳಿಗಾಲದಲ್ಲಿ ಉಂಟಾಗುವ ಆರೋಗ್ಯ ಸಮಸ್ಯೆಗಳಾದ ಕೆಮ್ಮು, ನೆಗಡಿ, ಶೀತ ಹೊರತಾಗಿ ಯಾವುದೇ ತೀವ್ರತರದ ಅನಾರೋಗ್ಯ ಸಮಸ್ಯೆಗಳು ಈ ಯಾವುದೇ ಸೋಂಕಿತರಲ್ಲಿ ಕಾಣಿಸಿಕೊಂಡಿಲ್ಲ ಎಂದು ತಿಳಿಸಿದರು.

ಜಾತಿಗಣತಿ ವರದಿ ಬಿಡುಗಡೆ ಆಗಲಿ; ನಂತರ ಚರ್ಚಿಸಿದರಾಯಿತು

ವಿಧಾನಪರಿಷತ್ ಸದಸ್ಯ ವಿಶ್ವನಾಥ್ ಅಭಿಮತ



ಮೈಸೂರು,ಡಿ.25(ಎಂಟಿವೈ)– ಜಾತಿಗಣತಿ ವರದಿ ನೋಡದೆ ವಿರೋಧಿಸುವುದು ಸರಿಯಲ್ಲ. ವರದಿ ಬಿಡುಗಡೆಯಾದ ಬಳಿಕ ಚರ್ಚೆ ಮಾಡುವುದು ಸೂಕ್ತ ಎಂದು ವಿಧಾನಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಲ್ಲಿ ಸೋಮವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಜಾತಿ ಗಣತಿ ವರದಿ ಸ್ವೀಕಾರಕ್ಕೆ ವೀರಶೈವ ಲಿಂಗಾಯತ ಸಮುದಾಯ ಯಾಕೆ ವಿರೋಧ ಮಾಡುತ್ತಿದೆಯೋ ಗೊತ್ತಿಲ್ಲ. ಮೊದಲು ಜಾತಿಗಣತಿ ವರದಿ ಬಿಡುಗಡೆ ಆಗಲಿ. ಅದರಲ್ಲಿ ಏನಿದೆ ಎಂದು ಚರ್ಚೆ ಆಗಲಿ. ವರದಿಯನ್ನು ನೋಡದೇ, ತಿಳಿಯದೇ, ಸುಮ್ಮನೇ ಆರಂಭದಲ್ಲೇ ವಿರೋಧ ಮಾಡುತ್ತಿರುವುದು ಸರಿಯಲ್ಲ ಎಂದರು. ಈ ಹಿಂದೆ ಹಾವನೂರು ಆಯೋಗದ ವರದಿಯನ್ನು ಕೂಡ ಸಾಕಷ್ಟು ವಿರೋಧ ಮಾಡಿದ್ದರು. ಆದರೆ ಅಂದಿನ ಸಿಎಂ ದೇವರಾಜ ಅರಸು ಅವರು ಎಲ್ಲರ ವಿರೋಧದ ನಡುವೆ ಹಾವನೂರು ವರದಿಯನ್ನು ಬಿಡುಗಡೆ ಮಾಡಿದರು. ಈಗಲೂ ಸಿಎಂ ಸಿದ್ದರಾಮಯ್ಯ ಜಾತಿ ಗಣತಿ ವರದಿಯನ್ನೇ ಸ್ವೀಕರಿಸಿ ಬಿಡುಗಡೆ ಮಾಡಬೇಕು. ಈ ವಿಚಾರದಲ್ಲಿ ಯಾರ ಮುಲಾಜಿಗೂ ಒಳಗಾಗಬಾರದು. ವರದಿ ಬಿಡುಗಡೆಯಾದ ಬಳಿಕವೂ ಚರ್ಚೆ ಮಾಡಬೇಕು. ವರದಿಯಲ್ಲಿ ಏನು ಇದೆ, ಏನಿಲ್ಲ ಎನ್ನುವುದನ್ನು ಚರ್ಚೆ ಮಾಡುವುದು ಸೂಕ್ತ. ವರದಿಯನ್ನು ನೋಡದೇ ಇಲ್ಲಸಲ್ಲದ ಆರೋಪ ಮಾಡುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಹಿಜಾಬ್ ವಿಚಾರ ಕುರಿತು ನಡೆಯುತ್ತಿರುವ ರಾಜಕೀಯ ಜಟಾಪಟಿ ಕುರಿತು ಪ್ರತಿಕ್ರಿಯೆ ನೀಡಲು ವಿಶ್ವನಾಥ್ ನಿರಾಕರಿಸಿದರು. ಈ ಸಮಯದಲ್ಲಿ ಹಿಜಾಬ್ ವಿಚಾರ ಮಾತನಾಡುವುದು ಸರಿಯಲ್ಲ ಎನ್ನುವುದು ನನ್ನ ಅಭಿಪ್ರಾಯ ಎಂದು ಜಾರಿಕೊಂಡರು.

ನಾಡಿನ ಜನರಿಗೆ ಕ್ರಿಸ್ಮಸ್ ಶುಭಾಶಯ: ಜಗತ್ತಿಗೆ ಶಾಂತಿಯ ಸಂದೇಶ ಸಾರಿದ ಮಹಾನ್ ವ್ಯಕ್ತಿ ಯೇಸು. ಯೇಸುವಿನ ಶಾಂತಿ ಸಂದೇಶಗಳನ್ನು ಜನರು ಪಾಲಿಸಬೇಕು. ಮೈಸೂರಿನ ಹೈವೇ ವೃತ್ತದ ಬಳಿಯಿರುವ ಕ್ರೈಸ್ತ ಧರ್ಮಾಧಿಕಾರಿ ಬರ್ನಾಡ್ ಮೊರಾಸ್ ಅವರ ನಿವಾಸಕ್ಕೆ ತೆರಳಿ ಶುಭ ಕೋರಿದ್ದೇನೆ ಎಂದರು.

ಕಾವೇರಿ ಕ್ರಿಯಾ ಸಮಿತಿ ಹೋರಾಟಕ್ಕೆ ಡಾ.ಶಿವಣ್ಣ ಬೆಂಬಲ



ಮೈಸೂರು, ಡಿ.25(ಬಿಎಲ್‌ಯು)– ಕಾವೇರಿ ನದಿ ನೀರು ಹಂಚಿಕೆ ಪ್ರಾಧಿಕಾರದ ವಿರುದ್ಧ ಕಳೆದ 49 ದಿನಗಳಿಂದ ಮೈಸೂರಿನ ಪುರಭವನದಲ್ಲಿ ಪ್ರತಿಭಟನೆ ನಡೆಸುತ್ತಿರುವ ಕಾವೇರಿ ಕ್ರಿಯಾ ಸಮಿತಿ ಹೋರಾಟಕ್ಕೆ ಕರ್ನಾಟಕ ಪ್ರಜಾ ಪಾರ್ಟಿ(ರೈತ ಪರ್ವ) ಸಂಸ್ಥಾಪಕ ರಾಜ್ಯಾಧ್ಯಕ್ಷ ಡಾ.ಶಿವಣ್ಣ ಬೆಂಬಲ ಸೂಚಿಸಿದರು.

ಈ ವೇಳೆ ಮಾತನಾಡಿದ ಅವರು, ಕಾವೇರಿ ಜಲಾನಯನ ಪ್ರದೇಶದಲ್ಲಿ ಕರ್ನಾಟಕದ ರೈತರು ಎದುರಿಸುತ್ತಿರುವ ಸಂಕಷ್ಟ ಪರಿಸ್ಥಿತಿಯನ್ನು ರಾಜ್ಯ ಸರ್ಕಾರ ಸುಪ್ರೀಂಕೋರ್ಟ್‌ಗೆ ಅಂಕಿ ಅಂಶಗಳ ಸಹಿತ ಮನವರಿಕೆ ಮಾಡಿಕೊಡಬೇಕು. ಈ ಮೂಲಕ ಕನ್ನಡಿಗರಿಗೆ ನ್ಯಾಯ ದೊರಕಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ತೀವ್ರ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು. ಕಾವೇರಿ ಕ್ರಿಯಾ ಸಮಿತಿ ಅಧ್ಯಕ್ಷ ಜಯಪ್ರಕಾಶ್, ಉಪಾಧ್ಯಕ್ಷ ಸುರೇಶ್ ಗೌಡ, ಕನ್ನಡಪರ ಹೋರಾಟಗಾರ ಮೂಗೂರು ನಂಜುಂಡಸ್ವಾಮಿ ಸೇರಿದಂತೆ ಇತರರು ಈ ಸಂದರ್ಭದಲ್ಲಿ ಹಾಜರಿದ್ದರು.



ಮೈಸೂರಿನಲ್ಲಿ ಕರ್ನಾಟಕ ಪ್ರದೇಶ ಕುರುಬರ ಸಂಘದ ನಿಕಟಪೂರ್ವ ಅಧ್ಯಕ್ಷ ಬಿ.ಸುಬ್ರಹ್ಮಣ್ಯ ಮತ್ತು ದಿಲೀಪ್‌ಕುಮಾರ್ ಅವರು ನೆಲೆ ಟ್ರಸ್ಟಿನ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಮಾಡಿದರು. ಟ್ರಸ್ಟ್ ಪದಾಧಿಕಾರಿಗಳಾದ ಚಂದ್ರು, ಲೋಕೇಶ್, ಮಾದೇಗೌಡ, ಕಮಲ್ ರಾಜ್, ಮಂಜು, ಕಾಂಜಿಗೌಡ ಅವರನ್ನು ಚಿತ್ರದಲ್ಲಿ ಕಾಣಬಹುದು.

ರೈತ ವಿರೋಧಿ ಕಾನೂನುಗಳ ವಿರುದ್ಧ ಫೆಬ್ರವರಿ 26ರಂದು ರಾಷ್ಟ್ರವ್ಯಾಪಿ 'ದೆಹಲಿ ಚಲೋ' ಪ್ರತಿಭಟನೆ

ಬೆಂಗಳೂರು: ಸಂಯುಕ್ತ ಕಿಸಾನ್ ಮೋರ್ಚಾವು ಕೇಂದ್ರ ಸರ್ಕಾರದ 'ರೈತ ವಿರೋಧಿ' ಕಾನೂನುಗಳು ಮತ್ತು ಇತರ ಸಮಸ್ಯೆಗಳ ವಿರುದ್ಧ ಧ್ವನಿ ಎತ್ತಲು ಫೆಬ್ರವರಿ 26ರಂದು ರಾಷ್ಟ್ರವ್ಯಾಪಿ 'ದೆಹಲಿ ಚಲೋ' ಪ್ರತಿಭಟನೆಗೆ ಕರೆ ನೀಡಿದೆ. ದೇಶದಾದ್ಯಂತ ಐದು ಲಕ್ಷಕ್ಕೂ ಹೆಚ್ಚು ರೈತರು ರಾಷ್ಟ್ರ ರಾಜಧಾನಿಯಲ್ಲಿ ಸೇರುವ ನಿರೀಕ್ಷೆಯಿದೆ.

ಬೆಂಗಳೂರಿನಲ್ಲಿ ಎಂಟು ರಾಜ್ಯಗಳ ರೈತ ಮುಖಂಡರು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರತಿಭಟನಾ ಕರೆಯನ್ನು ಘೋಷಿಸಿದರು. ನಾವು ಕಳೆದ 15 ದಿನಗಳಲ್ಲಿ ವಿವಿಧ ಪ್ರದೇಶಗಳಲ್ಲಿ ಮಹಾಪಂಚಾಯತ್‌ಗಳನ್ನು ನಡೆಸುತ್ತಿದ್ದೇವೆ ಮತ್ತು ಮುಂಬರುವ ದಿನಗಳಲ್ಲಿ ಇಂತಹ ಹೆಚ್ಚಿನ ಚರ್ಚೆಗಳನ್ನು ಯೋಜಿಸಿದ್ದೇವೆ ಎಂದು ಪಂಜಾಬ್‌ನ ರೈತ ಮುಖಂಡ ಜಗಜೀತ್ ಸಿಂಗ್ ದಲ್ಲೆವಾಲ್ ಹೇಳಿದರು.

ಅ2+50% ಸೂತ್ರದ ಆಧಾರದ ಮೇಲೆ ಖಾತರಿಪಡಿಸಿದ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ನೀಡುವುದು ಸೇರಿದಂತೆ 7 ಬೇಡಿಕೆಗಳನ್ನು ರೈತ ಮುಖಂಡರು ಮುಂದಿಟ್ಟರು. ಇದರಲ್ಲಿ ಬಂಡವಾಳದ ವೆಚ್ಚ ಮತ್ತು ರೈತರಿಗೆ ಸಾಲದ ಜೊತೆಗೆ ಶೇ.50ರಷ್ಟು ಆದಾಯವನ್ನು ಒದಗಿಸಲು ಭೂಮಿಯ ಮೇಲಿನ ಬಾಡಿಗೆಯನ್ನು ಒಳಗೊಂಡಿರುತ್ತದೆ. ಎಲ್ಲಾ ರೈತರಿಗೆ ಪರಿಹಾರ, ರಾಜ್ಯ ಸರ್ಕಾರದ ಭೂಸ್ವಾಧೀನ ಕಾನೂನುಗಳನ್ನು ಹಿಂಪಡೆಯುವುದು ಮತ್ತು ಕೃಷಿ ಉತ್ಪನ್ನಗಳ ಮೇಲಿನ ಆಮದು ಸುಂಕಗಳ ಹೆಚ್ಚಳ ಸೇರಿದೆ. ಖಾಸಗೀಕರಣದ ಕಡೆಗೆ ಸರ್ಕಾರದ ಪಕ್ಷಪಾತವನ್ನು ನಾವು ಒಟ್ಟಿಗೆ ಅರ್ಥಮಾಡಿಕೊಳ್ಳುತ್ತೇವೆ. ನಮ್ಮ ಧ್ವನಿಯು ಪ್ರಧಾನಿ ಮೋದಿ ಅವರಿಗೆ ಕೇಳಿಸುವಂತೆ ಮಾಡಲು ಸಾಕಷ್ಟು ಜೋರಾಗಿ ಪ್ರತಿಧ್ವನಿಸುವಂತೆ ಮಾಡಬೇಕು ಎಂದರು.

ಮಣಿಪಾಲ ಆಸ್ಪತ್ರೆಯಲ್ಲಿ ಕ್ರಿಸ್‌ಮಸ್ ಆಚರಣೆ



ಮೈಸೂರು,ಡಿ.25–ಮೈಸೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ಹಿರಿಯರಿಗೆ ಉಡುಗೊರೆ ನೀಡುವ ಮೂಲಕ ಕ್ರಿಸ್‌ಮಸ್ ಹಬ್ಬವನ್ನು ಸಡಗರ, ಸಂಭ್ರಮದಿಂದ ಆಚರಿಸಲಾಯಿತು.

ಮಣಿಪಾಲ್ ಆಸ್ಪತ್ರೆ ಸೇವೆಗಳು ವೈದ್ಯಕೀಯ ಆರೈಕೆಗೆ ಮಾತ್ರ ಸೀಮಿತವಾಗಿಲ್ಲ. ಆರೋಗ್ಯಕರ ಮತ್ತು ಸಂತೋಷದ ಸಮುದಾಯವನ್ನು ನಿರ್ಮಿಸಲು ನಾವು ಬದ್ಧರಾಗಿದ್ದೇವೆ. ಈ ಕ್ರಿಸ್‌ಮಸ್‌ನಲ್ಲಿ ನಮ್ಮ ಸಂತಾಕ್ಲಾಸ್ ತಂಡವು ನಮ್ಮ ಸಮುದಾಯದ ಹಿರಿಯರಿಗೆ ಸಂತೋಷ ಹರಡಲು ಸಿದ್ಧವಾಗಿದೆ ಎಂದು ಮಣಿಪಾಲ್ ಆಸ್ಪತ್ರೆ ನಿರ್ದೇಶಕ ಪ್ರಮೋದ್ ಕುಂದರ್ ತಿಳಿಸಿದ್ದಾರೆ.



ಮೈಸೂರಿನ ಪೇರೆಂಟ್ಸ್ ಅಸೋಸಿಯೇಷನ್ ಆಫ್ ಡೆಫ್ ಚಿಲ್ಡ್ರನ್ ಅವರು ನಡೆಸುತ್ತಿರುವ ಇನ್ಸ್ಟಿಟ್ಯೂಟ್ ಆಫ್ ಮದರ್ ಅಂಡ್ ಡೆಫ್ ಚೈಲ್ಡ್ ಸಂಸ್ಥೆಯಲ್ಲಿ ಕ್ರಿಸ್‌ಮಸ್ ಹಬ್ಬವನ್ನು ಆಚರಿಸಿ ತಾಯಿ ಮತ್ತು ಮಕ್ಕಳಿಗೆ ಹಬ್ಬದ ಪ್ರಾಮುಖ್ಯತೆಯನ್ನು ವಿವರಿಸಲಾಯಿತು. ಮಕ್ಕಳು ಸಾಂತಾಕ್ಲಾಸ್, ಮೇರಿ, ಜೋಸೆಫ್ ಪಾತ್ರಧಾರಿಗಳಾಗಿ ಭಾಗವಹಿಸಿದ್ದರು. ಚಿತ್ರದಲ್ಲಿ ಸಂಸ್ಥೆಯ ಪರಿಮಳ ಮೂರ್ತಿ, ಉಮಾ ರಾಯಣ್ಣಗೌಡರ್, ವಿಜಯಾ, ದೇವಮ್ಮ, ಸ್ವಾತಿ, ಮೀನಾಕ್ಷಿ, ರಘುವೀರ್ ಮತ್ತಿತರರನ್ನು ಕಾಣಬಹುದು.



ಮೈಸೂರು ನಗರ ಜೆಡಿಎಸ್ ಘಟಕದಿಂದ ಮೈಸೂರು ಧರ್ಮ ಕ್ಷೇತ್ರದ ಆಡಳಿತಾಧಿಕಾರಿ ಡಾ.ಬೆರ್ನಾಡ್ ಮೊರಾಸ್ ಅವರಿಗೆ ಕ್ರಿಸ್‌ಮಸ್ ಶುಭಾಶಯ ಕೋರಲಾಯಿತು. ಈ ವೇಳೆ ನಗರ ಹಿರಿಯ ಉಪಾಧ್ಯಕ್ಷ ಫಾಲ್ಕನ್ ಬೋರೇಗೌಡ, ಚಾಮರಾಜ ಕ್ಷೇತ್ರದ ಜೆಡಿಎಸ್ ಅಧ್ಯಕ್ಷ ಪಿ. ಮಂಜುನಾಥ್ ಮತ್ತಿತರರಿದ್ದರು.

ಮುಡಾ ಕ್ರೀಡಾಂಗಣದಲ್ಲಿ ಸ್ವಚ್ಛತೆಯ ಶ್ರಮದಾನ



ಮೈಸೂರಿನ ಲಯನ್ಸ್ ಅಂಬಾಸಿಡರಸ್ ಸಂಸ್ಥೆ ವತಿಯಿಂದ ವಿಜಯನಗರ 1ನೇ ಹಂತದ ಮುಡಾ ಕ್ರೀಡಾಂಗಣವನ್ನು ಶ್ರಮದಾನದ ಮೂಲಕ ಸ್ವಚ್ಛಗೊಳಿಸಲಾಯಿತು. 20 ಚೀಲಗಳಷ್ಟು ಪ್ಲಾಸ್ಟಿಕ್ ಬಾಟಲ್ ಕವರ್ ಹಾಗೂ ಇತರೆ ತ್ಯಾಜ್ಯವನ್ನು ಸಂಗ್ರಹಿಸಲಾಯಿತು. ಸಂಸ್ಥೆಯ ಅಧ್ಯಕ್ಷ ಹೆಚ್.ಸಿ.ಕಾಂತರಾಜು, ಕಾರ್ಯದರ್ಶಿ ಸಿ.ಆರ್. ದಿನೇಶ್, ಖಜಾಂಚಿ ಕೆ.ಟಿ.ವಿಷ್ಣು, ಹೆಚ್.ಕೆ.ಪ್ರಸನ್ನ, ಮಲ್ಲಿಕಾರ್ಜುನ, ಭಾಸ್ಕರಾನಂದ, ಅಮರ ಭವಾನಿ, ಯಶೋಧರಮ್ಮ, ರಮೇಶ್ ಮತ್ತಿತರರು ಭಾಗವಹಿಸಿದ್ದರು.



ಮೈಸೂರಿನ ಬಿಜೆಪಿ ಕಚೇರಿ ಆವರಣದಲ್ಲಿ ರಾಜಕೀಯ ಮುತ್ಸದ್ದಿ, ಅಜಾತಶತ್ರು ಮಾಜಿ ಪ್ರಧಾನಮಂತ್ರಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನವನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಆಚರಿಸಲಾಯಿತು. ಮೈಸೂರು ಜಿಲ್ಲಾ ಗ್ರಾಮಾಂತರ ಎಸ್‌ಟಿ ಮೋರ್ಚಾ ಉಪಾಧ್ಯಕ್ಷ ಡಿ.ಮಹೇಶ್ ನಾಯಕ, ಮುಖಂಡರಾದ ಭಾನುಪ್ರಕಾಶ್, ಮೋಹನ್, ಚಂದ್ರು ಮತ್ತು ಮೋಹನ ಮತ್ತಿತರರು ಉಪಸ್ಥಿತರಿದ್ದರು.

ನಿಧನ



ಕೆ.ವಿ.ತಿಮ್ಮಶೆಟ್ಟಿ

ಮೈಸೂರು,ಡಿ.25–ಮೈಸೂರಿನ ಕುಂಬಾರಕೊಪ್ಪಲು ನಿವಾಸಿ, ಬಿಎಸ್‌ಎನ್‌ಎಲ್ ನಿವೃತ್ತ ವಿಭಾಗೀಯ ಇಂಜಿನಿಯರ್ ಕೆ.ವಿ.ತಿಮ್ಮಶೆಟ್ಟಿ (81) ಇಂದು ನಿಧನರಾದರು. ಮೃತರು ಪತ್ನಿ, ಸಣ್ಣಮ್ಮ, ಓರ್ವ ಪುತ್ರ, ಪುತ್ರಿ ಹಾಗೂ ಅಪಾರ ಬಂಧು–ವರ್ಗ ಅಗಲಿದ್ದಾರೆ. ನಾಳೆ (ಡಿ.26) ಬೆಳಗ್ಗೆ 11 ಗಂಟೆಗೆ ಕುಂಬಾರಕೊಪ್ಪಲು ರುದ್ರಭೂಮಿಯಲ್ಲಿ ಮೃತರ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಕೋಮು ಪ್ರಚೋದನೆ ಭಾಷಣ; ಕಲ್ಲಡ್ಕ ಪ್ರಭಾಕರ್ ಭಟ್ ಬಂಧನಕ್ಕೆ ಆಗ್ರಹ

ಪೊಲೀಸ್ ವೈಫಲ್ಯದ ವಿರುದ್ಧ ಸಿಎಂಗೆ ದೂರು ನೀಡುವುದಾಗಿ ಕೆಪಿಸಿಸಿ ವಕ್ತಾರ ಎಂ. ಲಕ್ಷ್ಮಣ ಹೇಳಿಕೆ



ಮೈಸೂರು,ಡಿ.25(ಬಿಎಲ್‌ಯು)– ಶ್ರೀರಂಗಪಟ್ಟಣದಲ್ಲಿ ನಿನ್ನೆ ನಡೆದ ಹನುಮ ಮಾಲಾಧಾರಿಗಳ ಸಂಕೀರ್ತನಾ ಯಾತ್ರೆ ವೇಳೆ ಕೋಮು ಪ್ರಚೋದನೆ ಹೇಳಿಕೆ ನೀಡಿರುವ ಹಿಂದುತ್ವವಾದಿ ಕಲ್ಲಡ್ಕ ಪ್ರಭಾಕರ್ ಭಟ್ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದ ಪೊಲೀಸರ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ದೂರು ನೀಡುವುದಾಗಿ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ತಿಳಿಸಿದರು.

ಕಾಂಗ್ರೆಸ್ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಒಬ್ಬ ಮುಖ್ಯಮಂತ್ರಿ ವಿರುದ್ಧ ತೊಡೆ ತಟ್ಟಿ ಮಾತನಾಡಲು ಬಿಜೆಪಿ ಸರ್ಕಾರವೇನಾದರೂ ಕಲ್ಲಡ್ಕ ಪ್ರಭಾಕರ್ ಭಟ್ಟರಿಗೆ ಸೂಪರ್ ಪವರ್ ನೀಡಿದೆಯೇ ಎಂದು ಪ್ರಶ್ನಿಸಿದರು.

ಶ್ರೀರಂಗಪಟ್ಟಣದಲ್ಲಿ ನಿನ್ನೆ ಮಸೀದಿ ಒಳಗೆ ನುಗ್ಗುವ ಪ್ರಯತ್ನ ನಡೆಯಿತು. ಮುಂಜಾಗ್ರತಾ ಕ್ರಮ ವಹಿಸದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಶ್ರೀರಂಗಪಟ್ಟಣದಲ್ಲಿ ಸರ್ಕ್ಯೂಟ್ ಯಾತ್ರೆ ನಡೆಸಲು ಹೇಗೆ ಅನುಮತಿ ನೀಡಿದರು ಎಂದು ಮರು ಪ್ರಶ್ನಿಸಿದರು.

ಕೋಮು ಪ್ರಚೋದನೆ ಹೇಳಿಕೆ ನೀಡಿರುವ ಕಲ್ಲಡ್ಕ ಪ್ರಭಾಕರ್ ಭಟ್ಟರಿಗೆ ಈ ತನಕ ಏಕೆ ನೋಟಿಸ್ ಕೊಟ್ಟಿಲ್ಲ, ಎಚ್ಚರಿಕೆ ನೀಡಿಲ್ಲ, ಏಕೆ ಬಂಧಿಸಿಲ್ಲ ಎಂದು ಸರಣಿ ಪ್ರಶ್ನೆಗಳನ್ನು ಕೇಳಿದ ಲಕ್ಷ್ಮಣ, ಹಾಗಾದರೆ ಐಪಿಎಸ್ ಅಧಿಕಾರಿಗಳು ಇನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಕಂಟ್ರೋಲ್‌ನಲ್ಲಿದ್ದಾರೆಯೇ ಎಂದು ಕೇಳಿದರು. ಶ್ರೀರಂಗಪಟ್ಟಣದ ಮಸೀದಿಯೊಳಗೆ ನುಗ್ಗಿ ಅಶಾಂತಿ ಉಂಟು ಮಾಡುವ ಮೂಲಕ ಆ ಪ್ರಕರಣವನ್ನು ರಾಜಕೀಯವಾಗಿ ಬಳಸಿಕೊಳ್ಳುವ ತಂತ್ರಗಾರಿಕೆ ರೂಪಿಸಿದ್ದರು. ಶ್ರೀರಂಗಪಟ್ಟಣದಲ್ಲಿ ಪೊಲೀಸ್ ಇಲಾಖೆ ವೈಫಲ್ಯದ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ದೂರು ನೀಡುತ್ತೇನೆ ಎಂದು ತಿಳಿಸಿದರು.

ಕೋಮು ಪ್ರಚೋದನೆ ಹಿನ್ನೆಲೆಯಲ್ಲಿ ಕಲ್ಲಡ್ಕ ಪ್ರಭಾಕರ್ ಭಟ್, ಚಕ್ರವರ್ತಿ ಸೂಲಿಬೆಲೆ ಸೇರಿದಂತೆ ಇತರರನ್ನು ಕೂಡಲೇ ಬಂಧಿಸಬೇಕು ಎಂದು ಇದೇ ವೇಳೆ ಲಕ್ಷ್ಮಣ ಆಗ್ರಹಿಸಿದರು.

ಮೈಸೂರಿನ ನಂಜನಗೂಡು ತಾಲೂಕು ಕವಲಂದೆ ಪೊಲೀಸ್ ಠಾಣೆ ಉದ್ಘಾಟನೆ ವೇಳೆ ಹಿಜಾಬ್ ಬಗ್ಗೆ ಕೇಳಿದಾಗ ಗೃಹ ಇಲಾಖೆಗೆ ಸೂಚನೆ ನೀಡಿದ್ದೇನೆ. ಪರಿಶೀಲನೆ ಮಾಡುತ್ತೇನೆ. ಹಿಜಾಬ್ ವಾಪಸ್ ಪಡೆಯುವ ಅವಕಾಶ ಇದ್ದರೆ ತೆಗೆದುಕೊಳ್ಳುತ್ತೇವೆ ಎಂದು ಸಿದ್ದರಾಮಯ್ಯ ತಿಳಿಸಿದ್ದರು. ಆದರೆ ಅದನ್ನು ತಿರುಚಿದ ಬಿಜೆಪಿ ನಾಯಕರು ಸಿದ್ದರಾಮಯ್ಯ ಅವರನ್ನು ಟಾರ್ಗೆಟ್ ಮಾಡಿ ಮುಗಿಬಿದ್ದರು ಎಂದರು.

ಜಾತಿ ಗಣತಿ ವಿಚಾರದಲ್ಲಿ ಕೂಡ ಬಿಜೆಪಿ ನಾಯಕರು ಜನರಿಗೆ ತಪ್ಪು ಮಾಹಿತಿ ನೀಡುತ್ತಿದ್ದಾರೆ. ಯಾವುದೇ ವಿಚಾರವಿಲ್ಲದಿದ್ದರೂ ವಿಪಕ್ಷ ನಾಯಕ ಅಶೋಕ್ ಸುಖಾಸುಮ್ಮನೆ ಮಾಧ್ಯಮಗಳ ಮುಂದೆ ಸರ್ಕಾರದ ವಿರುದ್ಧ ಹೇಳಿಕೆ ನೀಡುತ್ತಿದ್ದಾರೆ ಎಂದರು.

ಸಂಸತ್ ಭವನದೊಳಗೆ ನುಗ್ಗಿ ಕಲರ್ ಗ್ಯಾಸ್ ಸ್ಫೋಟಿಸಿದ ಪ್ರಕರಣದಲ್ಲಿ ಸಂಸದ ಪ್ರತಾಪ್ ಸಿಂಹ ಕೂಡಲೇ ಕೆಲವು ಪ್ರಶ್ನೆಗಳಿಗೆ ಉತ್ತರ ನೀಡಬೇಕು ಎಂದು ಆಗ್ರಹಿಸಿದರು. ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಮುಡಾ ಮಾಜಿ ಅಧ್ಯಕ್ಷ ಸಿ.ಬಸವೇಗೌಡ, ಮುಖಂಡ ಪ್ರದೀಪ್, ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಮಾಜಿ ಕಾರ್ಪೊರೇಟರ್ ಶಿವಣ್ಣ ಗೋಷ್ಠಿಯಲ್ಲಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

26.12.2023 ಮಂಗಳವಾರ, ಮಳೆ ನಕ್ಷತ್ರ: ಮೂಲ 16.12.2023ರಿಂದ 28.12.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಮಾರ್ಗಶಿರ ಮಾಸ, ಶುಕ್ಲ ಪಕ್ಷ, ತಿಥಿ: ಹುಣ್ಣಿಮೆ, ನಕ್ಷತ್ರ: ಮೃಗಶಿರ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

■ **ಮೈಸೂರು ಅರಮನೆ ಮಂಡಳಿ:** ಅರಮನೆ ಫಲಪುಷ್ಪ ಪ್ರದರ್ಶನ, ಬೆಳಗ್ಗೆ 10ರಿಂದ ರಾತ್ರಿ 9ರವರೆಗೆ.

■ **ಸೇವಾ ಭಾರತಿ:** ಅಸ್ತಮಾ (ದಮ್ಮು)ಕ್ಕೆ ಉಚಿತ ಔಷಧಿ, ಸ್ಥಳ: ಶೇಖರ್ ಕ್ಲಿನಿಕ್, ವಿಶ್ವೇಶ್ವರನಗರ, ಬೆಳಗ್ಗೆ 5ರಿಂದ

■ **ಪಾಳ್ಯಂ ಶ್ರೀ ಶಾಸ್ತಾ ಪೀಠಂ ಅಭಯದಾಯಕ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನಂ:** ಧನುರ್ಮಾಸದ ವಿಶೇಷ ಪೂಜಾ ಲಕ್ಷಾರ್ಚನಾ ಮತ್ತು ವಾರ್ಷಿಕ ಕುಂಭಾಭಿಷೇಕ ಪೂಜಾ ಮಹೋತ್ಸವ, ಮಹತೋಬಾರ, ಶ್ರೀ ಧರ್ಮಶಾಸ್ತಾ ಸ್ವಾಮಿಯವರಿಗೆ ಮಹಾಭಿಷೇಕ, ಅಲಂಕಾರ ಸೇವೆ, ನಾಮಾರ್ಚನೆ, ಮಹಾನಿವೇದನೆ, ಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನದ ಆವರಣ, ರಾಘವೇಂದ್ರನಗರ, ಬೆಳಗ್ಗೆಯಿಂದ.

■ **ರಾಮ್‌ಸನ್ಸ್ ಬೊಂಬೆ ಮನೆ :** ದಸರಾ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7 ಗಂಟೆಯವರೆಗೆ.

■ **ಮಾಲ್ಗುಡಿ ನ್ಯೂಸ್ ಪತ್ರಿಕಾ ಬಳಗ :** ಪ್ರಥಮ ವಾರ್ಷಿಕೋತ್ಸವ, ಸಾನ್ನಿಧ್ಯ : ಶ್ರೀ ಶಿವಾನಂದಪುರಿ ಸ್ವಾಮೀಜಿ, ಅಧ್ಯಕ್ಷತೆ : ಮಾಜಿ ಶಾಸಕ ಯತೀಂದ್ರ ಸಿದ್ದರಾಮಯ್ಯ, ಉಪಸ್ಥಿತರು : ಮಾಜಿ ಸಚಿವ ಹೆಚ್. ವಿಶ್ವನಾಥ್, ಸ್ಥಳ: ಹೋಟೆಲ್ ಗೋವರ್ಧನ್ ಸಭಾಂಗಣ, ಶ್ರೀಹರ್ಷ ರಸ್ತೆ, ಬೆಳಗ್ಗೆ 11.30ಕ್ಕೆ.

■ **ಶ್ರೀ ವೀರಾಂಜನೇಯ ಸ್ವಾಮಿ ದೇವಸ್ಥಾನ ಟ್ರಸ್ಟ್ :** ಶ್ರೀ ವೈಕುಂಠ ಏಕಾದಶಿ ಹಾಗೂ ಹನುಮ ಜಯಂತಿ ಕಾರ್ಯಕ್ರಮ, ಶ್ರೀ ಸತ್ಯನಾರಾಯಣಸ್ವಾಮಿ ಪೂಜೆ, ಮಧ್ಯಾಹ್ನ 12ಕ್ಕೆ ಮಹಾಮಂಗಳಾರತಿ, ಅನ್ನಸಂತರ್ಪಣೆ, ಸ್ಥಳ: ದೇವಸ್ಥಾನದ ಆವರಣ, ಹನುಮಂತನಗರ, ಬನ್ನಿಮಂಟಪ.

■ **ಮೈಸೂರು ವಿಶ್ವವಿದ್ಯಾನಿಲಯ, ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರ** : ಸಂವಿಧಾನ ದಿನಾಚರಣೆ ಅಂಗವಾಗಿ ವಿಶೇಷ ಉಪನ್ಯಾಸಗಳ ಮಾಲಿಕೆ, ಡಾ. ಬಿ.ಆರ್. ಅಂಬೇಡ್ಕರ್ ಕೇಂದ್ರದ ಅತಿಥಿ ಉಪನ್ಯಾಸಕರಾದ ಡಾ. ಎಂ. ರಾಚಪ್ಪಾಜಿ ಅವರಿಂದ ಭಾರತದ ಸಂವಿಧಾನ ಮತ್ತು ನೈತಿಕತೆ ಕುರಿತು ಉಪನ್ಯಾಸ, ಅಧ್ಯಕ್ಷತೆ : ಮೊರಾರ್ಜಿ ದೇಸಾಯಿ ವಸತಿ ಶಾಲೆ, ತಗಡೂರು ಪ್ರಾಂಶುಪಾಲರಾದ ಶ್ರೀಮತಿ ವಸಂತ, ಸ್ಥಳ: ಮೊರಾರ್ಜಿ ದೇಸಾಯಿ ವಸತಿ ಶಾಲೆ, ತಗಡೂರು, ಸಂಜೆ 4ಕ್ಕೆ.

■ **ಶ್ರೀ ಶಿವರಾತ್ರೀಶ್ವರ ಮಹಿಳಾ ಸಮಾಜ:** ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿಗಳ 108ನೇ ಜಯಂತ್ಯುತ್ಸವ, ಉದ್ಘಾಟನೆ: ವಿಧಾನಪರಿಷತ್ ಮಾಜಿ ಸದಸ್ಯ ತೋಂಟದಾರ್ಯ, ಅಧ್ಯಕ್ಷತೆ: ಚುಟುಕು ಸಿರಿ ಡಾ.ರತ್ನಹಾಲಪ್ಪಗೌಡ, ಉಪಸ್ಥಿತರು: ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಪ್ರೊ.ಹೆಚ್.ಟಿ.ಶೈಲಜಾ, ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್, ಚುಟುಕು ಯೋಗಾಚಾರ್ಯ ಡಾ. ಎಂ.ಜಿ.ಆರ್. ಅರಸ್, ಸ್ಥಳ: ಜೆಎಸ್‌ಎಸ್ ಮಹಿಳಾ ಕಾಲೇಜು ಹಾಸ್ಟೆಲ್ ಸಭಾಂಗಣ, ಸರಸ್ವತಿಪುರಂ, ಸಂಜೆ 4ಕ್ಕೆ.

■ **ದೀಕ್ಷಿತ್ ಆರೋಗ್ಯ ಧಾಮ:** ಆನಂದ ಆರೋಗ್ಯ ಕಾರ್ಯಕ್ರಮ, ವಿದುಷಿ ಡಾ. ದೀಪಾ ಶೇಖರ್ ಅವರಿಂದ ಭಕ್ತಿ ಸಂಗೀತ, ವಿದುಷಿ ಶ್ರೀಮತಿ ದಿವ್ಯಶ್ರೀ ಎಸ್.ಎ.–ಪಿಟೀಲು, ವಿದ್ವಾನ್ ರಘುನಂದನ್ ರಾವ್–ಮೃದಂಗ, ಡಾ. ಸಿ.ಎಸ್. ಅನಿಲ್‌ಕುಮಾರ್ ಅವರಿಂದ ಬ್ರಾಹ್ಮೀ ಮುಹೂರ್ತ ಉತ್ತಿಷ್ಠೇತ್ ಕುರಿತು ಉಪನ್ಯಾಸ, ಸ್ಥಳ: ದೀಕ್ಷಿತ್ ಆರೋಗ್ಯ ಧಾಮ, ವಿಜಯನಗರ 3ನೇ ಹಂತ, ಸಂಜೆ 6ಕ್ಕೆ.

■ **ಶ್ರೀ ಸುತ್ತೂರು ಮಠ, ಮೈಸೂರು:** ಬೆಳದಿಂಗಳ ಸಂಗೀತ–262, ಸಾನ್ನಿಧ್ಯ: ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಡಾ.ಎಚ್.ಎಸ್.ಅನಸೂಯ ಕುಲಕರ್ಣಿ ಅವರಿಂದ ಆಂಗ್‌ಕ್ಲುಂಗ್ ವಿಶೇಷ ವಾಯುವಾದ್ಯ ಪ್ರಸ್ತುತಿ, ವಿದ್ವಾನ್ ಎನ್.ಎನ್.ಗಣೇಶ್‌ಕುಮಾರ್–ವಯೋಲಿನ್, ವಿದ್ವಾನ್ ಹೆಚ್.ಎಲ್. ಶಿವಶಂಕರಸ್ವಾಮಿ–ಮೃದಂಗ, ವಿದ್ವಾನ್ ಮಂಜುನಾಥ್–ಘಟಂ, ಸ್ಥಳ: ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6ಕ್ಕೆ.

■ **ಹೆಬ್ಬಾರ್ ಶ್ರೀ ವೈಷ್ಣವ ಸಭಾ, ಬೆಂಗಳೂರು ಹೆಬ್ಬಾರ್ ಶ್ರೀ ವೈಷ್ಣವ ಉಪಸಭಾ :** ತಿರುಪ್ಪಾವೈ ಪ್ರವಚನ, ವಿದ್ವಾನ್ ಎಂ.ಕೆ. ಶೆಲ್ವನಾರಾಯಣ ಅವರಿಂದ ತಿರುಪ್ಪಾವೈ ಕಾಲಕ್ಷೇಪ, ಸ್ಥಳ: ಕೃಷ್ಣಮೂರ್ತಿಪುರಂ ಶ್ರೀರಾಮ ಮಂದಿರ, ಸಂಜೆ 6.15ರಿಂದ 7.30 ರವರೆಗೆ.

■ **ನಾದರಂಗ, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಬೆಂಗಳೂರು :** ನಾಟಕೋತ್ಸವ, ಸಂಜೆ 6.30ಕ್ಕೆ ಉದ್ಘಾಟನೆ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಎಂ.ಡಿ. ಸುದರ್ಶನ್, ಅಧ್ಯಕ್ಷತೆ : ರಂಗ ನಿರ್ದೇಶಕ : ಪ್ರೊ. ಹೆಚ್.ಎಸ್. ಉಮೇಶ್, ಮುಖ್ಯ ಅತಿಥಿಗಳು : ಕದಂಬ ರಂಗ ವೇದಿಕೆ ಅಧ್ಯಕ್ಷ ರಾಜಶೇಖರ ಕದಂಬ, ಮಹಾರಾಜ ಪದವಿಪೂರ್ವ ಕಾಲೇಜು ಪ್ರಿನ್ಸಿಪಾಲ್ ಎನ್. ಉದಯಶಂಕರ್, ಸಂಜೆ 7ಕ್ಕೆ ಶ್ರೀ ಗುರುಕಲಾ ಶಾಲೆ ಕಲಾವಿದರಿಂದ ಸುಶೀಲೇಂದ್ರರಾವ್ ಕುಲಕರ್ಣಿ ಅವರ ಶ್ರೀ ಕೃಷ್ಣ ಲೀಲಾಮೃತ ಪೌರಾಣಿಕ ನಾಟಕ ಪ್ರದರ್ಶನ, ನಿರ್ದೇಶನ : ಎಚ್.ಎಸ್. ಕವಿತಾ ಧನಂಜಯ, ಸ್ಥಳ: ಕಿರು ರಂಗಮಂದಿರ, ಕಲಾಮಂದಿರ ಆವರಣ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ–ರವೀಂದ್ರ ಜೋಶಿ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಶ್ರದ್ಧೆಯ ಶಿಲ್ಪ, ಲೇಖನ ಮತ್ತು ಪ್ರಸ್ತುತಿ–ಟಿ.ಎಸ್.ಗೋಪಾಲ್, 6.40 ಪದಸಂಸ್ಕೃತಿ–ಪ್ರೊ.ಲಕ್ಷ್ಮೀ ನಾರಾಯಣ ಅರೋರಾ, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ–ನಾ ಕಸ್ತೂರಿ ಅವರ ರಂಗನಾಯಕಿ ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ– ಉಮೇಶ್ 7.45 ಕ್ಯಾನ್ಸರ್ ರೋಗಿಗಳಲ್ಲಿ ಪೌಷ್ಟಿಕಾಂಶದ ಮಹತ್ವ –ಪ್ರಾಯೋಜಿತ ಕಾರ್ಯಕ್ರಮ. ಪ್ರಾಯೋಜಕರು ಇಂಡಿಯನ್ ಕ್ಯಾನ್ಸರ್ ಸೊಸೈಟಿ, ಬೆಂಗಳೂರು, 8.30 ಪರಾಗ–ಬೇಸಾಯದ ಬದುಕು ಸರಾಗ–ಬಾನುಲಿ ಸರಣಿ, 8.45 ಕರೆಗೊಂದು ಗೀತೆ, 10.00 ಭಾರ್ಗವಿ–ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ–ಎ.ಆರ್.ರಾಗಿಣಿ, ಬಿ.ಆರ್. ಗೀತಾ, 12.45 ಮಣ್ಣಿನ ಮಕ್ಕಳ ಅನ್ನದ ರುಚಿ–ಮಾತನಾಡುತ್ತಾರೆ ಸುಧಾ ಸಂದೀಪ್, 1.20 ಭಾವಗೀತೆಗಳು–ಸಿಂಚನಾ ಸಿ., 3.00 ವಿ.ದೇಶಿಕಾಚಾರ್–ವೇಣುವಾದನ, 4.00 ಕಥಾ ಕಾಲಕ್ಷೇಪ–ಸಂತ ಸಕ್ಕೂಬಾಯಿ, ಪ್ರಸ್ತುತಿ– ವಿದ್ವಾನ್ ಆರ್.ಗುರುರಾಜುಲು ನಾಯ್ಡು, 6.50 ಕೃಷಿರಂಗ–ಸುಸ್ಥಿರ ಕೃಷಿಯ ಪ್ರಾಮುಖ್ಯತೆ ಕುರಿತು ಸಂವಾದ. ಭಾಗವಹಿಸುವವರು ಡಿ.ಎನ್. ಹರ್ಶ ಹಾಗೂ ಟಿ.ಪಿ. ಹೊಂಬೇಗೌಡ – ನಡೆಸಿಕೊಡುತ್ತಾರೆ ಎನ್. ಕೇಶವಮೂರ್ತಿ, 9.30 ಡಾ. ಎಸ್. ಬಾಲಚಂದರ್–ವೀಣಾವಾದನ, 10.00 ಗಮಕ ವ್ಯಾಖ್ಯಾನ–ವಾಚನ ಇಂದಿರಾ ಶಾಸ್ತ್ರಿ, ವ್ಯಾಖ್ಯಾನ– ಸಿ.ಎನ್. ಸುಬ್ಬಣ್ಣ

ಅರಮನೆ ಆವರಣದ ಶೃಂಗಾರ ಲೋಕದಲ್ಲಿ ಸಂಗೀತ, ನೃತ್ಯ ವೈಭವಕ್ಕೆ ತೆರೆ

● ಕ್ರಿಸ್‌ಮಸ್, ಹೊಸವರ್ಷ ಸ್ವಾಗತಕ್ಕೆ ದಿನಗಣನೆ ಜೊತೆಗೆ ಸಾಲು ಸಾಲು ರಜೆಯಿಂದ ಅರಮನೆ ಆವರಣದಲ್ಲಿ ಪ್ರವಾಸಿಗರು, ಸಾರ್ವಜನಿಕರ ಜಾತ್ರೆ ● ಬೆಳಕಿನ ಸಿರಿಯಲ್ಲಿ ಸೌಂದರ್ಯ ಸವಿದು, ಸಂಭ್ರಮಿಸಿದ ಜನತೆ

ಮೈಸೂರು, ಡಿ.25 (ಎಂಕೆ)– ಸುಂದರ ಮೈಸೂರು ಅರಮನೆ ಆವರಣದಲ್ಲಿ ಮೈದಳೆದಿರುವ ಪುಷ್ಪಕಾಶಿಯ ಶೃಂಗಾರ ಕಲಾಲೋಕದ ನಡುವೆ ಕಲಾರಸಿಕರ ಮನಗೆದ್ದ ಸಂಗೀತ, ನೃತ್ಯ ವೈಭವಕ್ಕೆ ತೆರೆ ಕಂಡಿತು.

ಫಲಪುಷ್ಪ ಪ್ರದರ್ಶನದ ಅಂಗವಾಗಿ ಕಳೆದ ನಾಲ್ಕು ದಿನಗಳಿಂದ ಅರಮನೆ ಎದುರಿನ ಭವ್ಯ ವೇದಿಕೆಯಲ್ಲಿ ಮೇಳೈಸಿದ ನೃತ್ಯ, ಸಂಗೀತ, ಚಿತ್ರಕಲಾ ಪ್ರದರ್ಶನ ಸಂಪನ್ನಗೊಂಡಿದ್ದು, ಕಣ್ಮನ ಸೆಳೆಯುತ್ತಿರುವ ಆಕರ್ಷಣೆಯ ಪುಷ್ಪ ಕಲಾಕೃತಿಗಳ ವೀಕ್ಷಣೆ ಡಿ.31ರವರೆಗೂ ಮುಂದುವರೆಯಲಿದೆ.

ಸಾಂಸ್ಕೃತಿಕ ಕಾರ್ಯಕ್ರಮಗಳ ಕಡೆಯ ದಿನವಾದ ಸೋಮವಾರ ಭರತನಾಟ್ಯದಿಂದ ಆರಂಭವಾದ ಸಂಗೀತ ಯಾನ ದಾಸರ ಕೀರ್ತನೆಗಳು, ಕನ್ನಡ ಜನಪ್ರಿಯ ಹಾಗೂ ಜಾನಪದ ಹಾಡುಗಳ ಸವಿಗಾನದೊಂದಿಗೆ ಕೇಳುಗರ ಮನಕ್ಕೆ ಮುದನೀಡಿತು. ಚಂಪಕ ಅಕಾಡೆಮಿಯ ವಿದುಷಿ ಡಾ.ನಾಗಲಕ್ಷ್ಮಿ ನಾಗರಾಜನ್ ಮತ್ತು ಸಂಗಡಿಗರು ಪ್ರಸ್ತುತಪಡಿಸಿದ 'ದೇವಿ ವೈಭವಂ' ಭರತನಾಟ್ಯ ಪ್ರದರ್ಶನ ನೆರೆದಿದ್ದವರ ಹೃನ್ಮನ ಗೆದ್ದಿತು. 'ಶ್ರೀ ಮಹಾಗಣಪತಿ', 'ಕಂಜದಳಾಯತಾಕ್ಷಿ', ವಾಸುದೇವಾಚಾರ್ಯ ರಚಿತ 'ಶ್ರೀ ಚಾಮುಂಡೇಶ್ವರಿ' ಹಾಗೂ ಜಯಚಾಮರಾಜ ಒಡೆಯರ್ ರಚಿತ 'ಶ್ರೀ ಮಹಾ ತ್ರಿಪುರ ಸುಂದರಿ' ಹಾಡುಗಳಿಗೆ ಅಮೋಘ ನೃತ್ಯ ಪ್ರದರ್ಶನ ನೀಡುವ ಮೂಲಕ ಕಲಾಭಿಮಾನಿಗಳ ಮನಗೆದ್ದರು. ಗಾಯನದಲ್ಲಿ ವಿದುಷಿ ಚೇತನ ನಾಗರಾಜ್, ಮೃದಂಗ ವಾದನದಲ್ಲಿ ವಿಕ್ರಂ ಭಾರದ್ವಾಜ್ ಹಾಗೂ ವಯೋಲಿನ್ ವಾದನದಲ್ಲಿ ಅಮೋಘ್ ಸಹಕಾರ ನೀಡಿದರು.

ಬಳಿಕ ದಾಸರ ಕೀರ್ತನೆಗಳನ್ನು ಹಾಡುವ ಮೂಲಕ ವಿದ್ವಾನ್ ವಿದ್ಯಾಭೂಷಣ್ ಅವರು ಅರಮನೆ ಅಂಗಳದಲ್ಲಿ ಭಕ್ತಿ ಸುಧೆ ಹರಿಸಿದರೆ, ರಾಮಾಯಣದ ಸನ್ನಿವೇಶಗಳನ್ನು ಮನಮೋಹಕವಾಗಿ ಚಿತ್ರಿಸಿದ ಪ್ರಸಿದ್ಧ ಚಿತ್ರಕಲಾವಿದ ಗಂಜೀಫಾ ರಘುಪತಿಭಟ್ ತಮ್ಮ ಕುಂಚದ ಮೂಲಕ ಎಲ್ಲರ ಗಮನ ಸೆಳೆದರು. 'ನಾರಾಯಣ ಗೋವಿಂದ ಜಯ', 'ಶ್ರೀ ರಾಮ್ ಜಯ ರಾಮ್' ಇನ್ನಿತರ ದಾಸರ ಕೀರ್ತನೆಗಳಿಗೆ ಅನುಗುಣವಾಗಿ ರಾಮ–ರಾವಣ ಯುದ್ಧ, ಲಕ್ಷ್ಮಣ ಮತ್ತು ಹನುಮಂತನ ಪರಾಕ್ರಮಗಳನ್ನು ಆಕರ್ಷಕವಾಗಿ ಚಿತ್ರಿಸುವ ಮೂಲಕ ಏಕಕಾಲದಲ್ಲಿ ಮನಸ್ಸಿಗೆ ಇಂಪು ನೀಡುವ ಸಂಗೀತ, ಮುದ ನೀಡುವ ಚಿಕ್ರಕಲೆ ನೆರೆದಿದ್ದವರನ್ನು ನಿಬ್ಬೆರಗಾಗಿಸಿತು. ವಿದ್ವಾನ್ ವಿದ್ಯಾಭೂಷಣ್ ಅವರೊಂದಿಗೆ ವಯೋಲಿನ್ ವಾದನದಲ್ಲಿ ವಿದ್ವಾನ್ ವಿಶ್ವಜಿತ್, ಕೊಳಲು ವಾದನದಲ್ಲಿ ವಿದ್ವಾನ್ ಮಹೇಶ್‌ಸ್ವಾಮಿ, ಮೃದಂಗದಲ್ಲಿ ಅನಿರುದ್ ಭಟ್ ಹಾಗೂ ತಬಲ ವಾದನದಲ್ಲಿ ವಿದ್ವಾನ್ ಜಗದೀಶ್ ಕುರ್ತುಕೋಟಿ ಸಹಕಾರ ಉತ್ತಮವಾಗಿತ್ತು.

ಪಲ್ಲವಿ ಮೋಡಿ: ಬಳಿಕ ವೇದಿಕೆಗೆ ಆಗಮಿಸಿದ ಖ್ಯಾತ ಗಾಯಕಿ ಎಂ.ಡಿ.ಪಲ್ಲವಿ, ತಮ್ಮ ಸುಶ್ರಾವ್ಯ ಕಂಠಸಿರಿಯಿಂದ ಮೋಡಿ ಮಾಡಿದರು. 'ಕರುಣಾಳು ಬಾ ಬೆಳಕೆ', ಕವಿ ಕೆ.ಎಸ್.ನಿಸಾರ್ ಅಹಮದ್ ರಚಿತ 'ಜೋಗದ ಸಿರಿ ಬೆಳಕಿನಲ್ಲಿ' 'ಕನ್ನಡವೇ ಸತ್ಯ, ಕನ್ನಡವೇ ನಿತ್ಯ' ಸೇರಿದಂತೆ ಕನ್ನಡ ಸಾಹಿತ್ಯ ಲೋಕದ ಮಹಾನ್ ಕವಿಗಳ ರಚಿತ ಹಾಡುಗಳನ್ನು ಸುಶ್ರಾವ್ಯವಾಗಿ ಹಾಡಿ ರಂಜಿಸಿದರು. ಕನ್ನಡ ಚಿತ್ರಗೀತೆಗಳ ನಡುವೆ ಭಾವ ಹಾಗೂ ಜಾನಪದ ಗೀತೆಗಳನ್ನು ಪ್ರಸ್ತುತಪಡಿಸಿದ ಎಂ.ಡಿ.ಪಲ್ಲವಿಯವರ ಗಾಯನದೊಂದಿಗೆ ಫಲಪುಷ್ಪ ಪ್ರದರ್ಶನ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ತೆರೆಬಿದ್ದಿತು.

3.5 ಲಕ್ಷ ಭೇಟಿ: ಕ್ರಿಸ್‌ಮಸ್ ರಜಾ ದಿನದ ಹಿನ್ನಲೆಯಲ್ಲಿ ಅರಮನೆ ಆವರಣದಲ್ಲಿ ಜನಸ್ತೋಮವೇ ಹರಿದು ಬಂದಿತ್ತು. ಸಂಜೆ 7 ಗಂಟೆಗೆ ಅರಮನೆ ದೀಪಗಳು ಬೆಳಗುತ್ತಿದ್ದಂತೆ ಹೊಮ್ಮಿದ ಹರ್ಷೋದ್ಗಾರ ಹೊಸ ಸಂಚಲನ ಉಂಟುಮಾಡಿತು. ಎಲ್ಲರು ಅರಮನೆ ಮುಂದೆ ಹಾಗೂ ಪುಷ್ಪ ಕಲಾಕೃತಿಗಳ ಮುಂದು ನಿಂತು ಫೋಟೋ ಕ್ಲಿಕ್ಕಿಸಿಕೊಳ್ಳುವುದು ಸಾಮಾನ್ಯವಾಗಿತ್ತು. ಇದುವರೆಗೂ ಸುಮಾರು ಮೂರೂವರೆ ಲಕ್ಷ ಪ್ರವಾಸಿಗರು ಅರಮನೆ ಆವರಣದಲ್ಲಿನ ಫಲಪುಷ್ಪ ಪ್ರದರ್ಶನಕ್ಕೆ ಭೇಟಿ ನೀಡಿದ್ದಾರೆ ಎಂದು ಅರಮನೆ ಮಂಡಳಿ ಉಪ ನಿರ್ದೇಶಕ ಟಿ.ಎಸ್. ಸುಬ್ರಮ್ಮಣ್ಯ 'ಮೈಸೂರು ಮಿತ್ರ'ನಿಗೆ ತಿಳಿಸಿದರು.



ವಿದ್ವಾನ್ ವಿದ್ಯಾಭೂಷಣ ಅವರಿಂದ ದಾಸರ ಕೀರ್ತನೆಗಳ 'ಕುಂಚ ಗಾಯನ'



ಖ್ಯಾತ ಗಾಯಕಿ ಎಂ.ಡಿ.ಪಲ್ಲವಿ ಮತ್ತು ತಂಡದವರಿಂದ 'ಸುಗಮ ಸಂಗೀತ'



ಚಂಪಕ ಅಕಾಡೆಮಿ ಕಲಾವಿದರಿಂದ 'ದೇವಿ ವೈಭವಂ' ಭರತನಾಟ್ಯ ನೃತ್ಯ ಪ್ರದರ್ಶನ

ಆಕರ್ಷಣೆಯ ಗಂಜೀಫಾ ಕಲೆಗೆ ಮನಸೋತ ಪ್ರೇಕ್ಷಕರು...!



ಅಂತಾರಾಷ್ಟ್ರೀಯ ಪ್ರಸಿದ್ಧ ಗಂಜೀಫಾ ಚಿತ್ರಕಲಾವಿದ ರಘುಪತಿಭಟ್ ಅವರ ಗಂಜೀಫಾ ಕಲೆ ಎಲ್ಲರನ್ನೂ ಆಕರ್ಷಿಸಿತು. ರಾಮ–ಲಕ್ಷ್ಮಣರಿಬ್ಬರು ರಾವಣನಿಗೆ ಬಾಣ ಬಿಡುತ್ತಿದ್ದರೆ, ಹಿಂಬದಿಯಿಂದ ಕಲ್ಲು ಎಸೆಯುತ್ತಿದ್ದ ಹನುಮಂತನ ಪರಾಕ್ರಮ ಬಿಂಬಿಸುವ, ಹನುಮಂತನ ಸಮುದ್ರಯಾನ, ವಿಷ್ಣುವಿನ ಅವತಾರ ಸೇರಿದಂತೆ ಹಲವು ಮನಮೋಹಕ ಚಿತ್ರಗಳನ್ನು ಬಿಡಿಸುವ ಮೂಲಕ ರಾಮಾಯಣ ದರ್ಶನ ಮಾಡಿದರು. ಅತ್ತ ವಿದ್ವಾನ್ ವಿದ್ಯಾಭೂಷಣ್ ಅವರು ದಾಸರ ಕೀರ್ತನೆಗಳನ್ನು ಹಾಡುತ್ತಿದ್ದರೆ, ಹಾಡಿಗೆ ಭಾವ ತುಂಬುದ ರೀತಿಯಲ್ಲಿ ಗಂಜಿಫಾ ರಘುಪತಿಭಟ್ ಅವರ ಕಲೆ ಪ್ರೇಕ್ಷಕರ ಮನಸೆಳೆಯಿತು.

ಮೈಸೂರು ಮಹಾರಾಜರ ಕೊಡುಗೆ ಸ್ಮರಣೀಯ

ಶ್ರೀ ಸುಗುಣೇಂದ್ರತೀರ್ಥ ಸ್ವಾಮೀಜಿ



ಮೈಸೂರು ಸಂಸ್ಥಾನದ ಮಹಾರಾಜರು ಪುತ್ತಿಗೆ ಮಠಕ್ಕೆ ದಾನ–ಧರ್ಮ ಮಾಡಿದ್ದು, ಅವರ ಕೊಡುಗೆ ಸದಾ ಸ್ಮರಣೀಯ ಎಂದು ಉಡುಪಿ ಪುತ್ತಿಗೆ ಮಠದ ಶ್ರೀ ಸುಗುಣೇಂದ್ರ ತೀರ್ಥ ಸ್ವಾಮೀಜಿ ಹೇಳಿದರು.

ಸಂಗೀತ ಕಾರ್ಯಕ್ರಮ ವೀಕ್ಷಣೆಗೆಂದು ಭೇಟಿ ನೀಡಿದ ಅವರು, ತೀರ್ಥಹಳ್ಳಿ ಎಂಬ ಸ್ಥಳದಲ್ಲಿ ಮೈಸೂರು ಮಹಾರಾಜರು ಕೊಟ್ಟಿರುವ ಕೊಡುಗೆ ಸ್ಮರಣೀಯವಾಗಿದೆ ಎಂದರಲ್ಲದೆ ಮುಂದಿನ 'ಪರ್ಯಾಯ ಪೂರ್ವ ಪರಿಕ್ರಮ ಯಾತ್ರೆ' ಕಾರ್ಯಕ್ರಮಕ್ಕೆ ರಾಜವಂಶಸ್ಥರಾದ ಪ್ರಮೋದಾದೇವಿ ಒಡೆಯರ್ ಅವರನ್ನು ಸ್ವಾಗತಿಸಲಾಗುವುದು. ಅಲ್ಲದೆ ಮೈಸೂರಿನಿಂದಲೂ ಭಕ್ತರು ಮಠಕ್ಕೆ ಬರುವಂತೆ ತಿಳಿಸಿದರು. ಪುತ್ತಿಗೆ ಮಠದ ಕಿರಿಯ ಶ್ರೀಗಳಾದ ಸುಶ್ರೀಂದ್ರತೀರ್ಥ ಸ್ವಾಮೀಜಿ ಉಪಸ್ಥಿತರಿದ್ದರು.

ಇಂದಿನಿಂದ ಹೂ ಬದಲಾವಣೆ...!

"ಡಿ.31ರವರೆಗೆ ನಡೆಯುವ ಫಲಪುಷ್ಪ ಪ್ರದರ್ಶನದಲ್ಲಿರುವ ಕಲಾಕೃತಿಗಳಿಗೆ ನಾಳೆ (ಡಿ.26) ಯಿಂದ ಹೂ ಬದಲಾವಣೆ ಮಾಡಲಾಗುವುದು. ಡಿ.27ರವರೆಗೆ ಹೂ ಬದಲಾವಣೆ ಕಾರ್ಯ ನಡೆಯಲಿದ್ದು, 35 ಬಗೆಯ 4 ಲಕ್ಷ ಹೂಗಳನ್ನು ಬಳಸಲಾಗುವುದು. ಸೋಮನಾಥಪುರದ ಚೆನ್ನಕೇಶವ ದೇವಾಲಯ ಕಲಾಕೃತಿಗೆ ಮೂರೂವರೆ ಟನ್ ಹೂ ಬೇಕಾಗಲಿದೆ.

–ಟಿ.ಎಸ್.ಸುಬ್ರಮ್ಮಣ್ಯ, ಉಪನಿರ್ದೇಶಕ, ಮೈಸೂರು ಅರಮನೆ ಮಂಡಳಿ

ಅನ್ಯರಾಜ್ಯದ ಆದಾಯ ಪ್ರಮಾಣಪತ್ರ ಎಂಬ ಕಾರಣಕ್ಕೆ ಪ್ರವೇಶ ನಿರಾಕರಣೆ ಸಲ್ಲ



ನವದೆಹಲಿ: ಆದಾಯ ಪ್ರಮಾಣ ಪತ್ರವನ್ನು ಬೇರೆ ರಾಜ್ಯದಿಂದ ಪಡೆಯಲಾಗಿದೆ ಎಂಬ ಕಾರಣ ನೀಡಿ ಆರ್ಥಿಕವಾಗಿ ಹಿಂದುಳಿದ ವರ್ಗಗಳ (ಇಡಬ್ಲ್ಯುಎಸ್) ಮೀಸಲಾತಿ ಅಡಿ ದಾಖಲಾತಿಯನ್ನು ಕೇಂದ್ರೀಯ ವಿದ್ಯಾಲಯ ಸಂಘಟನೆ (ಕೆವಿಎಸ್) ಶಾಲೆಗಳು ನಿರಾಕರಿಸುವಂತಿಲ್ಲ ಎಂದು ದೆಹಲಿ ಹೈಕೋರ್ಟ್ ಆದೇಶ ಹೊರಡಿಸಿದೆ.

ಮಗುವೊಂದು ಆರ್ಥಿಕವಾಗಿ ಹಿಂದುಳಿದ ವರ್ಗಕ್ಕೆ ಸೇರಿದೆಯೇ ಎಂದು ನಿರ್ಧರಿಸಲು, ಕೇಂದ್ರ ಸರ್ಕಾರವೇ ಮಗುವಿನ ಕುಟುಂಬದ ವಾರ್ಷಿಕ ಆದಾಯದ ಮಿತಿಯನ್ನು ನಿಗದಿಪಡಿಸುತ್ತದೆ ಎಂದೂ ಹೈಕೋರ್ಟ್ ಹೇಳಿದೆ. ಕೆವಿಎಸ್ ಶಾಲೆಗಳು ಕೇಂದ್ರ ಸರ್ಕಾರದ ನಿಯಂತ್ರಣದಲ್ಲಿವೆ. ಕೆವಿಎಸ್ ಶಾಲೆಗಳಲ್ಲಿ ದಾಖಲಾತಿ ಪಡೆಯುವ ನಿಟ್ಟಿನಲ್ಲಿ ಪಡೆಯುವ ಆದಾಯ ಪ್ರಮಾಣಪತ್ರವನ್ನು ಆಯಾ ರಾಜ್ಯದ ತಹಶೀಲ್ದಾರ ಹುದ್ದೆಗಿಂತ ಕೆಳ ಹುದ್ದೆಗಳಲ್ಲಿ ಇರುವವರಿಂದ ಪಡೆದಿರಬಾರದು. ಆಯಾ ರಾಜ್ಯಗಳು ನಿಗದಿಪಡಿಸಿರುವ ದಾಖಲೆ ಪರಿಶೀಲನಾ ಪ್ರಕ್ರಿಯೆಗಳ ಅನ್ವಯವೇ ಸಂಬಂಧಪಟ್ಟ ದಾಖಲೆಗಳ ಪರಿಶೀಲನೆ ನಡೆದಿರಬೇಕು ಎಂದು ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸಿದೆ.

ಅಧಿಸೂಚನೆ ಅನ್ವಯ, ದೇಶದ ಯಾವುದೇ ರಾಜ್ಯದಲ್ಲಿರುವ ಕೆವಿಎಸ್ ಶಾಲೆಯಲ್ಲಿ ಇಡಬ್ಲ್ಯುಎಸ್ ಮೀಸಲಾತಿ ಅಡಿ ದಾಖಲಾತಿ ಬಯಸುವ ಅಭ್ಯರ್ಥಿಯು ಅದೇ ರಾಜ್ಯದಿಂದ ಆದಾಯ ಪ್ರಮಾಣಪತ್ರ ಪಡೆದಿರಬೇಕೆಂಬ ನಿಯಮವಿಲ್ಲ ಎಂದು ನ್ಯಾಯಮೂರ್ತಿ ಅನೂಪ್ ಜೈರಾಮ್ ಭಂಭಾನಿ ಅವರು ಆದೇಶ ಹೊರಡಿಸುವ ವೇಳೆ ಹೇಳಿದ್ದಾರೆ.

ಪ್ರಕರಣವೇನು: ಉತ್ತರ ಪ್ರದೇಶದ ಆಜಂಗಢದ ನಿವಾಸಿಯೊಬ್ಬರು ತಮ್ಮ ಮಗನಿಗೆ ಇಡಬ್ಲ್ಯುಎಸ್ ಮೀಸಲಾತಿ ಅಡಿ ಒಂದನೇ ತರಗತಿಗೆ ದಾಖಲಾತಿ ನೀಡಲು ದೆಹಲಿಯ ನರೆಲಾದ ಕೆವಿಎಸ್ ಶಾಲೆಗೆ ಅರ್ಜಿ ಸಲ್ಲಿಸಿದ್ದರು. ವ್ಯಕ್ತಿ ಸಲ್ಲಿಸಿದ್ದ ಆದಾಯ ಪ್ರಮಾಣಪತ್ರವನ್ನು ಆಜಂಗಢದ ತಹಶೀಲ್ದಾರರು ಪ್ರಮಾಣೀಕರಿಸಿದ್ದರು. ದೆಹಲಿಯ ಶಾಲೆಯಲ್ಲಿ ಪ್ರವೇಶ ನೀಡಲು ಉತ್ತರ ಪ್ರದೇಶದ ಪ್ರಮಾಣಪತ್ರವನ್ನು ಪರಿಗಣಿಸಲಾಗುವುದಿಲ್ಲ ಎಂದು ಹೇಳಿದ್ದ ಶಾಲೆಯ ಆಡಳಿತ ಮಂಡಳಿಯು, 2022ರ ಜನವರಿಯಲ್ಲಿ ದಾಖಲಾತಿ ನಿರಾಕರಿಸಿತ್ತು.

ಉದ್ಯೋಗದ ನಿಮಿತ್ತ ಉತ್ತರ ಪ್ರದೇಶದಿಂದ ದೆಹಲಿಗೆ ತಮ್ಮ ಕುಟುಂಬವನ್ನು ವರ್ಗಾಯಿಸಿದ್ದೇನೆ. ಹೀಗಾಗಿ ಮಗನಿಗೆ ಕೇಂದ್ರೀಯ ವಿದ್ಯಾಲಯದಲ್ಲಿ ದಾಖಲಾತಿ ನೀಡುವಂತೆ ನಿರ್ದೇಶನ ನೀಡಬೇಕು ಎಂದು ಕೋರಿ ವ್ಯಕ್ತಿಯು ದೆಹಲಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ಉತ್ತರ ಪ್ರದೇಶದಿಂದ ಪಡೆಯಲಾಗಿರುವ ಆದಾಯ ಪ್ರಮಾಣಪತ್ರವೊಂದೇ ಬಾಲಕನ ಪ್ರವೇಶಾತಿ ನಿರಾಕರಣೆಗೆ ಕಾರಣವಲ್ಲ. ಬಾಲಕನ ಪೋಷಕರು ಸಲ್ಲಿಸಿದ್ದ ಅರ್ಜಿಯಲ್ಲಿ ಹಲವಾರು ಸಮಸ್ಯೆಗಳಿದ್ದವು ಎಂದು ಕೆವಿಎಸ್ ಶಾಲೆ ಪರ ವಕೀಲರು ಹೈಕೋರ್ಟ್‌ನಲ್ಲಿ ಹೇಳಿದರು.

ಅರ್ಜಿದಾರರ ಮಗನಿಗೆ 2021–22ನೇ ಶೈಕ್ಷಣಿಕ ಸಾಲಿನಲ್ಲಿ ಒಂದನೇ ತರಗತಿಗೆ ದಾಖಲಾತಿ ನೀಡಿ, ಬಳಿಕ ಅದನ್ನು ನಿರಾಕರಿಸಲಾಗಿದೆ. ವ್ಯಾಜ್ಯದ ಕಾರಣಕ್ಕಾಗಿ ಬಾಲಕನ ಅಮೂಲ್ಯ ಸಮಯ ಹಾಳಾಗಿದೆ. ಹೀಗಾಗಿ ಆತನಿಗೆ 2023–24ನೇ ಸಾಲಿನ ಮೂರನೇ ತರಗತಿಗೆ ದಾಖಲಾತಿ ನೀಡಬೇಕೆಂದು ಹೈಕೋರ್ಟ್ ನರೆಲಾದ ಕೆವಿಎಸ್ ಶಾಲೆಗೆ ನಿರ್ದೇಶನ ನೀಡಿದೆ.

ಅಶೋಕಪುರಂ ಯಂಗ್ ಚಾಲೆಂಜರ್ಸ್ ಸ್ಪೋರ್ಟ್ಸ್ ಕ್ಲಬ್‌ನಿಂದ ಕ್ರಿಕೆಟ್ ಪಂದ್ಯಾವಳಿ

ಕುಂಬಾರಕೊಪ್ಪಲು ಎನ್‌ಜಿಸಿ ತಂಡಕ್ಕೆ ಫ್ರೆಂಡ್ಸ್ ಕಪ್–2023; 50 ಸಾವಿರ ನಗದು ಬಹುಮಾನ

ಮೈಸೂರು,ಡಿ.25–ಮೈಸೂರಿನ ಅಶೋಕಪುರಂ ಯಂಗ್ ಚಾಲೆಂಜರ್ಸ್ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ಎನ್‌ಐಇ ಕ್ರೀಡಾಂಗಣದಲ್ಲಿ 'ಫ್ರೆಂಡ್ಸ್ ಕಪ್–2023' ಕ್ರಿಕೆಟ್ ಪಂದ್ಯಾವಳಿ ಆಯೋಜಿಸಲಾಗಿತ್ತು.

ಪಂದ್ಯಾವಳಿಯಲ್ಲಿ ಕುಂಬಾರ ಕೊಪ್ಪಲಿನ ಎನ್.ಜಿ.ಸಿ ತಂಡ ಫೈನಲ್ ಪಂದ್ಯ ಜಯಿಸುವ ಮೂಲಕ 50 ಸಾವಿರ ರೂ. ನಗದು ಬಹುಮಾನ ಹಾಗೂ ಆಕರ್ಷಕ ಟ್ರೋಫಿ ಪಡೆಯಿತು. ರನ್ನರ್ ಅಪ್ ಅಶೋಕಪುರಂ ಕ್ರಿಕೆಟರ್ಸ್ ತಂಡವು 25 ಸಾವಿರ ನಗದು ಬಹುಮಾನ ಹಾಗೂ ಟ್ರೋಫಿಯನ್ನು ತನ್ನದಾಗಿಸಿಕೊಂಡಿತು. 3ನೇ ಸ್ಥಾನ ಪಡೆದ ಎಂಎಸ್‌ಎಸ್‌ಸಿ ತಂಡಕ್ಕೆ 10ಸಾವಿರ ನಗದು ಬಹುಮಾನ ಹಾಗೂ ಟ್ರೋಫಿ ನೀಡಲಾಯಿತು. ಮಧು,(ಲಾಲಿ) ಅತ್ಯುತ್ತಮ ಬ್ಯಾಟ್ಸ್‌ಮನ್, ಶರಣ್ ಅತ್ಯುತ್ತಮ ಬೌಲರ್ ಹಾಗೂ ಸುನೀಲ್ ಸರಣಿ ಸರ್ವೋತ್ತಮ ಆಟಗಾರರಾಗಿ ಹೊರಹೊಮ್ಮಿದರು.




ವಿಜೇತ ತಂಡಗಳಿಗೆ ಬಹುಮಾನ ವಿತರಿಸಿದ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮೊಬೈಲ್ ಗೀಳು ಇನ್ನಿತರ ದುಶ್ಚಟಗಳಿಗೆ ದಾಸರಾಗಿ ತಮ್ಮ ಬದುಕನ್ನೇ ಹಾಳು ಮಾಡಿಕೊಳ್ಳುತ್ತಿದ್ದಾರೆ. ಆದರೆ ಯುವಕರ ಭವಿಷ್ಯವನ್ನೇ ಬದಲಾಯಿಸಬಲ್ಲ ಶಕ್ತಿ ಕ್ರೀಡೆಗಿದೆ. ಕ್ರೀಡೆಯಲ್ಲಿ ಹೆಚ್ಚಾಗಿ ತೊಡಗಿಸಿಕೊಳ್ಳುವ ಮೂಲಕ ಶಾರೀರಿಕವಾಗಿ ಸದೃಢವಾಗುವುದರ ಜೊತೆಗೆ ಮಾನಸಿಕವಾಗಿಯೂ ಬಲಿಷ್ಠರಾಗಿರಬಹುದು ಎಂದು ಸಲಹೆ ನೀಡಿದರು.

ಸಾಧನೆಗೆ ಬಡತನ ಅಡ್ಡಿಯಾಗುವುದಿಲ್ಲ. ಅಂತಾರಾಷ್ಟ್ರೀಯ ಮಟ್ಟದಲ್ಲಿ ದೇಶದ ಕೀರ್ತಿ ಪತಾಕೆ ಹಾರಿಸಿರುವ ಕ್ರೀಡಾಪಟುಗಳಲ್ಲಿ ಬಹುತೇಕರು ಅವರೆಲ್ಲರೂ ಕುಗ್ರಾಮಗಳಿಂದ ಬೆಳೆದು ಬಂದವರು. ಕಠಿಣ ಪರಿಶ್ರಮ, ಶ್ರದ್ಧೆ, ಉತ್ತಮ ಮಾರ್ಗದರ್ಶಕರು ಇದ್ದರೆ ಯಾರಾದರೂ ಸಾಧನೆ ಮಾಡಲು ಸಾಧ್ಯವಿದೆ. ಅಶೋಕಪುರಂನಲ್ಲಿ ಹಿಂದಿನಿಂದಲೂ ಕ್ರೀಡೆಗೆ ಆದ್ಯತೆ ಇದೆ. ನೂರಾರು ಪೈಲ್ವಾನರು ಮೈಸೂರಿನ ಹಿರಿಮೆ ಹೆಚ್ಚಿಸಿದ್ದಾರೆ. ಇಂದಿಗೂ ಬಹಳಷ್ಟು ಕುಸ್ತಿಪಟುಗಳಿದ್ದಾರೆ. ಯಂಗ್ ಚಾಲೆಂಜರ್ಸ್ ತಂಡ ಕ್ರೀಡಾಸಕ್ತರಿಗೆ ಬೆನ್ನೆಲುಬಾಗಿ ನಿಂತಿರುವುದು ಅಭಿನಂದನಾರ್ಹ. ದುಶ್ಚಟಗಳಿಂದ ದೂರವಿದ್ದು ಕ್ರೀಡೆಗಳಲ್ಲಿ ಸಕ್ರಿಯರಾಗುವ ಮೂಲಕ ಉತ್ತಮ ಭವಿಷ್ಯ ರೂಡಿಸಿಕೊಳ್ಳಿ ಎಂದು ಕಿವಿಮಾತು ಹೇಳಿದರು. ಈ ವೇಳೆ ಮಾಜಿ ಮೇಯರ್ ಪುರುಷೋತ್ತಮ್, ನಗರಪಾಲಿಕೆ ಮಾಜಿ ಸದಸ್ಯ ವಿಶ್ವೇಶ್ವರಯ್ಯ, ಯಂಗ್ ಚಾಲೆಂಜರ್ಸ್ ಸ್ಪೋರ್ಟ್ಸ್ ಕ್ಲಬ್‌ನ ಜೋಗಿ ಮಹೇಶ್, ಯುವ ಮುಖಂಡ ಜಯರಾಜ್, ಆದಿ ಕರ್ನಾಟಕ ಮಹಾಸಂಸ್ಥೆ ಅಧ್ಯಕ್ಷ ಸುನೀಲ್, ಉಪಾಧ್ಯಕ್ಷರಾದ ಶಿವಸ್ವಾಮಿ ಭಾಸ್ಕರ್, ಥಾಮಸ್, ಸುಗು ಮತ್ತಿತರರು ಉಪಸ್ಥಿತರಿದ್ದರು.

ಸಂಸದರ ಅಮಾನತನ್ನು ಆಡಳಿತ ಪಕ್ಷ ಅಸ್ತ್ರವಾಗಿಸಿಕೊಂಡಿದೆ

ಸಭಾಪತಿಗೆ ಪತ್ರದ ಮೂಲಕ ಉತ್ತರಿಸಿದ ಖರ್ಗೆ



ನವದೆಹಲಿ: ಆಡಳಿತಾರೂಢ ಪಕ್ಷ ಪ್ರಜಾಪ್ರಭುತ್ವವನ್ನು ನಾಶಪಡಿಸಲು, ಸಂಸತ್ತಿನ ನಿಯಮಗಳನ್ನು ಹಾಳು ಮಾಡಲು ಸಂಸದರ ಅಮಾನತನ್ನು ಅಸ್ತ್ರವಾಗಿಸಿಕೊಂಡಿದೆ ಎಂದು ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

ಸಂಸದರ ಅಮಾನತು ವಿಚಾರ ಕುರಿತು ಚರ್ಚೆ ನಡೆಸಲು ಖರ್ಗೆಯವರನ್ನು ಉಪ ರಾಷ್ಟ್ರಪತಿ ಮತ್ತು ರಾಜ್ಯಸಭಾ ಸಭಾಪತಿ ಜಗದೀಪ್ ಧನಕರ್ ಅವರು ತಮ್ಮ ನಿವಾಸಕ್ಕೆ ಆಹ್ವಾನಿಸಿದ್ದರು. ಆದರೆ, ಮಲ್ಲಿಕಾರ್ಜುನ ಖರ್ಗೆಯವರು ಅವರ ನಿವಾಸಕ್ಕೆ ಹೋಗಿಲ್ಲ. ಬದಲಿಗೆ ಪತ್ರ ಬರೆದು ಉತ್ತರಿಸಿದ್ದಾರೆ. ಅಲ್ಲದೆ, ಭೇಟಿಯಾಗದಿರಲು ಕಾರಣವನ್ನೂ ಪತ್ರದಲ್ಲಿ ತಿಳಿಸಿದ್ದು, ದೆಹಲಿಗೆ ಮರಳಿದ ಕೂಡಲೇ ಭೇಟಿ ಮಾಡುವುದಾಗಿ ತಿಳಿಸಿದ್ದಾರೆ.

ಪತ್ರದಲ್ಲಿ ಆಡಳಿತಾರೂಢ ಪಕ್ಷದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಲೋಕಸಭೆ ಮತ್ತು ರಾಜ್ಯಸಭೆಯ ಸಂಸದರ ಸಾಮೂಹಿಕ ಅಮಾನತು ಸರ್ಕಾರದಿಂದ ಪೂರ್ವನಿರ್ಧರಿತ ಮತ್ತು ಪೂರ್ವಯೋಜಿತವಾಗಿದೆ ಎಂದು ತೋರುತ್ತದೆ ಎಂದು ಆರೋಪಿಸಿದ್ದಾರೆ.

ಸಂಸದರನ್ನು ಅಮಾನತು ಮಾಡುವ ಮೂಲಕ 146 ಸಂಸದರ ಧ್ವನಿಯನ್ನು ಸರಕಾರ ಪರಿಣಾಮಕಾರಿಯಾಗಿ ಅಡಗಿಸುತ್ತಿದೆ. ಡಿ.14ರಂದು ನಡೆದ ಭದ್ರತಾ ಲೋಪ ಘಟನೆ ಬಗ್ಗೆ ಸಂಸದರ ಅಮಾನತುಗೊಳಿಸುವುದಕ್ಕೂ ಮುನ್ನ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಂದ ಪ್ರತಿಕ್ರಿಯೆ ಕೇಳಲಾಗಿತ್ತು. ಆದರೆ, ಸದನದಲ್ಲಿ ಸಚಿವರು ಹೇಳಿಕೆಯನ್ನು ನೀಡಲಿಲ್ಲ. ಸದನದಲ್ಲಿ ಹೇಳಿಕೆ ನೀಡದೆ ಮಾಧ್ಯಮಗಳಲ್ಲಿ ಹೇಳಿಕೆ ನೀಡಿದ್ದರು. ಈ ಮೂಲಕ ಪ್ರಜಾಪ್ರಭುತ್ವ ಮಂದಿರವನ್ನು ಅಪಹಾಸ್ಯ ಮಾಡಿರುವುದು ವಿಷಾದನೀಯವಾದದ್ದು. ಗೃಹ ಸಚಿವರು ರಾಜ್ಯ ಸಭೆಗೆ ಹಾಜರಾಗುವುದಕ್ಕೂ ಮುನ್ನ ಹೆಚ್ಚಿನ ಸಂಖ್ಯೆಯ ವಿರೋಧ ಪಕ್ಷದ ಸಂಸದರನ್ನು ಅಮಾನತುಗೊಳಿಸಲಾಗುವುದು ಎಂದು ಕೇಂದ್ರ ಸಚಿವರೊಬ್ಬರು ವಿರೋಧ ಪಕ್ಷದ ನಾಯಕರಿಗೆ ತಿಳಿಸಿದ್ದರು. ಇಂತಹ ಬೆದರಿಕೆಗಳ ಬಗ್ಗೆ ಸಭಾಧ್ಯಕ್ಷರು ಪರಿಶೀಲಿಸಬೇಕೆಂದು ನಾವು ಬಯಸುತ್ತೇವೆ.

ಗಡಿಯಲ್ಲಿ ಚೀನಾ ಅತಿಕ್ರಮಣ, ಮಣಿಪುರದಲ್ಲಿ ಅಶಾಂತಿ ಸೇರಿದಂತೆ ಹಲವು ಗಂಭೀರ ವಿಚಾರಗಳ ಕುರಿತ ಚರ್ಚೆಯಲ್ಲಿ ಸರ್ಕಾರ ತಪ್ಪಿಸಿಕೊಂಡಿದೆ. ಇದನ್ನು ಸಭಾಧ್ಯಕ್ಷರು ಗಮನಿಸಬೇಕು. ಸಭಾಧ್ಯಕ್ಷರು ಸದನದ ಕಾವಲುಗಾರರಾಗಿದ್ದು, ಸದನದ ಘನತೆ ಕಾಪಾಡಬೇಕು, ಸಂಸದೀಯ ಸವಲತ್ತುಗಳನ್ನು ಕಾಪಾಡಬೇಕು. ಸಂಸತ್ತಿನಲ್ಲಿ ಕಲಾಪ, ಚರ್ಚೆ ಮತ್ತು ಉತ್ತರದ ಮೂಲಕ ಸರ್ಕಾರವನ್ನು ಹೊಣೆಗಾರರನ್ನಾಗಿ ಮಾಡುವ ಹಕ್ಕು ಜನರಿಗಿದೆ. ಹೀಗಾಗಿ ಅದನ್ನು ರಕ್ಷಿಸುವಲ್ಲಿ ನಾವು ಮುಂಚೂಣಿಯಲ್ಲಿರಬೇಕು. ಆದರೆ, ಚರ್ಚೆಯಿಲ್ಲದೆ ಮಸೂದೆಗಳನ್ನು ಅಂಗೀಕರಿಸಿದ್ದಕ್ಕಾಗಿ ಮತ್ತು ಸರ್ಕಾರದಿಂದ ಉತ್ತರದಾಯಿತ್ವವನ್ನು ಕೇಳದಿದ್ದಕ್ಕಾಗಿ ಸಭಾಧ್ಯಕ್ಷ ಮೇಲೆ ಅಸಮಾಧಾನವಿದೆ. ಸದನದಲ್ಲಿ ಕಲಾಪ ಮುಂದುವರೆಯಬೇಕೆಂಬ ಸಭಾಧ್ಯಕ್ಷ ಮಾತನ್ನು ನಾನು ಒಪ್ಪುತ್ತೇನೆ. ಆದರೆ, ಸದನದಲ್ಲಿ ಚರ್ಚೆ ನಡೆಸಲು ಸರ್ಕಾರ ಉತ್ಸುಕವಾಗಿರದಿದ್ದರೆ, ಚರ್ಚೆಗಳಿಗೆ ಉತ್ತರ ಸಿಗುವುದಿಲ್ಲ ಎಂದು ಹೇಳಿದ್ದಾರೆ.

ಒಂದೇ ಸೂರಿನಡಿ ಮೂಳೆ ಸಮಸ್ಯೆಗೆ ಅತ್ಯಾಧುನಿಕ ಚಿಕಿತ್ಸೆ

● ಡಿಜಿಟಲ್ ರೇಡಿಯಾಗ್ರಫಿ ಎಕ್ಸರೆ ಯಂತ್ರಗಳ ಅಳವಡಿಕೆ ● 'ಹೆಲ್ತ್‌ಹಬ್'ನ ಟ್ರಾಮ ಕೇರ್ ಸೆಂಟರ್ ರೋಗಿಗಳಿಗೆ ವರದಾನ







● ಮೋಹನ್ ಕಾಯಕ

ಮೈಸೂರು,ಡಿ.25–ವೈದ್ಯರ ಮೂರನೇ ಕಣ್ಣು ಎಂದು ಕರೆಯಲ್ಪಡುವ 'ಎಕ್ಸರೆ'(ಕ್ಷ-ಕಿರಣ) ಯಲ್ಲಿ ಮೈಸೂರು ಸಂಸ್ಥಾನದ ಕೊಡುಗೆ ಸ್ಮರಣೆ... ಟ್ರಾಮಾ ಕೇರ್ ಸೆಂಟರ್ ಅತ್ಯಾಧುನಿಕ ಡಿಜಿಟಲ್ ರೇಡಿಯಾಗ್ರಫಿ ಎಕ್ಸರೆ ಯಂತ್ರಗಳ ಅಳವಡಿಕೆ..!

ಮೈಸೂರಿನ ಹೆಲ್ತ್‌ಹಬ್ ಎಂದೇ ಕರೆಯಲ್ಪಡುವ ಕೆಆರ್‌ಎಸ್ ರಸ್ತೆಯಲ್ಲಿರುವ ಟ್ರಾಮಾ ಕೇರ್ ಸೆಂಟರ್ ಆರ್ಥೋಪಿಡಿಕ್(ಮೂಳೆ)ಗೆ ಸಂಬಂಧಿಸಿದಂತೆ ಗುಣಮಟ್ಟದ ಚಿಕಿತ್ಸೆ ನೀಡಲಾಗುತ್ತಿದೆ. ಪ್ರಮುಖವಾಗಿ ಖಾಸಗಿ ಆಸ್ಪತ್ರೆಗಳನ್ನು ಮೀರಿಸುವ ಮಟ್ಟದಲ್ಲಿ 'ಎಕ್ಸರೆ' ಯಂತ್ರಗಳನ್ನು ಅಳವಡಿಸಿರುವುದು ವಿಶೇಷ.

ಮೊದಲಿದ್ದ ಕಂಪ್ಯೂಟರ್ ರೇಡಿಯಾಗ್ರಫಿ (ಸಿಆರ್) ಯಂತ್ರಗಳ ಬದಲು ಅತ್ಯಾಧುನಿಕ ಡಿಜಿಟಲ್ ರೇಡಿಯಾಗ್ರಫಿ(ಡಿಆರ್) ಯಂತ್ರಗಳನ್ನು ಅಳವಡಿಸಲಾಗಿದ್ದು, 'ಎಕ್ಸರೆ' ಮಾಡಿದ ಕೆಲವೇ ನಿಮಿಷಗಳಲ್ಲಿ ಅದರ ಹಾರ್ಡ್ ಕಾಪಿ ನೀಡುವ ಮೂಲಕ ಚಿಕಿತ್ಸೆಯಲ್ಲಿ ಗುಣಮಟ್ಟದ ಜೊತೆಗೆ ವೇಗವನ್ನು ಹೆಚ್ಚಿಸಲಾಗಿದೆ. 'ಎಕ್ಸರೆ'ಯಲ್ಲಿ ಗುಣಮಟ್ಟ ಕಾಯ್ದುಕೊಳ್ಳುವ ಜೊತೆಗೆ ಮೈಸೂರು ಸಂಸ್ಥಾನದ ಕೊಡುಗೆಯನ್ನು ಸ್ಮರಿಸಲಾಗುತ್ತಿದೆ. 'ಎಕ್ಸರೆ'ಯ ಎಡಬದಿಯಲ್ಲಿ ರಾಜಕುಮಾರಿ ಕೃಷ್ಣಜಮ್ಮಣ್ಣಿ(princess krishna jammanni) ಅವರ ಫೋಟೋ ಇರುವ ಹೆಚ್‌ಡಿ (ಹೆಚ್ಚು ಸ್ವರೂಪತೆ) ಲೋಗೋ ಹಾಗೂ ಬಲಬದಿಯಲ್ಲಿ ಶತಮಾನೋತ್ಸವ ಸ್ಮರಣೆ ಅಂಗವಾಗಿ 'ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಕೇಂದ್ರ ಕಟ್ಟಡ ಹಾಗೂ 100' ಎಂಬುದಾಗಿರುವ ಮತ್ತೊಂದು ಲೋಗೋ ಆಕರ್ಷಕವಾಗಿದೆ.

ಸದ್ಯ ಎರಡು 'ಎಕ್ಸರೆ' ಡಿಆರ್ ಯಂತ್ರಗಳಿಂದ ಸೇವೆ ನೀಡಲಾಗುತ್ತಿದ್ದು, ರೋಗಿಗಳಿಗೆ ಅನುಕೂಲವಾಗುವಂತೆ ಕಡಿಮೆ ಸಮಯದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಅಲ್ಲದೆ ಸಿಟಿ ಸ್ಕ್ಯಾನಿಂಗ್ ಯಂತ್ರಗಳನ್ನು ಅಳವಡಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಕೆಲ ದಿನಗಳಲ್ಲಿ ಸಿಟಿ ಸ್ಕ್ಯಾನ್ ಸೌಲಭ್ಯವನ್ನು ಪಡೆದುಕೊಳ್ಳಬಹುದಾಗಿದೆ.

ಗುಣಮಟ್ಟದ ಜೊತೆಗೆ ಸಮಯ ಉಳಿತಾಯ: ದೇಹದ ಯಾವುದೇ ಭಾಗದಲ್ಲಿ ಮೂಳೆ ಮುರಿದರು ಅದನ್ನು ಮತ್ತೆ ಸರಿಪಡಿಸಲು, ಉಸಿರಾಟ ತೊಂದರೆ ಇದ್ದರೆ ತಿಳಿಯಲು 'ಎಕ್ಸರೆ' ಅತ್ಯಂತ ಅವಶ್ಯ. ಕೆ.ಆರ್.ಆಸ್ಪತ್ರೆಯಲ್ಲಿದ್ದ ಆರ್ಥೋಪಿಡಿಕ್ ವಿಭಾಗವನ್ನು ಟ್ರಾಮಾ ಕೇರ್ ಸೆಂಟರ್‌ಗೆ ಶಿಫ್ಟ್ ಮಾಡಿದ ಬಳಿಕ ಯಾವುದೇ ಗೊಂದಲವಿಲ್ಲದೆ ಒಂದೇ ಸ್ಥಳದಲ್ಲಿ ಗುಣಮಟ್ಟದ ಸೇವೆ ನೀಡಲಾಗುತ್ತಿದೆ. ಅದರಲ್ಲೂ ಮುಖ್ಯವಾಗಿ ಓಪಿಡಿ, ಎಕ್ಸರೆ, ಫಿಜಿಯೋಥೆರಪಿ ಹಾಗೂ ಮೂಳೆಗೆ ಸಂಬಂಧಿತ ಎಲ್ಲಾ ಬಗೆಯ ಚಿಕಿತ್ಸೆಗಳು ಒಂದೇ ಸ್ಥಳದಲ್ಲಿ ಲಭ್ಯವಿದೆ ಎಂದು ಟ್ರಾಮಾ ಕೇರ್ ಸೆಂಟರ್‌ನ ರೇಡಿಯಾಲಜಿ ವಿಭಾಗದ ಮುಖ್ಯಸ್ಥ ಡಾ.ಸಿ.ಎನ್. ಪ್ರದೀಪ್ ಕುಮಾರ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಸಿಆರ್‌ನಿಂದ ಡಿಆರ್‌ಗೆ ಬದಲಾವಣೆ: ಟ್ರಾಮಾ ಕೇರ್ ಸೆಂಟರ್‌ನಲ್ಲಿ ಆರ್ಥೋಪಿಡಿಕ್ ವಿಭಾಗ ಪ್ರಾರಂಭಿಸಿದಾಗ ಕಂಪ್ಯೂಟರ್ ರೇಡಿಯಾಗ್ರಫಿ(ಸಿಆರ್) 'ಎಕ್ಸರೆ' ಯಂತ್ರಗಳನ್ನು ಬಳಸಲಾಗುತ್ತಿದೆ. ನಂತರ ಕೆಲವೇ ದಿನಗಳಲ್ಲಿ ಅತ್ಯಾಧುನಿಕ ಡಿಜಿಟಲ್ ರೇಡಿಯಾಗ್ರಫಿ(ಡಿಆರ್) 'ಎಕ್ಸರೆ' ಯಂತ್ರಗಳನ್ನು ಅಳಡಿಸಲಾಯಿತು. ಡಿಆರ್ ಎಕ್ಸರೆ ಯಂತ್ರಗಳು ಸ್ಪಷ್ಟ ಚಿತ್ರಣ ನೀಡುವುದರ ಜೊತೆಗೆ ಕಡಿಮೆ ಸಮಯದಲ್ಲಿ ಹಾರ್ಡ್ ಕಾಪಿ ಪ್ರಿಂಟ್ ಹಾಕಲು ಅನುಕೂಲವಾಗಿದೆ. ಇದರಿಂದ ರೋಗಿಗಳು ಕಾಯುವುದು ತಪ್ಪಿದೆ ಎಂದರು.

ಡಿಜಿಟಲ್ ಕಾಪಿ ನೀಡುವ ಚಿಂತನೆ: ಮುಂದಿನ ದಿನಗಳಲ್ಲಿ ಹೈಯರ್ ಎಂಡ್ 'ಎಕ್ಸರೆ' ಯಂತ್ರಗಳನ್ನು ಅಳವಡಿಸುವ ಜೊತೆಗೆ ಹಾರ್ಡ್ ಕಾಪಿ ನೀಡುವ ಬದಲು ಡಿಜಿಟಲ್ ಕಾಪಿಯನ್ನು ನೇರವಾಗಿ ರೋಗಿಯ ವಾಟ್ಸ್‌ಆಪ್ ಅಥವಾ ಇ–ಮೇಲ್‌ಗೆ ಕಳುಹಿಸುವ ಕುರಿತು ಚಿಂತನೆ ನಡೆಸಲಾಗಿದೆ. ಇದರಿಂದ ರೋಗಿಗಳು ಕಟ್ಟುವ ಶುಲ್ಕದ ಮೊತ್ತವೂ ಕಡಿಮೆಯಾಗಲಿದೆ. ಮೈಸೂರು ಮಹಾರಾಜರು ಕೆಆರ್‌ಎಸ್ ರಸ್ತೆಯಲ್ಲಿ ಅಂದು ಬಿತ್ತಿದ ಆರೋಗ್ಯ ಸೇವೆಯ ಬೀಜ ಇಂದು ಹೆಮ್ಮರವಾಗಿ ಬೆಳೆದು ಲಕ್ಷಾಂತರ ರೋಗಿಗಳ ಚಿಕಿತ್ಸೆಯ ತಾಣವಾಗಿದೆ ಎಂದು ಸ್ಮರಿಸಿದರು.

ರೋಗಿಯೊಬ್ಬರಿಂದ ತಯಾರಾಯ್ತು ಲೋಗೋ...!

ಕಳೆದ ವರ್ಷ ಪಿಕೆಟಿಬಿ ಆಸ್ಪತ್ರೆಗೆ ಚಿಕಿತ್ಸೆಗೆಂದು ಬಂದಿದ್ದ ತುಮಕೂರಿನ ಜಿಲ್ಲೆಯ ಚಿಕ್ಕನಾಯಕನಹಳ್ಳಿಯ ಮಹಮದ್ ಗೌಸ್ ಎಂಬುವರು ಮೈಸೂರು ಸಂಸ್ಥಾನದ ಕೊಡುಗೆ ಬಗ್ಗೆ ತಿಳಿದು, ರಾಜಕುಮಾರಿ ಕೃಷ್ಣಜಮ್ಮಣ್ಣಿ ಅವರ ಫೋಟೋ ಇರುವ ಹೆಚ್‌ಡಿ ಕ್ವಾಲಿಟಿಯ ಲೋಗೋ ತಯಾರಿಸಿ ಕೊಟ್ಟರು. 'ಎಕ್ಸರೆ'ಯ ಡಿಜಿಟಲ್ ಕಾಪಿಯನ್ನು ಜೂಮ್ ಮಾಡಿದರೂ ಲೋಗೋ ಸ್ಪಷ್ಟವಾಗಿ ಕಾಣಲಿದೆ.

–ಸ್ವಾಮಿ, ವಿಕಿರಣಶಾಸ್ತ್ರ ಚಿತ್ರಣಾಧಿಕಾರಿ, ಟ್ರಾಮಾ ಕೇರ್ ಸೆಂಟರ್

ನಕ್ಕರೆ ಅದೇ ಸ್ವರ್ಗ

ಬಸ್ಯಾ : ಸಂಸಾರಿ ಸನ್ಯಾಸಿಯಾಗಲು ಬಯಸುತ್ತಾನೆ. ಸನ್ಯಾಸಿ ಸಂಸಾರಿಯಾಗಲು ಬಯಸುತ್ತಾನೆ. ಗೊತ್ತಾ?

ಸಂತ : ಕಾರಣ?

ಬಸ್ಯಾ : ಮೊದಲನೆಯದು 'ಭಯಕ್ಕೆ', ಎರಡನೆಯದು 'ಬಯಕೆ'.

ಮೈಸೂರು ಮಿತ್ರ

ಮಂಗಳವಾರ, 26 ಡಿಸೆಂಬರ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಅಂತಿಮವಾಗಿ ನಾವು ನಮ್ಮ ಶತ್ರುಗಳ ಮಾತುಗಳನ್ನು ನೆನಪಿಟ್ಟುಕೊಂಡಿರುವುದಿಲ್ಲ. ಆದರೆ ಗೆಳೆಯರ ಮೌನವನ್ನು ನೆನಪಿಟ್ಟುಕೊಂಡಿರುತ್ತೇವೆ. – ಮಾರ್ಟಿನ್ ಲೂಥರ್ ಕಿಂಗ್‌ಜೂ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹಟ್ಟಿ ತುಂಬಾ ಹಸು, ಹಾಲು ಮಾತ್ರ ತುಸು

ನಿಮ್ಮ ಪತ್ರಗಳು

ಲಲಿತಮಹಲ್ ಸ್ವಾಗತ ದ್ವಾರ ಉರುಳಿಸುವ ಸಂಚು !?

ಜನಪರ ವರದಿಗಳಿಗಾಗಿ 'ಮೈಸೂರು ಮಿತ್ರ'ನಿಗೆ ಅಭಿನಂದನೆ



ಮಾನ್ಯರೆ,

ಮೈಸೂರಿನ ಚುನಾಯಿತ ಜನಪ್ರತಿನಿಧಿಗಳಿಗೆ, ಸಂಸದ, ಸ್ಥಳೀಯ ಶಾಸಕರು, ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮಹಾನಗರ ಪಾಲಿಕೆ, ಪ್ರವಾಸೋದ್ಯಮ ಇಲಾಖೆ ಸೇರಿದಂತೆ ಸಂಬಂಧಪಟ್ಟ ವ್ಯಕ್ತಿಗಳ ಕರ್ತವ್ಯಹೀನ ಪ್ರಜ್ಞೆ, ಕಾಳಜಿರಹಿತತೆಯನ್ನು ಮೆಚ್ಚಿ ಮೈಸೂರಿನ ನಾಗರಿಕರು ಸನ್ಮಾನ ಮಾಡಲೇಬೇಕು. ಓ, ಕಾರಣ ಹೇಳಲಿಲ್ಲ ಅಲ್ಲವೇ? ಮುಂದೆ ಓದಿ.

ಮೈಸೂರಿನಲ್ಲಿ ಅರಮನೆ ಸೇರಿ ಮಹಾರಾಜರ ಕಾಲದಲ್ಲಿ ನಿರ್ಮಾಣವಾದ ಕಟ್ಟಡಗಳ ಕಾರಣಕ್ಕೆ ಪಾರಂಪರಿಕ ನಗರಿ ಎಂಬ ಅಭಿದಾನಕ್ಕೆ ಮೈಸೂರು ಪಾತ್ರವಾಗಿದೆ. ಈ ಕಾರಣಕ್ಕೇ ಮೈಸೂರಿಗೆ ಪ್ರವಾಸಿಗರು ಹರಿದುಬರುತ್ತಿರುವುದು. ಅಂತಹ ಮೈಸೂರಿನಲ್ಲಿ ಸರಿಯಾದ ನಿರ್ವಹಣೆಯಿಲ್ಲದೇ, ಅನಾಥವಾಗುತ್ತಿರುವ ಕಟ್ಟಡಗಳು ಧರೆಗುರುಳುತ್ತಿವೆ. ಇದಕ್ಕೆ ಈಗಾಗಲೇ ಲ್ಯಾನ್ಸ್‌ಡೌನ್ ಬಿಲ್ಡಿಂಗ್ ಕಣ್ಮುಂದಿನ ಸಾಕ್ಷಿ.

ಲಲಿತಮಹಲ್ ರಸ್ತೆಯ ಸ್ವಾಗತ ದ್ವಾರ ಅವಸಾನದ ಅಂಚು ತಲುಪುತ್ತಿರುವ ಬಗ್ಗೆ 'ಮೈಸೂರು ಮಿತ್ರ'ನಲ್ಲಿ 2019 ಜುಲೈ 11 ರಂದೇ ವಿಸ್ತೃತ ವರದಿ ಪ್ರಕಟವಾಗಿತ್ತು. ಆದರೆ, ಯಾವ ಜನಪ್ರತಿನಿಧಿಗಳು, ಅಧಿಕಾರಿಗಳು ತಲೆ ಕೆಡಿಸಿಕೊಳ್ಳಲಿಲ್ಲ. ಪಾಲಿಕೆಗೆ ಹೊಸದಾಗಿ ಬಂದ ಆಯುಕ್ತ ಅಸಾದ್ ಉರ್ ರೆಹಮಾನ್ ಶರೀಫ್ ಅವರು ಉತ್ಸಾಹದಲ್ಲಿ ಮೈಸೂರು ಜಿಲ್ಲಾ ಪರಂಪರೆ ಸಮಿತಿಯೊಂದಿಗೆ ಇಲ್ಲಿಗೆ ಬಂದು, 'ಬಂದ ಪುಟ್ಟ ಹೋದ ಪುಟ್ಟ'ನಂತೆ ಮಾಧ್ಯಮಗಳಲ್ಲಿ ಪ್ರಚಾರ ಗಿಟ್ಟಿಸಿಕೊಂಡರಷ್ಟೇ.

ಆದರೆ, 2023ರ ನವೆಂಬರ್ 22ರಂದು ಕಿಡಿಗೇಡಿಗಳು ಸ್ವಾಗತ ದ್ವಾರದ ಗೋಡೆಯನ್ನೇ ಉರುಳಿಸಿದ್ದಾರೆ. ಈ ಬಗ್ಗೆ 'ಮೈಸೂರು ಮಿತ್ರ'ದಲ್ಲಿ ನವೆಂಬರ್ 23ರಂದು ಮತ್ತೆ ಎಚ್ಚರಿಕೆಯ ವರದಿ ಪ್ರಕಟವಾಯಿತು. ಜನಪರ ವರದಿಗಳಿಗಾಗಿ 'ಮೈಸೂರು ಮಿತ್ರ'ನಿಗೆ ಅಭಿನಂದನೆಗಳು. ಆದರೆ, ಘಟನೆ ನಡೆದು ಇಷ್ಟು ದಿನಗಳಾದರೂ ಯಾವ ಜನಪ್ರತಿನಿಧಿ, ಅಧಿಕಾರಿಯೂ ಈ ಬಗ್ಗೆ ತಲೆಕೆಡಿಸಿಕೊಂಡಿಲ್ಲ ಎಂದರೆ, ಇದರಲ್ಲಿ ಅವರದೇ ವಲಯದವರ ಕೈವಾಡಗಳಿವೆಯೇ? ಏಕೆಂದರೆ, ಈ ರಸ್ತೆಯನ್ನು ಅಗಲೀಕರಣ ಮಾಡಲು ಮುಂಚೆ ಪ್ರಯತ್ನಗಳು ನಡೆದಿದ್ದವು. ಆದರೆ, ಅದಕ್ಕೆ ರಸ್ತೆಯಲ್ಲಿನ ಮರಗಳು ಮತ್ತು ಈ ಸ್ವಾಗತ ದ್ವಾರವೇ ಅಡ್ಡಿಯಾಗಿದೆ. ಆದರೂ, ಮರಗಳನ್ನು ಕಡಿಯಲು ಮುಂದಾದಾಗ ಬಹುಶಃ ನ್ಯಾಯಾಲಯದ ಆಜ್ಞೆಯಿಂದ ಹಿಂದೆ ಸರಿದರು ಎನಿಸುತ್ತದೆ. ಆದರೆ, ಈಗ ಕಾಣದ ಕೈಗಳು ಈ ಸ್ವಾಗತ ದ್ವಾರವನ್ನೂ ಅವಸಾನವಾಗುವಂತೆ ಮಾಡಿ, ಉರುಳಿಸುವ ಕುತಂತ್ರವೇನಾದರೂ ಮಾಡಿದ್ದಾರೆಯೇ?

ಇಷ್ಟೆಲ್ಲಾ ಆಗುತ್ತಿದ್ದರೂ ಮೈಸೂರಿನ ಯಾವ ಸಂಘಟನೆಗಳೂ ಪಾರಂಪರಿಕ ಕಟ್ಟಡಗಳ ಉಳಿವಿಗಾಗಿ ದನಿಯೆತ್ತುತ್ತಿಲ್ಲ ಎಂದರೆ ದುರಂತವೇ ಸರಿ. ಈ ಸ್ವಾಗತ ದ್ವಾರದ ಗೋಡೆ ಮುರಿದ ಲೇಖನವೂ 'ಮೈಸೂರು ಮಿತ್ರ' ಹೊರತಾಗಿ ಬೇರಾವ ಮಾಧ್ಯಮಗಳಲ್ಲಿಯೂ ಪ್ರಕಟವಾಗಿಲ್ಲವೆಂದರೆ ಮಾಧ್ಯಮಗಳೂ ತಮ್ಮ ನಿಜವಾದ ಕರ್ತವ್ಯ ಮರೆತು ಕೇವಲ ಟಿಆರ್‌ಪಿ ಪ್ರೇರಿತ ಸುದ್ದಿಗಳಿಗಷ್ಟೇ ಸೀಮಿತವಾಗಿವೆಯೇ?

ಜನರ ತೆರಿಗೆ ಹಣದಲ್ಲಿ ಬದುಕುತ್ತಾ, ವೈಭವೋಪೇತ ಬಂಗಲೆಗಳನ್ನು ಕಟ್ಟಿಕೊಂಡು ಐಷಾರಾಮಿ ಜೀವನ ನಡೆಸುತ್ತಿರುವ ಜನಪ್ರತಿನಿಧಿಗಳೇ ಮತ್ತು ಅಧಿಕಾರಿಗಳೇ ನಿಮ್ಮ ಮನೆಗಳನ್ನು ಸುಭದ್ರವಾಗಿ ಕಟ್ಟಿಕೊಂಡಿಲ್ಲವೇ? ಸ್ವಲ್ಪ ಮಳೆ ಸೋರಿದರೂ ಸುಮ್ಮನಿರುವಿರಾ? ಜನರ ತೆರಿಗೆ ಹಣದಲ್ಲಿ ನೀವು ಮತ್ತು ನಿಮ್ಮ ಮನೆಯವರು ಅನ್ನ ತಿನ್ನುತ್ತಿರುವುದು ಹೌದಾದರೆ, ನಿಮಗೆ ಕಿಂಚಿತ್ತಾದರೂ ಕರ್ತವ್ಯ ಪ್ರಜ್ಞೆ ಇದ್ದರೆ ಕೂಡಲೇ ಈ ಸ್ವಾಗತ ದ್ವಾರ ಮತ್ತು ಮೈಸೂರಿನ ಇತಿಹಾಸ, ಪರಂಪರೆ ಸಾರುತ್ತಿರುವ ಇತರೆ ಕಟ್ಟಡಗಳನ್ನು ಉಳಿಸುವ ಪ್ರಯತ್ನ ಮಾಡಿ. ಇಲ್ಲವೇ, ತಾಯಿ ಚಾಮುಂಡೇಶ್ವರಿಯೇ ನಿಮಗೆ ಪಾಠ ಕಲಿಸುತ್ತಾಳೆ ಎಂಬುದನ್ನು ಮರೆಯದಿರಿ.

– ಎಂ. ರಾಜ್, ಮೈಸೂರು

ಬೀದಿ ನಾಯಿಗಳ ಹಾವಳಿ ತಪ್ಪಿಸಿ

ಮಾನ್ಯರೆ,

ಮೈಸೂರಿನ ಜೆ.ಪಿ.ನಗರದ 17ನೇ ಮುಖ್ಯ ರಸ್ತೆಯಲ್ಲಿರುವ ಸಾಯಿಬಾಬಾ ದೇವಸ್ಥಾನದ ಹತ್ತಿರ ಮತ್ತು ಸುತ್ತಮುತ್ತ ಬೀದಿನಾಯಿಗಳ ಹಾವಳಿ ವಿಪರೀತವಾಗಿದೆ. ಬೆಳಗಿನ ಸಮಯ ಹಾಲು ಮತ್ತು ಮನೆ ಪದಾರ್ಥ ತರಲು ಹೋಗುವ ಸಾರ್ವಜನಿಕರನ್ನು ಮತ್ತು ವಾಯುವಿಹಾರಕ್ಕೆ ತೆರಳುವ ಹಿರಿಯ ನಾಗರಿಕರನ್ನು ಅಟ್ಟಿಸಿಕೊಂಡು ಕಚ್ಚಲು ಹೋಗುತ್ತವೆ. ಇದರಿಂದ ಸಾರ್ವಜನಿಕರು ಭಯದಿಂದ ಈ ರಸ್ತೆಯಲ್ಲಿ ಸಂಚರಿಸದಂತಾಗಿದೆ. ಆದಕಾರಣ ಸಾರ್ವಜನಿಕ ಹಿತದೃಷ್ಟಿಯಿಂದ ಇತ್ತ ಗಮನಹರಿಸಿ ಆದಷ್ಟು ಶೀಘ್ರ ಈ ರಸ್ತೆಯಲ್ಲಿರುವ ಬೀದಿನಾಯಿಗಳ ಹಾವಳಿಯನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳಬೇಕೆಂದು ಮನವಿ.

–ಪರಶಿವಮೂರ್ತಿ, ಜೆ.ಪಿ.ನಗರ, ಮೈಸೂರು.

ಮತ್ತೆ ವಕ್ಕರಿಸಿರುವ ಕೊರೊನಾ

ಮಾನ್ಯರೆ,

ದೇಶಾದ್ಯಂತ ಕೋವಿಡ್ ಉಪತಳಿ ಜೆಎನ್ 1 ಸೋಂಕು ಹೆಚ್ಚುತ್ತಿರುವುದು ಆತಂಕಕಾರಿಯಾದ ವಿಚಾರವಾಗಿದೆ. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಈಗಾಗಲೇ ಅಧಿಕಾರಿಗಳ ಸಭೆ ನಡೆಸಿ, ಸೂಕ್ತ ಸಲಹೆ ಮತ್ತು ನಿರ್ದೇಶನಗಳನ್ನು ನೀಡಿರುವುದು ಮಾಧ್ಯಮಗಳಲ್ಲಿ ಪ್ರಕಟವಾಗಿದೆ. ಅದೇ ರೀತಿ 60 ವರ್ಷ ದಾಟಿದವರಿಗೆ ಹಾಗೂ ಇತರ ಕಾಯಿಲೆಗಳಿಂದ ನರಳುತ್ತಿರುವವರಿಗೆ ಮಾಸ್ಕ್ ಕಡ್ಡಾಯಗೊಳಿಸಲಾಗಿದೆ.

ಕೋವಿಡ್ ಪರೀಕ್ಷೆಗಳನ್ನು ಹೆಚ್ಚಿಸಲಾಗಿದ್ದು ರಾಜ್ಯದ ಎಲ್ಲಾ ಆರೋಗ್ಯ ಕೇಂದ್ರಗಳು ಯಾವುದೇ ಪರಿಸ್ಥಿತಿ ಎದುರಿಸಲು ಸಜ್ಜಾಗಿರಬೇಕೆಂಬ ಸೂಚನೆ ರವಾನಿಸಲಾಗಿದೆ. ಕೇಂದ್ರ ಸರ್ಕಾರ ಸಹ ಎಲ್ಲಾ ರಾಜ್ಯಗಳಿಗೆ ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಮಾರ್ಗದರ್ಶಿ ಸೂತ್ರಗಳನ್ನು ಕಳುಹಿಸಿದೆ. ನೆರೆಯ ಕೇರಳ ಮತ್ತು ತಮಿಳುನಾಡಿನಲ್ಲಿ ಕೋವಿಡ್ ಪ್ರಕರಣಗಳು ಹೆಚ್ಚುತ್ತಿದ್ದು ಇದರ ನೇರ ಪರಿಣಾಮ ನಮ್ಮ ರಾಜ್ಯದ ಮೇಲೂ ಬೀಳುತ್ತಿದೆ. ಇತ್ತೀಚಿನ ಮಾಹಿತಿಗಳ ಪ್ರಕಾರ, ರಾಜ್ಯದಲ್ಲಿ ಒಂದೇ ದಿನ 44 ಕೋವಿಡ್ ಪ್ರಕರಣಗಳು ದಾಖಲಾಗಿವೆ. ಕ್ರಿಸ್‌ಮಸ್ ಮತ್ತು ಹೊಸ ವರ್ಷಾಚರಣೆ ಮುಂದಿನ ದಿನಗಳಲ್ಲಿ ಬರಲಿರುವುದರಿಂದ ಸಹಜವಾಗಿ ಕೋವಿಡ್ ಪ್ರಕರಣಗಳು ಹೆಚ್ಚುವ ಎಲ್ಲಾ ಸಾಧ್ಯತೆಗಳು ಇರುವುದರಿಂದ, ನಾಗರಿಕರು ಮತ್ತೇ ಎಚ್ಚರ ವಹಿಸಿ ತಮ್ಮ ಆರೋಗ್ಯದ ಕಡೆ ನಿಗಾ ವಹಿಸಬೇಕಾಗಿದೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ : 94482 08746 / 97421 79000

ಚಿಂತನೆ

ಪವಿತ್ರವೆಂದು ಪರಿಭಾವಿಸಿದ ಮೇಲೆ ಪ್ರಶ್ನೆ ಮಾಡುವುದು ತರವೇ...!?



"ಇತ್ತೀಚೆಗೆ ಸರ್ವೋಚ್ಚ ನ್ಯಾಯಾಲಯವು ಸಂವಿಧಾನದ 370ನೇ ವಿಧಿಯ ಬಗ್ಗೆ ನೀಡಿದ ತೀರ್ಪು. ಇದು ಸಂವಿಧಾನ ಪೀಠ ನೀಡಿದಂತಹ ಐತಿಹಾಸಿಕ ತೀರ್ಪು. ಪೀಠದಲ್ಲಿದ್ದ ಎಲ್ಲ ನ್ಯಾಯಾಧೀಶರೂ ಒಮ್ಮತದಿಂದ ಸಂವಿಧಾನದ 370ನೇ ವಿಧಿಯನ್ನು ರದ್ದುಪಡಿಸಿದ ಕೇಂದ್ರ ಸರ್ಕಾರದ ಆಗಸ್ಟ್ 9, 2019ರ ತೀರ್ಮಾನವನ್ನು ಎತ್ತಿ ಹಿಡಿದು ತೀರ್ಪು ನೀಡಿದ್ದಾರೆ. ಇದನ್ನು ಐತಿಹಾಸಿಕ ತೀರ್ಪು ಎಂದೇ ಪರಿಗಣಿಸಲಾಗುತ್ತದೆ. ಕೇಂದ್ರ ಸರ್ಕಾರದ ನಿಲುವನ್ನು ಪ್ರಶ್ನಿಸಿ ಸುಮಾರು 23 ಅರ್ಜಿಗಳನ್ನು ಸರ್ವೋಚ್ಚ ನ್ಯಾಯಾಲಯಕ್ಕೆ ಸಲ್ಲಿಸಲಾಗಿತ್ತು. ಅವೆಲ್ಲವನ್ನೂ ಒಗ್ಗೂಡಿಸಿ ವಿಚಾರಣೆ ನಡೆಸಿ ನೀಡಿದ ತೀರ್ಪು ಇದಾಗಿದೆ. ನಮ್ಮಲ್ಲಿ ನ್ಯಾಯಾಂಗ ವ್ಯವಸ್ಥೆಗೆ ಬಹಳ ಗೌರವವಿದೆ. ನ್ಯಾಯಾಲಯದ ತೀರ್ಪನ್ನು ಮತ್ತೊಂದು ಹಂತದ ನ್ಯಾಯಾಲಯದಲ್ಲಿ ಪ್ರಶ್ನಿಸಬಹುದೇ ಹೊರತು, ನ್ಯಾಯಾಲಯದ ಆದೇಶದ ಬಗ್ಗೆ ಸಾರ್ವಜನಿಕವಾಗಿ ಆಕ್ಷೇಪಿಸುವುದು ತಪ್ಪಾಗುತ್ತದೆ. ಆದರೆ ಇತ್ತೀಚೆಗೆ ಸರ್ವೋಚ್ಚ ನ್ಯಾಯಾಲಯದ ತೀರ್ಪನ್ನು ಕೆಲವರು ನಾವು ಒಪ್ಪುವುದಿಲ್ಲ ಎಂದು ಹೇಳಿಕೆ ನೀಡಿರುವುದನ್ನು ಕಂಡಾಗ ಆಶ್ಚರ್ಯ ಎನಿಸುತ್ತದೆ. ಇಂತಹುದಕ್ಕೆ ಅವಕಾಶ ಮಾಡಿಕೊಡದಂತೆ ನೋಡಿಕೊಳ್ಳಬೇಕಾದುದು ನ್ಯಾಯಾಲಯದ ಕಾರ್ಯವೂ ಆಗಿದೆ ಎಂದು ಭಾವಿಸಬಹುದಾಗಿದೆ.

ನಮ್ಮ ಆಡಳಿತ ವ್ಯವಸ್ಥೆಯಲ್ಲಿ ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗ ಎಂಬ ಪ್ರಮುಖ ವ್ಯವಸ್ಥೆಗಳಿವೆ. ದೇಶಕ್ಕೆ ಸ್ವಾತಂತ್ರ್ಯ ಬಂದಾಗ ನಮ್ಮ ದೇಶದ ಆಡಳಿತ ಹೇಗಿರಬೇಕು ಎಂಬ ಬಗ್ಗೆ ನಡೆದ ಚಿಂತನೆಯ ಫಲವಾಗಿ ಈ ವ್ಯವಸ್ಥೆ ಜಾರಿಯಾಯಿತು. ನಮ್ಮ ದೇಶ ಸುಮಾರು ಏಳೆಂಟು ಶತಮಾನಗಳ ಕಾಲ ವಿದೇಶಿಯರ ಆಕ್ರಮಣಕ್ಕೆ ತುತ್ತಾಗಿ, ಅವರುಗಳ ಆಡಳಿತಕ್ಕೆ ಒಳಪಟ್ಟಿತ್ತು. ಇದರ ಅಂತಿಮ ಭಾಗದಲ್ಲಿ ಬ್ರಿಟಿಷರು ಸುಮಾರು ಎರಡು ಶತಮಾನಗಳ ಕಾಲ ಇಲ್ಲಿ ವ್ಯಾಪಾರ, ನಂತರ ಆಡಳಿತ ನಡೆಸಿದರು. ಇತಿಹಾಸದ ಪ್ರಕಾರ 1857 ರಲ್ಲಿ ಬ್ರಿಟಿಷರ ವಿರುದ್ಧ ಮೊದಲ ಬಾರಿ ತೀವ್ರತರ ಹೋರಾಟ ನಡೆಯಿತು. ಅದಕ್ಕೂ ಮುಂಚೆಯೂ ಒಂದಷ್ಟು ಹೋರಾಟ ನಡೆದರೂ ತೀವ್ರತೆ ಕಂಡಿದ್ದು 1857 ರಲ್ಲಿ. ಬ್ರಿಟಿಷರು ತಮ್ಮ ಮಾನ ಉಳಿಸಿಕೊಳ್ಳಲು ಅದನ್ನು ಸಿಪಾಯಿ ದಂಗೆ ಎಂದು ಕರೆದರೆ, ದೇಶಭಕ್ತರು ಅದನ್ನು ಪ್ರಥಮ ಸ್ವಾತಂತ್ರ್ಯ ಸಂಗ್ರಾಮ ಎಂದು ಕರೆದರು.

ಅಲ್ಲಿಂದ ಸ್ವಾತಂತ್ರ್ಯದ ಹೋರಾಟಕ್ಕೆ ತೀವ್ರತೆ ದೊರಕಿತು. ನಂತರ ಮಹಾತ್ಮ ಗಾಂಧೀಜಿಯವರ ನೇತೃತ್ವದ ಅಹಿಂಸಾ ಹೋರಾಟ ಹಾಗೂ ಅದೇ ರೀತಿ ಕ್ರಾಂತಿಕಾರಿಗಳ ಹೋರಾಟ ಎರಡೂ ನಡೆದವು. ಅಂತಿಮವಾಗಿ ಬ್ರಿಟಿಷರು ಇಲ್ಲಿಂದ ಹೊರ ಹೋಗಲೇಬೇಕಾದ ಅನಿವಾರ್ಯತೆ ಸೃಷ್ಟಿಯಾಯಿತು. ಆದರೆ ಕುತಂತ್ರ ಬುದ್ಧಿಯ ಅವರು ದೇಶವನ್ನು ಇಬ್ಭಾಗ ಮಾಡಿ ಹೋದರು. ಅಲ್ಲಿಯವರೆಗೆ ಆಗಿನ ಭಾರತದ ಹಾಗೂ ಈಗಿನ ಪಾಕಿಸ್ತಾನದ ಲಾಹೋರ್, ಕರಾಚಿ, ಪೇಶಾವರ್ ಮೊದಲಾದೆಡೆ ಸ್ವಾತಂತ್ರ್ಯದ ಹೋರಾಟ ಜೋರಾಗಿಯೇ ನಡೆದಿತ್ತು ಎಲ್ಲ ಸ್ವಾತಂತ್ರ್ಯ ಹೋರಾಟಗಾರರ ಗುರಿ ಭಾರತವನ್ನು ದಾಸ್ಯದಿಂದ ವಿಮುಕ್ತಿಗೊಳಿಸುವುದೇ ಆಗಿತ್ತು. ಅಲ್ಲಿ ಜಾತಿ, ಧರ್ಮಗಳು ಪ್ರಮುಖ ವಿಷಯವೇ ಆಗಲಿಲ್ಲ. ಎರಡನೇ ಮಹಾಯುದ್ಧದಲ್ಲಿ ಬಳಲಿದ ಬ್ರಿಟಿಷರು ಭಾರತ ತೊರೆಯಲೇ ಬೇಕಾಯಿತು, ದೇಶಕ್ಕೆ ಸ್ವಾತಂತ್ರ್ಯ ಬಂದಿತು. (ಅಂದು ತಮಗೆ ಪ್ರತ್ಯೇಕ ರಾಷ್ಟ್ರ ಬೇಕೆಂದು ಹೋರಾಟ ಮಾಡಿ ಪಾಕಿಸ್ತಾನ ಪಡೆದವರು ಇಂದು ಹಾಗೆ ಮಾಡಬಾರದಿತ್ತು ಎಂದು ಪರಿತಪಿಸುವಂತಾಗಿರುವುದು ಕಟು ವಾಸ್ತವ ಸತ್ಯ.)

ಹೀಗೆ ಹಲವಾರು ಶತಮಾನಗಳ ದಾಸ್ಯದ ನಂತರ ಈ ದೇಶಕ್ಕೆ ಸ್ವಾತಂತ್ರ್ಯ ಬಂದಿತು. ದೇಶಕ್ಕೆ ಸ್ವಾತಂತ್ರ್ಯವೇನೋ ಬಂದಿತು. ಆದರೆ ನಂತರದ ಆಡಳಿತ ವ್ಯವಸ್ಥೆ ಹೇಗಿರಬೇಕೆಂಬ ಗೊಂದಲವೂ ಹಾಗೇ ಉಳಿದಿತ್ತು. ಈ ದೇಶಕ್ಕೆ ಹೊಂದಿಕೆಯಾಗುವಂತಹ ಸಂವಿಧಾನದ ಅಗತ್ಯತೆ ಆಗ ಸ್ಪಷ್ಟವಾಗಿ ಗೋಚರಿಸಿತು. ದೇಶದ ಅದೃಷ್ಟ, ಡಾ. ಬಿ ಆರ್ ಅಂಬೇಡ್ಕರ್ ಅವರಂತಹ ಮೇಧಾವಿಯ ನೇತೃತ್ವದಲ್ಲಿ ಸಂವಿಧಾನ ರಚನೆಯ ಕಾರ್ಯ ನಡೆಯಿತು. ಈ ದೇಶಕ್ಕೆ ಯಾವ ರೀತಿಯ ಸಂವಿಧಾನ ಇದ್ದರೆ ಸರಿ ಎಂಬ ಬಗ್ಗೆ ವಿಸ್ತೃತ ಚರ್ಚೆಗಳು ಹಾಗೂ ಅವಲೋಕನ ನಡೆಯಿತು. ಕೊನೆಗೆ ಅತ್ಯಂತ ಶ್ರೇಷ್ಠ ಎನ್ನಬಹುದಾದ ಸಂವಿಧಾನ ಈ ದೇಶಕ್ಕೆ ದೊರಕಿತು.

ನಮ್ಮ ಸಂವಿಧಾನ ಹಾಗೂ ಆಡಳಿತ ವ್ಯವಸ್ಥೆಯ ಬಗ್ಗೆ ನಡೆದ ಚರ್ಚೆಯ ಫಲವಾಗಿ ಇಲ್ಲಿ ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗ ವ್ಯವಸ್ಥೆ ಜಾರಿಯಾಯಿತು. ಶಾಸನ ಸಭೆಗಳಿಗೆ (ಲೋಕಸಭೆ ಹಾಗೂ ವಿಧಾನಸಭೆಗಳು) ಶಾಸನಗಳನ್ನು ಮಾಡುವ ಅಧಿಕಾರ ನೀಡಲಾಯಿತು. ಅವು ಮಾಡಿದ ಶಾಸನವನ್ನು ಜಾರಿಗೊಳಿಸುವ ಕೆಲಸ ಕಾರ್ಯಾಂಗದ್ದು. ಶಾಸನದಲ್ಲಿನ ಲೋಪ ಹಾಗೂ ಅವುಗಳು ಸಮರ್ಪಕವಾಗಿ ಅನುಷ್ಠಾನವಾಗದಿದ್ದಲ್ಲಿ ಅದನ್ನು ಪತ್ತೆ ಹಚ್ಚಿ ಸರಿಪಡಿಸುವಂತೆ ನಿರ್ದೇಶಿಸುವುದು ನ್ಯಾಯಾಂಗದ ಕೆಲಸ. ಶಾಸಕಾಂಗದಲ್ಲಿರುವವರೆಲ್ಲರಿಗೂ ಕಾನೂನಿನ ಅರಿವು ಇರದೇ ಇರಬಹುದು. ಅದೇ ರೀತಿ ಕಾರ್ಯಾಂಗದಲ್ಲಿ ಕೆಲಸ ಮಾಡುವವರಿಗೂ ಕಾನೂನಿನ ಪಾಂಡಿತ್ಯ ಇಲ್ಲದಿರಬಹುದು. ಅದಕ್ಕಾಗಿಯೇ ಸಂವಿಧಾನಕ್ಕೆ ಚ್ಯುತಿ ಬರುವಂತಹ ಇವರೆಡರ ತಪ್ಪುಗಳು ಅಥವಾ ಲೋಪಗಳನ್ನು ಕಾನೂನಿನ ಹಿನ್ನೆಲೆಯಲ್ಲಿ ಅವಲೋಕಿಸಿ ನಿರ್ಧರಿಸುವ ಕೆಲಸವನ್ನು ನ್ಯಾಯಾಂಗ ಮಾಡುತ್ತದೆ. ಹೀಗಾಗಿ ನ್ಯಾಯಾಂಗದ ಜವಾಬ್ದಾರಿ ಹೆಚ್ಚಾಗಿದೆ ಎಂದೇ ಹೇಳಬಹುದು. ನ್ಯಾಯಾಂಗ ವ್ಯವಸ್ಥೆಯಲ್ಲಿರುವವರು ಯಾವುದೇ ಪ್ರಾಂತ, ಭಾಷೆ, ಜಾತಿ, ಧರ್ಮಗಳ ಕಟ್ಟುಪಾಡಿಗೆ ಒಳಗಾಗದೆ ಕೇವಲ ದೇಶದ ಹಿತಾಸಕ್ತಿಯಿಂದ ಆಗಿರುವ ಲೋಪಗಳನ್ನು ಪತ್ತೆಹಚ್ಚಿ ಸರಿಪಡಿಸುವಂತೆ ಸಂಬಂಧಿಸಿದವರಿಗೆ ಸೂಚನೆ ನೀಡುತ್ತದೆ. ಅಲ್ಲಿ ಜಾತಿ, ಧರ್ಮಗಳಿಗಿಂತ ರಾಷ್ಟ್ರ ಹಿತ ಹಾಗೂ ಕಾನೂನಿಗೆ ಮಾನ್ಯತೆ ಇರುತ್ತದೆ. ನ್ಯಾಯಾಂಗ ಹೇಳಿದ್ದನ್ನು ಎಲ್ಲರೂ ಒಪ್ಪಲೇಬೇಕಾಗುತ್ತದೆ.

ನಮ್ಮಲ್ಲಿ ತಾಲೂಕು ಹಂತದಿಂದ ರಾಷ್ಟ್ರಮಟ್ಟದವರೆಗೆ ವಿವಿಧ ನ್ಯಾಯಾಲಯಗಳಿವೆ. (ಅಂತರರಾಷ್ಟ್ರೀಯ ನ್ಯಾಯಾಲಯವೂ ಇದ್ದು, ಅದಕ್ಕೆ ನಮ್ಮ ಶಾಸಕಾಂಗ ಯಾವುದೇ ನಿರ್ದೇಶನ ನೀಡಲಾಗುವುದಿಲ್ಲ). ರಾಜ್ಯಮಟ್ಟದ ಉಚ್ಚ ನ್ಯಾಯಾಲಯ ಹಾಗೂ ರಾಷ್ಟ್ರಮಟ್ಟದಲ್ಲಿ ಸರ್ವೋಚ್ಚ ನ್ಯಾಯಾಲಯವಿದೆ. ಸರ್ವೋಚ್ಚ ನ್ಯಾಯಾಲಯದ ಆದೇಶವನ್ನು ಸರ್ವೋಚ್ಚ ನ್ಯಾಯಾಲಯವೇ ತಿದ್ದುಪಡಿ ಮಾಡಬಹುದೇ ಹೊರತು ರಾಜ್ಯಗಳ ಉಚ್ಚ ನ್ಯಾಯಾಲಯಗಳಿಗೆ ಆ ಅಧಿಕಾರ ಇರುವುದಿಲ್ಲ. ಸರ್ವೋಚ್ಚ ನ್ಯಾಯಾಲಯದಲ್ಲೂ ಏಕ ಸದಸ್ಯ ಪೀಠದ ತೀರ್ಪನ್ನು ವಿಭಾಗೀಯ ಪೀಠದಲ್ಲಿ, ಬಹು ಸದಸ್ಯತ್ವ ಪೀಠದ ತೀರ್ಪನ್ನು ಪಂಚ ನ್ಯಾಯಮೂರ್ತಿಗಳ ಪೀಠದಲ್ಲಿ (ಫುಲ್ ಬೆಂಚ್) ಪರಿಶೀಲನೆಗೆ ಮನವಿ ಮಾಡಿಕೊಳ್ಳಲು ಅವಕಾಶವಿದೆ. ಪಂಚ ಸದಸ್ಯರ ಪೀಠವನ್ನು ಸಾಂವಿಧಾನಿಕ ಪೀಠ ಎಂದೂ ಕರೆಯಲಾಗುತ್ತದೆ. ಐದು ಜನ ನ್ಯಾಯಮೂರ್ತಿಗಳಲ್ಲಿ ಬಹುಮತದ ನಿರ್ಣಯ ಅಂತಿಮವಾಗುತ್ತದೆ. ಅಲ್ಲಿನ ನ್ಯಾಯಮೂರ್ತಿಗಳೆಲ್ಲರೂ ಏಕ ಪ್ರಕಾರದ ಸಹಮತ ನೀಡಬೇಕೆಂದೇನೂ ಇಲ್ಲ. ಅವರು ಕಾನೂನಿನನ್ವಯ ತಮಗೆ ಅನಿಸಿದ್ದನ್ನು ಹೇಳಬಹುದು, ಅದೂ ದಾಖಲಾಗುತ್ತದೆ. ಆದರೆ ಬಹುಮತದ ತೀರ್ಪು ಅಂತಿಮವಾಗುತ್ತದೆ.

ಇಂತಹ ನ್ಯಾಯಾಂಗ ವ್ಯವಸ್ಥೆಯನ್ನು ನಮ್ಮ ದೇಶ ಹೊಂದಿದೆ. ಈ ವ್ಯವಸ್ಥೆ ಅತ್ಯಂತ ಸೂಕ್ತವಾದುದು ಎಂದು ಈವರೆವಿಗೆ ಎಲ್ಲ ಸಮಯದಲ್ಲೂ ಸಾಬೀತಾಗಿದೆ. ಇದರಿಂದಾಗಿ ಹಾಗೂ ನಮ್ಮ ದೇಶ ಒಪ್ಪಿರುವಂತೆ ನ್ಯಾಯಾಲಯದ ಆದೇಶ ಪಾಲಿಸಬೇಕಾದುದು ಈ ದೇಶದ ಎಲ್ಲ ಸರ್ಕಾರಗಳ ಹಾಗೂ ನಾಗರಿಕರ ಕರ್ತವ್ಯವೂ ಆಗಿದೆ.

ಈ ವ್ಯವಸ್ಥೆ ಇತ್ತೀಚಿನವರೆಗೂ ಅನೂಚಾನವಾಗಿ ನಡದುಕೊಂಡು ಬಂದಿದೆ. ಈವರೆಗೆ ಸರ್ವೋಚ್ಚ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸುವ ಸಾಧ್ಯತೆ, ಅವಕಾಶವೇ ಇರಲಿಲ್ಲ. ಆದರೆ ಅದೇಕೋ ಇತ್ತೀಚೆಗೆ ಇಂತಹ ತೀರ್ಪಿನ ಬಗ್ಗೆ ಕೆಲವರು ಟೀಕಾ ರೂಪದಲ್ಲಿ ಪ್ರತಿಕ್ರಿಯೆ ನೀಡುತ್ತಿರುವುದು ಬೇಸರದ ಸಂಗತಿ ಎನ್ನಿಸುತ್ತದೆ. ನಮ್ಮ ದೇಶ ಪ್ರಜಾಪ್ರಭುತ್ವ ಅಂಗೀಕರಿಸಿದ್ದು, ಅದಕ್ಕೆ ಅನುಗುಣವಾಗಿ ನ್ಯಾಯಾಂಗ ವ್ಯವಸ್ಥೆಯನ್ನು ಎಲ್ಲರೂ ಗೌರವಿಸಬೇಕಾಗಿರುವುದು ಅನಿವಾರ್ಯ. ಏಕೆಂದರೆ ನ್ಯಾಯಾಲಯಗಳಲ್ಲಿ ನಡೆಯುವುದು ಕಾನೂನಿನ ವಿಮರ್ಶೆ ಮಾತ್ರ. ಅಂತಹ ತೀರ್ಪು ಸರಿಯಿಲ್ಲ ಎಂದು ಹೇಳಿದಾಗ ನಮ್ಮ ಕಾನೂನೇ ಸರಿಯಿಲ್ಲ ಎಂದು ಹೇಳಿದಂತಾಗುತ್ತದೆ. ಇದು ಸರಿಯಲ್ಲ. ನಮ್ಮಲ್ಲಿ ನ್ಯಾಯಾಂಗ ವ್ಯವಸ್ಥೆ ರೂಪಿಸಿರುವುದೇ ನಮ್ಮೆಲ್ಲಾ ವರ್ತನೆ, ಕಾರ್ಯ ನ್ಯಾಯ ಸಮ್ಮತವಾಗಿರಬೇಕು ಎಂಬ ಉದ್ದೇಶದಿಂದಲೇ. ಅದನ್ನು ಪರಿಶೀಲಿಸುವ ಅಧಿಕಾರ ನ್ಯಾಯಾಲಯಗಳಿಗಿದೆ.


ಈ ವಿಷಯವನ್ನು ಇಲ್ಲಿ ಪ್ರಸ್ತಾಪಿಸಿದ ಉದ್ದೇಶ ಇತ್ತೀಚೆಗೆ ಸರ್ವೋಚ್ಚ ನ್ಯಾಯಾಲಯವು ಸಂವಿಧಾನದ 370ನೇ ವಿಧಿಯ ಬಗ್ಗೆ ನೀಡಿದ ತೀರ್ಪು. ಇದು ಸಂವಿಧಾನ ಪೀಠ ನೀಡಿದಂತಹ ಐತಿಹಾಸಿಕ ತೀರ್ಪು. ಪೀಠದಲ್ಲಿದ್ದ ಎಲ್ಲ ನ್ಯಾಯಾಧೀಶರೂ ಒಮ್ಮತದಿಂದ ಸಂವಿಧಾನದ 370ನೇ ವಿಧಿಯನ್ನು ರದ್ದುಪಡಿಸಿದ ಕೇಂದ್ರ ಸರ್ಕಾರದ ಆಗಸ್ಟ್ 9, 2019ರ ತೀರ್ಮಾನವನ್ನು ಎತ್ತಿ ಹಿಡಿದು ತೀರ್ಪು ನೀಡಿದ್ದಾರೆ. ಇದನ್ನು ಐತಿಹಾಸಿಕ ತೀರ್ಪು ಎಂದೇ ಪರಿಗಣಿಸಲಾಗುತ್ತದೆ. ಕೇಂದ್ರ ಸರ್ಕಾರದ ನಿಲುವನ್ನು ಪ್ರಶ್ನಿಸಿ ಸುಮಾರು 23 ಅರ್ಜಿಗಳನ್ನು ಸರ್ವೋಚ್ಚ ನ್ಯಾಯಾಲಯಕ್ಕೆ ಸಲ್ಲಿಸಲಾಗಿತ್ತು. ಅವೆಲ್ಲವನ್ನೂ ಒಗ್ಗೂಡಿಸಿ ವಿಚಾರಣೆ ನಡೆಸಿ ನೀಡಿದ ತೀರ್ಪು ಇದಾಗಿದೆ. ನಮ್ಮಲ್ಲಿ ನ್ಯಾಯಾಂಗ ವ್ಯವಸ್ಥೆಗೆ ಬಹಳ ಗೌರವವಿದೆ. ನ್ಯಾಯಾಲಯದ ತೀರ್ಪನ್ನು ಮತ್ತೊಂದು ಹಂತದ ನ್ಯಾಯಾಲಯದಲ್ಲಿ ಪ್ರಶ್ನಿಸಬಹುದೇ ಹೊರತು, ನ್ಯಾಯಾಲಯದ ಆದೇಶದ ಬಗ್ಗೆ ಸಾರ್ವಜನಿಕವಾಗಿ ಆಕ್ಷೇಪಿಸುವುದು ತಪ್ಪಾಗುತ್ತದೆ. ಆದರೆ ಇತ್ತೀಚೆಗೆ ಸರ್ವೋಚ್ಚ ನ್ಯಾಯಾಲಯದ ತೀರ್ಪನ್ನು ಕೆಲವರು ನಾವು ಒಪ್ಪುವುದಿಲ್ಲ ಎಂದು ಹೇಳಿಕೆ ನೀಡಿರುವುದನ್ನು ಕಂಡಾಗ ಆಶ್ಚರ್ಯ ಎನಿಸುತ್ತದೆ. ಇಂತಹುದಕ್ಕೆ ಅವಕಾಶ ಮಾಡಿಕೊಡದಂತೆ ನೋಡಿಕೊಳ್ಳಬೇಕಾದುದು ನ್ಯಾಯಾಲಯದ ಕಾರ್ಯವೂ ಆಗಿದೆ ಎಂದು ಭಾವಿಸಬಹುದಾಗಿದೆ.

ಇಷ್ಟಕ್ಕೂ ಸಂವಿಧಾನದ ವಿಧಿ 370 ಖಾಯಂ ವಿಧಿಯಾಗಿರಲಿಲ್ಲ. ದೇಶ ಇಬ್ಭಾಗವಾದಾಗ ಜಮ್ಮು–ಕಾಶ್ಮೀರ ಭಾರತದಲ್ಲೇ ಉಳಿದುಕೊಳ್ಳಬೇಕೆಂಬುದು ಎಲ್ಲರ ಇಚ್ಛೆಯಾಗಿತ್ತು. ಆ ಪ್ರದೇಶ ಭಾರತದ ಅವಿಭಾಜ್ಯ ಅಂಗವಾಗಬೇಕೆಂಬ ಹಂಬಲದಿಂದ ಅಲ್ಲಿನ ಜನರಿಗಾಗಿ ಒಂದಷ್ಟು ಆ ವೇಳೆ ವಿಶೇಷ ಸವಲತ್ತುಗಳನ್ನು ನೀಡಬೇಕಾಯಿತು. ಆದರೆ ನಂತರದ ಬೆಳವಣಿಗೆಯಲ್ಲಿ ಜಮ್ಮು–ಕಾಶ್ಮೀರಕ್ಕೆ ಪ್ರತ್ಯೇಕವಾದ ಸಂವಿಧಾನ, ಪ್ರತ್ಯೇಕ ಧ್ವಜ ರಚನೆಯವರೆಗೆ ಪ್ರಯತ್ನಗಳು ನಡೆದದ್ದು ಆತಂಕಕಾರಿ ವಿಷಯ. ಅಲ್ಲಿನ ಜನರ ಮನಸ್ಸನ್ನು ಭಾರತದೊಂದಿಗೆ ಬೆಸೆಯಬೇಕಾಗಿತ್ತು, ಬದಲಿಗೆ ತಾವೇ ಪ್ರತ್ಯೇಕ ಎಂಬಂತಹ ಮನೋಭಾವ ನಿರ್ಮಾಣ ಮಾಡಲಾಯಿತು. ಈ ದೇಶದ ಕಾನೂನು ಅಲ್ಲಿಗೆ ಅನ್ವಯವಾಗುವುದಿಲ್ಲ, ದೇಶದ ಇತರೆ ಭಾಗದ ಜನರು ಅಲ್ಲಿ ಭೂಮಿ ಖರೀದಿಸುವಂತಿಲ್ಲ, ಆಸ್ತಿ ಮಾಡುವಂತಿಲ್ಲ ಎಂಬೆಲ್ಲಾ ವಿಚಾರಗಳ ಮೂಲಕ ಈವರೆಗೆ ಜಮ್ಮು–ಕಾಶ್ಮೀರವನ್ನು ಪ್ರತ್ಯೇಕವಾಗಿಡುವ ಪ್ರಯತ್ನಗಳೇ ನಡೆದುಕೊಂಡು ಬಂದಿತು. ಜಮ್ಮು ಕಾಶ್ಮೀರ ಮೊದಲಿನಿಂದಲೂ ಭಾರತದ ಅವಿಭಾಜ್ಯ ಭಾಗವೇ. ಅದು ಈ ದೇಶದ ಕಿರೀಟವಿದ್ದ ಹಾಗೆ. ಅದನ್ನು ಕಸಿಯಲು ಪಾಕಿಸ್ತಾನ ವಿವಿಧ ಕಸರತ್ತು ನಡೆಸಿದ್ದು ಎಲ್ಲರಿಗೂ ತಿಳಿದ ಸಂಗತಿ. ತಮಗೆ ಪ್ರತ್ಯೇಕ ಕಾನೂನು ಇರುವುದರಿಂದ ನಾವು ಭಾರತದೊಂದಿಗೆ ಇರಬೇಕಾದ ಅನಿವಾರ್ಯತೆ ಇಲ್ಲ ಎಂಬಂತಹ ಮನೋಭಾವ ಅಲ್ಲಿ ಮೂಡಲು ಕೆಲವರ ಪ್ರಚೋದನೆಯೂ ಕಾರಣವಾಯಿತು. ನಮ್ಮ ಸೈನ್ಯವನ್ನು, ಶತ್ರು ಸೈನ್ಯ ಎಂಬಂತೆ ಭಾವಿಸಿ, ಅವರ ಮೇಲೆ ಕಲ್ಲು ತೂರುವುದು, ದಾಳಿ ನಡೆಸುವುದು, ಅವಮಾನಿಸುವುದು, ಅಲ್ಲಲ್ಲಿ ಗಲಭೆ ಮಾಡುವುದು ಇತ್ಯಾದಿಗಳು ಅವ್ಯಾಹತವಾಗಿ ನಡೆದವು. ಕೊನೆಗೆ ಇದಕ್ಕೆಲ್ಲಾ ಪರಿಹಾರ ಎಂದರೆ ಸಂವಿಧಾನದ ಆ ವಿಧಿಯನ್ನು ರದ್ದುಪಡಿಸುವುದೇ ಆಗಿದೆ ಎಂದು ಭಾವಿಸಿದ ಕೇಂದ್ರ ಸರ್ಕಾರ 2019 ರಲ್ಲಿ ಅದನ್ನು ರದ್ದುಪಡಿಸಿತು. ಇದನ್ನು ರಾಜಕೀಯ ನಿರ್ಧಾರ ಎಂದು ಹೇಳುವುದು ಸೂಕ್ತವಲ್ಲ. ಅಲ್ಲಿ ಶಾಂತಿ ನೆಲೆಸಬೇಕು ಹಾಗೂ ಅದು ಈ ದೇಶದೊಂದಿಗೇ ಇರಬೇಕೆಂಬ ಇಚ್ಛೆ ಇದಕ್ಕೆ ಕಾರಣ ಎಂದು ಭಾವಿಸಬಹುದು. ಈ ನಿರ್ಣಯ ಸರಿ ಎನ್ನುವಂತೆ ಈ ವಿಧಿ ರದ್ದಾದ ನಂತರ ಅಲ್ಲಿ ಶಾಂತಿಯ ಮರುಸ್ಥಾಪನೆಯಾಗಿರುವುದನ್ನು ಗಮನಿಸಬಹುದು. ಈಗ ಅಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳೂ ಆಗುತ್ತಿವೆ.

ಆದರೆ ಈ ವಿಧಿಯನ್ನು ರದ್ದುಪಡಿಸಿದ್ದು ಕೆಲವು ಪಟ್ಟಭದ್ರ ಹಿತಾಸಕ್ತರಿಗೆ ಇಷ್ಟವಾಗಲಿಲ್ಲ. ಅವರುಗಳು ಸರ್ವೋಚ್ಚ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದರು. ಅದರ ವಿಚಾರಣೆ ನಡೆಸಿದ ಸಾಂವಿಧಾನಿಕ ಪೀಠವು ಕೇಂದ್ರ ಸರ್ಕಾರದ ನಿರ್ಧಾರ ಸರಿ ಎಂದು ತೀರ್ಪಿತ್ತಿದೆ. ಇದನ್ನು ಇಡೀ ದೇಶ ಒಪ್ಪಬೇಕು. ದೇಶದ ಒಂದು ಭಾಗವನ್ನು ದೇಶದೊಂದಿಗೇ ಉಳಿಸಿಕೊಳ್ಳುವ ಪ್ರಯತ್ನವನ್ನು ಸರಿಯಲ್ಲ ಎಂದು ಹೇಳುವುದು ದೇಶದ ಸಾರ್ವಭೌಮತ್ವವನ್ನೇ ಪ್ರಶ್ನಿಸಿದಂತೆ. ಈಗ ಸರ್ವೋಚ್ಚ ನ್ಯಾಯಾಲಯ ಬಹುಮತದ ತೀರ್ಪು ನೀಡಿರುವುದರಿಂದ ಅದನ್ನು ಟೀಕಿಸದೆ, ಆ ಪ್ರದೇಶದ ಜನರಿಗೆ ಮತ್ತಷ್ಟು ಸವಲತ್ತುಗಳನ್ನು ನೀಡಿ, ಅದು ಭಾರತದ ಅವಿಭಾಜ್ಯ ಅಂಗ ಎಂಬ ಮನೋಭಾವನೆಯನ್ನು ಸೌಹಾರ್ದತೆಯ ನೆಲೆಯಲ್ಲಿ ಬಿತ್ತ ಬೇಕಾಗಿದೆ. ಇದು ಇಲ್ಲಿನ ಎಲ್ಲ ನಾಗರಿಕರ ಕರ್ತವ್ಯ ಮಾತ್ರವಲ್ಲ ದೇಶದ ಸರ್ವರ ಕಾರ್ಯವೂ ಆಗಬೇಕಿದೆ. 370ನೇ ವಿಧಿ ರದ್ದುಪಡಿಸಿದ್ದು ಸರಿ ಎಂಬ ಸರ್ವೋಚ್ಚ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸುವ ಮೂಲಕ ನಮ್ಮ ಸಂವಿಧಾನಕ್ಕೆ ಕಳಂಕ ತರದಂತೆ ನೋಡಿಕೊಳ್ಳಬೇಕಾಗಿದೆ.

ಕೇಂದ್ರದ ಆಡಳಿತದಲ್ಲಿ ಅಧಿಕಾರವಿಲ್ಲ, ಸೇವೆ ಇದೆ

ಪ್ರಧಾನಿ ನರೇಂದ್ರ ಮೋದಿ



ನವದೆಹಲಿ: ಉತ್ತಮ ಆಡಳಿತದೊಂದಿಗೆ ಜನರಿಗೆ ಸೇವೆ ನೀಡುವ ತತ್ವವನ್ನು ನನ್ನ ನೇತೃತ್ವದ ಕೇಂದ್ರ ಸರ್ಕಾರ ಅಳವಡಿಸಿಕೊಂಡಿದ್ದು, ಅಧಿಕಾರ ಚಲಾಯಿಸುತ್ತಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಪಂಡಿತ್ ಮದನ್ ಮೋಹನ್ ಮಾಳವೀಯ ಅವರ ಭಾಷಣ ಹಾಗೂ ಬರಹ ಸಂಗ್ರಹದ 11 ಸಂಪುಟಗಳ ಮೊದಲ ಸರಣಿಯನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಬನಾರಸ್ ಹಿಂದೂ ವಿಶ್ವವಿದ್ಯಾಲಯದ ಸಂಸ್ಥಾಪಕರಾದ 'ಮಹಾಮನ' ಮದನ್ ಮೋಹನ್ ಮಾಳವೀಯ ಅವರು 'ರಾಷ್ಟ್ರ ಮೊದಲು' ಎಂಬುದನ್ನು ಪ್ರತಿಪಾದಿಸಿದ್ದರು. ಇದಕ್ಕೆ ಬದ್ಧರಾಗಿಯೇ ನಮ್ಮ ಸರ್ಕಾರವು ರಾಷ್ಟ್ರ ನಿರ್ಮಾಣಕ್ಕೆ ಬದ್ಧವಾಗಿರುವ ಹಲವು ಸಂಸ್ಥೆಗಳನ್ನು ಸ್ಥಾಪಿಸುತ್ತಿದೆ ಎಂದರು.

ಇದೀಗ ಸ್ಥಾಪನೆಯಾಗುತ್ತಿರುವ ರಾಷ್ಟ್ರೀಯ, ಅಂತರರಾಷ್ಟ್ರೀಯ ಮಹತ್ವದ ಹಲವು ಸಂಸ್ಥೆಗಳು 21ನೇ ಶತಮಾನದ ಭಾರತಕ್ಕೆ ಮಾತ್ರವಲ್ಲ, ಜಗತ್ತಿಗೆ ಹೊಸ ದಿಕ್ಕನ್ನು ನೀಡುವಂಥವು. ಉನ್ನತ ಶಿಕ್ಷಣದಲ್ಲಿ ಭಾರತೀಯ ಭಾಷೆಗಳನ್ನು ಉತ್ತೇಜಿಸುವ ಮೂಲಕ ನಾವು ಹೊಸ ಆರಂಭವನ್ನು ಮಾಡಿದ್ದೇವೆ ಎಂದರು.


ಮಾಳವೀಯ ಅವರು ದೇಶ ಕಟ್ಟಲು ತಮ್ಮನ್ನು ಸಮರ್ಪಿಸಿಕೊಂಡಿದ್ದರಿಂದಲೇ, ರಾಷ್ಟ್ರ ನಿರ್ಮಾಣಕ್ಕೆ ಪೂರಕವಾದ ಅಪಾರ ಸಂಖ್ಯೆಯ ದೊಡ್ಡ ಸಂಸ್ಥೆಗಳು ಇಂದಿಗೂ ಕಾರ್ಯನಿರ್ವಹಿಸುತ್ತಿವೆ. ಭಾರತ ಇದೀಗ ಮತ್ತೊಮ್ಮೆ ರಾಷ್ಟ್ರ ನಿರ್ಮಾಣಕ್ಕೆ ಪೂರಕವಾದ ಬೃಹತ್ ಸಂಸ್ಥೆಗಳನ್ನು ಅಭೂತಪೂರ್ವವಾಗಿ ಸ್ಥಾಪಿಸುತ್ತಿದೆ ಎಂದು ಹೇಳಲು ಸಂತೋಷವಾಗುತ್ತಿದೆ ಎಂದರು.

ದೇಶಕ್ಕೆ ಅಮೂಲ್ಯ ಕೊಡುಗೆ ನೀಡಿದ ಮಹಾನ್ ವ್ಯಕ್ತಿಗಳಿಗೆ ದೇಶವು ಋಣಿಯಾಗಿದೆ ಎಂದ ಮೋದಿ, ಮಾಳವೀಯ ಅವರ ಕೃತಿಗಳನ್ನು ಬಿಡುಗಡೆ ಮಾಡುವ ಅವಕಾಶ ನನ್ನದಾಗಿದೆ ಎಂದು ತಿಳಿಸಿದರು.

ಮಾಳವೀಯ ಅವರ 162ನೇ ಜನ್ಮದಿನಾಚರಣೆಯಲ್ಲಿ ಕೇಂದ್ರ ಸಚಿವರಾದ ಅನುರಾಗ್ ಠಾಕೂರ್, ಅರ್ಜುನ್ ರಾಮ್ ಮೇಘವಾಲ್ ಪಾಲ್ಗೊಂಡಿದ್ದರು. ದೇಶದ ಪ್ರತಿಯೊಂದು ಭಾಗದಿಂದಲೂ ಸಂಗ್ರಹಿಸಲಾದ ಮಾಳವೀಯ ಅವರ ಬರಹಗಳು ಮತ್ತು ಭಾಷಣಗಳ ಸಂಗ್ರಹ ಸುಮಾರು 4 ಸಾವಿರ ಪುಟಗಳಲ್ಲಿ, 11 ಸಂಪುಟಗಳಾಗಿದ್ದು, ಇಂಗ್ಲಿಷ್ ಮತ್ತು ಹಿಂದಿ ಭಾಷೆಯಲ್ಲಿ ಬಿಡುಗಡೆಗೊಂಡಿವೆ.

ಕೇಂದ್ರ ಸರ್ಕಾರ ಕನ್ನಡಿಗರ ಮೇಲೆ ಹೂಮಳೆ ಸುರಿಸುತ್ತಿದೆಯೆ?

ಮುಖ್ಯಮಂತ್ರಿ ಸಿದ್ದರಾಮಯ್ಯ ಕಿಡಿ



ಬೆಂಗಳೂರು: ಕರ್ನಾಟಕದಲ್ಲಿ ಬರಗಾಲ ಬಂದು ಆರು ತಿಂಗಳಾದರೂ ಪರಿಹಾರ ನೀಡದ, ತೆರಿಗೆಯಲ್ಲೂ ಸರಿಯಾಗಿ ಪಾಲು ಕೊಡದ, 15ನೇ ಹಣಕಾಸು ಆಯೋಗದ ಅನುದಾನ ಹಂಚಿಕೆಯಲ್ಲಿ ವಂಚಿಸಿರುವ ಕೇಂದ್ರ ಸರ್ಕಾರ, ಕನ್ನಡಿಗರ ಮೇಲೆ ಸುರಿಸುತ್ತಿರುವುದು ಹೂವಿನ ಮಳೆಯೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ.

ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ಕನ್ನಡಿಗರ ತಲೆ ಮೇಲೆ ಕಲ್ಲು ಹಾಕುತ್ತಿದೆ ಎಂಬ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಅವರ ಟೀಕೆಗೆ ಪತ್ರಿಕಾ ಹೇಳಿಕೆ ಮೂಲಕ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ, ಸರಣಿ ಪ್ರಶ್ನೆಗಳನ್ನು ಕೇಳಿದ್ದಾರೆ.

ರೂ. 18,177 ಕೋಟಿ ಬರ ಪರಿಹಾರಕ್ಕೆ ಮನವಿ ಸಲ್ಲಿಸಿದ್ದೇವೆ. ನಾನೇ ಖುದ್ದಾಗಿ ಹೋಗಿ ಪ್ರಧಾನಿ ಮತ್ತು ಗೃಹ ಸಚಿವರನ್ನು ಭೇಟಿಮಾಡಿ ರೈತರ ಕಷ್ಟಗಳನ್ನು ವಿವರಿಸಿದ್ದೇನೆ. ಕಂದಾಯ ಸಚಿವರೂ ಕೃಷಿ ಮತ್ತು ಹಣಕಾಸು ಸಚಿವರನ್ನು ಭೇಟಿ ಮಾಡಿದ್ದಾರೆ. ಈವರೆಗೆ ನಯಾ ಪೈಸೆಯನ್ನೂ ಬಿಡುಗಡೆ ಮಾಡಿಲ್ಲ. ಕನ್ನಡಿಗ ರೈತರ ಮೇಲೆ ಕಲ್ಲು ಹಾಕುತ್ತಿರುವವರು ಯಾರು ಎಂದು ಅಶೋಕ ಅವರನ್ನು ಪ್ರಶ್ನಿಸಿದ್ದಾರೆ.

ಕೇಂದ್ರ ಸರ್ಕಾರದ ಸಹಭಾಗಿತ್ವದ ಯೋಜನೆಗಳ ಅನುದಾನದ ಮೊತ್ತವನ್ನು ರೂ. 20,000 ಕೋಟಿಗಳಿಂದ ರೂ. 13,000 ಕೋಟಿಗಳಿಗೆ ಇಳಿಕೆ ಮಾಡಲಾಗಿದೆ. 15ನೇ ಹಣಕಾಸು ಆಯೋಗದಲ್ಲಿ ಅನುದಾನ ಹಂಚಿಕೆಯಲ್ಲಿ ಇಳಿಕೆ ಮಾಡಿದ್ದರಿಂದ ನಾಲ್ಕು ವರ್ಷಗಳಲ್ಲಿ ರಾಜ್ಯಕ್ಕೆ ರೂ.45,000 ಕೋಟಿಗಳಷ್ಟು ವಂಚನೆಯಾಗಿದೆ. 15ನೇ ಹಣಕಾಸು ಆಯೋಗ ಶಿಫಾರಸು ಮಾಡಿದ್ದ ರೂ. 5,495 ಕೋಟಿ ವಿಶೇಷ ಅನುದಾನವನ್ನೂ ಕೊಟ್ಟಿಲ್ಲ. ಕನ್ನಡಿಗರ ತಲೆ ಮೇಲೆ ಕಲ್ಲು ಹಾಕಿದ್ದು ನಿಮ್ಮದೇ ಪಕ್ಷದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಾ? ನಾವಾ? ಎಂದು ಸಿದ್ದರಾಮಯ್ಯ ಕೇಳಿದ್ದಾರೆ.

ಕರ್ನಾಟಕದಲ್ಲಿ ಅಖಿಲ ಭಾರತ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಆರಂಭಿಸಬೇಕೆಂಬ ಬೇಡಿಕೆಗೆ ಕೇಂದ್ರ ಸರ್ಕಾರ ಸ್ಪಂದಿಸಿಲ್ಲ. ಬೆಂಗಳೂರು ಉಪನಗರ ರೈಲು ಯೋಜನೆಗೆ ರೂ. 18,000 ಕೋಟಿ ಅನುದಾನವನ್ನೂ ಒದಗಿಸಿಲ್ಲ. ಕರ್ನಾಟಕದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಕೇಂದ್ರದಿಂದ ಅನುದಾನ ಬರುವುದಿಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಬೆದರಿಕೆ ಹಾಕಿದ್ದರು. ಚುನಾವಣೆಯಲ್ಲಿ ಬಿಜೆಪಿಗೆ ನೀಡಿದ ಪೆಟ್ಟಿಗಾಗಿ ಕನ್ನಡಿಗರ ತಲೆ ಮೇಲೆ ಕಲ್ಲು ಹಾಕಲಾಗುತ್ತಿದೆಯೆ ಎಂದು ಪ್ರಶ್ನಿಸಿದ್ದಾರೆ.

ಮನುಸ್ಮೃತಿ ಪಳೆಯುಳಿಕೆ ಸುಡಬೇಕು: ಜಾತಿ ಮತ್ತು ಲಿಂಗ ತಾರತಮ್ಯವನ್ನು ಸಾರುವ ಅಲಿಖಿತ ಸಂವಿಧಾನ ಮನುಸ್ಮೃತಿಯನ್ನು ಡಾ.ಬಿ.ಆರ್. ಅಂಬೇಡ್ಕರ್ ಅವರು ಸುಟ್ಟು ಹಾಕಿದ್ದರು. ಈಗ ನಾವೆಲ್ಲರೂ ನಮ್ಮೊಳಗೆ ಇನ್ನೂ ಉಳಿದಿರಬಹುದಾದ ಮನುಸ್ಮೃತಿ ಪಳೆಯುಳಿಕೆಗಳನ್ನು ಸುಟ್ಟು ಹಾಕಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಮನುಸ್ಮೃತಿ ದಹನ ದಿನದ ಪ್ರಯುಕ್ತ ತಮ್ಮ ಸಾಮಾಜಿಕ ಮಾಧ್ಯಮ ಖಾತೆಗಳಲ್ಲಿ ಸೋಮವಾರ ಸಂದೇಶ ಹಾಕಿರುವ ಅವರು ಆ ಅಲಿಖಿತ ಸಂವಿಧಾನದ ನಾಶವಾಗದೆ ಬಾಬಾ ಸಾಹೇಬ್ ಅಂಬೇಡ್ಕರ್ ದೇಶಕ್ಕೆ ನೀಡಿರುವ ಲಿಖಿತ ಸಂವಿಧಾನದ ಸಂಪೂರ್ಣ ಅನುಷ್ಠಾನ ಅಸಾಧ್ಯ ಎಂದಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ ಮಂಗಳವಾರ 26 ಡಿಸೆಂಬರ್ 2023

‘ಅಜಾತಶತ್ರು’ ವಾಜಪೇಯಿ ಜನ್ಮದಿನ

‘ಸದೈವ್ ಅಟಲ್’ ಸ್ಮಾರಕಕ್ಕೆ ರಾಷ್ಟ್ರಪತಿ, ಪ್ರಧಾನಿ ಸೇರಿ ಗಣ್ಯರಿಂದ ಪುಷ್ಪ ನಮನ



ನವದೆಹಲಿ: ರಾಷ್ಟ್ರ ಕಂಡ ಅಪರೂಪದ ರಾಜಕಾರಣಿ, ಅಜಾತಶತ್ರು ಎಂದೇ ಖ್ಯಾತರಾಗಿದ್ದ ದಿವಂಗತ ಅಟಲ್ ಬಿಹಾರಿ ಅವರ 99ನೇ ಜನ್ಮದಿನ ಅಂಗವಾಗಿ, ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನ ಮಂತ್ರಿ ನರೇಂದ್ರ ಮೋದಿ ಸೇರಿ ದಂತೆ ಹಲವು ಗಣ್ಯರು ಮಾಜಿ ಪ್ರಧಾನಿ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಿದರು.

ಉಪ ರಾಷ್ಟ್ರಪತಿ ಜಗದೀಪ್ ಧನ್ಕರ್, ಕೇಂದ್ರ ಸಚಿವೆ ನಿರ್ಮಲಾ ಸೀತಾ ರಾಮನ್, ಅನುರಾಗ್ ಠಾಕೂರ್, ಅಶ್ವಿನಿ ವೈಷ್ಣವ್, ಜಿತೇಂದ್ರ ಸಿಂಗ್ ತೋಮರ್ ಸೇರಿದಂತೆ ಹಲವು ಗಣ್ಯರು ಅಟಲ್ ಸ್ಮಾರಕಕ್ಕೆ ತಮ್ಮ ಗೌರವ ಸಲ್ಲಿಸಿದರು.

ಇದಕ್ಕೂ ಮೊದಲು ಟ್ವೀಟ್ ಮೂಲಕ ಅಟಲ್ ಬಿಹಾರಿ ವಾಜಪೇಯಿ ಜನ್ಮದಿನದ ಶುಭಾಶಯ ತಿಳಿಸಿದ ಮೋದಿ, ದೇಶದ ಎಲ್ಲಾ ಜನತೆಯ ಪರವಾಗಿ, ಮಾಜಿ ಪ್ರಧಾನಿ ಗೌರವಾನ್ವಿತ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನದಂದು ಗೌರವವನ್ನು ಸಲ್ಲಿಸುತ್ತಿದ್ದೇನೆ. ವಾಜಪೇಯಿಯವರು ತಮ್ಮ ಜೀವನದುದ್ದಕ್ಕೂ ರಾಷ್ಟ್ರ ನಿರ್ಮಾಣದ ವೇಗವನ್ನು ಹೆಚ್ಚಿಸುವಲ್ಲಿ ನಿರತರಾಗಿದ್ದರು. ಭಾರತಮಾತೆ ಕುರಿತು ಅವರಲ್ಲಿದ್ದ ಸಮರ್ಪಣೆ ಮತ್ತು ಸೇವೆಯು ಸ್ಫೂರ್ತಿ ಕರವಾಗಿದೆ ಎಂದು ಹೇಳಿದ್ದಾರೆ.

ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ ಹುಟ್ಟುಹಬ್ಬಕ್ಕೆ ಶುಭಾಶಯ



ಮೈಸೂರು, ಡಿ. 25(ಬಿಎಲ್‌ಯು)– ಮೈಸೂರು ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ ಹುಟ್ಟುಹಬ್ಬಕ್ಕೆ ಕೆಪಿಸಿಸಿ ಕಾರ್ಯದರ್ಶಿ ಗುರುಪಾದಸ್ವಾಮಿ, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಮುಡಾ ಮಾಜಿ ಅಧ್ಯಕ್ಷ ಸಿ.ಬಸವೇಗೌಡ ಸೇರಿದಂತೆ ಕಾರ್ಯಕರ್ತರು ಹಾಗೂ ಮುಖಂಡರು ಶುಭಾಶಯ ಕೋರಿದರು.

ನಗರದ ಇಂದಿರಾ ಗಾಂಧಿ ಕಾಂಗ್ರೆಸ್ ಭವನದಲ್ಲಿ ಭಾನುವಾರ ಆರ್.ಮೂರ್ತಿ ಅವರನ್ನು ಸನ್ಮಾನಿಸಲಾಯಿತು.

ಕಾಂಗ್ರೆಸ್ ಪಕ್ಷದಲ್ಲಿ ಐದು ದಶಕಗಳ ಕಾಲ ನಿಷ್ಠಾವಂತರಾಗಿ ದುಡಿದಿರುವ ಮೂರ್ತಿ ಅವರಿಗೆ ಹೆಚ್ಚಿನ ಆಯಸ್ಸು, ಆರೋಗ್ಯ ಹಾಗೂ ರಾಜಕೀಯ ಅಧಿಕಾರ ದೊರೆಯಲಿ ಎಂದು ಇದೇ ವೇಳೆ ಗುರುಪಾದಸ್ವಾಮಿ ಆಶಿಸಿದರು.

ಕಾಂಗ್ರೆಸ್ ಮುಖಂಡರಾದ ಹೆಚ್.ಎ. ವೆಂಕಟೇಶ್, ನಾಗಭೂಷಣ್, ತಿವಾರಿ, ಅಬು ಮೊಹಮ್ಮದ್, ಎಡತಲೆ ಮಂಜುನಾಥ್, ಎನ್.ಎಸ್.ರಾಜೇಂದ್ರ, ಶಿವಣ್ಣ, ಶಿವಮಲ್ಲು, ಗಿರೀಶ್, ಎಲ್.ಭಾಸ್ಕರ್, ಚಂದ್ರು, ಎನ್.ಆರ್.ನಾಗೇಶ್, ದಿವಾಕರ್, ದಿನೇಶ್, ಎಂ.ರಾಜು, ಜೆ.ಜೆ. ಆನಂದ್, ಮಾಜಿ ಮೇಯರ್ ಪುಷ್ಪಲತಾ ಚಿಕ್ಕಣ್ಣ ಸೇರಿದಂತೆ ಹಲವರು ಮೂರ್ತಿ ಅವರಿಗೆ ಶುಭಾಶಯ ಕೋರಿದರು.

ದೀಪಕ್‌ಕುಮಾರ್ ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ



ಮೈಸೂರು, ಡಿ.25– ಮೈಸೂರಿನ ಎಸ್.ದೀಪಕ್‌ಕುಮಾರ್ ಅವರನ್ನು ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯಾಗಿ ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮೊಹಮ್ಮದ್ ಹ್ಯಾರಿಸ್ ನಲಪಾಡ್ ನೇಮಕ ಮಾಡಿದ್ದಾರೆ. ಮೈಸೂರಿನ ನರಸಿಂಹರಾಜ ಕ್ಷೇತ್ರದ ಯುವ ಕಾಂಗ್ರೆಸ್ ಅಧ್ಯಕ್ಷರಾಗಿ, ಮೈಸೂರು, ಕೊಡಗು ಲೋಕಸಭಾ ಕ್ಷೇತ್ರದ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯಾಗಿ ಹಾಗೂ ರಾಜ್ಯ ಯುವ ಕಾಂಗ್ರೆಸ್ ಕಾರ್ಯದರ್ಶಿಯಾಗಿ ದೀಪಕ್‌ಕುಮಾರ್ ಕೆಲಸ ಮಾಡಿದ್ದರು. ಈಗ ಪ್ರಧಾನ ಕಾರ್ಯದರ್ಶಿಯಾಗಿ ಬಡ್ತಿ ನೀಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಬಿಇಎಂಎಲ್ ಬ್ರಾಹ್ಮಣ ಸಂಘದಲ್ಲಿ ಆಚಾರ್ಯತ್ರಯರ ಜಯಂತಿ



ಮೈಸೂರು, ಡಿ.25–ಮೈಸೂರಿನ ಬಿಇಎಂಎಲ್ ಬ್ರಾಹ್ಮಣ ಸಂಘದ ಆಶ್ರಯದಲ್ಲಿ ಶ್ರೀ ಸತ್ಯನಾರಾಯಣ ಪೂಜೆ, ಆಚಾರ್ಯತ್ರಯರ ಜಯಂತಿ ಆಯೋಜಿಸಲಾಗಿತ್ತು. ಬೆಮೆಲ್ ಸಂಸ್ಥೆಯ ನಿವೃತ್ತ ಸಿಎಂಡಿ ಅಮಿತ್ ಬ್ಯಾನರ್ಜಿ, ರಾಜಶೇಖರ್, ಪ್ರಧಾನ ವ್ಯವಸ್ಥಾಪಕ ಯೋಗಾನಂದ, ರಂಗನಾಥ್, ಮಹಾಸಭಾ ರಾಜ್ಯ ಉಪಾಧ್ಯಕ್ಷ ನಂ.ಶ್ರೀಕಂಠಕುಮಾರ್, ಕಾರ್ಮಿಕ ಸಂಘದ ಕಾರ್ಯದರ್ಶಿ ಹೆಚ್.ಎ.ನಾಗಶಯನ, ಗೃಹ ನಿರ್ಮಾಣ ಸಹಕಾರ ಸಂಘದ ನಿರ್ದೇಶಕ ಎಸ್.ಬಿ.ಶ್ರೀನಿವಾಸ್, ಎಂ.ಎಸ್.ನಾಗೇಂದ್ರ, ಸಂಘದ ಗೌರವ ಅಧ್ಯಕ್ಷ ಕೃಷ್ಣಪ್ರಸಾದ್, ಅಧ್ಯಕ್ಷ ಗಣೇಶ್ ಗುರ್ಕಿ, ಎಂ.ಜಿ.ಚಂದ್ರಶೇಖರ್, ಹೆಚ್.ಆರ್.ಟಿ.ವೆಂಕಟೇಶ್, ವಿಠಲ, ಮಂಜುನಾಥ್, ರಾಂ ಪ್ರಕಾಶ್, ದಿಲೀಪ್ ಇತರ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

ರಾಷ್ಟ್ರೀಯ ಗ್ರಾಹಕರ ಹಕ್ಕುಗಳ ದಿನ



ಮೈಸೂರು,ಡಿ.25–ರಾಷ್ಟ್ರೀಯ ಗ್ರಾಹಕರ ಹಕ್ಕುಗಳ ದಿನಾಚರಣೆಯ ಅಂಗವಾಗಿ ವಿದ್ಯಾವರ್ಧಕ ತಾಂತ್ರಿಕ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಹಾಗೂ ರೆಡ್ ಕ್ರಾಸ್ ಯೂಥ್ ವಿಂಗ್ ಸಂಘಟನೆಯ ವಿದ್ಯಾರ್ಥಿಗಳು ಮೈಸೂರಿನ ‘ಮೈಸೂರು ಗ್ರಾಹಕರ ಪರಿಷತ್’ ಸಹಯೋಗದಲ್ಲಿ ಗ್ರಾಹಕರಿಗೆ ತಮ್ಮ ಹಕ್ಕುಗಳು ಹಾಗೂ ಜವಾಬ್ದಾರಿಗಳನ್ನು ಪರಿಚಯಿಸುವ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದರು. ಸರಕಾರಿ ಇಲಾಖೆಗಳಲ್ಲಿ ಭ್ರಷ್ಟಾಚಾರದ ವಿರುದ್ಧವಾಗಿ ಹೋರಾಡುವುದು, ಸಾರ್ವಜನಿಕರಿಗೆ ಉತ್ತಮ ಮೂಲ ಸೌಕರ್ಯಗಳನ್ನು ಒದಗಿಸುವ ಬಗ್ಗೆ, ಗ್ರಾಹಕರ ಹಕ್ಕುಗಳು ಹಾಗೂ ಅವರ ಸಹಾಯಕ್ಕೆ ಇರುವ ಕಾಯಿದೆಗಳ ಬಗ್ಗೆ ಅರಿವು ಮೂಡಿಸಲು ಜಾಥಾ ನಡೆಸಲಾಯಿತು. ಮೈಸೂರು ಗ್ರಾಹಕರ ಪರಿಷತ್‌ನ ಸಂಸ್ಥಾಪಕ ಡಾ.ಭಾಮಿಶೆಣೈ, ಅಧ್ಯಕ್ಷ ಶ್ರೀಶೈಲ ರಾಮಣ್ಣವರ್, ವಿದ್ಯಾವರ್ಧಕ ಕಾಲೇಜಿನ ಪ್ರಾಂಶುಪಾಲ ಡಾ.ಬಿ. ಸದಾಶಿವೇಗೌಡ, ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್)ಯ ಸಂಯೋಜಕರಾದ ಪ್ರೊ.ಆರ್.ಕಾರ್ತಿಕ್, ಸಂಘಟನೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಮೈಸೂರಿಗೆ ಮುಂದುವರೆದಿದೆ ಪ್ರವಾಸಿಗರ ಪ್ರವಾಹ!

● ಎಲ್ಲಾ ಪ್ರವಾಸಿ ತಾಣಗಳಲ್ಲಿ ಕಿಕ್ಕಿರಿದ ಜನಸಂದಣಿ ● ಮೃಗಾಲಯ, ಅರಮನೆ, ಚಾಮುಂಡಿಬೆಟ್ಟದಲ್ಲಿ ಅಧಿಕ ಪ್ರವಾಸಿಗರ ದಂಡು ● ಅರಮನೆ ಸುತ್ತಮುತ್ತ ಹಾಗೂ ಇತರೆಡೆ ಭಾರಿ ಟ್ರಾಫಿಕ್ ಜಾಮ್ ● ಹೋಟೆಲ್‌ಗಳಲ್ಲಿ ಕೊಠಡಿ ಸಿಗದೆ ರಸ್ತೆ ಬದಿಯೇ ನಿದ್ರೆಗೆ ಜಾರಿದ ಪ್ರವಾಸಿಗರು





ಭಾನುವಾರ ಬೆಂಗಳೂರಿನಿಂದ ಸಾಂಸ್ಕೃತಿಕ ನಗರಿ ಮೈಸೂರಿಗೆ ಲಗ್ಗೆ ಇಡುತ್ತಿರುವ ವಾಹನಗಳ ದಂಡು. ಮೈಸೂರಿನ ಚಾಮರಾಜೇಂದ್ರ ಮೃಗಾಲಯಕ್ಕೆ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ವೀಕ್ಷಿಸಿದರು.

ಮೈಸೂರು, ಡಿ.25(ಎಂಟಿವೈ)– ಕ್ರಿಸ್‌ಮಸ್ ಹಾಗೂ ಹೊಸ ವರ್ಷದ ಸಂಭ್ರಮಾಚರಣೆ, ಜೊತೆಗೆ ಸಾಲು... ಸಾಲು... ರಜೆ ಹಿನ್ನೆಲೆಯಲ್ಲಿ ವಿವಿಧೆಡೆಯಿಂದ ಮೈಸೂರಿಗೆ ಬರುವ ಪ್ರವಾಸಿಗರ ಸಂಖ್ಯೆ ಸೋಮವಾರವೂ ಹೆಚ್ಚಾಗಿದ್ದು, ಮೈಸೂರಿನ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರು ಕಿಕ್ಕಿರಿದು ತುಂಬಿದ್ದರು.

ಶನಿವಾರದಿಂದ ಮೈಸೂರಿಗೆ ಭಾರಿ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುತ್ತಿದ್ದು, ಅರಮನೆ, ಮೃಗಾಲಯ, ಚಾಮುಂಡಿಬೆಟ್ಟ ಸೇರಿದಂತೆ ಮೈಸೂರಿನ ವಿವಿಧ ಪ್ರವಾಸಿ ತಾಣಗಳಲ್ಲಿ ಜನವೋ ಜನ. ಸಾಲು... ಸಾಲು... ರಜೆ ಹಾಗೂ ಹೊಸ ವರ್ಷದ ಸಂಭ್ರಮಾಚರಣೆಗಾಗಿ ವಿವಿಧೆಡೆಯಿಂದ ಮೈಸೂರಿಗೆ ಪ್ರವಾಸಿಗರು ಲಗ್ಗೆ ಇಟ್ಟಿದ್ದು, ಸೋಮವಾರವೂ ಮೈಸೂರಲ್ಲಿ ಜನ ಜಾತ್ರೆ ಕಂಡು ಬಂದಿತು.

ಮೈಸೂರು ಅರಮನೆಗೆ ಇಂದು ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಭೇಟಿ ನೀಡಿದ್ದರು. ಬೆಳಗ್ಗೆ 8 ಗಂಟೆಯಿಂದಲೇ ಅರಮನೆಗೆ ಅಡಿಯಿಟ್ಟ ಪ್ರವಾಸಿಗರ ದಂಡು ಪಾರಂಪರಿಕ ವೈಭವ ಕಂಡು ಮೂಕ ವಿಸ್ಮಿತರಾದರು. ಕೋಟೆ ಆಂಜನೇಯ ಸ್ವಾಮಿ(ಬಲರಾಮ–ಜಯರಾಮ) ಹಾಗೂ ವರಹಾ(ಗನ್‌ಹೌಸ್) ದ್ವಾರದ ಮೂಲಕ ರಾತ್ರಿ 9.30ರವರೆಗೂ ಅರಮನೆ ಪ್ರವೇಶಿಸಿದ ಪ್ರವಾಸಿಗರು ಅರಮನೆ ಆವರಣದಲ್ಲಿ ಏರ್ಪಡಿಸಿರುವ ಫಲಪುಷ್ಪ ಪ್ರದರ್ಶನ ವೀಕ್ಷಣೆಗೆ ಮುಗಿ ಬಿದ್ದರು. ಸಸ್ಯಕಾಶಿ ಸೌಂದರ್ಯವನ್ನು ಕಣ್ತುಂಬಿಕೊಂಡು, ನಾನಾ ಹೂವಿನಿಂದ ತಲೆ ಎತ್ತಿರುವ ಆಕೃತಿಗಳನ್ನು ಫೋಟೋ ತೆಗೆದುಕೊಳ್ಳುವ ಮೂಲಕ ಸಂಭ್ರಮಿಸಿದರು.

ಮೃಗಾಲಯದಲ್ಲೂ ಜನ ಜಂಗುಳಿ: ಮೈಸೂರಿನ ಪ್ರಮುಖ ಪ್ರವಾಸಿ ತಾಣ ಮೃಗಾಲಯಕ್ಕೂ ಅಪಾರ ಸಂಖ್ಯೆಯಲ್ಲಿ ಪ್ರವಾಸಿಗರು ಭೇಟಿ ನೀಡಿದ್ದರು. ಅಲ್ಲಿರುವ ಪ್ರಾಣಿ–ಪಕ್ಷಿ ಸಂಕುಲವನ್ನು ವೀಕ್ಷಿಸಿ ಸಂಭ್ರಮಿಸುತ್ತಿದ್ದಾರೆ. ಸೋಮವಾರವೂ ಮೃಗಾಲಯಕ್ಕೆ ಪ್ರವಾಸಿಗರ ಸಂಖ್ಯೆ ಹೆಚ್ಚಾಗಿತ್ತು. ಈ ಹಿನ್ನೆಲೆಯಲ್ಲಿ ಮೃಗಾಲಯದ ಆವರಣ ಕಿಕ್ಕಿರಿದು ತುಂಬಿತ್ತು. ಎಲ್ಲಿ ನೋಡಿದರೂ ಪ್ರವಾಸಿಗರ ದಂಡೇ ದಂಡು. ಅಹಿತಕರ ಘಟನೆ ನಡೆಯದಂತೆ ಹೆಚ್ಚುವರಿ ಭದ್ರತಾ ಸಿಬ್ಬಂದಿ ನಿಯೋಜಿಸಲಾಗಿತ್ತು.

ಬೆಟ್ಟದಲ್ಲೂ ಜನ ಜಂಗುಳಿ: ಚಾಮುಂಡಿ ಬೆಟ್ಟದಲ್ಲಿ ಸೋಮವಾರವೂ ಭಕ್ತರು ಹಾಗೂ ಪ್ರವಾಸಿಗರ ಸಾಗರವೇ ನೆರೆದಿತ್ತು. ಬೆಳಗ್ಗೆಯಿಂದ ಸಂಜೆವರೆಗೂ ಬೆಟ್ಟದಲ್ಲಿ ಜನ ಜಂಗುಳಿ ಕಂಡು ಬಂದಿತು. ಸಾವಿರಾರು ವಾಹನಗಳು ಏಕಕಾಲಕ್ಕೆ ಬೆಟ್ಟಕ್ಕೆ ಬಂದ ಹಿನ್ನೆಲೆಯಲ್ಲಿ ಜನರೊಂದಿಗೆ ವಾಹನ ದಟ್ಟಣೆಯೂ ಬೆಟ್ಟದಲ್ಲಿ ಕಂಡು ಬಂದಿತು. ಮಲ್ಟಿಲೆವೆಲ್ ಪಾರ್ಕಿಂಗ್ ಕಟ್ಟಡದಲ್ಲಿ ವಾಹನ ನಿಲುಗಡೆಗೆ ಸ್ಥಳಾವಕಾಶವಿಲ್ಲದೆ, ರಸ್ತೆ ಬದಿಯಲ್ಲೂ ವಾಹನ ನಿಲುಗಡೆ ಮಾಡಲಾಗಿತ್ತು. ವಾಹನಗಳ ಸಂಖ್ಯೆ ಹೆಚ್ಚಾಗಿದ್ದರಿಂದ ಬೆಟ್ಟದ ರಸ್ತೆಯುದ್ದಕ್ಕೂ ಟ್ರಾಫಿಕ್ ಜಾಮ್ ಉಂಟಾಗುತ್ತಿತ್ತು. ದೇವಾಲಯಕ್ಕೆ ಭೇಟಿ ನೀಡಲು ಪ್ರವಾಸಿಗರು ಸರದಿ ಸಾಲಿನಲ್ಲಿ ನಿಂತಿದ್ದರಿಂದ ಧರ್ಮ ದರ್ಶನದ ಸಾಲು ಮಹಾಬಲೇಶ್ವರ ದೇವಾಲಯದವರೆಗೂ ಇತ್ತು. 100 ರೂ. ಟಿಕೆಟ್ ಪಡೆದು ವಿಶೇಷ ದರ್ಶನಕ್ಕೂ ಭಕ್ತರು ಭಾರಿ ಸರದಿ ಸಾಲಿನಲ್ಲಿ ನಿಂತಿದ್ದರು.

ವಾಹನಗಳ ದಂಡು: ಮೈಸೂರಿನಲ್ಲಿ ಎಲ್ಲಿ ಹೋದರೂ ಪ್ರವಾಸಿ ವಾಹನಗಳ ಭಾರಿ ದಟ್ಟಣೆ. ಈಗಾಗಲೇ ಎರಡು ದಿನದಿಂದ ಸಾವಿರಾರು ಪ್ರವಾಸಿ ವಾಹನಗಳು ಮೈಸೂರಿಗೆ ಆಗಮಿಸಿದ್ದವು. ಇಂದು ಬೆಳಗ್ಗೆಯಿಂದಲೂ ಸಾವಿರಾರು ಪ್ರವಾಸಿ ವಾಹನ ಮೈಸೂರಿಗೆ ಆಗಮಿಸುತ್ತಿದ್ದವು. ಅದರಲ್ಲೂ ಮೈಸೂರು–ಬೆಂಗಳೂರು, ಮೈಸೂರು–ನಂಜನಗೂಡು ಹಾಗೂ ಮೈಸೂರು–ಹುಣಸೂರು ಮುಖ್ಯ ರಸ್ತೆಯಲ್ಲಿ ಸಾವಿರಾರು ವಾಹನಗಳು ಮೈಸೂರು ತಲುಪಲು ಸಾಲುಗಟ್ಟಿ ನಿಂತಿದ್ದ ದೃಶ್ಯ ಕಂಡು ಬಂದಿತು.

ರಸ್ತೆಯಲ್ಲೇ ನಿದ್ರೆಗೆ ಜಾರಿದ ಪ್ರವಾಸಿಗರು: ಸಾಲು ರಜೆ ಹಿನ್ನೆಲೆಯಲ್ಲಿ ಡಿಸೆಂಬರ್ 23ರಿಂದ ಜ.1ರವರೆಗೂ ಮೈಸೂರಲ್ಲಿರುವ ಎಲ್ಲಾ ವಸತಿ ಗೃಹ, ಅತಿಥಿ ಗೃಹ, ರೆಸಾರ್ಟ್, ಕ್ಲಬ್‌ಗಳಲ್ಲಿರುವ ಕೊಠಡಿಗಳು ಭರ್ತಿ ಯಾಗಿರುವ ಹಿನ್ನೆಲೆಯಲ್ಲಿ ಸಾಕಷ್ಟು ಪ್ರವಾಸಿಗರು ರಾತ್ರಿಯಿಡೀ ರಸ್ತೆ ಪಕ್ಕದಲ್ಲೇ ವಾಹನಗಳಲ್ಲೇ ನಿದ್ರೆ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿತ್ತು. ಕಳೆದ ಎರಡು ದಿನಗಳಿಂದಲೂ ರಾತ್ರಿಯಿಡೀ ರೂಮ್‌ಗಾಗಿ ಪ್ರವಾಸಿಗರು ಪರದಾಡುತ್ತಿದ್ದು, ವಾಸ್ತವ್ಯಕ್ಕೆ ಸ್ಥಳಾವಕಾಶವಿಲ್ಲದೆ ತೊಂದರೆಗೀಡಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಹಲವು ಪ್ರವಾಸಿಗರು ಮೃಗಾಲಯ ಮುಂದೆ, ಅರಮನೆ ಸಮೀಪದ ಪಾದಚಾರಿ ಮಾರ್ಗದಲ್ಲೇ ನಿದ್ರೆಗೆ ಜಾರಿದ್ದ ದೃಶ್ಯ ಕಂಡು ಬಂತು.

ಭರ್ಜರಿ ವ್ಯಾಪಾರ: ಮೈಸೂರಿಗೆ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿರುವ ಹಿನ್ನೆಲೆಯಲ್ಲಿ ಮೈಸೂರಿನ ಎಲ್ಲಾ ಹೋಟೆಲ್, ಬೇಕರಿ, ಬಟ್ಟೆ ಅಂಗಡಿ, ಅಲಂಕಾರಿಕ ವಸ್ತುಗಳು ಸೇರಿದಂತೆ ನಾನಾ ಮಾರಾಟ ಮಳಿಗೆ, ಸಿಹಿ ತಿನಿಸುಗಳ ಮಳಿಗೆ ಸೇರಿದಂತೆ ಬಹುತೇಕ ಎಲ್ಲಾ ಅಂಗಡಿಗಳಲ್ಲೂ ವ್ಯಾಪಾರ ಭಾರಿ ಜೋರಾಗಿದೆ. ಅದರಲ್ಲೂ ಪ್ರವಾಸಿ ತಾಣಗಳ ಬಳಿಯಿರುವ ಮಳಿಗೆಗಳಲ್ಲಿ ಭರ್ಜರಿ ವಹಿವಾಟು ನಡೆಯುತ್ತಿದ್ದು, ವ್ಯಾಪಾರಿಗಳ ಮುಖದಲ್ಲಿ ಮಂದಹಾಸ ಮೂಡಿದೆ.

ರಂಗನತಿಟ್ಟು ಪಕ್ಷಿಧಾಮದ ಪ್ರವೇಶ ಅವಧಿ ವಿಸ್ತರಣೆ

ಪ್ರವಾಸಿಗರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಶ್ರೀರಂಗಪಟ್ಟಣ ತಾಲೂಕಿನ ರಂಗನತಿಟ್ಟು ಪಕ್ಷಿಧಾಮಕ್ಕೆ ಪ್ರವಾಸಿಗರ ಪ್ರವೇಶದ ಅವಧಿ ವಿಸ್ತರಿಸಲಾಗಿದೆ. ಡಿ.25ರಿಂದ ಜ.2ರವರೆಗೂ ಪ್ರತಿದಿನ ಬೆಳಗ್ಗೆ 6 ಗಂಟೆಯಿಂದ ಸಂಜೆ 5.30ರವರೆಗೆ ಪಕ್ಷಿಧಾಮ ವೀಕ್ಷಣೆಗೆ ಅವಕಾಶ ನೀಡಲಾಗುತ್ತದೆ. ಈ ಹಿಂದೆ ಬೆಳಗ್ಗೆ 8.30ರಿಂದ ಪ್ರವಾಸಿಗರ ಪ್ರವೇಶಕ್ಕೆ ಅವಕಾಶ ನೀಡಲಾಗುತ್ತಿತ್ತು. ಆದರೆ, ಇಂದಿನಿಂದ ಬೆಳಗ್ಗೆ 6 ಗಂಟೆಯಿಂದಲೇ ಪಕ್ಷಿಧಾಮ ವೀಕ್ಷಣೆಗೆ ಅವಕಾಶ ನೀಡಲಾಗಿದೆ.

ಇಂದು ಮೃಗಾಲಯ ವೀಕ್ಷಣೆಗೆ ಮುಕ್ತ

ಮೈಸೂರಿಗೆ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ನಾಳೆ(ಡಿ.26) ಮೃಗಾಲಯ ಹಾಗೂ ಕಾರಂಜಿಕೆರೆಗೆ ಪ್ರವಾಸಿಗರ ಪ್ರವೇಶಕ್ಕೆ ಅವಕಾಶ ನೀಡಲಾಗಿದೆ. ಪ್ರತಿ ಮಂಗಳವಾರ ಮೃಗಾಲಯಕ್ಕೆ ವಾರದ ರಜೆ ನೀಡಲಾಗುತ್ತಿದ್ದು, ಪ್ರವಾಸಿಗರಿಗೆ ತೊಂದರೆಯಾಗುವುದನ್ನು ತಪ್ಪಿಸಲು ನಾಳೆ ಮೃಗಾಲಯ ಮತ್ತು ಕಾರಂಜಿಕೆರೆ ತೆರೆಯಲು ನಿರ್ಧರಿಸಲಾಗಿದೆ. ಎಂದಿನಂತೆ ಪ್ರವಾಸಿಗರು ಬೆಳಗ್ಗೆ 8.30ರಿಂದ ಸಂಜೆ 5.30ರವರೆಗೆ ಮೃಗಾಲಯಕ್ಕೆ ಪ್ರವೇಶಿಸಬಹುದಾಗಿದೆ.



ಮೈಸೂರಿನ ಶಾರದಾದೇವಿನಗರದ ನವೋವನ ಉದ್ಯಾನವನದಲ್ಲಿ ಮಾಜಿ ಪ್ರಧಾನಿ ದಿವಂಗತ ಅಟಲ್ ಬಿಹಾರಿ ವಾಜಪೇಯಿ ಅವರ ಹುಟ್ಟುಹಬ್ಬವನ್ನು ಭಾನುವಾರ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಕಾರ್ಯಕರ್ತರು ಆಚರಿಸಿದರು. ಕ್ಷೇತ್ರದ ಅಧ್ಯಕ್ಷ ಬಿ.ಎಂ.ರಘು, ಪ್ರಧಾನ ಕಾರ್ಯದರ್ಶಿ ಹೆಚ್.ಜಿ.ರಾಜಮಣಿ, ಉಪಾಧ್ಯಕ್ಷ ವಿಜಯ್, ಮಂಜುನಾಥ್, ಶಶಿಕಾಂತ್, ಪ್ರತಾಪ್ ಚಿತ್ರದಲ್ಲಿದ್ದಾರೆ.

ಬೆಳೆ ಪರಿಹಾರ, ಸಾಲ ಮನ್ನಾಕ್ಕಾಗಿ ರೈತರು ‘ಬರಗಾಲ ಬಯಸುತ್ತಾರೆ...’

● ಸಕ್ಕರೆ ಸಚಿವ ಶಿವಾನಂದ ಪಾಟೀಲರ ವಿವಾದಾಸ್ಪದ ಹೇಳಿಕೆ ● ಬಿಜೆಪಿ, ಜೆಡಿಎಸ್ ನಾಯಕರ ಆಕ್ರೋಶ

ಬೆಂಗಳೂರು, ಡಿ.25(ಕೆಎಂಶಿ)– ರೈತರು ಬೆಳೆ ಪರಿಹಾರಕ್ಕಾಗಿ ಪದೇ ಪದೆ ಬರಗಾಲ ಬರಲೆಂದು ಬಯಸುತ್ತಾರೆ ಎಂಬ ಸಚಿವ ಶಿವಾನಂದ ಪಾಟೀಲ ಅವರ ಹೇಳಿಕೆ ರಾಜ್ಯ ರಾಜಕೀಯದಲ್ಲಿ ಬಿರುಗಾಳಿ ಎಬ್ಬಿಸಿದೆ.

ಅಥಣಿ ತಾಲೂಕಿನ ಸುಟ್ಟಟ್ಟಿ ಗ್ರಾಮದಲ್ಲಿ ಗ್ರಾಮೀಣ ಕೃಷಿ ಸ್ವಸಹಾಯ ಸಂಘದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಸಚಿವರು, ತಾವು ಪಡೆದಿರುವ ಕೃಷಿ ಸಾಲವನ್ನು ಮನ್ನಾ ಮಾಡಿಕೊಳ್ಳಲು ಬರಗಾಲ ಬಯಸುತ್ತಾರೆ, ಇದು ಸರಿಯಲ್ಲ ಎಂದಿದ್ದರು.

ಮುಂದುವರೆದು ಎಚ್.ಡಿ. ಕುಮಾರಸ್ವಾಮಿ, ಬಿ.ಎಸ್.ಯಡಿಯೂರಪ್ಪ, ಸಿದ್ದರಾಮಯ್ಯ ತಮ್ಮ ಆಡಳಿತ ಕಾಲದಲ್ಲಿ ರೈತರ ಸಾಲ ಮನ್ನಾ ಮಾಡಿದ್ದಾರೆ, ಈಗ ಬರಗಾಲ ಎದುರಾಗುತ್ತಿದ್ದಂತೆ, ಸಿದ್ದರಾಮಯ್ಯನವರು, ಸಹಕಾರಿ ಬ್ಯಾಂಕ್‌ಗಳಲ್ಲಿ ರೈತರು ಪಡೆದ ಕೃಷಿ ಸಾಲದ ಮೇಲಿನ ಬಡ್ಡಿ ಮನ್ನಾ ಮಾಡಿದ್ದಾರೆ. ರೈತರು ಪರ್ಯಾಯ ಬೆಳೆಯನ್ನು ಅವಲಂಬಿಸಿದರೆ ಇಂತಹ ಪರಿಸ್ಥಿತಿ ಬರುವುದಿಲ್ಲ.

ಸಕ್ಕರೆ ಕಾರ್ಖಾನೆಗಳಿಗೆ ಎಥೆನಾಲ್ ಉತ್ಪಾದನೆ ಅವಕಾಶ ದೊರೆತ ನಂತರ ಸಕ್ಕರೆ ಉದ್ಯಮ ಮತ್ತು ಕಬ್ಬು ಬೆಳೆಗಾರರು ಬಲಿಷ್ಠರಾಗಿದ್ದಾರೆ, ಇದೇ ರೀತಿ ಎಲ್ಲರೂ ಪರ್ಯಾಯ ಮಾರ್ಗಗಳನ್ನು ಹುಡುಕಬೇಕು ಎಂದು ಸಲಹೆ ನೀಡಿದ್ದರು.

ಶಿವಾನಂದ ಅವರ ಈ ಹೇಳಿಕೆ ಹೊರಬರುತ್ತಿದ್ದಂತೆ, ಜೆಡಿಎಸ್ ರಾಜ್ಯಾಧ್ಯಕ್ಷ ಕುಮಾರಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್, ಹೇಳಿಕೆಯನ್ನು ಖಂಡಿಸಿದ್ದಾರೆ.

ಅನ್ನದಾತನ ಕಷ್ಟ–ಸಂಕಷ್ಟಗಳ ಬಗ್ಗೆ ಅವಹೇಳನ ಮಾಡುವುದು ಸರಿಯಲ್ಲ, ಸಚಿವರು, ಇಂತಹ ವಿಷಯಗಳ ಬಗ್ಗೆ ಬಹಳ ಎಚ್ಚರಿಕೆ, ಸೂಕ್ಷ್ಮತೆ ಮತ್ತು ಸಂಯಮದಿಂದ ಮಾತನಾಡಬೇಕು ಎಂದಿದ್ದಾರೆ.

ಕೃಷಿ ಸಾಲ ಮನ್ನಾ ಮಾಡುವ ಮುನ್ನ ರಾಜ್ಯದಲ್ಲಿ ನಡೆದ ರೈತರ ಸರಣಿ ಆತ್ಮಹತ್ಯಾಕಾಂಡ ನೆನಪು ಮಾಡಿಕೊಂಡರೆ ಈಗಲೂ ನನ್ನ ಮೈ ನಡುಗುತ್ತದೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ.

ರೈತ ಕೇಳುತ್ತಿರುವುದು ತನ್ನ ಹಕ್ಕನ್ನಷ್ಟೇ, ಭಿಕ್ಷೆಯನ್ನಲ್ಲ, ಸಚಿವರು ಬೇಷರತ್ ಕ್ಷಮೆ ಕೇಳಬೇಕು, ತಮ್ಮ ಹೇಳಿಕೆಯನ್ನು ಹಿಂದಕ್ಕೆ ಪಡೆಯಬೇಕು ಎಂದು ಒತ್ತಾಯಿಸಿದ್ದಾರೆ.

ಮತ್ತೊಂದೆಡೆ ವಿಜಯೇಂದ್ರ, ಸಚಿವರು ಬೇಜವಾಬ್ದಾರಿ ಹೇಳಿಕೆಗಳನ್ನು ನೀಡಿ ರೈತರನ್ನು ಅವಮಾನಿಸುತ್ತಿದ್ದಾರೆ, ಅಂತಹವರಿಗೆ ಮುಖ್ಯಮಂತ್ರಿಗಳು ಬುದ್ಧಿ ಮಾತು ಹೇಳಬೇಕು ಎಂದಿದ್ದಾರೆ. ಪರಿಹಾರಕ್ಕಾಗಿ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಾರೆ ಎಂಬ ಅವರ ಹೇಳಿಕೆ ಖಂಡನಾರ್ಹ, ಅನ್ನ ಕೊಡುವ ರೈತರ ಬಗ್ಗೆ ಸಚಿವರ ಹೇಳಿಕೆ ಆಕ್ಷೇಪಾರ್ಹ ಎಂದಿದ್ದಾರೆ.

ಶಿವಾನಂದ ಪಾಟೀಲರಿಂದ ರೈತರಿಗೆ ಅವಮಾನ: ವಿಜಯೇಂದ್ರ ಆಕ್ರೋಶ



ಬೆಂಗಳೂರು, ಡಿ.25(ಕೆಎಂಶಿ)–ಬೆಳೆ ನಷ್ಟದಿಂದ ಮನನೊಂದು ಆತ್ಮಹತ್ಯೆ ಮಾಡಿಕೊಳ್ಳುವ ರೈತರ ಬಗ್ಗೆ ಸಚಿವರೊಬ್ಬರು ಬೇಜಬ್ದಾರಿ ಹೇಳಿಕೆಗಳನ್ನು ನೀಡುವ ಮೂಲಕ ಕೃಷಿಕರನ್ನು ಅವಮಾನಗೊಳಿಸಿದ್ದಾರೆ ಎಂದು ಬಿಜೆಪಿ ತೀವ್ರವಾಗಿ ಖಂಡಿಸಿದೆ. ಇಂದಿಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಪರಿಹಾರಕ್ಕಾಗಿ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಾರೆ ಎಂಬ ಸಚಿವ ಶಿವಾನಂದ ಪಾಟೀಲ್ ಹೇಳಿಕೆ ಖಂಡನೀಯ, ಅನ್ನ ಕೊಡುವ ರೈತರನ್ನು ಅವಮಾನ ಮಾಡಿದ ಇಂತಹ ಸಚಿವರಿಗೆ ಮುಖ್ಯಮಂತ್ರಿ ಬುದ್ಧಿವಾದ ಹೇಳಬೇಕು, ತಿದ್ದಿಕೊಳ್ಳದ ಸಚಿವರ ರಾಜೀನಾಮೆ ಪಡೆಯಬೇಕು ಎಂದು ಆಗ್ರಹಿಸಿದರು. ರೈತರಿಗೆ ಬರಗಾಲದ ಸಮರ್ಪಕ ಪರಿಹಾರ ನೀಡದ ಸರ್ಕಾರ, ರೈತರಿಗೆ ಪದೇ ಪದೆ ಅಪಮಾನ ಮಾಡುತ್ತಿದೆ ಎಂದರು.

ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರದ ಮಂತ್ರಿಯೊಬ್ಬರು ರೈತರ ಬಗ್ಗೆ ಹಗುರವಾಗಿ ಮಾತನಾಡಿದ್ದು, ಬರಗಾಲ ಬಂದಿದೆ, ಪರಿಹಾರಕ್ಕಾಗಿ ರೈತರು ಕಾಯುತ್ತಾರೆ ಎಂದಿರುವುದು ಸರಿಯಲ್ಲ, ಸರ್ಕಾರಕ್ಕೆ ರೈತರ ಶಾಪ ತಟ್ಟಲಿದೆ ಎಂದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಸುನೀಲ್ ಕುಮಾರ್ ಪ್ರತಿಕ್ರಿಯಿಸಿ, ಬರಗಾಲಕ್ಕೆ ಸಂಬಂಧಪಟ್ಟಂತೆ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ, ಬದಲಿಗೆ ರೈತರಿಗೆ ಅಪಮಾನ ಮಾಡುವಂತಹ ಕೆಲಸ ಮಾಡುತ್ತಲೇ ಇದೆ, ಬರಗಾಲ ಘೋಷಣೆಯಾದ ನಂತರ ರೈತರ ಖಾತೆಗೆ ಒಂದು ರೂಪಾಯಿ ಹಣವನ್ನೂ ಹಾಕಿಲ್ಲ, ಒಬ್ಬ ಜವಾಬ್ದಾರಿಯುತ ಸಚಿವರು ಬರಗಾಲ ಬರುವುದೇ ರೈತರು ಪರಿಹಾರ ಕೇಳುವುದಕ್ಕೆ ಎಂದಿರುವುದನ್ನು ಖಂಡಿಸುವುದಾಗಿ ತಿಳಿಸಿದರು.

ಅನ್ನದಾತರು ಕೊಡುವವರು... ಬೇಡುವವರಲ್ಲ...

ರೈತರ ಬಗ್ಗೆ ಸಕ್ಕರೆ ಸಚಿವರ ಅವಹೇಳನಕಾರಿ ಹೇಳಿಕೆಗೆ ರೈತ ಕಲ್ಯಾಣ ಸಂಘದ ರಾಜ್ಯಾಧ್ಯಕ್ಷ ಚಂದನ್‌ಗೌಡರ ಖಂಡನೆ


ಮೈಸೂರು, ಡಿ. 25– ಅನ್ನದಾತರ ಮಹತ್ವ ಅರಿಯದೇ, ರೈತರ ಬಗ್ಗೆ ನಿರ್ಲಕ್ಷ್ಯ ಹೇಳಿಕೆ ನೀಡಿರುವ ಸಕ್ಕರೆ ಸಚಿವ ಶಿವಾನಂದ ಪಾಟೀಲ್ ವರ್ತನೆ ನಿಜಕ್ಕೂ ಖಂಡನೀಯ ಎಂದು ಕರ್ನಾಟಕ ರೈತ ಕಲ್ಯಾಣ ಸಂಘದ ರಾಜ್ಯಾಧ್ಯಕ್ಷ ಭೂಮಿಪುತ್ರ ಸಿ. ಚಂದನ್‌ಗೌಡ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸಾಲಮನ್ನಾ ಆಸೆಗೆ ರೈತರು ಬರಗಾಲ ಬರಲಿ ಎಂದು ಬಯಸುತ್ತಾರೆ ಎಂಬ ಉಡಾಫೆ ಹೇಳಿಕೆ ಸರಿಯಲ್ಲ. ಬರಗಾಲ ಬರಲಿ ಎಂದು ರೈತರು ಬಯಸಿದ್ದೇ ಆದರೆ, ಭೂಮಿ ಮೇಲಿರುವ 84 ಲಕ್ಷ ಜೀವರಾಶಿಗಳಿಗೆ ಉಳಿಗಾಲವೇ ಇರೋದಿಲ್ಲ. ಎಲ್ಲ ಜೀವರಾಶಿಗಳು ನೆಮ್ಮದಿಯಿಂದ ಜೀವಿಸಲು ಮೂಲ ಕಾರಣ ಅನ್ನದಾತನೇ ಎಂಬ ಸತ್ಯದ ಅರಿವು ನಿಮಗಿರಲಿ.

ಸಚಿವ ಶಿವಾನಂದ ಪಾಟೀಲ್ ಕೂಡಲೇ ರೈತರ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿರುವ ಚಂದನ್‌ಗೌಡ, ಅನ್ನದಾತರ ಋಣದಲ್ಲಿ ನೀವು ಇದ್ದೀರಾ ಹೊರತು ನಿಮ್ಮ ಋಣದಲ್ಲಿ ಅನ್ನದಾತರಿಲ್ಲ. ರೈತರ ಆತ್ಮಗೌರವಕ್ಕೆ ಧಕ್ಕೆಯಾಗುವಂತಹ ನಿಮ್ಮ ಹೇಳಿಕೆ ನಿಜಕ್ಕೂ ಬೇಸರ ತಂದಿದೆ ಎಂದಿದ್ದಾರೆ. ಅನ್ನದಾತರು ಯಾವತ್ತಿದ್ದರೂ ಕೊಡುವವರು. ಬೇಡುವವರಲ್ಲ ಎಂದಿದ್ದಾರೆ. ರೈತರಿದ್ದರೆ ಸರ್ಕಾರ. ರೈತರನ್ನು ಅವಮಾನಿಸಬೇಡಿ. ಪದೇ ಪದೆ ರೈತರ ಬಗ್ಗೆ ಅಸಂಬದ್ಧ ಹೇಳಿಕೆ ನೀಡುತ್ತಿರುವ ನಿಮ್ಮ ವರ್ತನೆ ದುರಹಂಕಾರದ ಪರಮಾವಧಿಯಾಗಿದೆ. ಕೂಡಲೇ ತಮ್ಮ ಹೇಳಿಕೆಯನ್ನು ಹಿಂಪಡೆದು, ರೈತರ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದ್ದಾರೆ.

ನಾನು ರೈತ ವಿರೋಧಿಯಲ್ಲ, ಹೇಳಿಕೆಯನ್ನು ತಿರುಚಲಾಗಿದೆ

ಸಕ್ಕರೆ ಸಚಿವ ಶಿವಾನಂದ ಪಾಟೀಲ್ ಸ್ಪಷ್ಟನೆ



ಬೆಂಗಳೂರು: ನಾನು ರೈತ ವಿರೋಧಿಯಲ್ಲ. ಚುನಾವಣೆ ಹಿನ್ನೆಲೆಯಲ್ಲಿ ವಿರೋಧ ಪಕ್ಷಗಳು ರಾಜಕೀಯ ಮಾಡುತ್ತಿವೆ. ನನ್ನ ಹೇಳಿಕೆಯನ್ನು ತಿರುಚಲಾಗಿದೆ ಎಂದು ಸಚಿವ ಶಿವಾನಂದ ಪಾಟೀಲ್ ಹೇಳಿದ್ದಾರೆ.

ರೈತರ ಕುರಿತು ತಾವು ನೀಡಿದ್ದ ವಿವಾದಾತ್ಮಕ ಹೇಳಿಕೆ ಕುರಿತು ಸ್ಪಷ್ಟನೆ ನೀಡಿರುವ ಅವರು, ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ವಿರೋಧ ಪಕ್ಷಗಳು ರಾಜಕೀಯ ಮಾಡುತ್ತಿವೆ. ನಾನು ರೈತರ ವಿರೋಧಿ ಅಲ್ಲ, ರೈತರ ವಿರೋಧವಾಗಿ ಯಾವುದೇ ಹೇಳಿಕೆ ನೀಡಿಲ್ಲ. ಮೂರು ವರ್ಷಕ್ಕೊಮ್ಮೆ ರೈತರ ಬೆಳೆಗಳಿಗೆ ಬೆಲೆ ಬರುತ್ತದೆ. ಉಳಿದ 2 ಬೆಲೆ ಇಲ್ಲದೆ ಕಂಗಾಲಾಗಿರುತ್ತಾರೆ. ಹಾಗಾಗಿ ರೈತರು ಸಾಲ ಮನ್ನಾ ಆಗಲಿ ಎಂದು ಆಶಯ ವ್ಯಕ್ತಪಡಿಸುತ್ತಾರೆಂದು ಹೇಳಿದ್ದೆ ಎಂದು ಹೇಳಿದ್ದಾರೆ.

ಇತ್ತೀಚೆಗೆ ಕೇಂದ್ರದ ಯೋಜನೆಗಳು ರೈತರಿಗೆ ಮುಳುವಾಗಿವೆ. ನನಗೆ ಮದ ಏರಿದೆ ಎಂದು ವಿರೋಧ ಪಕ್ಷದವರು ಹೇಳುತ್ತಾರೆ. ಆದರೆ, ಇದೆಲ್ಲ ರಾಜಕೀಯ ತಂತ್ರವಷ್ಟೇ. ಬಿಜೆಪಿ ನಾಯಕರಿಗೆ ರೈತರ ಮೇಲೆ ಕರುಣೆ ಇದ್ದರೆ ಕೇಂದ್ರ ಸರ್ಕಾರದ ನೀತಿಗಳನ್ನು ಬದಲಾಯಿಸಲಿ. ವಿರೋಧ ಪಕ್ಷದ ನಾಯಕರು ರೈತರ ಸಮಸ್ಯೆ ಬಗ್ಗೆ ಪ್ರಧಾನಿ ಮೋದಿ ಗಮನಕ್ಕೆ ತರಲಿ ಎಂದು ಒತ್ತಾಯಿಸಿದರು.

ಅಥಣಿ ತಾಲೂಕಿನ ಸುಟ್ಟಟ್ಟಿ ಗ್ರಾಮದಲ್ಲಿ ಗ್ರಾಮೀಣ ಕೃಷಿ ಸ್ವಸಹಾಯ ಸಂಘದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ್ದ ಸಚಿವರು, ಸಾಲ ಮನ್ನಾದ ಆಸೆಗಾಗಿ ಬರಗಾಲ ಬರಲೆಂದು ರೈತರು ಕಾಯುತ್ತಾರೆ ಎಂದು ಹೇಳಿದ್ದಾರೆ. ಕೃಷ್ಣಾ ನದಿ ನೀರು ಪುಕ್ಕಟೆ ಆಗಿದೆ. ಕರೆಂಟ್ ಪುಕ್ಕಟೆ ಸಿಗುತ್ತಿದೆ. ಬಹಳಷ್ಟು ಮುಖ್ಯಮಂತ್ರಿಗಳು ಬೆಳೆ ಬೆಳೆಯಲು ಬೀಜನೂ ಕೊಟ್ಟರು, ಗೊಬ್ಬರನೂ ಕೊಟ್ಟರು. ಇನ್ನೂ ರೈತರಿಗೆ ಒಂದು ಆಸೆ ಇದೆ, ಮೇಲೆ ಮೇಲೆ ಬರಗಾಲ ಬರಲಿ ಎಂಬುದು. ಕಾರಣ ಸಾಲ ಮನ್ನಾ ಆಗುತ್ತೆ ಎಂದು. ಈ ರೀತಿಯಾಗಿ ಬಯಸಬಾರದು ಎಂದು ಹೇಳಿದ್ದರು. ಈ ಕುರಿತ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಬಿಜೆಪಿ ನಾಯಕರು ಸಚಿವರ ವಿರುದ್ಧ ತೀವ್ರವಾಗಿ ಕಿಡಿಕಾರುತ್ತಿದ್ದಾರೆ.

ಶಿವಾನಂದ ಪಾಟೀಲ ಬೇಷರತ್ ಕ್ಷಮೆ ಕೇಳಬೇಕು



ಬೆಂಗಳೂರು: ಬರಗಾಲ ಬಂದ್ರೆ ರೈತರು ಸಾಲಮನ್ನಾದ ನಿರೀಕ್ಷೆ ಇಟ್ಕೊಳ್ತಾರೆ ಎಂಬ ವಿವಾದಾತ್ಮಕ ಹೇಳಿಕೆ ನೀಡಿರುವ ಸಕ್ಕರೆ ಖಾತೆ ಸಚಿವ ಶಿವಾನಂದ ಪಾಟೀಲ ವಿರುದ್ಧ ಪ್ರತಿಪಕ್ಷಗಳು ತೀವ್ರ ವಾಗ್ದಾಳಿ ನಡೆಸುತ್ತಿವೆ. ಸಚಿವರು ಬೇಷರತ್ ಕ್ಷಮೆ ಕೇಳಬೇಕು ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಹೆಚ್.ಡಿ.ಕುಮಾರಸ್ವಾಮಿ ಆಗ್ರಹಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಕುಮಾರಸ್ವಾಮಿ, ಶಿವಾನಂದ ಪಾಟೀಲ ಅವರು ರೈತರ ಬಗ್ಗೆ ನೀಡಿರುವ ಹೇಳಿಕೆ ಖಂಡನೀಯ. ಅನ್ನದಾತನ ಕಷ್ಟ, ಸಂಕಷ್ಟಗಳ ಬಗ್ಗೆ ಅವಹೇಳನ ಮಾಡುವುದು ಖಂಡಿತಾ ಸರಿಯಲ್ಲ. ಸಚಿವರು ಇಂಥ ವಿಷಯಗಳ ಬಗ್ಗೆ ಬಹಳ ಎಚ್ಚರಿಕೆ, ಸೂಕ್ಷ್ಮತೆ, ಸಂಯಮದಿಂದ ಮಾತನಾಡಬೇಕು ಎಂದಿದ್ದಾರೆ. ನಾನು ಕೃಷಿಸಾಲ ಮನ್ನಾ ಮಾಡುವ ಮುನ್ನ ರಾಜ್ಯದಲ್ಲಿ ನಡೆದ ರೈತರ ಸರಣಿ ಆತ್ಮಹತ್ಯಾಕಾಂಡ ನೆನಪು ಮಾಡಿಕೊಂಡರೆ ಈಗಲೂ ನನ್ನ ಮೈ ನಡುಗುತ್ತದೆ. ರೈತ ಕೇಳುತ್ತಿರುವುದು ತನ್ನ ಹಕ್ಕನ್ನಷ್ಟೇ, ಭಿಕ್ಷೆಯನ್ನಲ್ಲ. ಸಚಿವರು ಬೇಷರತ್ ಕ್ಷಮೆ ಕೇಳಬೇಕು, ತಮ್ಮ ಹೇಳಿಕೆಯನ್ನು ಕೂಡಲೇ ವಾಪಸ್ ಪಡೆಯಬೇಕು ಎಂದು ಅವರು ಆಗ್ರಹಿಸಿದ್ದಾರೆ.

ವಾಜಪೇಯಿ ದಿಟ್ಟ ನಿರ್ಧಾರಗಳು ಅನನ್ಯ

ಉತ್ತಮ ಆಡಳಿತ ದಿವಸ್ ಆಚರಣೆಯಲ್ಲಿ ಬಿಜೆಪಿ ಮುಖಂಡ ಅರವಿಂದ್ ಸ್ಮರಣೆ



ಮಂಡ್ಯ, ಡಿ.25–ದೇಶದ ಅಭಿವೃದ್ಧಿಗೆ ಮಾಜಿ ಪ್ರಧಾನಿ ದಿ. ಅಟಲ್ ಬಿಹಾರಿ ವಾಜಪೇಯಿ ನೀಡಿದ ಯೋಜನೆಗಳು ಹಾಗೂ ದಿಟ್ಟ ನಿರ್ಧಾರಗಳು ಅನನ್ಯ ಎಂದು ಜಿಲ್ಲಾ ಬಿಜೆಪಿ ಮುಖಂಡ ಎಚ್.ಆರ್.ಅರವಿಂದ್ ಸ್ಮರಿಸಿದರು.

ನಗರದ 28ನೇ ವಾರ್ಡ್‌ನ ಚಾಮುಂಡೇಶ್ವರಿ ಬಡಾವಣೆಯಲ್ಲಿ ಬಿಜೆಪಿ ಕಾರ್ಯಕರ್ತರು ಆಯೋಜಿಸಿದ್ದ ವಾಜಪೇಯಿ ಅವರ ಜನ್ಮದಿನ ಆಚರಣೆ ಮತ್ತು ಸಿಹಿ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ವಿಶ್ವ ಕಂಡ ನಾಯಕರಲ್ಲಿ ಭಾರತದ ಹೆಮ್ಮೆಯ ಪುತ್ರ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಒಬ್ಬರು. ಅಜಾತಶತ್ರು ಎಂದು ಕರೆಸಿಕೊಂಡ ವಾಜಪೇಯಿ ಅವರು ಸ್ವಾತಂತ್ರ್ಯೋತ್ತರ ರಾಜಕಾರಣದಲ್ಲಿ ಸದಾ ಹಸಿರಾಗಿರುವ ಹೆಸರು. ಅವರೊಬ್ಬ ನಿಷ್ಕಳಂಕ ಚಾರಿತ್ರ್ಯದ, ಮೇರು ವ್ಯಕ್ತಿತ್ವದ ಮಹಾನ್ ಜನನಾಯಕ ಎಂದರು.

ಅಟಲ್ ಬಿಹಾರಿ ವಾಜಪೇಯಿ ಅವರು 1924ರ ಡಿಸೆಂಬರ್ 25ರಂದು ಕೃಷ್ಣದೇವಿ ಹಾಗೂ ಕೃಷ್ಣ ಬಿಹಾರಿ ವಾಜಪೇಯಿ ಅವರ ಮಗನಾಗಿ ಮಧ್ಯಪ್ರದೇಶದ ಗ್ವಾಲಿಯರ್ ಹತ್ತಿರದ ಶಿಂದೆ ಕಿ ಚವ್ವಾಣಿ ಎಂಬ ಗ್ರಾಮದಲ್ಲಿ ಜನಿಸಿದರು. 1998–2004ರ ವರೆಗೆ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ ಸರ್ಕಾರವನ್ನು ಮುನ್ನಡೆಸಿದ ವಾಜಪೇಯಿ ಅವರು ಬಿಜೆಪಿಯಿಂದ ದೇಶದ ಪ್ರಧಾನಿಯಾದ ಮೊದಲ ನಾಯಕರಾಗಿದ್ದರು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ರಾಜಕಾರಣದಲ್ಲಿ ಅಜಾತಶತ್ರುವಾಗಿ ಬೆಳೆದ ಅವರು, ದೇಶಕ್ಕೆ ಪ್ರಧಾನಿಯಾಗಿ ಸೇವೆ ಸಲ್ಲಿಸಿದರು. 1996ರಲ್ಲಿ ಮೊದಲ ಬಾರಿ ಮತ್ತು 1998 ರಿಂದ 2004ರ ನಡುವೆ ಎರಡು ಬಾರಿ ಪ್ರಧಾನಿಯಾಗಿದ್ದರು. ಅಧಿಕಾರಾವಧಿಯಲ್ಲಿ ಅನೇಕ ಮಹತ್ವದ ಯೋಜನೆಗಳು ಮತ್ತು ಕಾರ್ಯಕ್ರಮಗಳು ಅನುಷ್ಠಾನಗೊಂಡವು. ಭಾರತ 1998ರಲ್ಲಿ ರಾಜಸ್ಥಾನದ ಪೋಖ್ರಾನ್‌ನಲ್ಲಿ ಸರಣಿ ಪರಮಾಣು ಪರೀಕ್ಷೆಗಳನ್ನು ಯಶಸ್ವಿಯಾಗಿ ನಡೆಸಿತು ಎಂದು ತಿಳಿಸಿದರು.

ಬಿಜೆಪಿ ಕಚೇರಿಯಲ್ಲಿ ಜನ್ಮದಿನ ಆಚರಣೆ: ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಪಕ್ಷದ ಕಾರ್ಯಕರ್ತರು ಆಯೋಜಿಸಿದ್ದ ವಾಜಪೇಯಿ ಜನ್ಮದಿನ ಆಚರಣೆ ಮತ್ತು ಉತ್ತಮ ಆಡಳಿತ ದಿವಸ್ ಕಾರ್ಯಕ್ರಮಕ್ಕೆ ನಗರ ಬಿಜೆಪಿ ಮೋರ್ಚಾ ಅಧ್ಯಕ್ಷ ವಿವೇಕ್ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಇಂದು ದೇಶಾದ್ಯಂತ ವಾಜಪೇಯಿ ಅವರ ಜನ್ಮದಿನವನ್ನು ಉತ್ತಮ ಆಡಳಿತ ದಿವಸ್ ಆಗಿ ಆಚರಿಸಲಾಗುತ್ತಿದೆ. ವಾಜಪೇಯಿ ಅವರು ಭಾರತ ಪಾಕಿಸ್ತಾನದ ಜೊತೆ ಉತ್ತಮ ಸಂಬಂಧ ಹೊಂದಬೇಕು ಎಂದು ಕನಸು ಕಂಡಿದ್ದರು ಎಂದು ಸ್ಮರಿಸಿದರು.

ವಾಜಪೇಯಿ ಅವರು ಭಾರತದಿಂದ ಪಾಕಿಸ್ತಾನಕ್ಕೆ ಬಸ್ ಸಂಪರ್ಕ ಸೇವೆ ಪ್ರಾರಂಭ ಮಾಡಿದ್ದರು. ಆದರೆ, ಪಾಕಿಸ್ತಾನ ನರಿಬುದ್ಧಿ ತೋರಿಸಿ ಭಾರತದ ವಿರುದ್ಧ ಕಾರ್ಗಿಲ್ ಯುದ್ಧ ನಡೆಸಿತು. ದಿಟ್ಟ ನಿರ್ಧಾರದಿಂದ ಭಾರತ ವಿಜಯವನ್ನು ಕಂಡಿತು ಎಂದು ಹೇಳಿದರು.

ಅಂದಿನ ಕಾಲದಲ್ಲೇ ಎಲ್ಲಾ ಪಕ್ಷಗಳಲ್ಲಿ ಉತ್ತಮ ಸ್ನೇಹಿತರನ್ನು ಹೊಂದಿದ್ದ ವಾಜಪೇಯಿ ಅವರು ಅಜಾತಶತ್ರು ಎಂಬ ಖ್ಯಾತಿ ಪಡೆದವರು. ಪ್ರತಿಯೊಂದು ಪಕ್ಷದ ಜನರು ವಾಜಪೇಯಿ ಅವರಿಗೆ ಒಡನಾಡಿಗಳಾಗಿದ್ದರು. 93ನೇ ವಯಸ್ಸಿನಲ್ಲಿ 2018ರಲ್ಲಿ ದೀರ್ಘಕಾಲದ ಕಾಯಿಲೆಯಿಂದ ಅವರು ಮೃತಪಟ್ಟರು. ಆಗ ಅಧಿಕಾರದಲ್ಲಿದ್ದ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಅಟಲ್ ಅವರಿಗೆ ಭಾರತ ರತ್ನ ನೀಡಿ ಗೌರವಿಸಿತು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರೈತ ಮೋರ್ಚಾ ಮಾಜಿ ಅಧ್ಯಕ್ಷ ಸಾಯಿರವಿಂದ್ರ ಕಲ್ಲಹಳ್ಳಿ, ತಾಲೂಕು ಉಪಾಧ್ಯಕ್ಷ ಶಿವಕುಮಾರ್ ಆರಾಧ್ಯ, ಜಿಲ್ಲಾ ಕಾರ್ಯದರ್ಶಿ ಹರ್ಷ, ನಗರಸಭೆ ಮಾಜಿ ಸದಸ್ಯರಾದ ಶಿವಕುಮಾರ್ ಕೆಂಪಯ್ಯ, ಪ್ರಸನ್ನ, ಚಂದ್ರ, ಮಾಧ್ಯಮ ವಕ್ತಾರ ಸಿ.ಟಿ.ಮಂಜುನಾಥ್, ಗಣೇಶ್, ಶ್ರೀನಿವಾಸ್ ಮತ್ತಿತರರಿದ್ದರು.

ಚಿನಕುರಳಿ ಡೇರಿ ಕ್ಯಾಲೆಂಡರ್ ಬಿಡುಗಡೆ



ಚಿನಕುರಳಿ, ಡಿ.25–ರೈತರು ಹೈನುಗಾರಿಕೆಯಲ್ಲಿ ಹೆಚ್ಚು ತೊಡಗಿಸಿಕೊಂಡು ಆರ್ಥಿಕ ಸಬಲೀಕರಣಗೊಳ್ಳಬೇಕು ಎಂದು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಹೇಳಿದರು.

ಚಿನಕುರಳಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಆವರಣದಲ್ಲಿ ನಡೆದ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ಹಾಲು ಉತ್ಪಾದಕರ ಸಹಕಾರ ಸಂಘಗಳು ರೈತರ ಆರ್ಥಿಕ ಚಟುವಟಿಕೆಗಳಿಗೆ ಸಹಕಾರಿಯಾಗಿವೆ. ರೈತರು ಕೃಷಿ ಜೊತೆಯಲ್ಲಿ ಹೈನುಗಾರಿಕೆ ಮಾಡುವ ಮೂಲಕ ಆರ್ಥಿಕವಾಗಿ ಅಭಿವೃದ್ಧಿ ಹೊಂದಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಪಂ ಸದಸ್ಯ ಸಿ.ಅಶೋಕ್, ತಾಪಂ ಮಾಜಿ ಸದಸ್ಯ ಸಿ.ಎಸ್.ಗೋಪಾಲಗೌಡ, ಲಾರಿ ಮಾಲೀಕರ ಸಂಘದ ಅಧ್ಯಕ್ಷ ಸಿ.ಶಿವಕುಮಾರ್, ಡೇರಿ ಅಧ್ಯಕ್ಷ ಸಿ.ಎಂ.ರಮೇಶ್, ಉಪಾಧ್ಯಕ್ಷ ಸಿ.ಎಸ್.ರಮೇಶ್, ವಿಎಸ್‌ಎಸ್‌ಎನ್‌ಬಿ ಅಧ್ಯಕ್ಷ ಮಂಜುನಾಥ್, ಮಾಜಿ ಅಧ್ಯಕ್ಷ ಮೋಗಣ್ಣಗೌಡ, ವಾಸುದೇವಯ್ಯ, ಗ್ರಾಪಂ ಮಾಜಿ ಅಧ್ಯಕ್ಷ ಪಾಪಣ್ಣ, ಸದಸ್ಯ ಸಿ.ಎ.ಲೋಕೇಶ್, ಮಾಜಿ ಸದಸ್ಯ ಸಿ.ಡಿ.ಮಹದೇವು, ಪುರಸಭೆ ಸದಸ್ಯ ಶಿವಣ್ಣ, ಡೇರಿ ನಿರ್ದೇಶಕರಾದ ಆರ್.ವರದರಾಜು, ಸಿ.ಎಸ್.ಲೋಕೇಶ್, ಸಿ.ಆರ್.ಹೊನ್ನರಾಜು, ಸಿ.ಜಿ.ವಿಷಕಂಠೇಗೌಡ, ಸಿ.ಪಿ.ಪುಟ್ಟರಾಜು, ರಾಮಕೃಷ್ಣೇಗೌಡ, ಗಾಯತ್ರಿ ದೇವೇಗೌಡ, ನಾಗರಾಜು, ಬಿ.ಸವಿತಾಮಂಜುನಾಥ್, ಗೀತಾ ಮಂಜು, ಕಾರ್ಯದರ್ಶಿ ಸಿ.ಕೆ.ಲೋಕೇಶ, ಪರೀಕ್ಷಕ ಸಿ.ಆರ್.ಯೋಗೇಶ್, ಸಿಬ್ಬಂದಿಗಳಾದ ಸಿ.ಪಿ.ಜಗದೀಶ್, ಯಶವಂತ್, ಸಂಜು ಹಾಜರಿದ್ದರು.

ಕಲ್ಲಡ್ಕ ಪ್ರಭಾಕರ್ ಭಟ್ ವಿರುದ್ಧ ಪ್ರತಿಭಟನೆ



ಮಳವಳ್ಳಿ, ಡಿ.25– ಮಹಿಳೆಯರ ಬಗ್ಗೆ ಕೀಳಾಗಿ ಮತ್ತು ಅವಹೇಳನಕಾರಿಯಾಗಿ ಮಾತನಾಡಿರುವ ಹಾಗೂ ಯುವತಿಗೆ ಬೆದರಿಕೆ ಹಾಕಿರುವ ಆರ್‌ಎಸ್‌ಎಸ್ ಮುಖಂಡ ಕಲ್ಲಡ್ಕ ಪ್ರಭಾಕರ್ ಭಟ್ ವಿರುದ್ಧ ಸ್ವಯಂ ಪ್ರೇರಿತ ದೂರು ದಾಖಲಿಸಿ, ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆಯ ಕಾರ್ಯಕರ್ತೆಯರು ಸೋಮವಾರ ಪಟ್ಟಣದ ಅನಂತರಾಮ್ ಸರ್ಕಲ್‌ನಲ್ಲಿ ಪ್ರತಿಭಟನೆ ನಡೆಸಿದರು.

ಸಂಘಟನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ದೇವಿ ಮಾತನಾಡಿ, ಕಲ್ಲಡ್ಕ ಪ್ರಭಾಕರ್ ಭಟ್ ಆಡಿದ ಮಾತುಗಳನ್ನು ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆ ತೀವ್ರವಾಗಿ ಖಂಡಿಸುತ್ತದೆ. ಮಹಿಳೆಯರ ಬಗ್ಗೆ ಕೀಳಾಗಿ ಮತ್ತು ಅವಹೇಳನಕಾರಿಯಾಗಿ ಮಾತನಾಡುವುದು ಅವರನ್ನು ಎರಡನೇ ದರ್ಜೆ ಪ್ರಜೆಗಳನ್ನಾಗಿ ಕಾಣುವುದು ಆರ್‌ಎಸ್‌ಎಸ್‌ನ ಮನಸ್ಥಿತಿಯಾಗಿದೆ ಎಂದು ಆರೋಪಿಸಿದರು.

ಶ್ರೀರಂಗಪಟ್ಟಣದಲ್ಲಿ ಹನುಮ ಸಂಕೀರ್ತನಾ ಯಾತ್ರೆಯಲ್ಲಿ ಮಾತನಾಡಿರುವ ಕಲ್ಲಡ ಪ್ರಭಾಕರ್ ಭಟ್ ಅನಗತ್ಯವಾಗಿ ಮುಸ್ಕಾನ್ ಎಂಬ ಯುವತಿಯನ್ನು ಆಲ್‌ಕೈದಾ ಸಂಘಟನೆ ಜೊತೆ ಸಂಬಂಧ ಕಲ್ಪಿಸಿ ಅವಹೇಳನ ಮಾಡಿ, ಬೆದರಿಕೆ ಹಾಕಿರುವುದು ಸರಿಯಲ್ಲ. ಆದ್ದರಿಂದ ಪ್ರಭಾಕರ್ ಭಟ್ ವಿರುದ್ಧ ಸ್ವಯಂಪ್ರೇರಿತ ದೂರು ದಾಖಲಿಸಿ, ಕಾನೂನು ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಸಂಘಟನೆಯ ಜಿಲ್ಲಾಧ್ಯಕ್ಷೆ ಲತಾ, ಉಪಾಧ್ಯಕ್ಷೆ ಶೋಭಾ, ಕಾರ್ಯದರ್ಶಿ ಸುಶೀಲಾ, ಖಜಾಂಚಿ ರಾಣಿ, ಜಿಲ್ಲಾ ಸಹಕಾರ್ಯದರ್ಶಿ ಮಂಜುಳಾ, ಜಯಶೀಲಾ ಇತರರು ಇದ್ದರು.

ಸಂತೆ, ಜಾತ್ರೆ ನಿಷೇಧ

ಮಂಡ್ಯ, ಡಿ.25– ಪಾಂಡವಪುರ ಪುರಸಭೆ ವಾರ್ಡ್ 2 ಮತ್ತು 9ಕ್ಕೆ ನಗರ ಸ್ಥಳೀಯ ಸಂಸ್ಥೆಗಳ ಉಪ ಚುನಾವಣೆ ಮತದಾನ ಡಿ.27ರಂದು ನಡೆಯಲಿದೆ.

ಮತದಾನ ನಡೆಯುವ ವಾರ್ಡ್ ವ್ಯಾಪ್ತಿ ಮುಕ್ತ ಮತ್ತು ನ್ಯಾಯೋಚಿತ ಚುನಾವಣೆ ನಡೆಸಲು ಜಾತ್ರೆ, ಸಂತೆ ಹಾಗೂ ಇನ್ನಿತರ ಉತ್ಸವ ನಿಷೇಧಿಸಿ ಜಿಲ್ಲಾಧಿಕಾರಿ ಡಾ. ಕುಮಾರ್ ಆದೇಶ ಹೊರಡಿಸಿದ್ದಾರೆ.

ವರಲಕ್ಷ್ಮೀ ನಿಧನ



ಕೆ.ಆರ್.ಪೇಟೆ, ಡಿ.25–ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ಫಾರ್ಮಸಿ ಅಧಿಕಾರಿ ಬಿ.ಎಸ್.ಸತೀಶ್ ಬಾಬು ಅವರ ತಾಯಿ ವರಲಕ್ಷ್ಮಿ (68) ಅನಾರೋಗ್ಯದಿಂದ ಸೋಮವಾರ ಮಧ್ಯಾಹ್ನ ನಿಧನರಾದರು. ಮೃತರು ಪತಿ, ಪುತ್ರ ಸತೀಶ್ ಬಾಬು ಸೇರಿದಂತೆ ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು–ಬಳಗ ಅಗಲಿದ್ದಾರೆ. ಮಂಗಳವಾರ ಮಧ್ಯಾಹ್ನ 1 ಗಂಟೆಗೆ ಹೊಸಹೊಳಲು ಚಿಕ್ಕಕೆರೆ ಸಮೀಪದ ಸಾರ್ವಜನಿಕ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಪಿಎಚ್.ಡಿ ಫೆಲೋಶಿಪ್‌ಗೆ ಅರ್ಜಿ ಆಹ್ವಾನ

ಮಂಡ್ಯ, ಡಿ.25– ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಪ್ರವರ್ಗ–1, 2(ಎ), 3(ಬಿ) ಹಾಗೂ ಒಬಿಸಿ ಗಳಿಗೆ ಸೇರಿದ 2023–24 ಸಾಲಿನ ಪಿಎಚ್.ಡಿ ವಿದ್ಯಾರ್ಥಿಗಳಿಗೆ ಮಾಸಿಕ 10 ಸಾವಿರದಂತೆ ವ್ಯಾಸಂಗ ವೇತನ /ಫೇಲೋಶಿಪ್ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಪ್ರಸಕ್ತ ಸಾಲಿನಲ್ಲಿ ವ್ಯಾಸಂಗ ಮುಂದುವರೆಸಿರುವ ಹಾಗೂ ಹೊಸ ವಿದ್ಯಾರ್ಥಿಗಳೂ ಸಹ ಅರ್ಜಿ ಸಲ್ಲಿಸಬಹುದಾಗಿದ್ದು, ಜ.10 ಕೊನೆ ದಿನ. ಹೆಚ್ಚಿನ ಮಾಹಿತಿಗೆ ದ:ೂ: 8050770004 ಅಥವಾ ಇಲಾಖಾ ವೆಬ್‌ಸೈಟ್ WWW. bcakward classes. kar.nic.in ಅನ್ನು ಸಂಪರ್ಕಿಸಬಹುದಾಗಿದೆ.

ರಸ್ತೆ ಅಭಿವೃದ್ಧಿಗೆ ಶಾಸಕ ರಮೇಶ್‌ಬಾಬು ಚಾಲನೆ



ಮಂಡ್ಯ, ಡಿ.25–ಶ್ರೀರಂಗಪಟ್ಟಣ ವಿಧಾನ ಸಭಾ ಕ್ಷೇತ್ರದ ಕೊತ್ತತ್ತಿ ಹೋಬಳಿಯ ವಿವಿಧ ಗ್ರಾಮಗಳಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ 2 ಕೋಟಿ ರೂ. ವೆಚ್ಚದಲ್ಲಿ ನಡೆಯುವ ರಸ್ತೆ ಹಾಗೂ ಚರಂಡಿ ಅಭಿವೃದ್ಧಿ ಕಾಮಗಾರಿಗೆ ಶಾಸಕ ಎ.ಬಿ.ರಮೇಶ್‌ಬಾಬು ಬಂಡಿಸಿದ್ದೇಗೌಡ ಭೂಮಿಪೂಜೆ ನೆರವೇರಿಸಿದರು.

ಯಲಿಯೂರು ಗ್ರಾಮದಿಂದ ಯಲಿಯೂರು ಕೋಡಿವರೆಗೆ ರಸ್ತೆ ಅಭಿವೃದ್ಧಿ, ವೈಯರಹಳ್ಳಿ ಹಾಗೂ ವೈಯರಹಳ್ಳಿ ಹೊಸ ಬಡಾವಣೆಯಲ್ಲಿ ರಸ್ತೆ ಹಾಗೂ ಚರಂಡಿ ಕಾಮಗಾರಿ, ವಿನಾಯಕ ಹಾಗೂ ಕಾವೇರಿ ನಗರ ಬಡಾವಣೆಯಲ್ಲಿ ರಸ್ತೆ ಕಾಮಗಾರಿಗೆ ಚಾಲನೆ ನೀಡಿದರು. ನಂತರ ಮಾತನಾಡಿದ ಶಾಸಕರು, ಚುನಾವಣೆ ಸಂದರ್ಭದಲ್ಲಿ ರಸ್ತೆಗಳನ್ನು ಅಭಿವೃದ್ಧಿ ಮಾಡಬೇಕೆಂದು ಜನಸಾಮಾನ್ಯರು ಒತ್ತಾಯ ಮಾಡಿದ್ದರು. ಜನರ ಭರವಸೆಗಳು ಭರವಸೆಯಾಗಿ ಉಳಿಯಬಾರದು ಎಂದು ಅಭಿವೃದ್ಧಿಗಳಿಗೆ ಚಾಲನೆ ನೀಡಲಾಗಿದೆ. ಹಂತ ಹಂತವಾಗಿ ಕಾವೇರಿ ನಗರದ ಕುಡಿಯುವ ನೀರು, ರಸ್ತೆ, ಯುಜಿಡಿ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ವಹಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಯಲಿಯೂರು ವಿಎಸ್‌ಎಸ್‌ಎನ್ ಅಧ್ಯಕ್ಷ ವೈ.ಎಚ್.ಹನುಮಂತು, ಮುಖಂಡರಾದ ವೈ.ಕೆ.ಕುಮಾರ್, ಡೈರಿ ರಾಜು, ದೊಣ್ಣೆ ಹನುಮಂತು, ಕರಿಗೌಡ, ಗ್ರಾಪಂ ಅಧ್ಯಕ್ಷೆ ಸುಧಾ, ಮುಖಂಡರಾದ ಕಾಳಶೇಖರ್, ರಘು, ಶಿವಶಂಕರ್, ಚಂದ್ರಶೇಖರ್, ದೇವೇಗೌಡ, ಅಶೋಕ್ ಕುಮಾರ್, ಶಿವಮಲ್ಲು, ಭಾಗ್ಯಲಕ್ಷ್ಮೀ, ಸುವರ್ಣಾವತಿ, ಇಂಜಿನಿಯರ್ ರಾಮಸ್ವಾಮಿ, ಗುತ್ತಿಗೆದಾರರಾದ ಶಶಿಕುಮಾರ್, ಮಂಜೇಶ್, ಅರುಣ್ ಹಾಜರಿದ್ದರು.



ರಾಜ್ಯ ಬಿಜೆಪಿ ನೂತನ ಉಪಾಧ್ಯಕ್ಷ ಎಂ.ರಾಜೇಂದ್ರ ಅವರನ್ನು ಬಿಜೆಪಿ ಯುವ ಮೋರ್ಚಾದಿಂದ ಆತ್ಮೀಯವಾಗಿ ಸನ್ಮಾನಿಸಲಾಯಿತು. ಈ ವೇಳೆ ನಗರಾಧ್ಯಕ್ಷ ಎಂ.ಜೆ.ಕಿರಣ್‌ಗೌಡ, ಚಾಮರಾಜ ಅಧ್ಯಕ್ಷ ಸೋಮಶೇಖರ್, ಪದಾಧಿಕಾರಿಗಳಾದ ಸಂತೋಷ ಕುಮಾರ್, ಕೀರ್ತಿ ಕುಮಾರ್, ಕಿರಣ್ ಕುಮಾರ್, ಪುನೀತ್, ಕಾರ್ತಿಕ್, ಮರಿಯಪ್ಪ, ಕೆಂಚ, ಮಧು, ಗಿರೀಶ್‌ಗೌಡ, ನವೀನ್ ಶೆಟ್ಟಿ ಸೇರಿದಂತೆ ಇನ್ನಿತರರಿದ್ದರು.

ಮಾಲ್‌ನಲ್ಲಿ ಕ್ರಿಸ್‌ಮಸ್ ಟ್ರೀ: ಸಿಬ್ಬಂದಿಗೆ ಬೆದರಿಕೆ; ಪುನೀತ್ ಕೆರೆಹಳ್ಳಿ ವಿರುದ್ಧ FIR



ಬೆಂಗಳೂರು: ಕ್ರಿಸ್‌ಮಸ್ ಹಿನ್ನಲೆಯಲ್ಲಿ ಮಾಲ್‌ನಲ್ಲಿ ಕ್ರಿಸ್‌ಮಸ್ ಟ್ರೀ ಹಾಕಿದ ಕಾರಣಕ್ಕೆ ಸಿಬ್ಬಂದಿಗೆ ಬೆದರಿಕೆ ಹಾಕಿದ ಆರೋಪದ ಮೇರೆಗೆ ಹಿಂದೂಪರ ಕಾರ್ಯಕರ್ತ ಪುನೀತ್ ಕೆರೆಹಳ್ಳಿ ವಿರುದ್ಧ ಎಫ್ ಐಆರ್ ದಾಖಲಾಗಿದೆ.

ಕ್ರಿಸ್ಮಸ್ ಟ್ರೀ ಪ್ರದರ್ಶನ ಹಾಗೂ ಟಿಕೆಟ್ ನಿಗದಿಪಡಿಸಿರುವುದನ್ನು ವಿರೋಧಿಸಿ ಮಾಲ್ ಸಿಬ್ಬಂದಿಗೆ ಬೆದರಿಕೆ ಹಾಕಿರುವ ಆರೋಪದ ಮೇಲೆ ಹಿಂದೂಪರ ಕಾರ್ಯಕರ್ತ ಪುನೀತ್ ಕೆರೆಹಳ್ಳಿ ಮತ್ತು ಅವರ ನಾಲ್ವರು ಬೆಂಬಲಿಗರ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಬ್ಯಾಟರಾಯನಪುರದ ಮಾಲ್ ಆಫ್ ಏಷ್ಯಾದ ಸೆಕ್ಯೂರಿಟಿ ಅಸಿಸ್ಟೆಂಟ್ ಮ್ಯಾನೇಜರ್ ಸ್ಟೀಫನ್ ವಿಕ್ಟರ್ ನೀಡಿರುವ ದೂರಿನ ಅನ್ವಯ ಕೊಡಿಗೆಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೂಲಗಳ ಪ್ರಕಾರ ಡಿಸೆಂಬರ್ 23 ರಂದು ಮಧ್ಯಾಹ್ನ ಬ್ಯಾಟರಾಯನಪುರದ ಮಾಲ್ ಆಫ್ ಏಷ್ಯಾ ಬಳಿ ತೆರಳಿದ್ದ ಪುನೀತ್ ಕೆರೆಹಳ್ಳಿ ಮತ್ತವರ ಬೆಂಬಲಿಗರು, ಮಾಲ್ ಒಳಗೆ ಕ್ರಿಸ್ಮಸ್ ಟ್ರೀ ಪ್ರದರ್ಶನ ಹಾಗೂ ಅದಕ್ಕೆ 200 ರೂ. ಟಿಕೆಟ್ ನಿಗದಿಪಡಿಸಿರುವುದನ್ನು ವಿರೋಧಿಸಿದ್ದಾರೆ. ಈ ವೇಳೆ ಮಾಲ್‌ನ ಸೆಕ್ಯೂರಿಟಿ ಅಸಿಸ್ಟೆಂಟ್ ಮ್ಯಾನೇಜರ್ ಸ್ಟೀಫನ್ ವಿಕ್ಟರ್ ಬಳಿ ವಾಗ್ವಾದ ನಡೆಸಿದ್ದಾರೆ ಎಂದು ದೂರಲಾಗಿದೆ. ಅಲ್ಲದೇ ಡಿಸೆಂಬರ್ 25 ಹಾಗೂ 31ರಂದು ಅದೇ ರೀತಿ ಗಲಾಟೆ ಮಾಡುವುದಾಗಿ ತಿಳಿಸಿ, ಜೀವ ಬೆದರಿಕೆ ಹಾಕಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ಸದ್ಯ ಮಾಲ್‌ನ ಸೆಕ್ಯೂರಿಟಿ ಅಸಿಸ್ಟೆಂಟ್ ಮ್ಯಾನೇಜರ್ ಸ್ಟೀಫನ್ ವಿಕ್ಟರ್ ನೀಡಿರುವ ದೂರಿನ ಮೇರೆಗೆ ಪುನೀತ್ ಕೆರೆಹಳ್ಳಿ ಸೇರಿದಂತೆ ಐವರ ವಿರುದ್ಧ ಕೊಡಿಗೆಹಳ್ಳಿ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಹುಣಸೂರು ಕ್ಲಬ್ ನೂತನ ಅಧ್ಯಕ್ಷ, ಗೌರವ ಕಾರ್ಯದರ್ಶಿ ಆಯ್ಕೆ



ಚರಮಣ್ಣ



ಜಯರಾಮು

ಹುಣಸೂರು: ಹುಣಸೂರಿನ ಪ್ರತಿಷ್ಠಿತ ಹುಣಸೂರು ಕ್ಲಬ್‌ಗೆ ಇತ್ತೀಚೆಗೆ ನೂತನ ಪದಾಧಿಕಾರಿಗಳ ಆಯ್ಕೆಗೆ ಚುನಾವಣೆ ನಡೆದು ಅಧ್ಯಕ್ಷರಾಗಿ ಹಿರಿಯ ನ್ಯಾಯವಾದಿ ಎಂ.ಬಿ. ಚರಮಣ್ಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಗೌರವ ಕಾರ್ಯದರ್ಶಿಯಾಗಿ ಹಿರಿಯ ರಂಗಕರ್ಮಿ ಎಸ್. ಜಯರಾಮು ಆಯ್ಕೆಯಾಗಿದ್ದಾರೆ.



ಚಾಮರಾಜ ವಿಧಾನಸಭಾ ಕ್ಷೇತ್ರದ 23ನೇ ವಾರ್ಡ್‌ನ ಶ್ರೀಮಹಾಲಕ್ಷ್ಮಿ ಕೊಲ್ಲಾಪುರದಮ್ಮನವರ ದೇವಾಲಯದಲ್ಲಿ ಶಾಸಕ ಕೆ.ಹರೀಶ್‌ಗೌಡ 2024ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ ಮಾಡಿದರು. ಈ ವೇಳೆ ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಕೆಪಿಸಿಸಿ ಸದಸ್ಯ ಲೋಕೇಶ್ ರಾವ್, ನಗರಪಾಲಿಕೆ ಮಾಜಿ ಸದಸ್ಯರಾದ ಶಿವಣ್ಣ, ನಾಗಭೂಷಣ್, ಕುರುಬರ ಸಂಘದ ಅಧ್ಯಕ್ಷ ಸುಬ್ರಹ್ಮಣ್ಯ, ಕಾರ್ಯಕರ್ತ ಶ್ರೀನಿವಾಸ್, ದೇವರಾಜ ಬ್ಲಾಕ್ ಕಾರ್ಯದರ್ಶಿ ಮಂಜುನಾಥ್, ಸಯ್ಯದ್ ಅಬ್ರಾರ್, 23ನೇ ವಾರ್ಡ್ ಕಾಂಗ್ರೆಸ್ ಮುಖಂಡರಾದ ರಾಜೀವ್, ಆನಂದ್, ಮಾದೇವ್, ಜ್ಞಾನೇಶ್, ಮಂಗಳಮ್ಮ, ಶಾಂತಮ್ಮ, ಮಂಜುಳಮ್ಮ, ಲೀಲಮ್ಮ, ಶ್ರೀಕಾಂತ್, ಚಂದ್ರಶೇಖರ್, ಪವನ್ ಉಪಸ್ಥಿತರಿದ್ದರು.

ಹುಲ್ಲಹಳ್ಳಿ ಡೇರಿಗೆ 12 ನಿರ್ದೇಶಕರ ಆಯ್ಕೆ

ಹುಲ್ಲಹಳ್ಳಿ, ಡಿ.25– ಹುಲ್ಲಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಆಡಳಿತ ಮಂಡಳಿಗೆ ನಡೆದ ಚುನಾವಣೆಯಲ್ಲಿ 12 ಮಂದಿ ನಿರ್ದೇಶಕರಾಗಿ ಆಯ್ಕೆಗೊಂಡಿದ್ದಾರೆ.

ಸಾಮಾನ್ಯ ಕ್ಷೇತ್ರದಿಂದ ಅಶೋಕ್, ಬಸವರಾಜು, ಮಂಜುನಾಥ್, ಎಚ್.ಎಸ್. ರೇವಣ್ಣ, ಕುಮಾರ, ಎಚ್.ಎಮ್. ರೇವಣ್ಣ, ಪರಿಶಿಷ್ಟ ಪಂಗಡದಿಂದ ನಂಜುಂಡ ನಾಯ್ಕ ಹಿಂದುಳಿದ ವರ್ಗ ಬಿಯಿಂದ ಗಿರಿರಾಜ್, ಮಹಿಳಾ ಮೀಸಲಾತಿಯಿಂದ ಮಂಜುಳಾ, ರಾಜಮ್ಮ, ಪರಿಶಿಷ್ಟ ಜಾತಿ ವಿಭಾಗದಿಂದ ಲಕ್ಷ್ಮಮ್ಮನವರು ಆಯ್ಕೆಗೊಂಡಿದ್ದಾರೆ ಎಂದು ಚುನಾವಣಾಧಿಕಾರಿ ರಾಜು ಪ್ರಕಟಿಸಿದ್ದಾರೆ.

ಮುಖಂಡರುಗಳಾದ ಗ್ರಾಂಪಂ ಮಾಜಿ ಅಧ್ಯಕ್ಷ ಎಚ್ ಎನ್ ಮಹೇಶ್ ಪಿಎಸಿಸಿ ಬ್ಯಾಂಕ್ ನಿರ್ದೇಶಕ ಮಹೇಶ್, ರೇಣುಕಾ ಪ್ರಸಾದ್, ಬ್ರಿಟಾನಿಯಾ ಯೋಗಿ, ಎಲೆಕ್ಟ್ರಿಕಲ್ ಕುಮಾರ್, ದಿಲೀಪ್ ಹಾಗೂ ಕಾರ್ಯದರ್ಶಿ ಪ್ರಕಾಶ್, ಹಾಲು ಪರೀಕ್ಷಕ ಕುಮಾರ್ ಸೇರಿದಂತೆ ಇನ್ನೂ ಮುಂತಾದವರು ಹಾಜರಿದ್ದರು.



ಸೋಮವಾರ ಹುಟ್ಟುಹಬ್ಬ ಆಚರಿಸಿಕೊಂಡ ಮೈಸೂರು ನಗರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಆರ್.ಮೂರ್ತಿ ಅವರನ್ನು ಎಸ್.ಎಂ. ಕೃಷ್ಣ ಅಭಿಮಾನಿ ಬಳಗದ ಅಧ್ಯಕ್ಷರೂ ಆದ ಹಿರಿಯ ಕಾಂಗ್ರೆಸ್ ಮುಖಂಡ ವಿಕ್ರಾಂತ್ ಪಿ.ದೇವೇಗೌಡ, ಹೆಚ್.ಎಸ್.ವೆಂಕಟಸುಬ್ಬಯ್ಯ, ಗಣೇಶ್, ಮಹದೇವ್ ಪಾಂಡೆ ಇನ್ನಿತರರು ಅಭಿನಂದಿಸಿದರು.



ಇತ್ತೀಚೆಗೆ ಬೆಳಗಾವಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಿಕ್ಕೇರಿ ಸಮೀಪದ ಮಾಕವಳ್ಳಿ ಕೋರಮಂಡಲ್ ಸಕ್ಕರೆ ಕಾರ್ಖಾನೆಗೆ ಕೇಂದ್ರ ವಲಯ(ಜೋನ್)ದ ದಕ್ಷಿಣ ಕರ್ನಾಟಕ ವಿಭಾಗದ ಅತ್ಯಾಧುನಿಕ ತಂತ್ರಜ್ಞಾನ ಹೊಂದಿದ ಶ್ರೇಷ್ಠ ಸಕ್ಕರೆ ಕಾರ್ಖಾನೆ ಎಂದು ಸಕ್ಕರೆ ಸಚಿವ ಶಿವಾನಂದ ಪಾಟೀಲ್ ಕಾರ್ಖಾನೆ ಹಿರಿಯ ಉಪಾಧ್ಯಕ್ಷ ವಿ.ಜೆ.ರವಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿದರು. ಸಕ್ಕರೆ ಆಯುಕ್ತ ರವಿಕುಮಾರ್, ಖಂದಗಾವಿ ಇದ್ದರು.

ನಾಗಮಂಗಲದಲ್ಲಿ ಹನುಮ ಜಯಂತಿ ಆಚರಣೆ

ನಾಗಮಂಗಲ, ಡಿ.25–ಪಟ್ಟಣದ ಪುರಾತನ ಕಾಲದ ಬಿ.ಎಂ.ರಸ್ತೆಯ ಶ್ರೀ ಆಂಜನೇಯಸ್ವಾಮಿ ದೇವಾಲಯದಲ್ಲಿ ಹನುಮ ಜಯಂತಿ ಪ್ರಯುಕ್ತ ದೇವಾಲಯದ ಭಕ್ತ ಮಂಡಳಿ ವತಿಯಿಂದ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

ತಾಲೂಕಿನ ವಿವಿಧ ಗ್ರಾಮಗಳಿಂದ ಭಕ್ತರು ಆಗಮಿಸಿ, ದೇವರ ದರ್ಶನ ಪಡೆದರು. ದೇವಸ್ಥಾನಕ್ಕೆ ವಿಶೇಷ ದೀಪಾಲಂಕಾರ, ಹೂವಿನ ಅಲಂಕಾರ ಮಾಡಲಾಗಿತ್ತು. ಅರ್ಚಕರಾದ ಮಂಜುನಾಥ್ ಭಟ್ರು ಹಾಗೂ ಗಣೇಶ್ ಭಟ್ರು ನೇತೃತ್ವದಲ್ಲಿ ಲೋಕಕಲ್ಯಾಣಾರ್ಥವಾಗಿ ಆಂಜನೇಯಸ್ವಾಮಿ ಸನ್ನಿಧಿಯಲ್ಲಿ ಹನುಮನಿಗೆ ವಿಶೇಷ ಪೂಜೆ, ಹೋಮ, ಹವನ, ಮಹಾಮಂಗಳಾರತಿ ನೆರವೇರಿಸಲಾಯಿತು. ನಂತರ ಅನ್ನಸಂತರ್ಪಣೆ ನಡೆಯಿತು. ಬೆಟ್ಟದ ಆಂಜನೇಯ, ಪಡುವಲ ಆಂಜನೇಯ, ಹೆಬ್ಬಾಗಿಲು ಆಂಜನೇಯ, ಹುಲೇಸಲೇ ಆಂಜನೇಯ, ಉಪ್ಪಾರಹಳ್ಳಿ ಆಂಜನೇಯ, ಚನ್ನಾ ಆಂಜನೇಯ ದೇವಾಲಯದಲ್ಲಿ ಬೆಳಗಿನಿಂದ ಹೋಮ, ಪಂಚಾಮೃತ ಅಭಿಷೇಕ, ಹನುಮನಿಗೆ ಹೂಗಳಿಂದ ಅಲಂಕಾರ ಮಾಡಿ, ಹನುಮ ಜಯಂತಿಯನ್ನು ಭಕ್ತಿಯಿಂದ ಆಚರಿಸಲಾಯಿತು.

ಸಂಗೀತ ನಾದಕ್ಕೆ ಮನೋಚಿಕಿತ್ಸೆ ಗುಣವಿದೆ



ಮೈಸೂರು, ಡಿ. 25– ಇದು ಒಂದರ್ಥದಲ್ಲಿ ಕ್ಯಾಲೆಂಡರ್ ಯುಗ! ಪ್ರತಿಯೊಂದು ಸಂಸ್ಥೆಯೂ ಪ್ರತಿವರ್ಷ ತನ್ನದೇ ಕ್ಯಾಲೆಂಡರ್ ಹೊರತರುತ್ತದೆ. ಬರಿಯ ಪಂಚಾಂಗವಾದರೆ ಸಾಲದು, ಕ್ಯಾಲೆಂಡರ್; ಒಂದು ಸಾಹಿತ್ಯ ಕೃತಿಯೋ ಕಲಾಕೃತಿಯೋ ಆಗಿರಬೇಕು. ಎಂದಿನಂತೆ ಈ ವರ್ಷ ಸಂವಹನ ಪ್ರಕಾಶನ ಹೊರತಂದಿರುವ ಕ್ಯಾಲೆಂಡರ್ ಸಾಹಿತ್ಯಕವೂ ಆಗಿದೆ!

ಎಂಟು ಮಂದಿ ಜ್ಞಾನಪೀಠ ಪುರಸ್ಕೃತರ ಮತ್ತು ನಾಲ್ಕು ಮಂದಿ ಇತರ ಹಿರಿಯ ಸಾಹಿತಿಗಳ ಭಾವಚಿತ್ರ, ಅವರ ಚೊಕ್ಕ ಪರಿಚಯ ಈ ದಿನದರ್ಶಿಕೆ ಒಳಗೊಂಡಿದೆ. ಸುಂದರವಾಗಿ ಮುದ್ರಿತವಾಗಿರುವ ಈ ವಿಶಿಷ್ಟ ಕ್ಯಾಲೆಂಡರ್ ಎಲ್ಲರಿಗೂ ಉಪಯುಕ್ತವಾಗಿದೆ. ಕನ್ನಡ ಅಂಕಿಗಳನ್ನು ಬಳಸಿರುವುದೂ ಈ ದಿನದರ್ಶಿಕೆಯ ಒಂದು ವೈಶಿಷ್ಟ್ಯ. ಸಂವಹನ ಪ್ರಕಾಶಕ ರಾದ ಡಿ.ಎನ್. ಲೋಕಪ್ಪನವರು ವಿಶೇಷ ಕಾಳಜಿಯಿಂದ ಇದನ್ನು ರೂಪಿಸಿದ್ದಾರೆ.

ಪ್ರಕಾಶನ ತಪಸ್ವಿಯಾಗಿ ಸಾವಿರಾರು ಪುಸ್ತಕಗಳನ್ನು ಆಸ್ಥೆಯಿಂದ ಅಂದವಾಗಿ ಮುದ್ರಿಸಿರುವ 'ಸಂವಹನ'ದ ಹೆಮ್ಮೆಯ ಪ್ರಕಟಣೆಯಾಗಿದೆ ಈ ಕ್ಯಾಲೆಂಡರ್.

ಎಸ್. ರಾಮಪ್ರಸಾದ್ ಅವರ "ಮುಪ್ಪಿಗೆ ನೆನಪೇ ಸಂಜೀವಿನಿ" ಪುಸ್ತಕ ಲೋಕಾರ್ಪಣೆ ಸಂದರ್ಭದಲ್ಲಿ ಹಿರಿಯ ವಿದ್ವಾಂಸರಾದ ಡಾ. ಸಿ.ಪಿ.ಕೆ. ಅವರು ಈ ಕ್ಯಾಲೆಂಡರ್ ಲೋಕಾರ್ಪಣೆ ಮಾಡಿದರು.



ತಿ.ನರಸೀಪುರ ಪಟ್ಟಣದ ಪೂಜಿತ್ ಮೆಡಿಕಲ್ ಮಾಲೀಕ ಕುಮಾರ್ ಹೊರತಂದಿರುವ ನೂತನ ವರ್ಷದ ದಿನದರ್ಶಿಕೆಯನ್ನು ಸಿದ್ದಲಿಂಗಶಿವಾಚಾರ್ಯ ಸ್ವಾಮಿಗಳು ಬಿಡುಗಡೆ ಮಾಡಿದರು. ಈ ವೇಳೆ ಜೆಎಸ್ ಎಸ್ ಕಾರ್ಯದರ್ಶಿ ಮಂಜುನಾಥ್, ಉದಯ್, ಪೂಜಿತ್ ಮೆಡಿಕಲ್ ಮಾಲೀಕ ಕುಮಾರ್, ವಕೀಲ ಜ್ಞಾನೇಂದ್ರ ಮೂರ್ತಿ, ಕುರುಬೂರು ಬೃಂಗೀಶ್, ಫ್ಯಾನ್ಸಿಮೋಹನ್, ತಾಯೂರು ಪ್ರಕಾಶ್, ಸಿದ್ದಲಿಂಗಸ್ವಾಮಿ, ಹೆಳವರ ಹುಂಡಿ ಮೂರ್ತಿ, ಅಕ್ಕಿ ನಾಗಪ್ಪ, ಮತ್ತಿತರರಿದ್ದರು.

ಜನಾರ್ದನ ರೆಡ್ಡಿ ಬಂಧಿಸಿದ್ದ ಸಿಬಿಐ ಅಧಿಕಾರಿ ರಾಜಕೀಯಕ್ಕೆ: ಹೊಸ ಪಕ್ಷ ಸ್ಥಾಪಿಸಿದ ವಿ.ವಿ.ಲಕ್ಷ್ಮೀನಾರಾಯಣ

ವಿಜಯವಾಡ: ಕರ್ನಾಟಕದ ಮಾಜಿ ಸಚಿವ ಗಾಲಿ ಜನಾರ್ದನ ರೆಡ್ಡಿ ಅವರನ್ನು ಓಬಳಾಪುರಂ ಅಕ್ರಮ ಗಣಿಗಾರಿಕೆಗೆ ಸಂಬಂಧಿಸಿದಂತೆ ಬಂಧಿಸಿದ್ದ ಹಾಗೂ ಸಿಬಿಐ ಜಂಟಿ ನಿರ್ದೇಶಕರಾಗಿದ್ದಾಗ ಅನೇಕ ಹೈಪ್ರೊಫೈಲ್ ಹಗರಣಗಳ ತನಿಖೆ ನಡೆಸಿದ್ದ ವಿ.ವಿ. ಲಕ್ಷ್ಮೀನಾರಾಯಣ ಅವರು ಆಂಧ್ರಪ್ರದೇಶದಲ್ಲಿ ಹೊಸ ರಾಜ ಕೀಯ ಪಕ್ಷ ಸ್ಥಾಪನೆ ಘೋಷಿಸಿದ್ದಾರೆ. ಅವರ ಹೊಸ ಪಕ್ಷಕ್ಕೆ 'ಜೈ ಭಾರತ್ ನ್ಯಾಷನಲ್ ಪಾರ್ಟಿ (ಜೆಬಿಎನ್‌ಪಿ) ಎಂದು ಹೆಸರಿಡಲಾಗಿದೆ.

ಸಿಬಿಐ ಜಂಟಿ ನಿರ್ದೇಶಕ (ಜೆ.ಡಿ.) ಆಗಿದ್ದಕ್ಕೆ ಲಕ್ಷ್ಮೀನಾರಾಯಣ ಅವರು 'ಜೆ.ಡಿ.' ಲಕ್ಷ್ಮೀನಾರಾಯಣ ಎಂದೇ ಖ್ಯಾತರಾಗಿದ್ದರು. ಮಹಾರಾಷ್ಟ್ರ ಕೇಡರ್ ಐಪಿಎಸ್ ಅಧಿಕಾರಿಯಾದ ಅವರು ಆಂಧ್ರದಲ್ಲಿ ನಿಯೋಜನೆ ಮೇರೆಗೆ ಕೆಲಸ ಮಾಡಿದ್ದರು. 2018ರಲ್ಲಿ ಸ್ವಯಂ ನಿವೃತ್ತಿ ಪಡೆದು ರಾಜಕೀಯ ಸೇರಿದ್ದರು. 2019ರ ಲೋಕಸಭೆ ಚುನಾವಣೆಯಲ್ಲಿ ಅವರು ನಟ ಪವನ್ ಕಲ್ಯಾಣ್ ಅವರ ಜನಸೇನಾ ಟಿಕೆಟ್‌ನಿಂದ ವಿಶಾಖಪಟ್ಟಣದಲ್ಲಿ ಸ್ಪರ್ಧಿಸಿ ಸೋತಿದ್ದರು. ನಂತರ ಪವನ್ ಜತೆ ಭಿನ್ನಾಭಿಪ್ರಾಯದ ಕಾರಣ ಜನಸೇನಾ ಪಕ್ಷ ತೊರೆದಿದ್ದರು. ಈಗ ಹೊಸ ಪಕ್ಷ ಜೆಬಿಎನ್‌ಪಿ ಸ್ಥಾಪನೆ ಘೋಷಣೆ ಮಾಡಿದ್ದಾರೆ.

ಹೈಪ್ರೊಫೈಲ್ ಹಗರಣಗಳ ತನಿಖೆ: ಹೈದರಾಬಾದ್‌ನಲ್ಲಿ ಅವರು ಸಿಬಿಐನ ಜಂಟಿ ನಿರ್ದೇಶಕರಾಗಿ ಕೆಲಸ ಮಾಡುತ್ತಿರುವ ವೇಳೆ ಸತ್ಯಂ ಕಂಪ್ಯೂಟರ್ಸ್, ಓಬಳಾಪುರಂ ಮೈನಿಂಗ್ ಕಾರ್ಪೊರೇಷನ್ (ಒಎಂಸಿ) ಹಗರಣ, ಎಮ್ಮಾರ್ ಹಗರಣದ ತನಿಖೆ ನಡೆಸಿದ್ದರು. ಈ ಗಣಿ ಹಗರಣದಲ್ಲಿ ಗಾಲಿ ಜನಾರ್ದನ ರೆಡ್ಡಿ ಅವರನ್ನು 2011ರಲ್ಲಿ ಬಂಧಿಸಿದ್ದರು. ಇದೇ ವೇಳೆ, ವೈಎಸ್ಆರ್ ಕಾಂಗ್ರೆಸ್ ಅಧ್ಯಕ್ಷ ಹಾಗೂ ಹಾಲಿ ಆಂಧ್ರ ಪ್ರದೇಶ ಸಿಎಂ ವಿರುದ್ಧ ಅಕ್ರಮ ಆಸ್ತಿ ಪ್ರಕರಣ ದಾಖಲಿಸಿದ್ದರು.

ವಿಶೇಷ ರೀತಿ ವಾಜಪೇಯಿ ಜನ್ಮದಿನ ಆಚರಣೆ



ಮೈಸೂರು, ಡಿ.25(ಎಸ್‌ಬಿಡಿ)– ಮೈಸೂರು ಹಿನಕಲ್‌ನ ಅಟಲ್ ಬಿಹಾರಿ ವಾಜಪೇಯಿ ವೃತ್ತ(ಫ್ಲೈಓವರ್ ಜಂಕ್ಷನ್)ದಲ್ಲಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನಾಚರಣೆ ಹಾಗೂ ಉತ್ತಮ ಆಡಳಿತ ದಿನವನ್ನು ಸೋಮವಾರ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಇದರ ಅಂಗವಾಗಿ ಬಿಜೆಪಿ ಚಾಮುಂಡೇಶ್ವರಿ ಕ್ಷೇತ್ರ ಘಟಕದ ವತಿಯಿಂದ ಸ್ವಚ್ಛತಾ ಅಭಿಯಾನ ಕೈಗೊಳ್ಳಲಾಗಿತ್ತು. ಇದೇ ವೇಳೆ ಕ್ಷೇತ್ರದ ಅಧ್ಯಕ್ಷ ಗೆಜ್ಜಗಳ್ಳಿ ಮಹೇಶ್, ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಕವೀಶ್ ಗೌಡ ಹಿನಕಲ್ ಸರ್ಕಾರಿ ಪ್ರೌಢಶಾಲೆಯ ಮಕ್ಕಳಿಗೆ ಬ್ಯಾಗ್ ವಿತರಿಸಿದರು.

ಈ ಸಂದರ್ಭದಲ್ಲಿ ಹಿರಿಯ ಮುಖಂಡ ಶ್ರೀನಿವಾಸ್, ಮಹೇಂದ್ರ, ಪ್ರಧಾನ ಕಾರ್ಯದರ್ಶಿಗಳಾದ ಪೈ.ಟಿ.ರವಿ, ಈರಪ್ಪ, ರಾಜಕುಮಾರ್, ಗಣೇಶ್, ಗೋಪಾಲ್, ಮರಿಸ್ವಾಮಿ ನಾಯಕ್, ನಾರಾಯಣ್, ಶಂಭು ಪಟೇಲ್, ವೆಂಕಟೇಶ್ ರಾವ್, ಚೇತನ್, ಸೋಮಶೇಖರ್, ಮೋಹನ್, ರಾಜು, ಮಂಜುಳ, ಶಾಲಿನಿ, ಇಂದಿರಾ, ನೇಹಾ, ಕುಮಾರ್, ಚಂದ್ರು, ಪ್ರಭು, ಪೃಥ್ವಿ, ಪ್ರಸಾದ್, ಮದಕರಿನಾಯಕ, ಕೃಷ್ಣ ಸೇರಿದಂತೆ ಪಕ್ಷದ ಹಲವು ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

ರಾಮಮಂದಿರ ಉದ್ಘಾಟನೆಗೆ ಸೀತಾಮಾತೆ ತವರು ನೇಪಾಳದಿಂದ ವಿಶೇಷ ಉಡುಗೊರೆ



ಅಯೋಧ್ಯೆ: ಮುಂದಿನ ತಿಂಗಳು ಅಯೋಧ್ಯೆಯಲ್ಲಿ ನಡೆಯಲಿರುವ ರಾಮ ಮಂದಿರ ಉದ್ಘಾಟನಾ ಸಮಾರಂಭಕ್ಕೆ ಸೀತಾಮಾತೆಯ ತವರು ನೇಪಾಳದಿಂದ ವಿಶೇಷ ಉಡುಗೊರೆಗಳು ಆಗಮಿಸುತ್ತಿವೆ.

ನೇಪಾಳ, ಅಯೋಧ್ಯೆಗೆ ವಿವಿಧ ರೀತಿಯ ಆಭರಣಗಳು, ಪಾತ್ರೆಗಳು, ಬಟ್ಟೆಗಳು ಮತ್ತು ಸಿಹಿತಿಂಡಿಗಳನ್ನು ಒಳಗೊಂಡ ವಿಶೇಷ ಸ್ಮಾರಕಗಳನ್ನು ಕಳುಹಿಸಲಿದೆ ಎಂದು ಹೇಳಲಾಗಿದೆ. ಈ ಬಗ್ಗೆ ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿದ್ದು, ಸ್ಮರಣಿಕೆಗಳನ್ನು ವಿತರಿಸಲು ಜನಕಪುರ ಧಾಮ–ಅಯೋಧ್ಯಧಾಮ ಪ್ರಯಾಣವನ್ನು ಕೈಗೊಳ್ಳಲಾಗುವುದು ಎಂದು ಮೈ ರಿಪಬ್ಲಿಕಾ ಪತ್ರಿಕೆ ವರದಿ ಮಾಡಿದೆ.

ಜನವರಿ 18 ರಂದು ಪ್ರಾರಂಭವಾಗುವ ಪ್ರಯಾಣವು ಜನವರಿ 20 ರಂದು ಅಯೋಧ್ಯೆಯಲ್ಲಿ ಮುಕ್ತಾಯಗೊಳ್ಳಲಿದೆ ಮತ್ತು ಅದೇ ದಿನ ಸ್ಮಾರಕಗಳನ್ನು ಶ್ರೀ ರಾಮ ಜನ್ಮಭೂಮಿ ರಾಮಮಂದಿರ ಟ್ರಸ್ಟ್‌ಗೆ ಹಸ್ತಾಂತರಿಸಲಾಗುವುದು ಎಂದು ಜಾನಕಿ ದೇವಸ್ಥಾನದ ಜಂಟಿ ಮಹಾಂತ ರಾಮ ರೋಷನ್ ದಾಸ್ ವೈಷ್ಣವ್ ತಿಳಿಸಿದ್ದಾರೆ.

ಜನವರಿ 22 ರಂದು ಪ್ರತಿಷ್ಠಾಪನೆ ಸಮಾರಂಭ' ನಡೆಯಲಿದ್ದು, ಜನಕ್‌ಪುರಧಾಮ್‌ನಿಂದ ಜಲೇಶ್ವರನಾಥ್, ಮಲಂಗ್ವಾ, ಸಿಮ್ರೌಂಗಧ್, ಗಧಿಮಾಯಿ, ಬಿರ್‌ಗುಂಜ್ ಮೂಲಕ ಬೇಟಿಯಾ, ಕುಶಿನಗರ, ಸಿದ್ಧಾರ್ಥನಗರ, ಗೋರಖ್‌ಪುರ ಮಾರ್ಗವಾಗಿ ಉತ್ತರ ಪ್ರದೇಶದ ಅಯೋಧ್ಯೆ ತಲುಪಲಿದೆ.

ಮೈಸೂರಿನ ಸಾಂಸ್ಕೃತಿಕ ನೆಲದಲ್ಲಿ ರಂಗ ಚಟುವಟಿಕೆಗಳಿಗೆ ಬರವಿಲ್ಲ

● ಮಾಜಿ ಸಚಿವೆ, ವಿಧಾನಪರಿಷತ್ ಸದಸ್ಯೆ ಉಮಾಶ್ರೀ ಅಭಿಮತ
● ನಿರಂತರ ರಂಗ ಉತ್ಸವದ ಸಮಾರೋಪದಲ್ಲಿ ಭಾಗಿ



ಮೈಸೂರು, ಡಿ.25(ಎಸ್‌ಬಿಡಿ)– ರಂಗದ ತೇರು ಎಳೆಯಲು ಸರ್ಕಾರದ ಪ್ರೋತ್ಸಾಹ ತುಂಬಾ ಮುಖ್ಯ. ಈ ನಿಟ್ಟಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಲ್ಲಿ ಮನವಿ ಮಾಡುತ್ತೇನೆ ಎಂದು ವಿಧಾನಪರಿಷತ್ ಸದಸ್ಯೆ, ಮಾಜಿ ಸಚಿವೆ ಉಮಾಶ್ರೀ ತಿಳಿಸಿದರು.

ಮೈಸೂರಿನ ಕಿರುರಂಗಮಂದಿರ ಆವರಣದಲ್ಲಿ ನಿರಂತರ ಫೌಂಡೇಶನ್ ವತಿಯಿಂದ ನಡೆದ 'ನಿರಂತರ ರಂಗ ಉತ್ಸವ'ದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಹಿಂದಿನ ಐದು ವರ್ಷಗಳಿಗೆ ಹೋಲಿಕೆ ಮಾಡಿದರೆ ಈ ಐದು ವರ್ಷಗಳಲ್ಲಿ ರಂಗಭೂಮಿ, ರಂಗಕರ್ಮಿಗಳು ಹಾಗೂ ರಂಗ ಸಂಸ್ಥೆಗಳಿಗೆ ಸರಿಯಾದ ಪ್ರೋತ್ಸಾಹ ಲಭಿಸಿಲ್ಲ ಎಂಬುದು ಕಲಾವಿದೆಯಾದ ನನಗೆ ದುಃಖದ ಸಂಗತಿ ಎಂದರು.

ರಂಗ ಚಟುವಟಿಕೆಗಳು ಕ್ರಿಯಾತ್ಮಕ, ರಚನಾತ್ಮಕ ಹಾಗೂ ಸಕ್ರಿಯವಾಗಿ ಇರಬೇಕಾದರೆ ಸರ್ಕಾರಗಳ ಸಹಕಾರ ತುಂಬಾ ಮುಖ್ಯ. ರಂಗ ಸಂಸ್ಥೆಗಳಿಗೆ ಅನುದಾನ ನೀಡುವ ಮೂಲಕ ಅವುಗಳನ್ನು ಗಟ್ಟಿಗೊಳಿಸಿದಾಗ ಮಾತ್ರ ರಂಗ ತೇರನ್ನು ಮುಂದಕ್ಕೆಳೆಯಲು ಸಾಧ್ಯ. ಈ ಬಗ್ಗೆ ನಾನು, ಕನ್ನಡ ಮತ್ತು ಸಂಸ್ಕೃತಿ ಸಚಿವರಾದ ಶಿವರಾಜ ತಂಗಡಗಿ ಅವರ ಗಮನಕ್ಕೆ ತರುತ್ತೇನೆ. ಸಾಂಸ್ಕೃತಿಕ ಚಟುವಟಿಕೆಗಳಿಗೆ ಹೆಚ್ಚು ಪ್ರೋತ್ಸಾಹ ನೀಡುವಂತೆ ಮನವಿ ಮಾಡುತ್ತೇನೆ ಎಂದು ಭರವಸೆ ನೀಡಿದರು.

ನಾನು ಇಲಾಖೆ ಸಚಿವೆಯಾಗಿದ್ದಾಗ ರಾಜ್ಯದ ಎಲ್ಲಾ ರಂಗಮಂದಿರಗಳ ಬಾಡಿಗೆಯನ್ನು ಕಡಿಮೆ ಮಾಡಿ, 2,500 ರಿಂದ 3 ಸಾವಿರ ರೂ. ನಿಗದಿ ಮಾಡಿದೆ. ಐದು ವರ್ಷ ಹಾಗೇ ಮುಂದುವರೆಯಿತು. ನಂತರದಲ್ಲಿ ಹಿಂದಿದ್ದ ಪರಿಸ್ಥಿತಿಯೇ ನಿರ್ಮಾಣವಾಗಿದ್ದು ಬೇಸರದ ಸಂಗತಿ. ವ್ಯಾಪಾರಕ್ಕಾಗಿ ರಂಗಮಂದಿರಗಳನ್ನು ಕಟ್ಟಿಲ್ಲ. ಅಲ್ಲಿ ಮಕ್ಕಳ ನಾಟಕ, ರಂಗ ತಂಡಗಳ ನಾಟಕ ನಿರಂತರವಾಗಿ ಪ್ರದರ್ಶನವಾಗಬೇಕು. ಬಾಡಿಗೆ ಹೆಚ್ಚು ಮಾಡಿದರೆ ರಂಗ ಚಟುವಟಿಕೆಗಳು ಕಡಿಮೆಯಾಗುತ್ತವೆ ಎಂದು ಹೇಳಿದರು.

ಮೈಸೂರಿನ ಸಾಂಸ್ಕೃತಿಕ ಮಣ್ಣಿನಲ್ಲಿ ರಂಗ ಚಟುವಟಿಕೆಗಳಿಗೆ ಕೊರತೆಯಿಲ್ಲ. ಇದರಿಂದಲೇ ದೊಡ್ಡ ಲೇಖಕರು ಕಲಾವಿದರು, ಸಂಸ್ಥೆಗಳನ್ನು ನೋಡಲು ಸಾಧ್ಯವಾಗಿರುವುದು. ನಾಟಕೋತ್ಸವದಂತಹ ಚಟುವಟಿಕೆಗಳಿಗೆ ಆಗಾಗ ಮಕ್ಕಳನ್ನು ಕರೆದುಕೊಂಡು ಬಂದು ಅವರೂ ಭಾಗವಹಿಸಲು ಅವಕಾಶ ಕಲ್ಪಿಸಬೇಕು. ಅದರಿಂದ ಮಕ್ಕಳು ಸಂಘಜೀವಿಯಾಗಿ, ಮುಕ್ತವಾಗಿ ಬೆಳೆಯುತ್ತಾರೆ. ಯಾವುದೇ ಹೆದರಿಕೆ ಇಲ್ಲದೆ ಅಭಿವ್ಯಕ್ತಿಸುತ್ತಾರೆ. ಸಾಂಸ್ಕೃತಿಕ ಭವಿಷ್ಯವನ್ನು ಮುಂದುವರೆಸಲು ಮಕ್ಕಳಿಗೆ ಪ್ರೋತ್ಸಾಹ ನೀಡಬೇಕು. ರಂಗಭೂಮಿ ಕುಟುಂಬ ಹಿನ್ನೆಲೆಯುಳ್ಳ ಬಹಳಷ್ಟು ಕಲಾವಿದರಿದ್ದಾರೆ. ಹಾಗೆಯೇ ರಂಗ ಸಂಸ್ಥೆಗಳು ಮುಂದಿನ ಪೀಳಿಗೆಯನ್ನು ತಯಾರಿ ಮಾಡಬೇಕು ಎಂದು ಸಲಹೆ ನೀಡಿದರು.

ಕಲೆ ಸ್ವತಂತ್ರ ಜಾನಪದ ವಿದ್ವಾಂಸ ಹಿ.ಶಿ.ರಾಮಚಂದ್ರೇಗೌಡ ಮಾತನಾಡಿ, ಕಲೆ ಸ್ವತಂತ್ರವಾದದ್ದು. ಹಾಗಾಗಿ ಕಲಾವಿದ ಯಾವಾಗಲೂ ಸರ್ಕಾರದ ಬೆನ್ನುಬೀಳಲು ಸಾಧ್ಯವಿಲ್ಲ. ಆತ ಸ್ವತಂತ್ರವಾಗಿರಲು ಇಷ್ಟಪಡುತ್ತಾನೆ. ಆದರೂ ಕಲೆಗೆ ಸರ್ಕಾರದ ಪ್ರೋತ್ಸಾಹ ಅಗತ್ಯ. ಈ ನಿಟ್ಟಿನಲ್ಲಿ ಜನಪ್ರತಿನಿಧಿಗಳು ಗಮನಹರಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಿರಂತರ ಸಂಸ್ಥೆಯ ಸುಗುಣ, ಶ್ರೀನಿವಾಸ ಪಾಲಹಳ್ಳಿ ಮತ್ತಿತರರು ಉಪಸ್ಥಿತರಿದ್ದರು. ನಂತರ ಧಾರವಾಡದ ಆಟ ಮಾಟ ತಂಡದ 'ನಾ ರಾಜಗುರು' ನಾಟಕ ಪ್ರದರ್ಶನದೊಂದಿಗೆ ಐದು ದಿನಗಳ ನಿರಂತರ ರಂಗ ಉತ್ಸವಕ್ಕೆ ತೆರೆ ಬಿದ್ದಿತು. ಇದಕ್ಕೂ ಮುನ್ನ ರಿದಂ ಅಡ್ಡಾ ತಂಡದ ಶ್ರೀಕಂಠಸ್ವಾಮಿ (ಡ್ರಮ್), ಮುನ್ನಾ(ಗಿಟಾರ್), ಅನುಷ್ ಶೆಟ್ಟಿ(ತಬಲ) ಹಾಗೂ ಕೃಷ್ಣಚೈತನ್ಯ(ಚಂಡೆ) ಪ್ರಸ್ತುತಪಡಿಸಿದ 'ಲಯವಾದ್ಯ' ನೆರೆದಿದ್ದವರ ಮನಸೂರೆಗೊಂಡಿತು.

ಸ್ವಚ್ಛ ಶೌಚಾಲಯ ಅಭಿಯಾನ

ಪಾಲಿಕೆಯಿಂದ ಮೈಸೂರಿನ ವಿವಿಧ ಸ್ಥಳಗಳಲ್ಲಿ ಹೊಸದಾಗಿ 8 ಶೌಚಾಲಯ ನಿರ್ಮಾಣ



ಮೈಸೂರು, ಡಿ. 25(ಆರ್‌ಕೆ)– ವಿಶ್ವ ಶೌಚಾಲಯ ದಿನದ ಅಂಗವಾಗಿ ಡಿಸೆಂಬರ್ 19ರಿಂದ 25ರವರೆಗೆ ಮೈಸೂರು ಮಹಾನಗರಪಾಲಿಕೆಯು ಮೈಸೂರಲ್ಲಿ ಸ್ವಚ್ಛ ಶೌಚಾಲಯ ಅಭಿಯಾನ ನಡೆಸಿತು.

ಅದರ ಅಂಗವಾಗಿ ವಾಕಥಾನ್, 15 ಮಂದಿ ಶೌಚಾಲಯ ಸಿಬ್ಬಂದಿಗೆ ಸ್ವಚ್ಛತಾ ಕಿಟ್ ವಿತರಣೆ, ಸ್ವಚ್ಛ ಶೌಚಾಲಯ ಲೀಫ್‌ಲೆಟ್ ಬಿಡುಗಡೆಯಂತಹ ಹಲವು ಕಾರ್ಯಕ್ರಮಗಳ ಮೂಲಕ ಪಾಲಿಕೆ ಅಧಿಕಾರಿಗಳು ಸಾರ್ವಜನಿಕರಿಗೆ ಅರಿವು ಮೂಡಿಸಿದರು.

ಅಭಿಯಾನದ ಅಂಗವಾಗಿ ಮೈಸೂರಿನ ವಿವಿಧೆಡೆ 8 ಹೊಸ ಶೌಚಾಲಯ ನಿರ್ಮಿಸಲು ಉದ್ದೇಶಿಸಲಾಗಿದ್ದು, ಶೀಘ್ರ ಗುದ್ದಲಿ ಪೂಜೆ ನೆರವೇರಿಸಲು ತಯಾರಿ ನಡೆಸಲಾಗಿದೆ. ಅರಮನೆ ಅಂಬಾವಿಲಾಸ ದ್ವಾರದ ವಾಹನ ನಿಲುಗಡೆ ಬಳಿ, ಕೆಎಸ್‌ಆರ್‌ಟಿಸಿ ಸಬರ್ಬನ್ ಬಸ್ ನಿಲ್ದಾಣದ ಬಳಿ ಮದರ್ ತೆರೇಸಾ ರಸ್ತೆ, ಹೆಬ್ಬಾಳ್‌ನ ಮಂಚೇಗೌಡನಕೊಪ್ಪಲು ರುದ್ರಭೂಮಿ ಆವರಣದಲ್ಲಿ, ಮಹಾರಾಜ ಕಾಲೇಜು ಮೈದಾನ, ಧನ್ವಂತರಿ ರಸ್ತೆಯ ಗಾಯತ್ರಿ ಹೋಟೆಲ್ ಮುಂಭಾಗ ಪುಲಕೇಶಿ ರಸ್ತೆ, ಕುವೆಂಪುನಗರದ ಉದಯ ರವಿ ರಸ್ತೆಯ ಗಂಡಭೇರುಂಡ ಪಾರ್ಕ್ ಬಳಿ ಹಾಗೂ ಚಾಮುಂಡಿಬೆಟ್ಟದ ತಪ್ಪಲಿನ ಹರಿಶ್ಚಂದ್ರ ಸ್ಮಶಾನದಲ್ಲಿ ಶೌಚಾಲಯಗಳನ್ನು ನಿರ್ಮಿಸಲು ಗುರ್ತಿಸಲಾಗಿದೆ.

ಡಿಸೆಂಬರ್ 21ರಂದು ಮೈಸೂರಿನ ಪುರಭವನದಲ್ಲಿ ಪಾಲಿಕೆಯಿಂದ ಸ್ವಚ್ಛ ಶೌಚಾಲಯ ಅಭಿಯಾನ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕೇಂದ್ರದ ವಸತಿ ಮತ್ತು ನಗರಾಭಿವೃದ್ಧಿ ಇಲಾಖೆಯಿಂದ ಸ್ವಚ್ಛ ಭಾರತ ಅಭಿಯಾನ ನಗರ–2 ಯೋಜನೆಯಡಿ ಆಯೋಜಿಸಿದ್ದ ಕಾರ್ಯಕ್ರಮ ಉದ್ಘಾಟಿಸಿದ ಪಾಲಿಕೆ ಆಯುಕ್ತ ಅಶಾದ್ ಉರ್ ರಹಮಾನ್ ಷರೀಫ್ ಕಾರ್ಯಕ್ರಮದ ಧ್ಯೇಯೋದ್ದೇಶಗಳ ಬಗ್ಗೆ ವಿವರಿಸಿದರು.

ಉಪ ಆಯುಕ್ತರಾದ ಕೆ.ಜೆ. ಸಿಂಧು, ಆರೋಗ್ಯಾಧಿಕಾರಿ ಡಾ. ವೆಂಕಟೇಶ್, ಎಕ್ಸಿಕ್ಯೂಟಿವ್ ಇಂಜಿನಿಯರ್ ನಾಗರಾಜ್, ಅಶ್ವಿನ್ ಸೇರಿದಂತೆ ಇತರ ಅಧಿಕಾರಿಗಳು ಈ ಸಂದರ್ಭ ಉಪಸ್ಥಿತರಿದ್ದರು.

ಕರ್ನಾಟಕ ಸೇನಾಪಡೆಯಿಂದ ಕನ್ನಡ ರಾಜ್ಯೋತ್ಸವ

ಶಾಲಾ ಮಕ್ಕಳಿಗೆ ಪುಸ್ತಕ, ಸಮವಸ್ತ್ರ, ಕಲಿಕಾ ಸಾಮಗ್ರಿ ವಿತರಣೆ



ಮೈಸೂರು, ಡಿ.25– ಕರ್ನಾಟಕ ಸೇನಾ ಪಡೆ ವತಿಯಿಂದ ಕನ್ನಡ ರಾಜ್ಯೋತ್ಸವ ಮತ್ತು ಸುವರ್ಣ ಕರ್ನಾಟಕ ಮಹೋತ್ಸವವನ್ನು ಭಾನುವಾರ ಆಚರಿಸಲಾಯಿತು.

ಮೈಸೂರಿನ ವಿವೇಕಾನಂದ ವೃತ್ತದಲ್ಲಿ ನಡೆದ ಸಮಾರಂಭದಲ್ಲಿ ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಅವರು ಶಾಲಾ ಮಕ್ಕಳಿಗೆ ಪುಸ್ತಕ, ಸಮವಸ್ತ್ರ, ಕಲಿಕಾ ಸಾಮಗ್ರಿಗಳನ್ನು ವಿತರಿಸಿದರು. ಅಖಿಲ ಕರ್ನಾಟಕ ಒಕ್ಕಲಿಗರ ಸಂಘದ ರಾಜ್ಯಾಧ್ಯಕ್ಷ ಸಿ.ಜಿ.ಗಂಗಾಧರ್ ಸಾರ್ವಜನಿಕರಿಗೆ ಸಿಹಿ ವಿತರಿಸಿದರು.

ಇದೇ ವೇಳೆ ಪುನೀತ್ ರಾಜಕುಮಾರ್ ಸ್ಮರಣಾರ್ಥ ಮೈಸೂರು– ಚಾಮರಾಜನಗರ ಜಿಲ್ಲಾ ಸಹಕಾರ ಬ್ಯಾಂಕ್ ನಿರ್ದೇಶಕ ಡಾ.ಎಂ.ಬಿ.ಮಂಜೇಗೌಡ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಮೈಸೂರು ಜಿಲ್ಲೆ ಅಧ್ಯಕ್ಷ ಜೆ.ಗೋವಿಂದರಾಜು, ಮಹಾಲಕ್ಷ್ಮಿ ಸ್ಟೀಲ್ ಅಂಡ್ ಸಿಮೆಂಟ್ಸ್‌ನ ಪಾಲುದಾರ ದಿಲೀಪ್ ಕುಮಾರ್ ಜೈನ್, ಮಧುಮೇಹ ತಜ್ಞ ಡಾ.ವಿ.ಮೋಹನ್ ಕುಮಾರ್, ಪ್ರಗತಿ ಪ್ರತಿಷ್ಠಾನದ ರಾಷ್ಟ್ರೀಯ ಅಧ್ಯಕ್ಷ ಡಾ.ಬಿ.ಕೆ.ಅಜಯ್ ಕುಮಾರ್ ಜೈನ್, ವರದಿಗಾರ ಮಹೇಶ್ ಕೆಬ್ಬೆ, ಕರ್ನಾಟಕ ರಾಜ್ಯ ವಿಶ್ವಕರ್ಮ ಬಡಗಿ ಕೆಲಸಗಾರರ ಸಂಘದ ಅಧ್ಯಕ್ಷ ಡಾ.ಮೋಗಣ್ಣಾಚಾರ್, ಹಿಂದುಸ್ತಾನ್ ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕ ಎಲ್.ಪಿ.ಮೋಹನ್ ಕುಮಾರ್, ಹಿರಿಯ ಆಟೋ ಚಾಲಕ ಪ್ರಕಾಶ್ ಅವರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಕಾವೇರಿ ಕ್ರಿಯಾ ಸಮಿತಿ ಅಧ್ಯಕ್ಷರೂ ಆದ ಬಿಜೆಪಿ ಮುಖಂಡ ಎಸ್.ಜಯಪ್ರಕಾಶ್ ಮಾತನಾಡಿ, ರಾಜ್ಯದಲ್ಲಿ ಯಾವುದೇ ಸರ್ಕಾರ ಬಂದರೂ ನೆಲ, ಜಲ, ಭಾಷೆ ವಿಚಾರವಾಗಿ ಯಾರೂ ನ್ಯಾಯ ಒದಗಿಸುವ ಕೆಲಸ ಮಾಡುತ್ತಿಲ್ಲ. ನಮಗೆ ಕುಡಿಯಲು ನೀರಿಲ್ಲದಿದ್ದರೂ ತಮಿಳುನಾಡಿಗೆ ನಿರಂತರವಾಗಿ ನೀರು ಹರಿಸುತ್ತಿರುವುದು ವಿಷಾದನೀಯ ಎಂದರು.

ಪ್ರೊ.ಪಿ.ವಿ.ನಂಜರಾಜ ಅರಸ್ ಕಾರ್ಯಕ್ರಮ ಉದ್ಘಾಟಿಸಿದರು. ರಾಜ್ಯ ಜೆಡಿಎಸ್ ಪ್ರಧಾನ ಕಾರ್ಯದರ್ಶಿ ಹೆಚ್.ಕೆ.ರಾಮು, ಅಖಿಲ ಕರ್ನಾಟಕ ಒಕ್ಕಲಿಗರ ಸಂಘದ ಜಿಲ್ಲಾ ಗೌರವಾಧ್ಯಕ್ಷ ಡಾ.ಸಿ.ವೈ.ಶಿವೇಗೌಡ, ಆಹಾರ ಇಲಾಖೆ ನಿವೃತ್ತ ಜಂಟಿ ನಿರ್ದೇಶಕ ಡಾ.ಕಾ.ರಾಮೇಶ್ವರಪ್ಪ, ಕರ್ನಾಟಕ ಸೇನಾಪಡೆ ರಾಜ್ಯಾಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ, ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್ ಗೌಡ, ಸುರೇಶ್ ಗೋಲ್ಡ್, ಶಾಂತರಾಜೇ ಅರಸ್, ಸಿ.ಹೆಚ್.ಕೃಷ್ಣಯ್ಯ, ಪ್ರಭುಶಂಕರ್, ವಿಜಯೇಂದ್ರ, ಸುಬ್ಬೇಗೌಡ, ಹನುಮಂತಯ್ಯ, ಮಹಾದೇವಸ್ವಾಮಿ, ನಂದಕುಮಾರ ಮತ್ತಿತರರು ಉಪಸ್ಥಿತರಿದ್ದರು.

ಜ.1ರಿಂದ 15ರವರೆಗೆ ಮನೆಮನೆಗೆ ಅಯೋಧ್ಯೆಯ ಮಂತ್ರಾಕ್ಷತೆ, ರಾಮಮಂದಿರದ ಭಾವಚಿತ್ರ, ನಿವೇದನಾ ಪತ್ರ

● ಶಾಸಕ ಟಿ.ಎಸ್.ಶ್ರೀವತ್ಸ ಮಾಹಿತಿ ● ಅಖಂಡ ಭಜನಾ ಕಾರ್ಯಕ್ರಮ ಮೆರವಣಿಗೆಯಲ್ಲಿ ಭಾಗಿ





ಮೈಸೂರು, ಡಿ.25(ಎಸ್‌ಪಿಎನ್)– ಅಯೋಧ್ಯೆಯ ಶ್ರೀರಾಮಮಂದಿರದಲ್ಲಿ ಪ್ರಾಣ ಪ್ರತಿಷ್ಠಾಪನೆಗೊಳ್ಳುತ್ತಿರುವ ಸಂದರ್ಭದಲ್ಲಿ ಜ.1ರಿಂದ ಜ.15ರವರೆಗೆ ಅಯೋಧ್ಯೆಯಿಂದ ಬಂದಿರುವ ಪವಿತ್ರ ಮಂತ್ರಾಕ್ಷತೆ, ರಾಮಮಂದಿರದ ಭಾವಚಿತ್ರ ಮತ್ತು ನಿವೇದನಾ ಪತ್ರಗಳನ್ನು ಪ್ರತಿ ಮನೆಮನೆಗೂ ತಲುಪಿಸುವ ಕಾರ್ಯ ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ಟಿ.ಎಸ್.ಶ್ರೀವತ್ಸ ತಿಳಿಸಿದರು.

ಮೈಸೂರು ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮಿ ವೃತ್ತದ ಬಳಿ ಸೋಮವಾರ ಮಧ್ಯಾಹ್ನ ಶ್ರೀರಾಮಮಂದಿರದ ತೀರ್ಥ ಕ್ಷೇತ್ರ ಟ್ರಸ್ಟ್ ವತಿಯಿಂದ ನಡೆದ ಅಯೋಧ್ಯೆಯ ಶ್ರೀ ರಾಮಮಂದಿರದಲ್ಲಿ ಪ್ರಾಣ ಪ್ರತಿಷ್ಠಾಪನ ಹಾಗೂ ಪವಿತ್ರ ಮಂತ್ರಾಕ್ಷತೆಯ ವಿತರಣೆಯ ಮೆರಗು ತುಂಬಲು ಅಖಂಡ ಭಜನಾ ಕಾರ್ಯಕ್ರಮದ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದರು.

2024ರ ಜ.22ರಂದು ಅಯೋಧ್ಯೆಯಲ್ಲಿ ಪ್ರಾಣ ಪ್ರತಿಷ್ಠೆ ಆಗುವ ಸಮಯದಲ್ಲಿ ನಮ್ಮ ನಮ್ಮ ನಗರಗಳಲ್ಲಿ ಮತ್ತು ಗ್ರಾಮಗಳಲ್ಲಿರುವ ವಿವಿಧ ದೇವಾಲಯಗಳಲ್ಲಿ ವಿಶೇಷ ಸತ್ಸಂಗ ಮತ್ತು ಭಜನೆಗಳು ನಡೆಯಲಿದ್ದು, ಆಸುಪಾಸಿನಲ್ಲಿರುವ ಶ್ರೀರಾಮ ಭಕ್ತರು, ಈ ಸತ್ಸಂಗಗಳಲ್ಲಿ ಪಾಲ್ಗೊಳ್ಳಬೇಕು ಹಾಗೂ ಇಲ್ಲಿ ಅಳವಡಿಸುವ ಎಲ್‌ಇಡಿ ಪರದೆಯಲ್ಲಿ ಅಯೋಧ್ಯೆಯ ಕಾರ್ಯಕ್ರಮದ ನೇರ ಪ್ರಸಾರವನ್ನು ವೀಕ್ಷಿಸಬಹುದಾಗಿದೆ ಎಂದರು.

ಜ.22ರಂದು ಸಂಜೆ ಸೂರ್ಯಾಸ್ತದ ನಂತರ ನಮ್ಮ ಮನೆಯ ಮುಂದೆ ಕನಿಷ್ಠ ಐದು ದೀಪಗಳನ್ನು ಅಯೋಧ್ಯೆಯ ಕಡೆ ಮುಖ ಮಾಡಿ ಬೆಳಗಿ ದೀಪೋತ್ಸವದಲ್ಲಿ ಪಾಲ್ಗೊಳ್ಳುವಂತೆ ಸಮುದಾಯದಲ್ಲಿ ಮನವಿ ಮಾಡಿದರು. ಸುಮಾರು ನೂರು ವರ್ಷಗಳ ಸುದೀರ್ಘ ಹೋರಾಟದ ಬಳಿಕ ಅಯೋಧ್ಯೆಯ ಶ್ರೀರಾಮ ಜನ್ಮಭೂಮಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಶ್ರೀರಾಮ ಮಂದಿರದಲ್ಲಿ ಶ್ರೀ ರಾಮಲಲ್ಲಾ (ಬಾಲರಾಮ) ಪ್ರಾಣ ಪ್ರತಿಷ್ಠಾಪನೆ ಆಗುತ್ತಿರುವುದು ಕೋಟ್ಯಾಂತರ ಭಕ್ತರ ಪ್ರಾರ್ಥನೆಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡ ಜೋಗಿ ಮಂಜು, ಎಂ.ಎನ್.ಗಿರಿಧರ್ ಸೇರಿದಂತೆ ಹಲವು ಮಂದಿ ಇದ್ದರು. ಅಖಂಡ ಭಜನಾ ಕಾರ್ಯಕ್ರಮದ ಪ್ರಯುಕ್ತ 200 ಕ್ಕೂ ಹೆಚ್ಚು ಭಕ್ತರು ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮಿ ವೃತ್ತದಿಂದ ಶ್ರೀರಾಮಾನುಜ ರಸ್ತೆ ಮೂಲಕ ಶ್ರೀರಾಮ ಸಂಕೀರ್ತನೆ ಭಜನೆ ಮಾಡುವ ಮೂಲಕ ರಾಜೇಂದ್ರ ಮಂದಿರ ತಲುಪಿತು. ಬಳಿಕ ವೇದಿಕೆಯಲ್ಲಿ ಭಜನಾ ಕಾರ್ಯಕ್ರಮ ಮುಂದುವರೆಯಿತು.

ಹಿಜಾಬ್‌ಗೆ ಅನುಮತಿ ನೀಡಿದರೆ ನಮ್ಮ ವಿದ್ಯಾರ್ಥಿಗಳಿಗೆ ಕೇಸರಿ ಶಾಲು ಹಾಕುತ್ತೇವೆ!

ಮೈಸೂರು, ಡಿ.25: ರಾಜ್ಯ ಸರ್ಕಾರ ಹಿಜಾಬ್‌ಗೆ ಅನುಮತಿ ನೀಡಿದರೆ, ನಮ್ಮ ವಿದ್ಯಾರ್ಥಿಗಳು ಕೇಸರಿ ಶಾಲು ಧರಿಸಿ, ಪ್ರತಿರೋಧ ತೋರುತ್ತೇವೆ ಎಂದು ಶಾಸಕ ಟಿ.ಎಸ್.ಶ್ರೀವತ್ಸ ಅಭಿಪ್ರಾಯಪಟ್ಟರು. ಮುಖ್ಯಮಂತ್ರಿ ಸಿದ್ದರಾಮಯ್ಯ ಹಿಜಾಬ್ ಧರಿಸಲು ಅನುಮತಿ ನೀಡುವುದಾಗಿ ಘೋಷಣೆ ಮಾಡಿರುವ ಕುರಿತು ಶಾಸಕರ ಸುದ್ದಿಗಾರರು ಕೇಳಿದ ಪ್ರಶ್ನೆಗೆ ಶ್ರೀವತ್ಸ ಪ್ರತಿಕ್ರಿಯಿಸಿದರು. ಶಿಕ್ಷಣದಲ್ಲಿ ಸಮಾನತೆ ಇರಬೇಕು ಎಂಬುದು ನಮ್ಮ ಸಂವಿಧಾನದ ಆಶಯ. ಆದರೆ, ಕಾಂಗ್ರೆಸ್ ಸರ್ಕಾರ, ಒಂದು ಸಮುದಾಯಕ್ಕೆ ಹಿಜಾಬ್ ಧರಿಸಲು ಅನುಮತಿ ನೀಡಿ, ತಾರತಮ್ಯ ನೀತಿ ಅನುಸರಿಸುತ್ತಿದೆ ಎಂದು ಕಿಡಿಕಾರಿದರು. ಇದನ್ನು ವಿರೋಧಿಸಲು ಹಿಂದೂಗಳು ಸಮರ್ಥರಿದ್ದು, ಕೇಸರಿ ಶಾಲು ಧರಿಸಿ, ಹಿಜಾಬ್‌ಗೆ ತಕ್ಕ ಉತ್ತರ ನೀಡುತ್ತೇವೆ ಎಂದರು.



ಮೈಸೂರಿನ ಮೂಗೂರು ಕರ್ನಾಟಕ ಬ್ರಾಹ್ಮಣ ಸಮಾನಮನಸ್ಕರ ಬಳಗ ಹಾಗೂ ಮೈಸೂರು ಮೂಗೂರು ಕರ್ನಾಟಕ ಬ್ರಾಹ್ಮಣ ಸಂಘದ ಸಹಯೋಗದಲ್ಲಿ ಲೋಕ ಕಲ್ಯಾಣಾರ್ಥವಾಗಿ ಏಕಾದಶಿ ಶತರುದ್ರಾಭಿಷೇಕ ನೆರವೇರಿಸಲಾಯಿತು. ಸಮಾಜದ 54 ದಂಪತಿಗಳು ರುದ್ರಾಭಿಷೇಕ ಪೂಜೆಯಲ್ಲಿ ಪಾಲ್ಗೊಂಡಿದ್ದರು. ಸಹ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಬಳಗದ ಅಪಾರ ವಿಪ್ರ ಬಂಧುಗಳು ಭಾಗಿಯಾಗಿದ್ದರು. ನಾಗಶಯನ, ಮಂಜುನಾಥ, ಶ್ರೀಕಂಠಶರ್ಮ, ಹೊಮ್ಮ ಮಂಜುನಾಥ ಮತ್ತಿತರರು ಚಿತ್ರದಲ್ಲಿದ್ದಾರೆ.


ಪಣಿಯನ್ ಬುಡಕಟ್ಟು ಸಮುದಾಯದ ರಾಜ್ಯದ ಮೊಟ್ಟ ಮೊದಲ ಪಿಹೆಚ್.ಡಿ ಪದವೀಧರೆ ಹಿರಿಮೆಗೆ ಎಸ್.ಆರ್.ದಿವ್ಯ ಭಾಜನ



ಮೈಸೂರು,ಡಿ.25(ಪಿಎಂ)– ಹೆಚ್‌ಡಿ ಕೋಟೆ ತಾಲೂಕು ನಾಗರಹೊಳೆ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯ ಆನೆಮಾಳ ಹಾಡಿಯ ಎಸ್.ಆರ್.ದಿವ್ಯ, ಪಣಿಯನ್ ಬುಡಕಟ್ಟು ಸಮುದಾಯದ ರಾಜ್ಯದ ಮೊಟ್ಟ ಮೊದಲ ಪಿಹೆಚ್.ಡಿ ಪದವೀಧರೆಯಾಗಿ ಹೊರಹೊಮ್ಮಿದ್ದಾರೆ.

ತಮ್ಮದೇ ಸಮುದಾಯದ ಬಗ್ಗೆ 'ಪಣಿಯನ್ ಬುಡಕಟ್ಟಿನ ಸಾಮಾಜಿಕ ಅಧ್ಯಯನ' ವಿಷಯ ಕುರಿತು ಹಂಪಿ ಕನ್ನಡ ವಿವಿಯ ಬುಡಕಟ್ಟು ಅಧ್ಯಯನ ವಿಭಾಗದ ಪ್ರೊ.ಕೆ.ಎಂ.ಮೇತ್ರಿಯವರ ಮಾರ್ಗದರ್ಶನದಲ್ಲಿ ಇವರು ಮಂಡಿಸಿದ ಮಹಾಪ್ರಬಂಧವನ್ನು ಸದರಿ ವಿವಿ ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ. ಜ.10ರ ವಿವಿ ಘಟಿಕೋತ್ಸವದಲ್ಲಿ ಅವರು ಡಾಕ್ಟರೇಟ್ ಪದವಿ ಸ್ವೀಕರಿಸಲಿದ್ದಾರೆ. ರಾಜು ಮತ್ತು ಲಕ್ಷ್ಮಿ ದಂಪತಿಯ ಮೂರು ಮಕ್ಕಳಲ್ಲಿ ಹಿರಿಯ ಪುತ್ರಿಯಾದ ದಿವ್ಯ, ಬಡತನದ ಬೇಗೆಯಲ್ಲಿ ಶಿಕ್ಷಣ ಮುಗಿಸಿ ಈಗ ಅತ್ಯುನ್ನತ ಪದವಿ ಗಳಿಸಿದ್ದಾರೆ ಎಂದು ಅಂಚೆ ಇಲಾಖೆಯ ಡಾ. ಅಮ್ಮಸಂದ್ರಸುರೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಾ.ಅಂಬೇಡ್ಕರ್ ಮನುಸ್ಮೃತಿ ದಹಿಸಿದ ದಿನದ ಸ್ಮರಣೆ



ಮೈಸೂರು,ಡಿ.25(ಪಿಎಂ)– ದಲಿತ ಸಂಘರ್ಷ ಸಮಿತಿ (ದಸಂಸ) ವತಿಯಿಂದ ಡಾ.ಬಿ.ಆರ್.ಅಂಬೇಡ್ಕರ್ ಅವರು ಮನುಸ್ಮೃತಿ ದಹಿಸಿದ ದಿನದ ಸ್ಮರಣೆ ಮತ್ತು ಜಾಗೃತಿ ಕಾರ್ಯಕ್ರಮ ಸೋಮವಾರ ನಡೆಯಿತು.

ಮೈಸೂರಿನ ಪುರಭವನದ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆ ಅಂಗಳದಲ್ಲಿ ದಸಂಸ ಮುಖಂಡ ಚೋರನಹಳ್ಳಿ ಶಿವಣ್ಣ ನೇತೃತ್ವದಲ್ಲಿ ಜಮಾಯಿಸಿದ ದಸಂಸ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು, ಅಸಮಾನತೆ ಪ್ರತಿಪಾದಿಸುವ ಮನುಸ್ಮೃತಿಗೆ ಧಿಕ್ಕಾರ, ಕಂದಾಚಾರಗಳಿಂದ ತುಂಬಿರುವ ಮನುಸ್ಮೃತಿಗೆ ಧಿಕ್ಕಾರ ಎಂಬಿತ್ಯಾದಿ ಘೋಷಣೆಗಳನ್ನು ಕೂಗುವ ಮೂಲಕ ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ಮಾತನಾಡಿದ ಚೋರನಹಳ್ಳಿ ಶಿವಣ್ಣ, 1927ರ ಡಿ.25ರಂದು ಡಾ.ಬಿ.ಆರ್.ಅಂಬೇಡ್ಕರ್ ಅವರು ಮನುಸ್ಮೃತಿ ದಹಿಸಿದರು. ಯಾವ ಕಾರಣಕ್ಕೆ ಅವರು ಮನುಸ್ಮೃತಿ ಸುಟ್ಟರು. ಅವರ ಆಶಯ ಏನಾಗಿತ್ತು ಎಂಬುದನ್ನು ನಾವು ಅರಿಯಬೇಕು. ಮನಸ್ಮೃತಿ ಸುಟ್ಟಿದ್ದು ಏಕೆಂಬುದು ಇಂದಿಗೂ ಅತ್ಯಂತ ಪ್ರಸ್ತುತ. ಅದರಲ್ಲಿ ಏನಿದೆ ಎಂಬುದು ಸಾರ್ವಜನಿಕರಿಗೆ ಗೊತ್ತಾಗಬೇಕು. ಹಾಗಾಗಿ ಜನತೆ ಗಮನ ಸೆಳೆಯಲು ಇಂದು ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಮನುಸ್ಮೃತಿಯಲ್ಲಿ ಕೇವಲ ಒಂದು ವರ್ಗದವರು ಮಾತ್ರವೇ ಉತ್ತಮರು ಎಂದು ಪ್ರತಿಪಾದಿಸಲಾಗಿದೆ. ವರ್ಣಾಶ್ರಮ ವ್ಯವಸ್ಥೆ ಪ್ರತಿಪಾದಿಸಿ ಮೇಲು ಕೀಳು ಎಂದು ವಿಂಗಡಿಸುವ ಮೂಲಕ ಶೋಷಣೆಯನ್ನು ಎತ್ತಿಹಿಡಿಯಲಾಗಿದೆ. ಮಾನವ ವಿರೋಧಿ ಆಲೋಚನೆ, ಕಂದಾಚಾರ, ಮೌಢ್ಯ ಮತ್ತು ಅವೈಜ್ಞಾನಿಕ ಅಂಶಗಳನ್ನು ತುಂಬಿಕೊಂಡಿರುವ ಕಾರಣಕ್ಕೆ ಮನುಸ್ಮೃತಿಯನ್ನು ಅಂದು ಅಂಬೇಡ್ಕರ್ ಸುಟ್ಟರು. ಆದರೆ ನಾವು ಅದನ್ನು ದಹಿಸುತ್ತಿಲ್ಲ ಎಂದು ಹೇಳಿದ ಅವರು, ಇದು ನಮಗೆ ಬೇಡವೆಂದು ಮನುಸ್ಮೃತಿಯ ಮುಖಪುಟವನ್ನು ಹರಿದು ಆಕ್ರೋಶ ವ್ಯಕ್ತಪಡಿಸಿ ಕಾರ್ಯಕ್ರಮ ಅಂತ್ಯಗೊಳಿಸಿದರು.

ಇದಕ್ಕೂ ಮುನ್ನ ಮಾತನಾಡಿದ ಎಸ್‌ಡಿಪಿಐ ರಾಜ್ಯ ಉಪಾಧ್ಯಕ್ಷ ದೇವನೂರು ಪುಟ್ಟನಂಜಯ್ಯ, ಅತ್ಯಂತ ಕ್ರೂರ ಹಾಗೂ ಸಮಾಜ ವಿರೋಧಿ ನಿಯಮಗಳನ್ನು ಮನುಸ್ಮೃತಿಯಲ್ಲಿ ಪ್ರತಿಪಾದಿಸಲಾಗಿದೆ. ಹೀಗಾಗಿ ಅದರ ವಿರುದ್ಧ ನಮ್ಮ ಹೋರಾಟವೇ ಹೊರತು ಯಾವುದೇ ಸಮುದಾಯದ ವಿರುದ್ಧವಲ್ಲ ಎಂದು ತಿಳಿಸಿದರು.

ಮೌರ್ಯ ಸಾಮ್ರಾಜ್ಯದ ಪತನ ನಂತರ ಮನುಸ್ಮೃತಿಯನ್ನು ಪುನರ್ ಜಾರಿಗೊಳಿಸಲಾಯಿತು. ಆ ಮೂಲಕ ಸಮಾಜದಲ್ಲಿ ಶೋಷಣೆಗೆ ನಾಂದಿ ಹಾಡಲಾಯಿತು. ಇದೀಗ ಸಂವಿಧಾನ ಬದಲಾಯಿಸಬೇಕೆಂಬ ಮಾತುಗಳು ಕೇಳಿ ಬರುತ್ತಿದ್ದು, ಒಂದು ದೇಶ, ಒಂದು ಕಾನೂನು ಮತ್ತು ಏಕ ಧರ್ಮ ಇರಬೇಕೆಂದು ಪ್ರತಿಪಾದಿಸಲಾಗುತ್ತಿದೆ. ದೇಶದಲ್ಲಿ ಶೇ.96ರಷ್ಟು ಇರುವ ಬಹುಜನರನ್ನು ಹಿಂದೂ ಧರ್ಮದ ಹೆಸರಿನಲ್ಲಿ ಓಟ್ ಬ್ಯಾಂಕ್ ಮಾಡಿಕೊಳ್ಳಲಾಗಿದೆ. ಹಾಗಾಗಿ ನಮ್ಮ ಜನ ಪ್ರಸ್ತುತದ ರಾಜಕೀಯ ಸನ್ನಿವೇಶಗಳನ್ನು ಸೂಕ್ಷ್ಮವಾಗಿ ಅವಲೋಕಿಸಬೇಕಿದೆ ಎಂದು ಹೇಳಿದರು.

ದಸಂಸ ಮುಖಂಡ ಕೆ.ವಿ.ದೇವೇಂದ್ರ, ವಿವಿಧ ಸಂಘಟನೆಗಳ ಮುಖಂಡರಾದ ಅಶೋಕಪುರಂ ಹೇಶ್, ದಯಾನಂದ್, ಟಿ.ಸೋಮಶೇಖರ್, ಆಲಗೂಡು ಚಂದ್ರಶೇಖರ್, ವೀರರಾಜು, ಮತ್ತಿತರರು ಪಾಲ್ಗೊಂಡಿದ್ದರು.

ಪೊಲೀಸರ ಮನವಿಗೆ ಸ್ಪಂದನೆ...

ದಸಂಸದಿಂದ ಮನುಸ್ಮೃತಿ ಪುಸ್ತಕದ ಪ್ರತಿ ದಹಿಸುವ ಮೂಲಕ ತಮ್ಮ ಪ್ರತಿಭಟನೆ ದಾಖಲಿಸುವ ಉದ್ದೇಶ ಹೊಂದಲಾಗಿತ್ತು ಆದರೆ ಅದನ್ನು ಸುಡುವುದರಿಂದ ಮೈಸೂರಿನಲ್ಲಿ ಶಾಂತಿಗೆ ಭಂಗ ಉಂಟಾಗಬಹುದೆಂದು ತಿಳಿಸಿದ ಪೊಲೀಸರು, ಸದರಿ ಕಾರ್ಯಕ್ರಮ ಕೈಬಿಡಬೇಕೆಂದು ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿ ದಹಿಸುವುದನ್ನು ರದ್ದುಗೊಳಿಸಿಕೊಳ್ಳಲಾಯಿತು. ಕಾರ್ಯಕ್ರಮದ ವೇಳೆ ಸ್ಥಳದಲ್ಲಿ ಪೊಲೀಸ್ ಭದ್ರತೆ ಇದ್ದಿತು.

ಮೈಸೂರು ಮಿತ್ರ ಮಂಗಳವಾರ 26 ಡಿಸೆಂಬರ್ 2023

14ರಲ್ಲಿ 13 ಸ್ಥಾನ ಬಿಜೆಪಿ ಬೆಂಬಲಿತರ ಪಾಲು

ಮಡಿಕೇರಿ ಸಹಕಾರ ಬ್ಯಾಂಕ್‌ನ ನಿರ್ದೇಶಕರ ಆಯ್ಕೆ ಚುನಾವಣೆ

ಮಡಿಕೇರಿ, ಡಿ.25– ಅತ್ಯಂತ ಕುತೂಹಲ ಮೂಡಿಸಿದ್ದ ಪ್ರತಿಷ್ಠಿತ ಮಡಿಕೇರಿ ಪಟ್ಟಣ ಸಹಕಾರ ನಿಯಮಿತ ಬ್ಯಾಂಕ್‌ನ ಆಡಳಿತ ಮಂಡಳಿಯ ನಿರ್ದೇಶಕರ ಆಯ್ಕೆ ಚುನಾವಣಾ ಫಲಿತಾಂಶ ಪ್ರಕಟಗೊಂಡಿದ್ದು, ಒಟ್ಟು 14 ಸ್ಥಾನಗಳಲ್ಲಿ 13 ಸ್ಥಾನಗಳಲ್ಲಿ ಬಿಜೆಪಿ ಬೆಂಬಲಿತರು ಜಯ ಗಳಿಸಿದ್ದಾರೆ.

ನಗರದ ಬಾಲಭವನದಲ್ಲಿ ಸಾಮಾನ್ಯ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಮಹಿಳಾ ಮೀಸಲು, ಎ ಹಾಗೂ ಬಿ ಪ್ರವರ್ಗಗಳಿಗೆ ಚುನಾವಣೆ ನಡೆಯಿತು. ಬಿಜೆಪಿ ಹಾಗೂ ಕಾಂಗ್ರೆಸ್ ನಡುವಿನ ನೇರ ಹಣಾಹಣಿಯಲ್ಲಿ ಬಿಜೆಪಿ ಬೆಂಬಲಿತರು ಸಾಮಾನ್ಯ ಕ್ಷೇತ್ರದ ಒಂದು ಸ್ಥಾನ ಹೊರತುಪಡಿಸಿ, ಉಳಿದ ಎಲ್ಲಾ ಸ್ಥಾನಗಳಲ್ಲಿ ಜಯ ಸಾಧಿಸಿ ಬಹುಮತ ಗಳಿಸಿದ್ದಾರೆ.

ಸಾಮಾನ್ಯ ಕ್ಷೇತ್ರದ 7 ಸ್ಥಾನಕ್ಕೆ 20 ಮಂದಿ, ಮಹಿಳಾ ಕ್ಷೇತ್ರದ 2 ಸ್ಥಾನಕ್ಕೆ 4, ಪರಿಶಿಷ್ಟ ಜಾತಿ ಕ್ಷೇತ್ರದ 1 ಸ್ಥಾನಕ್ಕೆ 2, ಪರಿಶಿಷ್ಟ ಪಂಗಡ ಕ್ಷೇತ್ರದ 1 ಸ್ಥಾನಕ್ಕೆ ಇಬ್ಬರು ಸ್ಪರ್ಧಿಸಿದ್ದರು. ಚುನಾವಣೆ ಪ್ರಕ್ರಿಯೆಯಲ್ಲಿ ಒಟ್ಟು 1614 ಮತಗಳ ಪೈಕಿ 1372 ಜನ ಮತ ಚಲಾಯಿಸಿದರು.

ಮತಗಳ ವಿವರ: ಸಾಮಾನ್ಯ ಕ್ಷೇತ್ರದಿಂದ ಸ್ಪರ್ಧಿಸಿದ್ದ ಬಿಜೆಪಿ ಬೆಂಬಲಿತರಾದ ಕನ್ನಂಡ ಸಂಪತ್ 649 ಮತ, ಆರಾಧನಾ ಗಿರೀಶ್ 595, ಸಿ.ಕೆ.ಬಾಲಕೃಷ್ಣ 685, ಬಿ.ಕೆ.ಜಗದೀಶ್ 738, ಬಿ.ವಿ.ರೋಶನ್ 531, ಜಿ.ಎಂ. ಸತೀಶ್ ಪೈ 658 ಮತ ಗಳಿಸಿ ಗೆಲುವು ದಾಖಲಿಸಿದರೆ, ವಿ.ಆರ್.ಮನುಮಂಜುನಾಥ್ 394 ಮತ ಪಡೆದು ಸೋಲು ಅನುಭವಿಸಿದರು. ಬಿ.ವೈ.ರಾಜೇಶ್ 798 ಮತ ಗಳಿಸಿ ಕಾಂಗ್ರೆಸ್ ಬೆಂಬಲಿತರಾಗಿ ಗೆಲುವು ಸಾಧಿಸಿದ ಏಕೈಕ ಸ್ಪರ್ಧಿಯಾಗಿದ್ದಾರೆ.

ಉಳಿದಂತೆ ಕಾಂಗ್ರೆಸ್ ಬೆಂಬಲದಿಂದ ಸ್ಪರ್ಧಿಸಿದ್ದ ಅಂಬೇಕಲ್ಲು ನವೀನ್ ಕುಶಾಲಪ್ಪ 500 ಮತ, ಆಪಾಡಂಡ ಅಚ್ಚಯ್ಯ 301, ಕೆ.ಯು.ಅಶ್ರಫ್ 380, ಟಿ.ಹೆಚ್. ಉದಯಕುಮಾರ್ 367, ಬಿ.ಪಿ.ಗುರುಕಿರಣ್ 380, ಜಿ.ಸಿ.ಜಗದೀಶ್ 317, ಸ್ವತಂತ್ರ ಅಭ್ಯರ್ಥಿಗಳಾಗಿ ಸ್ಪರ್ಧಿಸಿದ್ದ ಪೊನ್ನಚ್ಚನ ಮಧು 451, ಧನಂಜಯ 209, ಧರ್ಮಪಾಲ್ 244, ಎನ್.ಬಿ.ಪಾಲಕ್ಷ 98, ಎನ್.ಎ.ಸತೀಶ್ ಪೈ 217, ಎಂ.ಖಲೀಲ್ 134 ಮತ ಪಡೆದು ಸೋಲು ಅನುಭವಿಸಿದರು. 73 ಮತಗಳು ತಿರಸ್ಕೃತಗೊಂಡವು.

ಪರಿಶಿಷ್ಟ ಜಾತಿ ವಿಭಾಗದಿಂದ ಸ್ಪರ್ಧಿಸಿದ್ದ ಬಿಜೆಪಿ ಬೆಂಬಲಿತ ಎಸ್.ಸಿ.ಸತೀಶ್ 660 ಮತಗಳಿಂದ ಜಯ ಸಾಧಿಸಿದರೆ, ಕಾಂಗ್ರೆಸ್ ಬೆಂಬಲಿತ ವಿಶಾಲ್ ನಂದಕುಮಾರ್ 654 ಮತ ಪಡೆದರು. 60 ಮತಗಳು ತಿರಸ್ಕೃತಗೊಂಡವು. ಪರಿಶಿಷ್ಟ ಪಂಗಡ ಕ್ಷೇತ್ರದಿಂದ ಬಿಜೆಪಿ ಬೆಂಬಲಿತ ಕೆ.ಆರ್.ನಾಗೇಶ್ 933 ಮತಗಳನ್ನು ಪಡೆದು ವಿಜಯ ಸಾಧಿಸಿದರು. ಕಾಂಗ್ರೆಸ್ ಬೆಂಬಲಿತ ವಾಸುದೇವ್ 358 ಮತ ಪಡೆದರೆ 81 ಮತಗಳು ತಿರಸ್ಕೃತಗೊಂಡವು.

ಮಹಿಳಾ ಮೀಸಲು ಕ್ಷೇತ್ರದಿಂದ ಸ್ಪರ್ಧಿಸಿದ್ದ ಬಿಜೆಪಿ ಬೆಂಬಲಿತರಾದ ಕೇಟೋಳಿರ ಮಾಚಮ್ಮ 808 ಹಾಗೂ ಪ್ರತಿಭಾ ಶೆಟ್ಟಿ 688 ಮತಗಳಿಂದ ಗೆಲುವು ದಾಖಲಿಸಿದರು. ಕಾಂಗ್ರೆಸ್ ಬೆಂಬಲಿತರಾದ ಸಂಗೀತಾ 507, ಕೂಡಕಂಡಿ ಕಾವೇರಮ್ಮ ಸೋಮಣ್ಣ 593 ಮತಪಡೆದರೆ 32 ಮತಗಳು ತಿರಸ್ಕೃತಗೊಂಡವು. ಪ್ರವರ್ಗ ಎ ಕ್ಷೇತ್ರದಿಂದ 709 ಮತಗಳಿಂದ ಬಿಜೆಪಿ ಬೆಂಬಲಿತ ಬಿ.ಎಂ.ರಾಜೇಶ್ ಗೆಲುವಿನ ನಗೆಬೀರಿದರು. ಕಾಂಗ್ರೆಸ್ ಬೆಂಬಲಿತ ಪ್ರಕಾಶ್ ಆಚಾರ್ಯ 597 ಮತಗಳಿಂದ ಸೋಲೊಪ್ಪಿಕೊಂಡರು. 71 ಮತ ತಿರಸ್ಕೃತಗೊಂಡವು.

ಪ್ರವರ್ಗ ಬಿ ಕ್ಷೇತ್ರದಿಂದ ಬಿಜೆಪಿ ಬೆಂಬಲಿತರಾಗಿ ಸ್ಪರ್ಧಿಸಿದ್ದ ಮಹೇಶ್ ಜೈನಿ 745 ಮತಗಳನ್ನು ಪಡೆದು ವಿಜಯಶಾಲಿಯಾದರೆ, ಕಾಂಗ್ರೆಸ್ ಬೆಂಬಲಿತ ಮಂಡೀರ ಸದಾ ಮುದ್ದ 554 ಮತ ಪಡೆದ ಪರಾಭವಗೊಂಡರು. 74 ಮತಗಳ ತಿರಸ್ಕೃತಗೊಂಡವು. ಚುನಾವಣಾಧಿಕಾರಿಯಾಗಿ ಬಿ.ಕೆ.ವಿಜಯೇಂದ್ರ ಕಾರ್ಯನಿರ್ವಹಿಸಿದರು.



ಕೊಡಗು ಕ್ರೀಡಾ ಅಭಿವೃದ್ಧಿ ಪ್ರಾಧಿಕಾರ ರಚಿಸಿ

ಸರ್ಕಾರಕ್ಕೆ ದುದ್ದಿಯಂಡ ಹೆಚ್.ಸೂಫಿ ಹಾಜಿ ಒತ್ತಾಯ

ಪೊನ್ನಂಪೇಟೆ, ಡಿ.25– ಕ್ರೀಡೆಯ ತವರು ಎಂದು ಕರೆಸಿಕೊಂಡಿರುವ ಕೊಡಗು ಜಿಲ್ಲೆಯಲ್ಲಿ ವಿವಿಧ ಕ್ರೀಡಾಕೂಟಗಳು ನಿರಂತರವಾಗಿ ನಡೆಯುತ್ತಿವೆ ಈ ಕ್ರೀಡಾಕೂಟಗಳನ್ನು ಉತ್ತೇಜಿಸುವ ನಿಟ್ಟಿನಲ್ಲಿ ಕೊಡಗು ಕ್ರೀಡಾ ಅಭಿವೃದ್ಧಿ ಪ್ರಾಧಿಕಾರ ರಚಿಸಲು ಸರ್ಕಾರ ಮುಂದಾಗಬೇಕು ಎಂದು ಕೊಡವ ಮುಸ್ಲಿಂ ಅಸೋಸಿಯೇಷನ್ (ಕೆಎಂಎ) ಅಧ್ಯಕ್ಷ ವಿರಾಜಪೇಟೆಯ ದುದ್ದಿಯಂಡ ಹೆಚ್. ಸೂಫಿ ಹಾಜಿ ಒತ್ತಾಯಿಸಿದರು.

ಇಲ್ಲಿನ ಮೊಹಿದೀನ್ ಜುಮ್ಮಾ ಮಸೀದಿಯ ಆಟದ ಮೈದಾನದಲ್ಲಿ ನಲ್ವತ್ತೋಕ್ಲಿನ ಚೋಕ್ ಸಿಟಿ ಫುಟ್ಬಾಲ್ ಕ್ಲಬ್ ಆಶಯದಲ್ಲಿ 2 ದಿನ ನಡೆದ ಮೊದಲನೇ ವರ್ಷದ ರಾಜ್ಯಮಟ್ಟದ ಫೈಸ್ ಫುಟ್ಬಾಲ್ ಪಂದ್ಯಾವಳಿಯ ಸಮಾರೋಪದಲ್ಲಿ ಮಾತನಾಡಿದ ಅವರು, ಕೊಡಗಿನಲ್ಲಿ ಮಳೆಗಾಲದ ಮೂರು ತಿಂಗಳು ಹೊರತುಪಡಿಸಿದರೆ ಉಳಿದ ಎಲ್ಲಾ ಅವಧಿಯಲ್ಲೂ ವಿವಿಧ ಕ್ರೀಡಾಕೂಟಗಳು ನಿರಂತರವಾಗಿ ಜರುಗುತ್ತಿರುತ್ತವೆ. ಇದರಿಂದ ಕ್ರೀಡಾಕೂಟಗಳನ್ನು ಆಯೋಜಿಸುವ ತಂಡಗಳಿಗೆ ಸಹಜವಾಗಿಯೇ ಆರ್ಥಿಕ ಕೊರತೆ ಎದುರಾಗುತ್ತದೆ. ಇದನ್ನು ನೀಗಿಸಲು ಸರ್ಕಾರ ಕೊಡಗು ಕ್ರೀಡಾ ಅಭಿವೃದ್ಧಿ ಪ್ರಾಧಿಕಾರ ರಚಿಸಿ, ಅದರ ಮೂಲಕ ಕ್ರೀಡಾಕೂಟಗಳಿಗೆ ಅನುದಾನ ಒದಗಿಸಿದರೆ ಕ್ರೀಡೆಯ ತವರಾದ ಕೊಡಗಿಗೆ ಸೂಕ್ತ ಗೌರವ ಸಲ್ಲುತ್ತದೆ ಎಂದು ಹೇಳಿದರು.

ಸ್ಕ್ವಾಡ್ ಚೋಕ್ ಸಿಟಿ ತಂಡಕ್ಕೆ ಪ್ರಶಸ್ತಿ: ರಾಜ್ಯಮಟ್ಟದ ಫೈಸ್ ಫುಟ್ಬಾಲ್ ಪಂದ್ಯಾವಳಿಯಲ್ಲಿ ಸ್ಕ್ವಾಡ್ ಚೋಕ್ ಸಿಟಿ ತಂಡ ವಿನ್ನರ್ಸ್ ಪ್ರಶಸ್ತಿ ಪಡೆದುಕೊಂಡರೆ, ಸುಂಕದಕಟ್ಟೆಯ ಉತ್ತಮ್ ಫ್ರೆಂಡ್ಸ್ ತಂಡ ದ್ವಿತೀಯ ಸ್ಥಾನ ಪಡೆಯಿತು. ಫೈನಲ್‌ನಲ್ಲಿ ಸ್ಕ್ವಾಡ್ ಚೋಕ್ ಸಿಟಿ ತಂಡ ಸುಂಕದಕಟ್ಟೆಯ ಉತ್ತಮ ಫ್ರೆಂಡ್ಸ್ ತಂಡವನ್ನು 2–0 ಗೋಲುಗಳಿಂದ ಸೋಲಿಸಿ ವಿಜಯದ ಮಾಲೆಯನ್ನು ತನ್ನ ಕೊರಳಿಗೇರಿಸಿಕೊಂಡಿತು.

ಇದಕ್ಕೂ ಮೊದಲು ನಡೆದ ಮೊದಲ ಸೆಮಿಫೈನಲ್‌ನಲ್ಲಿ ಸ್ಕ್ವಾಡ್ ಚೋಕ್ ಸಿಟಿ ತಂಡ ಚಾಮೆ ಫುಟ್ಬಾಲ್ ಕ್ಲಬ್ ತಂಡವನ್ನು 1–0 ಗೋಲಿನಿಂದ ಮತ್ತು ಸುಂಕದಕಟ್ಟೆಯ ಉತ್ತಮ್ ಫ್ರೆಂಡ್ಸ್ ತಂಡ ಸಿಎಫ್‌ಸಿ ಅಮ್ಮತ್ತಿ ತಂಡವನ್ನು 1–0 ಗೋಲುಗಳಿಂದ ಮಣಿಸಿ ಫೈನಲ್ ಪ್ರವೇಶಿಸಿದವು. ವಿಜೇತ ತಂಡಗಳಿಗೆ ನಗದು ಬಹುಮಾನ ಹಾಗೂ ಪಾರಿ ತೋಷಕಗಳನ್ನು ವಿತರಿಸಲಾಯಿತು. ಪಂದ್ಯಾವಳಿಯಲ್ಲಿ ಒಟ್ಟು 32 ತಂಡ ಭಾಗವಹಿಸಿದ್ದವು. ಜಿಲ್ಲಾ ನಿವೃತ್ತ ಖಜಾನಾಧಿಕಾರಿ ಕನ್ನಡಿಯಂಡ ಎ.ಅಲಿ ಹಾಜಿ, ನಲ್ವತ್ತೋಕ್ಲಿನ ಮೊಹಿದೀನ್ ಜುಮಾ ಮಸೀದಿಯ ಆಡಳಿತ ಮಂಡಳಿ ಉಪಾಧ್ಯಕ್ಷ ಡಿ.ಎಫ್.ಅಶ್ರಫ್, ಸ್ಥಳೀಯರಾದ ಹೆಚ್.ಎ.ಮೊಹಮ್ಮದ್ ಹಾಜಿ, ಕೆ.ಎಂ. ಹ್ಯಾರಿಸ್, ಪಿ.ಎ.ಬಶೀರ್, ಡಿ.ಎಸ್.ಶರ್ಹಾನ್, ಸಯಿದ್, ಡಿ.ಎಂ.ಸಿರಾಜ್, ಎಚ್.ಎಂ. ನೌಫಲ್ ಭಾಗವಹಿಸಿದ್ದರು. ಪಂದ್ಯಾವಳಿ ಆಯೋಜಕರಾದ ನಲ್ವತ್ತೋಕ್ಲಿನ ಚೋಕ್ ಸಿಟಿ ಫುಟ್ಬಾಲ್ ಕ್ಲಬ್‌ನ ಮುಖ್ಯಸ್ಥರಾದ ಶಾಹಿದ್, ಶರ್ಮಿದ್, ಮೊಹಾದ್, ಅಜನಾಸ್, ಅಜ್ಮಲ್ ಮೊದಲಾದವರು ಪಂದ್ಯಾವಳಿಯ ಮೇಲುಸ್ತುವಾರಿ ವಹಿಸಿದ್ದರು.



ವೀರಾಜಪೇಟೆಯಲ್ಲಿ ವಿಶೇಷ ಪ್ರಾರ್ಥನೆ



ವೀರಾಜಪೇಟೆ, ಡಿ.25– ವಿರಾಜಪೇಟೆಯ ಕ್ರೈಸ್ತ ದೇವಾಲಯ ಸಂತ ಅನ್ನಮ್ಮ ಚರ್ಚ್‌ನಲ್ಲಿ ಸಡಗರದಿಂದ ಕ್ರಿಸ್‌ಮಸ್ ಹಬ್ಬವನ್ನು ಆಚರಿಸಲಾಯಿತು.

ಕ್ರಿಸ್‌ಮಸ್ ಅಂಗವಾಗಿ ಭಾನುವಾರ ರಾತ್ರಿ ಸಂತ ಅನ್ನಮ್ಮ ದೇವಾಲಯದಲ್ಲಿ ಪ್ರಾರ್ಥನೆ, ದಿವ್ಯ ಬಲಿಪೂಜೆ ನಂತರ ಮಧ್ಯರಾತ್ರಿ ಬಾಲ ಯೇಸುವಿನ ಮೂರ್ತಿಯನ್ನು ಧರ್ಮಗುರುಗಳು ಗೋದಲಿಯಲ್ಲಿ ಪ್ರತಿಷ್ಠಾಪಿಸಿದರು. ಬಳಿಕ ಏಸು ಕ್ರಿಸ್ತನ ಜನನವನ್ನು ಕೊಂಡಾಡುವ ಮೂಲಕ ವಿಶೇಷ ಪ್ರಾರ್ಥನೆ, ಗೀತಾ ಗಾಯನ ಹಾಗೂ ಧಾರ್ಮಿಕ ಕಾರ್ಯಕ್ರಮ ನಡೆಯಿತು.

ಸೋಮವಾರ ಬೆಳಗ್ಗೆ ವಿಶೇಷ ಪ್ರಾರ್ಥನೆ, ಪೂಜಾ ಕಾರ್ಯದಲ್ಲಿ ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಭಾಗವಹಿಸಿ ಶುಭ ಕೋರಿದರು. ಪ್ರಧಾನ ಧರ್ಮಗುರು ಡಾ.ದಯಾನಂದ ಪ್ರಭು ಮಾತನಾಡಿ, ಎಲ್ಲರಲ್ಲಿ ಉತ್ತಮ ಬಾಂಧವ್ಯ ಹಾಗೂ ಶಾಂತಿ, ನೆಮ್ಮದಿ ಉಂಟಾಗಲಿ ಎಂದು ಹಾರೈಸಿದರು. ರೆ.ಫಾ.ಮದಲೈ ಮುತ್ತು ಫಾ.ಐಸಾಕ್ ರತ್ನಾಕರ್, ಪಾ.ಚಾಲ್ಸ್, ಯೇಸು ಪ್ರಭು ಇತರ ಧರ್ಮಗುರುಗಳು ಹಾಗೂ ಕ್ರೈಸ್ತರು, ಸಾರ್ವಜನಿಕರು ಅಧಿಕ ಸಂಖ್ಯೆಯಲ್ಲಿ ನೆರೆದಿದ್ದರು. ಈ ಸಂದರ್ಭ ಭಕ್ತರಿಗೆ ಹಬ್ಬದ ಕೇಕ್ ವಿತರಿಸಲಾಯಿತು.

ಕುಶಾಲನಗರ: ಎಲ್ಲೆಡೆ ಏಸು ಸ್ಮರಣೆ

ಕುಶಾಲನಗರ, ಡಿ.25– ಪಟ್ಟಣ ಸೇರಿದಂತೆ ತಾಲೂಕಿನ ಎಲ್ಲೆಡೆ ಸೋಮವಾರ ಕ್ರಿಸ್‌ಮಸ್ ಹಬ್ಬ ಹಾಗೂ ಏಸು ಸ್ಮರಣೆಯನ್ನು ವಿಜೃಂಭಣೆಯಿಂದ ಆಚರಿಸಿದರು.



ಕುಶಾಲನಗರ, ಕೂಡಿಗೆ, ಸಿದ್ದಲಿಂಗಪುರ ಹಾಗೂ ಏಳನೇ ಹೊಸಕೋಟೆ ಗ್ರಾಮಗಳಲ್ಲಿ ಕ್ರಿಸ್‌ಮಸ್ ಅಂಗವಾಗಿ ಕ್ರೈಸ್ತರು ಹೊಸ ಉಡುಗೆ ಧರಿಸಿ ಸಂತ ಸೆಬಾಸ್ಟೀನರ ದೇವಾಲಯ ಮತ್ತು ಸಿಎಸ್‌ಐ ಮೇಡಕ್ ಮೆಮೋರಿಯಲ್ ಚರ್ಚ್‌ಗೆ ತೆರಳಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಧರ್ಮಗುರು ವಂ. ಫಾ.ಎಂ. ಮಾರ್ಟಿನ್ ನೇತೃತ್ವದಲ್ಲಿ ದೇವಾಲಯದಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ಕೂಡಿಗೆ ಹೋಲಿ ಫ್ಯಾಮಿಲಿ ಚರ್ಚ್ ಧರ್ಮಗುರು ವಂದನೀಯ ಚಾರ್ಲ್ಸ್ ನೋರೋನ್ಹಾ ಹಾಗೂ ಸುಂಟಿಕೊಪ್ಪದ ಸಂತಮೇರಿಸ್, ಏಳನೇ ಹೊಸಕೋಟೆ ಮತ್ತು ಸಿದ್ದಲಿಂಗಪುರ ಗ್ರಾಮದಲ್ಲಿ ಸಂತ ಅನ್ನಮ್ಮ ದೇವಾಲಯದಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿ, ಸಿಹಿ ವಿತರಿಸಿ ಶುಭಾಶಯ ವಿನಿಮಯ ಮಾಡಿಕೊಳ್ಳಲಾಯಿತು.

ಇಲ್ಲಿನ ಟೋಲ್‌ಗೇಟ್ ಬಳಿಯ ಸಿಎಸ್‌ಐ ಮೇಡಕ್ ಚರ್ಚ್‌ನಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ಕುಶಾಲನಗರ ಸೆಬಾಸ್ಟೀನರ ಚರ್ಚ್ ಆಡಳಿತ ಮಂಡಳಿ ಕಾರ್ಯದರ್ಶಿ ಸವರಿನ್ ಡಿಸೋಜ, ಸದಸ್ಯ ಶಾಜಿ ಕೆ.ಜಾರ್ಜ್, ರೋಟರಿ ಕ್ಲಬ್ ಮಾಜಿ ಅಧ್ಯಕ್ಷ ಕ್ರೆಜ್ವಲ್ ಕೊಟ್ಸ್, ರಾಯ್, ಯೋಸುದಾಸ್, ಜಾನ್, ಫಿಲಿಪ್ ವಾಸ್, ಅಂಥೋಣಿ ಪ್ರಭುರಾಜ್, ಸೆಲಿನಾ, ಹುರ್ಬಟ್ ಡೈಸ್, ಸುನಿಲ್, ಸುಖಿ, ಶಾಂತಪ್ಪ, ಆಲ್ಬರ್ಟ್, ಪೌಲ್ಸನ್, ರೆ.ಫಾ.ಸಾಮ್ಯುಯೆಲ್ ಮನೋಜ್ ಕುಮಾರ್, ಚರ್ಚ್ ಮುಖಂಡರಾದ ಜೋಸೆಫ್ ವಿಕ್ಟರ್ ಸೋನ್ಸ್, ಜಾನ್, ಸುಕುಮಾರ್, ಸುನಂದ ಕುಮಾರ್, ಸೆಮ್ಮಿಡೇವಿಡ್, ಅಗಸ್ಟಿನ್, ಮಿಲ್ಟನ್, ಅನಿತಾ ಚಾಲ್ಸ್, ಮಿಂಟನ್, ಎಡ್ವಿನ್, ರಕ್ಷಾಪ್ರೀಯ, ಸುರೇಶ್ ಬಾಬು, ನವಮಣಿ, ನೆಲ್ಸನ್ ಭಾಗವಹಿಸಿದ್ದರು.

ನಾಪೋಕ್ಲುವಿನಲ್ಲಿ ಕ್ರಿಸ್‌ಮಸ್ ಆಚರಣೆ



ನಾಪೋಕ್ಲು, ಡಿ.25– ಇಲ್ಲಿನ ಸಂತಮೇರಿ ಮಾತೆಯ ದೇವಾಲಯದಲ್ಲಿ ಕ್ರೈಸ್ತರು ಕ್ರಿಸ್‌ಮಸ್ ಅನ್ನು ಭಾನುವಾರ ರಾತ್ರಿ ಹಾಗೂ ಸೋಮವಾರ ಅರ್ಥಪೂರ್ಣವಾಗಿ ಆಚರಿಸಿದರು.

ಧರ್ಮಗುರು ಜ್ಞಾನಪ್ರಕಾಶ್, ದೇವಾಲಯದಲ್ಲಿ ವಿಶೇಷ ಪೂಜೆ ನೆರವೇರಿಸಿ, ಪ್ರಾರ್ಥನೆ ಸಲ್ಲಿಸಿದರು. ಬಳಿಕ ಮಾತನಾಡಿದ ಅವರು, ಯೇಸುವಿನ ಆದರ್ಶಗಳನ್ನು ನಾವೆಲ್ಲರೂ ಮೈಗೂಡಿಸಿಕೊಂಡು ಅವರಂತೆ ಬದುಕಿ ಬಾಳಬೇಕು. ಬೇರೆಯವರ ಭಾವನೆಯನ್ನು ಅರ್ಥಮಾಡಿಕೊಂಡು ಅವರ ಕಷ್ಟಕ್ಕೆ ಸ್ಪಂದಿಸುವಂತಾಗಬೇಕು. ಬೇರೆಯವರ ಕಣ್ಣಲ್ಲಿ ನೀರು ತರಿಸದೆ ನಾವು ಸುಖವಾಗಿ ಬದುಕಿ, ಬೇರೆಯವರು ಸುಖವಾಗಿ ಬದುಕುವಂತೆ ಯೋಚಿಸಿ ಎಂದು ಶುಭಾಶಯ ಕೋರಿದರು.

ದೇವಾಲಯವನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಿ, ಆಕರ್ಷಕ ಗೋದಲಿ ನಿರ್ಮಿಸಲಾಗಿತ್ತು. ಇದೇ ವೇಳೆ ಯೇಸುವಿನ ಜನನದ ಗೋದಲಿ ನಿರ್ಮಿಸುವ ಸ್ಪರ್ಧೆ ಏರ್ಪಡಿಸಲಾಗಿತ್ತು. ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಜಾಲಿ ಶರ್ಲಿ, ದ್ವಿತೀಯ ಸ್ಥಾನ ಕೆ.ಜೆ.ರಾಯ್ ಹಾಗೂ ಅಖಿಲ್ ಜೋಸೆಫ್ ತೃತೀಯ ಬಹುಮಾನ ಪಡೆದರು. ಧರ್ಮಗುರು ಜ್ಞಾನಪ್ರಕಾಶ್ ಬಹುಮಾನ ವಿತರಿಸಿದರು.

ಸಚಿವ ಶಿವಾನಂದ ಪಾಟೀಲ್ ವಿರುದ್ಧ ರೈತರ ಪ್ರತಿಭಟನೆ



ಚಾಮರಾಜನಗರ, ಡಿ.25– ರೈತರ ಬಗ್ಗೆ ಸಕ್ಕರೆ ಸಚಿವ ಶಿವಾನಂದ ಪಾಟೀಲ್ ಹಗುರವಾಗಿ ಮಾತನಾಡಿದ್ದಾರೆ ಎಂದು ಆರೋಪಿಸಿ ನಗರದಲ್ಲಿ ಸೋಮವಾರ ರಾಜ್ಯ ಕಬ್ಬು ಬೆಳೆಗಾರರ ಸಂಘದ ನೇತೃತ್ವದಲ್ಲಿ ರೈತರು ಪ್ರತಿಭಟನೆ ನಡೆಸಿದರು.

ನಗರದ ಜಿಲ್ಲಾಡಳಿತ ಭವನದ ಎದುರು ಜಮಾಯಿಸಿದ ರೈತರು, ಸಚಿವ ಶಿವಾನಂದ ಪಾಟೀಲ್ ವಿರುದ್ಧ ಘೋಷಣೆ ಕೂಗಿ, ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಕಬ್ಬು ಬೆಳೆಗಾರರ ಸಂಘದ ಕಾರ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ದೇಶಾದ್ಯಂತ ವಿಶ್ವ ರೈತ ದಿನ ಆಚರಿಸಿ, ರೈತ ದೇಶದ ಬೆನ್ನೆಲುಬು ಹಾಗೂ ದೇಶಕ್ಕೆ ಅನ್ನ ನೀಡುವ ಅನ್ನದಾತ ಎಂದು ಮಾತನಾಡುತ್ತಾರೆ. ಆದರೆ ಸಚಿವ ಶಿವಾನಂದ ಪಾಟೀಲ್ ಅವರು, ರೈತರು ಬರಗಾಲ ಬರಬೇಕೆಂದು ಆಶಿಸುತ್ತಾರೆ. ಸಾಲಮನ್ನಾ ಮಾಡಿ ಎಂದು ಸರ್ಕಾರವನ್ನು ಒತ್ತಾಯಿಸುತ್ತಾರೆ. ಬರಗಾಲ ಸ್ವಾಭಾವಿಕವಾಗಿ ಬರುತ್ತದೆ. ಪ್ರತಿ ಸಾರಿ ಸಾಲಮನ್ನಾ ಮಾಡಲಾಗುತ್ತದೆಯೇ ಎಂದಿರುವ ಅವರು, ವಿದ್ಯುತ್ ಅನ್ನು ಉಚಿತವಾಗಿ ನೀಡಲಾಗುತ್ತಿದೆ. ಗೊಬ್ಬರದ ಸಬ್ಸಿಡಿ ನೀಡಲಾಗುತ್ತಿದೆ. ಈ ಸಂದರ್ಭ ರೈತರು ಸಾಲಮನ್ನಾ ನಿರೀಕ್ಷಿಸುತ್ತಿರುವುದು ಸರಿಯಲ್ಲ. ಸರ್ಕಾರ ಸಾಲಮನ್ನಾ ಮಾಡುವುದಿಲ್ಲ ಎಂದಿದ್ದಾರೆ ಎಂದು ದೂರಿದರು.

ತಕ್ಷಣ ಸಚಿವರು ಈ ಸಂಬಂಧ ರೈತರ ಕ್ಷಮೆ ಕೇಳಬೇಕು. ಅವರನ್ನು ಸಚಿವ ಸಂಪುಟದಿಂದ ವಜಾ ಮಾಡಬೇಕು. ಇಲ್ಲದಿದ್ದರೇ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು. ಪ್ರತಿಭಟನೆಯಲ್ಲಿ ತಾಲೂಕು ಅಧ್ಯಕ್ಷ ನಾಗರಾಜು, ಹರ್ಷ, ಮಹೇಂದ್ರ, ಸತೀಶ್, ಕುಮಾರ್, ಪ್ರಭುಸ್ವಾಮಿ, ಮಂಜುನಾಥ್, ಮಹದೇವಸ್ವಾಮಿ, ಗುರು, ನಾಗೇಂದ್ರ, ನಂದೀಶ್, ಶ್ರೀಕಂಠ, ನಾಗರಾಜು ಹಾಜರಿದ್ದರು.

ವಿದ್ಯುತ್ ಉಪಕೇಂದ್ರ ನಿರ್ಮಾಣಕ್ಕೆ ಭೂಮಿಪೂಜೆ

ಚಾಮರಾಜನಗರ, ಡಿ.25– ನಗರಸಭೆ ವ್ಯಾಪ್ತಿಯ ಸೋಮವಾರಪೇಟೆ(ಗಾಳಿಪುರ) ಬಡಾವಣೆಯಲ್ಲಿ 10.50 ಕೋಟಿ ರೂ. ವೆಚ್ಚದ 66/11 ಕೆವಿ ವಿದ್ಯುತ್ ಉಪಕೇಂದ್ರ ನಿರ್ಮಾಣ ಕಾಮಗಾರಿಗೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಭೂಮಿಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ವಿದ್ಯುತ್ ಉಪಕೇಂದ್ರ ನಿರ್ಮಾಣದಿಂದ ನಗರದ ಸೋಮವಾರಪೇಟೆ, ಗಾಳಿಪುರ, ಸಿಮ್ಸ್ ಕಾಲೇಜು, ಆಸ್ಪತ್ರೆ, ಮೂಡ್ಲುಪುರ, ಯಡಪುರ, ಮಲ್ಲಯ್ಯನಪುರ, ತಾವರೆಕಟ್ಟೆ ಮೋಳೆ ಗ್ರಾಮಗಳಿಗೆ ಗುಣಮಟ್ಟದ ವಿದ್ಯುತ್ ಪೂರೈಕೆಯಾಗಲಿದೆ ಸಂಬಂಧಪಟ್ಟ ಗುತ್ತಿಗೆದಾರರು ತ್ವರಿತಗತಿಯಲ್ಲಿ ಕಾಮಗಾರಿ ಆರಂಭಿಸಬೇಕು ಎಂದು ಸೂಚನೆ ನೀಡಿದರು. ಈ ವೇಳೆ ಕೆಪಿಟಿಸಿಎಲ್ ಬೃಹತ್ ಕಾಮಗಾರಿ ವಿಭಾಗದ ಕಾರ್ಯ ನಿರ್ವಾಹಕ ಇಂಜಿನಿಯರ್, ಪ್ರಭಾರ ಸಿವಿಲ್ ಎಇಇ, ಎಸ್‌ಎಂಎಸ್ ನಿರ್ಮಾಣ ಸಂಸ್ಥೆ ಗುತ್ತಿಗೆದಾರರು ಹಾಜರಿದ್ದರು.

ಲೋಕೇಶ್ ನಿಧನ



ಕೊಳ್ಳೇಗಾಲ, ಡಿ.25– ಪಟ್ಟಣದ ರೇಣುಕಾ ಪ್ರಿಂಟಿಂಗ್ ಪ್ರೆಸ್ ಮಾಲೀಕ ಲೋಕೇಶ್(64) ಸೋಮವಾರ ಬೆಳಗ್ಗೆ ನಿಧನರಾದರು. ಮೃತರು ಪತ್ನಿ ಪದ್ಮ, ಓರ್ವ ಪುತ್ರ, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮೃತರ ಸ್ವಗ್ರಾಮ ಪಾಳ್ಯದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮೃತರ ನಿಧನಕ್ಕೆ ನಗರಸಭೆ ಮಾಜಿ ಸದಸ್ಯ ಮುಡಿಗುಂಡ ಶಾಂತರಾಜು, ದಿಲೀಪ್, ಸಿದ್ದಪ್ಪಾಜಿ, ಡಿ.ನಟರಾಜು, ನಿಂಪು ಸುರೇಶ್, ಮಣಿ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.


ರಾಮಯ್ಯ



ಚಾಮರಾಜನಗರ, ಡಿ.25– ಯಳಂದೂರು ತಾಲೂಕಿನ ಕೆಸ್ತೂರು ಗ್ರಾಮದ ನಿವಾಸಿ ಹಾಗೂ ನಿವೃತ್ತ ಗ್ರಾಮಲೆಕ್ಕಿಗ ರಾಮಯ್ಯ (68) ಸೋಮವಾರ ಬೆಳಗ್ಗೆ ನಿಧನರಾದರು. ಮೃತರು ಪತ್ನಿ, 6 ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗ ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ಮಧ್ಯಾಹ್ನ 12 ಗಂಟೆಗೆ ಮೃತರ ಜಮೀನಿನಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಚಾಮರಾಜನಗರದಲ್ಲಿ ಸಡಗರ-ಸಂಭ್ರಮದ ಕ್ರಿಸ್‌ಮಸ್

● ಕ್ರೈಸ್ತರಿಂದ ಸಾಮೂಹಿಕ ಪ್ರಾರ್ಥನೆ, ಯೇಸು ಕ್ರಿಸ್ತನ ಸ್ಮರಣೆ, ಪರಸ್ಪರ ಶುಭಾಶಯ ವಿನಿಮಯ ● ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಕಂಗೊಳಿಸಿದ ಚರ್ಚ್‌ಗಳು



ಚಾಮರಾಜನಗರ, ಡಿ.25– ಪ್ರೀತಿ, ಮಮತೆ, ಶಾಂತಿ ಸಂದೇಶ ಸಾರಿದ ಯೇಸು ಕ್ರಿಸ್ತನ ಜನ್ಮದಿನದ ಪ್ರತೀಕವಾದ ಕ್ರಿಸ್‌ಮಸ್ ಹಬ್ಬವನ್ನು ಚಾಮರಾಜನಗರ, ಗುಂಡ್ಲುಪೇಟೆ, ಯಳಂದೂರು, ಕೊಳ್ಳೇಗಾಲ ಹಾಗೂ ಹನೂರು ಸೇರಿದಂತೆ ಜಿಲ್ಲಾದ್ಯಂತ ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಕ್ರಿಸ್‌ಮಸ್ ಅಂಗವಾಗಿ ಬೆಳಗ್ಗೆಯಿಂದಲೇ ಕ್ರೈಸ್ತರು ಚರ್ಚ್‌ಗಳಲ್ಲಿ ಹಾಗೂ ತಮ್ಮ ಮನೆಗಳಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಅಲ್ಲದೇ ಜಿಲ್ಲೆಯ ಎಲ್ಲಾ ಚರ್ಚ್‌ಗಳನ್ನು ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಸಿಂಗರಿಸಲಾಗಿತ್ತು. ಭಾನುವಾರ ರಾತ್ರಿಯಿಂದಲೇ ಚರ್ಚ್‌ಗಳಲ್ಲಿ ವಿಶೇಷ ಪ್ರಾರ್ಥನೆ ನಡೆಯಿತು.

ಹಬ್ಬದ ಅಂಗವಾಗಿ ಕ್ರೈಸ್ತರು ಹೊಸಬಟ್ಟೆ ತೊಟ್ಟು, ಕೇಕ್ ಕತ್ತರಿಸಿ ಪರಸ್ಪರ ಸಿಹಿ ಹಂಚಿ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು. ಅಲ್ಲದೇ ತಮ್ಮ ಮನೆಗಳನ್ನು ಬಣ್ಣ ಬಣ್ಣದ ವಿದ್ಯುತ್ ದೀಪ, ಕ್ರಿಸ್‌ಮಸ್ ಟ್ರೀ, ಆಕಾಶ ದೀಪಗಳಿಂದ ಅಲಂಕರಿಸುವ ಜೊತೆಗೆ ಗೋದಲಿ ನಿರ್ಮಿಸಿ ಸಂಭ್ರಮಿಸಿದರು.

ವಿವಿಧೆಡೆ ಕ್ರಿಸ್‌ಮಸ್ ಆಚರಣೆ: ಚಾಮರಾಜನಗರದ ಸುತ್ತಮುತ್ತಲ ಗ್ರಾಮಗಳಲ್ಲಿ ಕ್ರೈಸ್ತರು ಸಂಭ್ರಮದಿಂದ ಕ್ರಿಸ್‌ಮಸ್ ಆಚರಿಸಿದರು. ನಗರದ ಸಂತ ಪೌಲರ ದೇವಾಲಯ, ತಾಲೂಕಿನ ಮಸಗಾಪುರ, ಮಾದಾಪುರ, ನಾಗವಳ್ಳಿ ಸೇರಿದಂತೆ ಇತರೆ ಗ್ರಾಮಗಳ ಚರ್ಚ್‌ಗಳಿಗೆ ತೆರಳಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

ಹಬ್ಬದ ಅಂಗವಾಗಿ ಮನೆಗಳಲ್ಲಿ ಹಬ್ಬದೂಟ ತಯಾರಿಸಿ ಸವಿದರು.ಇತರೆ ಧರ್ಮದವರು ಸಹ ಕ್ರೈಸ್ತರ ಮನೆಗಳಿಗೆ ತೆರಳಿ ಹಬ್ಬದ ಶುಭಾಶಯ ಕೋರಿದರು.

ಹನೂರು: ತಾಲೂಕಿನ ವಿವಿಧೆಡೆ ಕ್ರೈಸ್ತರು ಸಂಭ್ರಮದಿಂದ ಕ್ರಿಸ್‌ಮಸ್ ಆಚರಿಸಿ, ಯೇಸುವಿನ ಸ್ಮರಣೆ ಮಾಡಿ ಪ್ರಾರ್ಥನೆ ಸಲ್ಲಿಸಿದರು.

ಪಟ್ಟಣದ ಕ್ರಿಸ್ತರಾಜ ವಿದ್ಯಾಸಂಸ್ಥೆ ಆವರಣದಲ್ಲಿರುವ ಚರ್ಚ್ ಸೇರಿದಂತೆ ಕ್ರೈಸ್ತ ದೇಗುಲಗಳಲ್ಲಿ ಯೇಸುವಿನ ಸ್ಮರಣೆ ಮಾಡಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಪರಸ್ಪರ ಹಬ್ಬದ ಶುಭಾಶಯ ಕೋರಿ ಸಿಹಿ ವಿತರಿಸಿದರು. ಹಬ್ಬದ ಅಂಗವಾಗಿ ಚರ್ಚ್‌ಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು.

ಕೊಳ್ಳೇಗಾಲದಲ್ಲಿ ಯೇಸು ಕ್ರಿಸ್ತನ ಸ್ಮರಣೆ: ತಾಲೂಕಿನಾದ್ಯಂತ ಕ್ರೈಸ್ತವರು ಸೋಮವಾರ ಸಡಗರದಿಂದ ಕ್ರಿಸ್‌ಮಸ್ ಆಚರಿಸಿದರು. ಪಟ್ಟಣದ ಚರ್ಚ್‌ಗಳಲ್ಲಿ ಕ್ರೈಸ್ತರು ವಿಶೇಷ ಪ್ರಾರ್ಥನೆ ಸಲ್ಲಿಸಿ ದರು. ಬಳಿಕ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡು ಕೇಕ್ ವಿತರಿಸಿದರು.

ಪಟ್ಟಣದ ಕ್ರಿಶ್ಚಿಯನ್ನರ ಬಡಾವಣೆ ಹಾಗೂ ಸಂತ ಫ್ರಾನ್ಸಿಸ್ ಅಸ್ಸಿಸಿ ಚರ್ಚ್, ಬೇತೆಲ್ ಲೂಥರನ್ ಚರ್ಚ್, ಸೆವೆಂತ್ ಡೇ ಚರ್ಚ್, ಕಲ್ವಾರಿ ಎಜಿ ಚರ್ಚ್, ಅರುಣೋದಯ ಯೇಸು ಚರ್ಚ್, ಸಿಎಸ್‌ಐ ಚರ್ಚ್, ಬ್ರದರನ್ ಚರ್ಚ್, ಸಂತ ಅಗಸ್ಟಿನ್ ಚರ್ಚ್ ಸೇರಿದಂತೆ ತಾಲೂಕಿನಾದ್ಯಂತ ಎಲ್ಲಾ ಚರ್ಚ್‌ಗಳು ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸುತ್ತಿದ್ದವು.

ಕ್ರಿಸ್‌ಮಸ್ ಹಬ್ಬ: ಗಣ್ಯರಿಂದ ಕ್ರೈಸ್ತರಿಗೆ ಶುಭಾಶಯ



ಕೊಳ್ಳೇಗಾಲ, ಡಿ.25– ಕ್ರಿಸ್‌ಮಸ್ ಹಿನ್ನೆಲೆಯಲ್ಲಿ ಶಾಸಕ ಎ.ಆರ್. ಕೃಷ್ಣಮೂರ್ತಿ, ಕೆಪಿಸಿಸಿ ಕಾರ್ಮಿಕ ವಿಭಾಗದ ರಾಜ್ಯ ಕಾರ್ಯದರ್ಶಿ ಜಿ.ಸಿ. ಕಿರಣ್, ನಗರಸಭೆ ಮಾಜಿ ಅಧ್ಯಕ್ಷ ಬಸ್ತಿಪುರ ಶಾಂತರಾಜು, ರಮೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ತೋಟೇಶ್ ಸೇರಿದಂತೆ ಹಲವು ಗಣ್ಯರು ಚರ್ಚ್‌ಗಳಿಗೆ ಭೇಟಿ ನೀಡಿ, ಕ್ರೈಸ್ತರಿಗೆ ಶುಭಾಶಯ ಕೋರಿದರು.

ಈ ವೇಳೆ ಮಾತನಾಡಿದ ಶಾಸಕ ಎ.ಆರ್.ಕೃಷ್ಣಮೂರ್ತಿ, ಕ್ರಿಸ್‌ಮಸ್ ಭಾವೈಕ್ಯತೆ ಹಾಗೂ ಸಹೋದರತ್ವ ಬಿಂಬಿಸುವ ಹಬ್ಬವಾಗಿದ್ದು, ಇಂದು ತಾಲೂಕಿನಾದ್ಯಂತ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಲಕ್ಷಕ್ಕೂ ಅಧಿಕ ಮತ ನೀಡಿ 58 ಸಾವಿರ ಮತಗಳ ಅಂತರದಲ್ಲಿ ಗೆಲುವು ಸಾಧಿಸುವಲ್ಲಿ ಕ್ರೈಸ್ತ ಬಾಂಧವರ ಆಶೀರ್ವಾದವೂ ಪ್ರಮುಖ ಕಾರಣ ಎಂದರು.

ಇದೇ ವೇಳೆ ಜಿ.ಸಿ.ಕಿರಣ್ ಹಲವು ಚರ್ಚ್‌ಗಳಿಗೆ ಭೇಟಿ ನೀಡಿ, ಕೇಕ್ ವಿತರಿಸಿ ಶುಭಾಶಯ ಕೋರಿದರು. ಈ ವೇಳೆ ಮಾತನಾಡಿದ ಅವರು, ನಾನು ಕ್ರೈಸ್ತ ಶಾಲೆಯಲ್ಲಿ ನಾನು ಅಧ್ಯಯನ ಮಾಡಿದ್ದು, ಕ್ರೈಸ್ತ ಮಿಷನರಿಗಳು ಮೌಲ್ಯಯುತ ಶಿಕ್ಷಣ ನೀಡುವಲ್ಲಿ, ಸಮಾಜಮುಖಿ ಚಟುವಟಿಕೆಗಳಲ್ಲಿ ಮುಂಚೂಣಿಯಲ್ಲಿದ್ದಾರೆ. ಹೀಗಾಗಿ ಚರ್ಚ್ ಗಳಿಗೆ ನನ್ನ ಕೈಲಾದ ಕೊಡುಗೆ ನೀಡುವೆ. ಸಮಾಜದ ಬಂಧುಗಳಿಗೆ ದೊರಕಬೇಕಾದ ಸವಲತ್ತು ಕಲ್ಪಿಸಲು ಶ್ರಮಿಸುವೆ ಎಂದರು.

ಚರ್ಚ್‌ಗಳಿಗೆ ಶಾಸಕರ ಭೇಟಿ, ಶುಭಾಶಯ ವಿನಿಮಯ

ಚಾಮರಾಜನಗರ, ಡಿ.25– ಪಟ್ಟಣದ ಸಿಎಸ್‌ಐ, ಮಸಗಾಪುರದ ಬಿಷಪ್ ನಾರ್ಚೆಂಟ್ ಸ್ಮಾರಕ ದೇವಾಲಯ, ದೊಡ್ಡರಾಯಪೇಟೆ ಸಂತತೆರೆಸಾ ಚರ್ಚ್ ಸೇರಿದಂತೆ ತಾಲೂಕಿನ ವಿವಿಧ ಚರ್ಚ್‌ಗಳಿಗೆ ಶಾಸಕ ಸಿ.ಪುಟ್ಟರಂಗಶೆಟ್ಟಿ ತೆರಳಿ ಅಲ್ಲಿನ ಧರ್ಮ ಗುರುಗಳನ್ನು ಸನ್ಮಾನಿಸಿ, ಕ್ರಿಸ್‌ಮಸ್ ಶುಭಾಶಯ ಕೋರಿದರು. ಈ ವೇಳೆ ಮಾತನಾಡಿದ ಅವರು, ಶಾಂತಿ, ಅಹಿಂಸೆ, ಕರುಣೆಯಂತಹ ಮಾನವೀಯ ಗುಣಗಳನ್ನು ಜಗತ್ತಿಗೆ ಸಾರಿದ ಮಹಾನ್ ಮಾನವತಾವಾದಿ ಯೇಸು ಕ್ರಿಸ್ತ ಇಂದು ಹುಟ್ಟಿದ ದಿನವಾಗಿದ್ದು, ನಾಡಿನ ಎಲ್ಲಾ ಕ್ರೈಸ್ತ ಬಂಧುಗಳಿಗೆ ಹಬ್ಬದ ಶುಭಾಶಯ ಕೋರುವುದಾಗಿ ತಿಳಿಸಿದರು.



ಇನ್ನೊಂದು ವಾರದಲ್ಲಿ ನೂತನ ವರ್ಷ ಬರಲಿದ್ದು, ನಾಡಿನ ಜನತೆಗೆ ಬರುವ ಹೊಸ ವರ್ಷ ಒಳಿತು ಮಾಡಲಿ. ಉತ್ತಮ ಮಳೆ ಬೆಳೆಯಾಗಲಿ ಎಂದು ಪ್ರಾರ್ಥಿಸಿರುವುದಾಗಿ ತಿಳಿಸಿದರು. ಈ ವೇಳೆ ಶಾಸಕರನ್ನು ಸನ್ಮಾನಿಸಲಾಯಿತು.

ವೈದ್ಯರ ಮೇಲಿನ ಹಲ್ಲೆಗೆ ಖಂಡನೆ



ಚಾಮರಾಜನಗರ, ಡಿ.25– ನಗರದ ಜಿಲ್ಲಾಸ್ಪತ್ರೆ ತುರ್ತು ಚಿಕಿತ್ಸಾ ವಿಭಾಗದ ಎದುರು ಸಿಮ್ಸ್ ಸ್ಥಾನಿಕ (ರೆಸಿಡೆಂಟ್) ವೈದ್ಯ ಡಾ.ಲಕ್ಷ್ಮಿಕಾಂತ ಹಾಗೂ ಎಂಬಿಬಿಎಸ್ ವಿದ್ಯಾರ್ಥಿ ಲಕ್ಷ್ಮಿಪುತ್ರ ಅವರ ಮೇಲೆ ಹಲ್ಲೆ ನಡೆಸಿ, ಮಕ್ಕಳ ತಜ್ಞೆ ಡಾ.ಸ್ನೇಹ ಅವರನ್ನು ನಿಂದಿಸಿರುವ ಘಟನೆಯನ್ನು ಕರ್ನಾಟಕ ರಾಜ್ಯ ಕಿವಿ ಮೂಗು ಮತ್ತು ಗಂಟಲು ತಜ್ಞರ ಸಂಘದ ರಾಜ್ಯಾಧ್ಯಕ್ಷ ಡಾ. ಎ.ಆರ್.ಬಾಬು ಖಂಡಿಸಿದ್ದಾರೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಮೇಲೆ ಹಲ್ಲೆ ನಡೆಸಿದರೇ ರೋಗಿಗಳ ಸೇವೆ ಮಾಡಲು ಕಷ್ಟವಾಗುತ್ತದೆ. ಹೀಗಾಗಿ ಹಲ್ಲೆ ಮಾಡಿದ ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಕೋವಿಡ್ ನಂತಹ ಸಂಕಷ್ಟ ಸಮಯದಲ್ಲಿಯೂ ಸರ್ಕಾರಿ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸುತ್ತಿರುವ ವೈದ್ಯರ ಮೇಲೆ ಹಲ್ಲೆ ನಡೆದಿರುವುದು ಖಂಡನೀಯ. ಇದರಿಂದ ವೈದ್ಯರು ಕೆಲಸ ಮಾಡುವ ಮನೋಸ್ಥೈರ್ಯ ಕುಸಿಯುತ್ತದೆ. ಸರ್ಕಾರ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಆಸ್ಪತ್ರೆಗಳಲ್ಲಿ ವೈದ್ಯರು ನಿರ್ಭಯವಾಗಿ ಕೆಲಸ ನಿರ್ವಹಿಸಲು ಸೂಕ್ತ ರಕ್ಷಣೆ ನೀಡಬೇಕು ಎಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ತ.ನಾಡಿಗೆ ನೀರು: ಕೊಳೆತ ಟೊಮ್ಯಾಟೊ ಸುರಿದು ಆಕ್ರೋಶ



ಚಾಮರಾಜನಗರ, ಡಿ.25– ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವ ಕ್ರಮ ಖಂಡಿಸಿ ನಗರದಲ್ಲಿ ಕರ್ನಾಟಕ ಸೇನಾ ಪಡೆ ನಡೆಸುತ್ತಿರುವ ಪ್ರತಿಭಟನೆ 112ನೇ ದಿನಕ್ಕೆ ಕಾಲಿಟ್ಟಿದ್ದು, ಸೋಮವಾರ ಇಲ್ಲಿನ ರಾಷ್ಟ್ರೀಯ ಹೆದ್ದಾರಿಯಲ್ಲಿ ಕೊಳೆತ ಟೊಮ್ಯಾಟೊ ಸುರಿದು ಆಕ್ರೋಶ ವ್ಯಕ್ತಪಡಿಸಿದರು.

ನಗರದ ಚಾಮರಾಜೇಶ್ವರ ಉದ್ಯಾನದ ಮುಂಭಾಗ ಸೇನಾಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡರ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು, ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತಕ್ಕೆ ತೆರಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ರಾಜ್ಯ, ಕೇಂದ್ರ ಸರ್ಕಾರ, ಕಾವೇರಿ ನೀರು ನಿರ್ವಹಣಾ ಮಂಡಳಿ ವಿರುದ್ಧ ಘೋಷಣೆ ಕೂಗಿದರು. ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಮಾತನಾಡಿ, ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವ ಕ್ರಮ ಖಂಡಿಸಿ ನಗರದಲ್ಲಿ ಕಳೆದ 112 ದಿನಗಳಿಂದ ನಿರಂತರವಾಗಿ ಪ್ರತಿಭಟನೆ ನಡೆಸಲಾಗುತ್ತಿದ್ದು, ಇಂದು ಸಹ ರಾಷ್ಟ್ರೀಯ ಹೆದ್ದಾರಿಯಲ್ಲಿ ಕೊಳೆತ ಟೊಮ್ಯಾಟೊ ಸುರಿದು ಪ್ರತಿಭಟನೆ ನಡೆಸಲಾಗಿದೆ. ಮಳೆ ಕೊರತೆಯಿಂದ ರಾಜ್ಯದಲ್ಲಿ ಜಲಾಶಯಗಳು ಬರಿದಾಗು ತ್ತಿದ್ದು, ಬೆಳೆಗಳು ಸಂಪೂರ್ಣ ಒಣಗುತ್ತಿವೆ. ರಾಜ್ಯದಲ್ಲಿ ನೀರಿನ ಅಭಾವವಿದ್ದು, ಮುಂದಿನ ದಿನಗಳಲ್ಲಿ ತೀವ್ರ ಬರಗಾಲ ಎದುರಾ ಗಲಿದೆ. ಹೀಗಾಗಿ ಕರ್ನಾಟಕ ಸರ್ಕಾರ ಎಚ್ಚೆತ್ತುಕೊಂಡು ತಮಿಳು ನಾಡಿಗೆ ಹರಿಸುತ್ತಿರುವ ನೀರನ್ನು ನಿಲ್ಲಿಸಬೇಕು ಎಂದು ತಿಳಿಸಿದರು.

ಇಂದಿನಿಂದ ಭಾರತ, ದ.ಆಫ್ರಿಕಾ ಬಾಕ್ಸಿಂಗ್ ಡೇ ಟೆಸ್ಟ್



ಸೆಂಚೂರಿಯನ್, ಡಿ.25– ಭಾರತ-ದಕ್ಷಿಣ ಆಫ್ರಿಕಾ ನಡುವಿನ ಬಾಕ್ಸಿಂಗ್ ಡೇ ಟೆಸ್ಟ್ ಪಂದ್ಯ ಇಂದಿನಿಂದ (ಡಿ.26) ಇಲ್ಲಿನ ಸೂಪರ್ ಸ್ಪೋರ್ಟ್ ಮೈದಾನದಲ್ಲಿ ಭಾರತೀಯ ಕಾಲಮಾನ 1.30ಕ್ಕೆ ಆರಂಭವಾಗಲಿದೆ. ಹರಿಣಗಳ ನಾಡಿಗೆ ದಂಡೆತ್ತಿ ಹೋಗಿರುವ ಭಾರತ ಟಿ20 ಸರಣಿಯಲ್ಲಿ ಸಮಬಲ ಸಾಧಿಸಿದರೆ, ಏಕದಿನ ಕ್ರಿಕೆಟ್ ಸರಣಿಯನ್ನು 2–1ರ ಅಂತರದಲ್ಲಿ ಗೆದ್ದುಕೊಂಡಿತು. ಹೀಗಾಗಿ ಮುಂಬರುವ 2 ಪಂದ್ಯಗಳ ಟೆಸ್ಟ್ ಕ್ರಿಕೆಟ್ ಸರಣಿ ಗೆಲ್ಲುವ ಫೇವರಿಟ್ ಆಗಿದೆ.

ಐಸಿಸಿ ಟೆಸ್ಟ್ ವಿಶ್ವ ಚಾಂಪಿಯನ್‌ಶಿಪ್‌ನ ಮೊದಲೆರಡು ಆವೃತ್ತಿಗಳಲ್ಲಿ ಫೈನಲ್ ತಲುಪಿ ರನ್ನರ್ಸ್‌ಅಪ್ ಸ್ಥಾನ ಪಡೆದಿರುವ ಭಾರತ ಈ ಪಂದ್ಯದೊಂದಿಗೆ ಮೂರನೇ ಆವೃತ್ತಿ ಆರಂಭಿಸಲಿದೆ.

ಐಸಿಸಿ ಏಕದಿನ ಕ್ರಿಕೆಟ್ ವಿಶ್ವಕಪ್ ಫೈನಲ್ ಬಳಿಕ ಅನುಭವಿ ಆಟಗಾರ ರೋಹಿತ್ ಶರ್ಮಾ ತಂಡಕ್ಕೆ ಹಿಂತಿರುಗಿದ್ದು, ನಾಯಕತ್ವ ವಹಿಸಿಕೊಳ್ಳಲಿದ್ದಾರೆ. ಅಲ್ಲದೇ ರನ್ ಮಷೀನ್ ವಿರಾಟ್ ಕೊಹ್ಲಿ ಕೂಡ ತಂಡವನ್ನು ಕೂಡಿಕೊಂಡಿದ್ದಾರೆ. ರೋಹಿತ್ ಜೊತೆ ಶುಭ್‌ಮನ್ ಗಿಲ್ ಆರಂಭಿಕರಾಗಿ ಕಣಕ್ಕಿಳಿದರೇ, ಶ್ರೇಯಸ್ ಅಯ್ಯರ್, ಕೆ.ಎಲ್.ರಾಹುಲ್, ರವೀಂದ್ರ ಜಡೇಜಾ, ರವಿಚಂದ್ರನ್ ಅಶ್ವಿನ್ ಮಧ್ಯಮ ಕ್ರಮಾಂಕಕ್ಕೆ ಬಲ ನೀಡಲಿದ್ದಾರೆ. ಉಳಿದಂತೆ ಶಾರ್ದೂಲ್ ಠಾಕೂರ್, ಮೊಹಮ್ಮದ್ ಸಿರಾಜ್, ಜಸ್‌ಪ್ರೀತ್ ಬುಮ್ರಾ ಹಾಗೂ ಪ್ರಸಿದ್ಧ ಕೃಷ್ಣ ಬೌಲರ್‌ಗಳಾಗಿ ಕಣಕ್ಕಿಳಿಯುವ ಸಾಧ್ಯತೆಗಳಿವೆ. ಎಲ್ಲಾ ವಿಭಾಗಗಳಲ್ಲೂ ಬಲಿಷ್ಠವಾಗಿ ಕಾಣುತ್ತಿರುವ ದಕ್ಷಿಣ ಆಫ್ರಿಕಾ ಹಾಗೂ ಭಾರತ ತಂಡಗಳ ಪಂದ್ಯ ಗೆಲ್ಲಲು ರಣತಂತ್ರ ರೂಪಿಸಿವೆ.


ಭಾರತ: ರೋಹಿತ್ ಶರ್ಮಾ (ನಾಯಕ), ಶುಭಮನ್ ಗಿಲ್, ಯಶಸ್ವಿ ಜೈಸ್ವಾಲ್, ವಿರಾಟ್ ಕೊಹ್ಲಿ, ಶ್ರೇಯಸ್ ಅಯ್ಯರ್, ಕೆ.ಎಲ್. ರಾಹುಲ್ (ವಿಕೆಟ್ ಕೀಪರ್), ರವಿ ಚಂದ್ರನ್ ಅಶ್ವಿನ್, ರವೀಂದ್ರ ಜಡೇಜಾ, ಶಾರ್ದೂಲ್ ಠಾಕೂರ್, ಮೊಹಮ್ಮದ್ ಸಿರಾಜ್, ಮುಖೇಶ್ ಕುಮಾರ್, ಜಸ್‌ಪ್ರೀತ್ ಬುಮ್ರಾ (ವಿಕೆಟ್ ಕೀಪರ್), ಪ್ರಸಿದ್ ಕೃಷ್ಣ, ಕೆಎಸ್ ಭರತ್ (ವಿಕೆಟ್ ಕೀಪರ್), ಅಭಿಮನ್ಯು ಈಶ್ವರನ್.

ದಕ್ಷಿಣ ಆಫ್ರಿಕಾ: ತೆಂಬಾ ಬವುಮಾ (ನಾಯಕ), ಡೇವಿಡ್ ಬೆಡಿಂಗ್ಹ್ಯಾಮ್, ನಾಂದ್ರೆ ಬರ್ಗರ್, ಜೆರಾಲ್ಡ್ ಕೊಟ್ಝಿಯ, ಟೋನಿ ಡಿ ಜೋರ್ಜಿ, ಡೀನ್ ಎಲ್ಗರ್, ಮಾರ್ಕೊ ಯಾನ್ಸೆನ್, ಕೇಶವ್ ಮಹಾರಾಜ್, ಏಡೆನ್ ಮಾರ್ಕ್ರಮ್, ವಿಯಾನ್ ಮುಲ್ಡರ್, ಲುಂಗಿ ಎನ್‌ಗಿಡಿ, ಕೀಗನ್ ಪೀಟರ್ಸನ್, ಕಗಿಸೊ ರಬಾಡಾ, ಟ್ರಿಸ್ಟನ್ ಸ್ಟಬ್ಸ್, ಕೈಲ್ ವೆರ್ರೆನ್ (ವಿಕೆಟ್‌ಕೀಪರ್).

ಮುಖಾಮುಖಿ ದಾಖಲೆ: ಟೆಸ್ಟ್‌ನಲ್ಲಿ ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳು ಇದುವರೆಗೆ ಒಟ್ಟು 42 ಬಾರಿ ಮುಖಾಮುಖಿಯಾಗಿವೆ. ಈ ಪೈಕಿ ಭಾರತ 15 ಪಂದ್ಯಗಳನ್ನು ಗೆದ್ದರೆ, ದಕ್ಷಿಣ ಆಫ್ರಿಕಾ 17 ಜಯದೊಂದಿಗೆ ಕೊಂಚ ಮೇಲುಗೈ ಹೊಂದಿದೆ. 10 ಪಂದ್ಯಗಳು ಡ್ರಾ ಕಂಡಿವೆ.

ಮೈಸೂರಿನ ಚರ್ಚ್‌ಗಳಲ್ಲಿ ದಿನವಿಡೀ ಕ್ರಿಸ್‌ಮಸ್ ಸಂಭ್ರಮ: ಭಕ್ತರಿಂದ ವಿಶೇಷ ಪ್ರಾರ್ಥನೆ

- ಕ್ರೈಸ್ತ ಬಾಂಧವರು ಮಾತ್ರವಲ್ಲ ಪ್ರವಾಸಿಗರಿಂದಲೂ ದೈವಾರಾಧನೆ
- ಚರ್ಚ್‌ಗಳ ಮುಂದೆ ಕೇಕ್ ವಿತರಿಸಿ ಕ್ರಿಸ್‌ಮಸ್ ಶುಭ ಕೋರಿಕೆ





ಮೈಸೂರು,ಡಿ.25(ಎಂಟಿವೈ)– ಕ್ರಿಸ್‌ಮಸ್ ಆಚರಣೆ ಹಿನ್ನೆಲೆಯಲ್ಲಿ ಸೋಮವಾರ ಮೈಸೂರಿನ ಸೇಂಟ್ ಫಿಲೋಮಿನಾ ಚರ್ಚ್ ಸೇರಿದಂತೆ ನಗರದ ಎಲ್ಲಾ ಚರ್ಚ್‌ಗಳಲ್ಲೂ ದಿನವಿಡೀ ಕ್ರೈಸ್ತ ಬಾಂಧವರೂ ಸೇರಿದಂತೆ ಪ್ರವಾಸಿಗರು ಕ್ರಿಸ್‌ಮಸ್ ಸಂಭ್ರಮಾಚರಣೆಯಲ್ಲಿ ಭಾಗಿಯಾದರು.

ಮಧ್ಯರಾತ್ರಿ ಕ್ರಿಸ್‌ಮಸ್ ಪ್ರಾರ್ಥನೆ, ಧಾರ್ಮಿಕ ಕಾರ್ಯದೊಂದಿಗೆ ಯೇಸು ಕ್ರಿಸ್ತನ ಆರಾಧಿಸಿ, ಪೂಜಿಸಲಾಗಿತ್ತು. ರಾತ್ರಿಯಿಡೀ ವಿಶೇಷ ಪ್ರಾರ್ಥನೆ ಮೂಲಕ ಶಾಂತಿದೂತನನ್ನು ಆರಾಧಿಸಿದ್ದ ಕ್ರೈಸ್ತ ಬಾಂಧವರು ಇಂದು ಬೆಳಗ್ಗೆ ಕುಟುಂಬ ಸದಸ್ಯರೊಂದಿಗೆ ಚರ್ಚ್‌ಗಳಿಗೆ ಭೇಟಿ ನೀಡಿ, ಫಾದರ್‌ಗಳಿಂದ ಕೇಕ್ ಸ್ವೀಕರಿಸಿದರು.

ಮನೆಗಳಲ್ಲಿ ಕ್ರಿಸ್‌ಮಸ್ ಆಚರಿಸಿದ ಬಳಿಕ ಮಕ್ಕಳಿಗೆ ಸಾಂತಕ್ಲಾಸ್ ಧರಿಸುವ ಕೆಂಪು ಟೋಪಿ ಧರಿಸಿ ಚರ್ಚ್‌ಗಳಿಗೆ ಬಂದು ಸಂಪ್ರದಾಯದಂತೆ ಪ್ರಾರ್ಥನೆ ಸಲ್ಲಿಸಿದರು. ಕ್ರಿಸ್‌ಮಸ್ ಅಂಗವಾಗಿ ಚರ್ಚ್‌ಗಳಲ್ಲಿ ಪ್ರಾರ್ಥನೆ ಬಳಿಕ ಕ್ರೈಸ್ತ ಬಾಂಧವರು ಯೇಸು, ಸಂತ ಜೋಸೆಫ್, ಸಂತ ಮೇರಿ ಪ್ರತಿಮೆ ಎದುರು ಮೇಣದ ಬತ್ತಿ ಹಚ್ಚಿ ಪ್ರಾರ್ಥನೆ ಸಲ್ಲಿಸಿ ಯೇಸು ಸ್ವಾಮಿಯ ಸ್ಮರಣೆ ಮಾಡಿದರು.

ಚರ್ಚ್ ಹೊರಭಾಗದಲ್ಲಿ ನಿರ್ಮಿಸಿರುವ ಗೋದಲಿ ಹಾಗೂ ಬಾಲ ಯೇಸುವಿನ ಮೂರ್ತಿಯನ್ನು ವೀಕ್ಷಿಸಿ, ನಮಿಸುತ್ತಿದ್ದರು. ಅಲ್ಲದೆ ಚರ್ಚ್ ಆವರಣದಲ್ಲಿ ನಿರ್ಮಿಸಿರುವ ಸಾಂತ ಕ್ಲಾಸ್, ಇಸ್ರೇಲ್‌ನ ಬೆತ್ಲೆಹೆಮ್‌ನ ಕೊಟ್ಟಿಗೆಯೊಂದರಲ್ಲಿ ಜನ್ಮ ತಾಳಿದ ಬಾಲ ಯೇಸು ಬೊಂಬೆ, ಯೇಸುವಿನ ತಂದೆ ಜೋಸೆಫ್, ತಾಯಿ ಮೇರಿ ಬೊಂಬೆಯೊಂದಿಗೆ ಕುರಿ, ಹಸು, ಒಂಟೆ ಇನ್ನಿತರ ಪ್ರಾಣಿಗಳ ಗೊಂಬೆಗಳನ್ನು ಇಂದು ಬೆಳಗ್ಗೆ ಚರ್ಚ್‌ಗೆ ಭೇಟಿ ನೀಡಿದ್ದ ಪ್ರವಾಸಿಗರು ವೀಕ್ಷಿಸಿ ಸಂಭ್ರಮಿಸಿದರು.

ಸಂತ ಫಿಲೋಮಿನಾ ಚರ್ಚ್ ಮಾತ್ರವಲ್ಲದೆ ನಗರದ ಗ್ರಾಮಾಂತರ ಬಸ್ ನಿಲ್ದಾಣದ ಸಮೀಪದ ವೆಸ್ಲಿ ಚರ್ಚ್, ಎನ್.ಆರ್.ಮೊಹಲ್ಲಾದಲ್ಲಿರುವ ಹಾರ್ಡ್ವಿಕ್ ಯೇಸು ಕರುಣಾಲಯ, ರಾಮಕೃಷ್ಣನಗರದಲ್ಲಿರುವ ಯೇಸು ಕೃಪಾಲಯ, ನಾಯ್ಡುನಗರದಲ್ಲಿರುವ ಬಾಲ ಯೇಸು ಮಂದಿರ, ಆರ್‌ಟಿಒ ವೃತ್ತ ಸಮೀಪದ ಹಾರ್ಡ್ವಿಕ್ ಚರ್ಚ್, ಹುಣಸೂರು ರಸ್ತೆಯಲ್ಲಿರುವ ಬಾಲ ಕ್ರಿಸ್ತಾಲಯ, ಬಾರ್ತಲೋಮಿಯಾ ಚರ್ಚ್, ವೆಸ್ಲಿ ಸಾಡೇ ಚರ್ಚ್, ಅವರ್ ಲೇಡಿ ಆಫ್ ಪರ್ಪೆಚ್ಯುವಲ್ ಸಕರ್ ಚರ್ಚ್, ಇನ್ಫೆಂಟ್ ಜೀಸಸ್ ಚರ್ಚ್ ಸೇರಿದಂತೆ ವಿವಿಧ ಚರ್ಚ್‌ಗಳಲ್ಲೂ ಕ್ರಿಸ್‌ಮಸ್ ಸಂಭ್ರಮ ಮನೆ ಮಾಡಿತ್ತು. ಎಲ್ಲಾ ಚರ್ಚ್‌ಗಳೂ ಭಕ್ತರು ಹಾಗೂ ಪ್ರವಾಸಿಗರಿಂದ ತುಂಬಿ ತುಳುಕುತ್ತಿತ್ತು.

ಕೇಕ್ ವಿತರಣೆ: ಕ್ರಿಸ್‌ಮಸ್ ಹಿನ್ನೆಲೆಯಲ್ಲಿ ಚರ್ಚ್‌ಗಳಿಗೆ ವಿವಿಧ ಧರ್ಮೀಯರು ಭೇಟಿ ನೀಡಿದ್ದರು. ಕೆಲವರು ಚರ್ಚ್‌ಗಳನ್ನು ನೋಡುವ ಹಾಗೂ ಪ್ರಾರ್ಥನೆ ವೀಕ್ಷಿಸಲು ಆಗಮಿಸಿದ್ದರೆ, ಮತ್ತೆ ಕೆಲವರು ಸೌಹಾರ್ದತೆಯ ಸಂಕೇತವಾಗಿ ಕ್ರಿಸ್‌ಮಸ್ ಸಂಭ್ರಮದಲ್ಲಿ ಪಾಲ್ಗೊಂಡರು. ಅದರಲ್ಲಿ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಚರ್ಚ್‌ಗೆ ಆಗಮಿಸಿದ್ದರು. ಚರ್ಚ್‌ಗೆ ಬಂದ ಮಕ್ಕಳು ಹಾಗೂ ಪ್ರವಾಸಿಗರಿಗೆ ಕೇಕ್ ವಿತರಿಸಿ ಕ್ರಿಸ್‌ಮಸ್ ಶುಭಾಶಯ ಕೋರಿದರು.

ಗಮನ ಸೆಳೆದ ಕ್ವಾರ್ ಸಿಂಗಿಂಗ್: ಚರ್ಚ್‌ಗಳಲ್ಲಿ ಕ್ವಾರ್ ಗೀತ ಗಾಯನ ಏರ್ಪಡಿಸಲಾಗಿತ್ತು. ಬೆಳಗ್ಗಿನಿಂದ ಸಾಮೂಹಿಕ ಪ್ರಾರ್ಥನೆ ಜರುಗಿದ ನಂತರ ಯೇಸು ಕ್ರಿಸ್ತನ ಕುರಿತಾದ ಕ್ಯಾರಲ್ ಗೀತ ಗಾಯನ ಆಯೋಜಿಸಲಾಗಿತ್ತು. ಇದು ಪ್ರವಾಸಿಗರ ಗಮನ ಸೆಳೆಯಿತು.

ಕ್ರೀಡೆಯಲ್ಲಿ ಮೀಸಲಾತಿ ಇದ್ದರೆ ದೇಶಕ್ಕೆ ಹೆಚ್ಚಿನ ಪ್ರಶಸ್ತಿಗಳು ದೊರೆಯಲಿವೆ

ಎಸ್ಸಿ, ಎಸ್ಟಿ ನೌಕರರ ಸಂಘದ ರಾಜ್ಯಾಧ್ಯಕ್ಷ ಡಿ. ಚಂದ್ರಶೇಖರಯ್ಯ ಅಭಿಮತ



ಮೈಸೂರು,ಡಿ.25(ಎಂಟಿವೈ)– ಕ್ರೀಡೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತ ಸಮುದಾಯಕ್ಕೆ ಮೀಸಲಾತಿ ದೊರಕಿದರೆ, ದೇಶದ ಮತ್ತು ವಿಶ್ವಮಟ್ಟದಲ್ಲಿ ಅನೇಕ ಪ್ರಶಸ್ತಿಗಳನ್ನು ಗೆದ್ದುಕೊಡುವ ಸಾಮರ್ಥ್ಯ ನಮ್ಮ ಸಮುದಾಯಕ್ಕೆ ಇದೆ ಎಂದು ರಾಜ್ಯ ಸರ್ಕಾರಿ ಎಸ್‌ಸಿ, ಎಸ್‌ಟಿ ನೌಕರರ ಸಂಘದ ರಾಜ್ಯಾಧ್ಯಕ್ಷ ಡಿ.ಚಂದ್ರಶೇಖರಯ್ಯ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ವಿವಿ ಓವಲ್ ಮೈದಾನದಲ್ಲಿ ನಡೆದ ರಾಜ್ಯ ಸರ್ಕಾರಿ ಎಸ್‌ಸಿ, ಎಸ್‌ಟಿ ನೌಕರರು ಹಾಗೂ ಕುಟುಂಬ ಸದಸ್ಯರಿಗೆ ಆಯೋಜಿಸಿದ್ದ ಕ್ರೀಡಾಕೂಟದಲ್ಲಿ ಮಾತನಾಡಿದ ಅವರು, ಇದುವರೆಗೂ ಕ್ರೀಡಾ ಕ್ಷೇತ್ರದಲ್ಲಿ ಮೀಸಲಾತಿ ವ್ಯವಸ್ಥೆ ಜಾರಿಗೊಳಿಸಿಲ್ಲ. ಕ್ರೀಡೆಯಲ್ಲಿಯೂ ಮೀಸಲಾತಿ ಕೇಳುವ ಉದ್ದೇಶದಿಂದ ಮೈಸೂರು ನಗರದಲ್ಲಿ ಎಸ್‌ಸಿ, ಎಸ್‌ಟಿ ನೌಕರರ ಸಂಘ ಕ್ರೀಡಾಕೂಟ ಆಯೋಜಿಸಲಾಗಿದ್ದು, ಈ ಮೀಸಲಾತಿ ಸಂದೇಶ ಎಲ್ಲೆಡೆ ಪಸರಿಸಬೇಕು. ಮುಂದಿನ ದಿನಗಳಲ್ಲಿ ಕ್ರೀಡೆಗಳಲ್ಲಿ ಮೀಸಲಾತಿ ಸಿಕ್ಕರೆ ಭಾರತದ ಮಡಿಲಿಗೆ ಹಲವು ಪ್ರಶಸ್ತಿ ಲಭಿಸಲಿದೆ. ಮಹತ್ತರವಾದ ಪ್ರಶಸ್ತಿ ತಂದು ಕೊಡುವ ಸಾಮರ್ಥ್ಯ ಪರಿಶಿಷ್ಟ ಜಾತಿ ಮತ್ತು ಪಂಗಡದ ಕ್ರೀಡಾಪಟುಗಳಿಗೆ ಇದೆ ಎಂದರು.

ಪಾಲಿಕೆ ಆಯುಕ್ತ ಆಶಾದ್ ಉರ್ ರೆಹಮಾನ್ ಷರೀಫ್ ಮಾತನಾಡಿ, ಎಸ್‌ಸಿ, ಎಸ್‌ಟಿ ಸಂಘದಿಂದ ಆಯೋಜಿಸಿರುವ ಕ್ರೀಡಾಕೂಟ ಎಲ್ಲರಿಗೂ ಮಾದರಿಯಾಗಿದೆ. ಕ್ರೀಡೆ ಯಾರ ಸ್ವತ್ತಲ್ಲ. ಎಲ್ಲರಿಗೂ ಸಮಾನ ಅವಕಾಶ ಕೊಡಬೇಕು. ಕ್ರೀಡೆಯಲ್ಲಿ ಎಲ್ಲರೂ ಭಾಗವಹಿಸುವುದರಿಂದ ಆರೋಗ್ಯ ಸುಧಾರಿಸಲಿದೆ. ಎಲ್ಲರೂ ತಮಗಿಷ್ಟವಾದ ಕ್ರೀಡೆಯಲ್ಲಿ ಪ್ರತಿದಿನ ತೊಡಗಿಸಿಕೊಂಡರೆ ಆರೋಗ್ಯ ಕಾಪಾಡಿಕೊಳ್ಳಬಹುದು. ಕ್ರೀಡೆಯಿಂದ ದೈಹಿಕ ಕಸರತ್ತು ಆಗುವುದರಿಂದ ಆರೋಗ್ಯವಂತರಾಗಿ ಜೀವನ ನಡೆಸಲು ಸಾಧ್ಯ ಎಂದು ತಿಳಿಸಿದರು.

ಗಾಂಧಿನಗರದ ಉರಿಲಿಂಗಪೆದ್ದಿ ಮಠದ ಜ್ಞಾನಪ್ರಕಾಶ ಸ್ವಾಮೀಜಿ ಮಾತನಾಡಿ, ರಾಜ್ಯ ಸರ್ಕಾರಿ ಎಸ್‌ಸಿ, ಎಸ್‌ಟಿ ನೌಕರರ ಸಂಘ ಸಕ್ರಿಯವಾಗಿ ರಾಜ್ಯಾದ್ಯಂತ ಸಂವಿಧಾನ ಪರ ಹಲವಾರು ಹೋರಾಟಗಳಲ್ಲಿ ಭಾಗವಹಿಸಿದ್ದು, ಎಲ್ಲ ನೌಕರರ ಹಿತ ಕಾಪಾಡಿದೆ. ಇದೀಗ ಸ್ಫೂರ್ತಿ ತುಂಬುವ ಉದ್ದೇಶದಿಂದ ಕ್ರೀಡಾಕೂಟ ಆಯೋಜಿಸಿರುವುದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ಮುಖಂಡ ವಿ.ಪುರುಷೋತ್ತಮ, ಸಾಮಾಜಿಕ ಹೋರಾಟಗಾರ ಅಹಿಂದ ಜವರಪ್ಪ, ದ್ಯಾವಪ್ಪನಾಯ್ಕ, ರಾಜ್ಯ ಸರ್ಕಾರಿ ಎಸ್‌ಸಿ, ಎಸ್‌ಟಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಎಂ.ಡಿ.ಶಿವರಾಮಕೃಷ್ಣ, ಉಪಾಧ್ಯಕ್ಷ ಮಹಾದೇವ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

ಜ.8 ರಿಂದ 12ರವರೆಗೆ ರಾಷ್ಟ್ರಮಟ್ಟದ 4ನೇ ಏಕಲವ್ಯ ಮಾದರಿ ವಸತಿ ಶಾಲೆಗಳ ಕ್ರೀಡಾಕೂಟ



ಮೈಸೂರು, ಡಿ.25(ಎಂಟಿವೈ)– ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಜ.8 ರಿಂದ 12ರವರೆಗೆ ರಾಷ್ಟ್ರಮಟ್ಟದ 4ನೇ ಏಕಲವ್ಯ ಮಾದರಿ ವಸತಿ ಶಾಲೆಗಳ ಕ್ರೀಡಾಕೂಟ ಆಯೋಜಿಸಲಾಗಿದ್ದು, ಕ್ರೀಡಾಕೂಟ ಯಶಸ್ಸಿಗೆ ಸಹಕಾರ ನೀಡುವಂತೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ನಿರ್ದೇಶಕ ಬಿ. ಕಲ್ಲೇಶ್ ಮನವಿ ಮಾಡಿದ್ದಾರೆ.

ಮೈಸೂರಿನ ಪಡುವಾರಹಳ್ಳಿಯಲ್ಲಿರುವ ಡಾ. ಬಾಬು ಜಗಜೀವನ್‌ರಾಂ ಭವನದಲ್ಲಿ ತಾಲೂಕು ಅಧಿಕಾರಿಗಳು ಕ್ರೈಸ್ ಪ್ರಾಂಶುಪಾಲರು ಹಾಗೂ ವಾರ್ಡನ್‌ಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿ ಮಾತನಾಡಿದ ಅವರು, ದೇಶದ 28 ರಾಜ್ಯಗಳಿಂದ ಸುಮಾರು 6500 ಬುಡಕಟ್ಟು ವಿದ್ಯಾರ್ಥಿಗಳು ಕ್ರೀಡಾಕೂಟಕ್ಕೆ ಆಗಮಿಸಲಿದ್ದು, 9 ವಿಭಾಗಗಳಲ್ಲಿ ಕ್ರೀಡೆಗಳು ನಡೆಯಲಿವೆ. ಚಾಮುಂಡಿ ವಿಹಾರ ಕ್ರೀಡಾಂಗಣ ಹಾಗೂ ಮೈಸೂರು ವಿಶ್ವ ವಿದ್ಯಾನಿಲಯದ ಓವಲ್ ಗ್ರೌಂಡ್‌ನಲ್ಲಿ ಏಕಕಾಲದಲ್ಲಿ ಕ್ರೀಡಾಕೂಟ ನಡೆಯಲಿವೆ. ದೇಶದ ಎಲ್ಲಾ ರಾಜ್ಯಗಳಿಂದ ಬರುವ ಕ್ರೀಡಾಪಟುಗಳಿಗೆ ವಸತಿ ವ್ಯವಸ್ಥೆ, ಊಟದ ವ್ಯವಸ್ಥೆ ಮಾಡಲಾ ಗುವುದು. ಕ್ರೀಡಾಕೂಟದ ನಂತರ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಜ.8ರಂದು ಕ್ರೀಡಾಕೂಟವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಕೇಂದ್ರ ಸಚಿವರು, ರಾಜ್ಯ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಎಇಎಸ್‌ಟಿನ ಉಪ ಆಯುಕ್ತರಾದ ಇಂದಿರಾ ಮಧುಗಲ್, ಕಚೇರಿ ಅಧೀಕ್ಷಕ ಪಿಯೂಷ್‌ನಾಥ್, ಮೈಸೂರು ಜಿಲ್ಲೆಯ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಯೋಜನಾ ಸಮನ್ವಯ ಅಧಿಕಾರಿ ಎನ್.ಮುನಿರಾಜು, ಯುವಜನ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಭಾಸ್ಕರ್ ನಾಯಕ್, ಕನ್ನಡ ಸಂಸ್ಕೃತಿ ಇಲಾಖೆಯ ಉಪನಿರ್ದೇಶಕ ಸುದರ್ಶನ್, ಕ್ರೈಸ್ ಸಂಯೋಜಕ ಎಸ್.ಕೆ.ಮಹದೇವ್, ತಾಲೂಕು ಕಲ್ಯಾಣ ಅಧಿಕಾರಿಗಳಾದ ಅರುಣ್ ಪ್ರಭು, ನಾರಾಯಣಸ್ವಾಮಿ, ಕೋಮಲ, ಕ್ರೀಡಾ ತರಬೇತುದಾರರಾದ ರಾಮಸ್ವಾಮಿ, ವಿಶ್ವ, ರವೀಂದ್ರ, ಸುಂದರೇಶ್, ಗಿರೀಶ್, ಲೋಕೇಶ್, ಬಾಲು ಉಪಸ್ಥಿತರಿದ್ದರು.

ಒಂದನೇ ಪುಟದಿಂದ

ವಾಹನ ನಿಲುಗಡೆಗೆ ಪ್ರಶಸ್ತ ಸ್ಥಳವಾಯ್ತು...!!

ನಿರ್ಮಾಣ ಮಾಡಲಾಗಿದೆ. ಮೈಸೂರಿನ ರಾಮಕೃಷ್ಣನಗರದ ರಾಮಕೃಷ್ಣ ಪರಮಹಂಸ ವೃತ್ತದಿಂದ ದಟ್ಟಗಳ್ಳಿಯ ರಿಂಗ್‌ರೋಡ್ ಜಂಕ್ಷನ್ ಸೇರುವ ರಸ್ತೆಯ ಒಂದು ಬದಿ, ರಾಮಕೃಷ್ಣ ಪರಮಹಂಸ ವೃತ್ತದಿಂದ ವಿಶ್ವಮಾನವ ಜೋಡಿ ರಸ್ತೆಯಲ್ಲಿ ವಾಟರ್ ಟ್ಯಾಂಕ್‌ವರೆಗೆ, ಕುವೆಂಪುನಗರದ ಶಾಪಿಂಗ್ ಕಾಂಪ್ಲೆಕ್ಸ್‌ನಿಂದ ವಿಶ್ವಮಾನವ ಜೋಡಿ ರಸ್ತೆ ಮಾರ್ಗ, ಲಕ್ಷ್ಮಿಪುರಂನ ಆರ್‌ಟಿಓ ವೃತ್ತದಿಂದ ಗಂಗೂಬಾಯಿ ಹಾನಗಲ್ ಸಂಗೀತ ವಿಶ್ವವಿದ್ಯಾನಿಲಯದ ಮಾರ್ಗದಲ್ಲಿ ಸಿಂಥೆಟಿಕ್ ಟ್ರ್ಯಾಕ್ ನಿರ್ಮಾಣ ಮಾಡಲಾಗಿದೆ. ಈ ಮಾರ್ಗದಲ್ಲಿ ಸಾವಿರಾರು ಟ್ರಾಫಿಕ್ ಕೋನ್‌ಗಳನ್ನು ಅಳವಡಿಸಲಾಗಿದೆ.

ಸಿಂಥೆಟಿಕ್ ಟ್ರ್ಯಾಕ್‌ನಲ್ಲೇ ಸೈಕಲ್ ಸವಾರರು ಸಾಗುವುದರಿಂದ ಸುರಕ್ಷತೆ ಖಾತರಿ ಕಲ್ಪಿಸಲಾಗಿತ್ತು. ರಾತ್ರಿ ವೇಳೆ ಟ್ರಾಫಿಕ್ ಕೋನ್‌ಗಳಲ್ಲಿ ರೇಡಿಯಂ ಇರುವ ಕಾರಣ ಮುಂದಿನ ಮಾರ್ಗ ಸುಲಭವಾಗಿ ಗೋಚರಿಸಲಿದೆ. ಇದರಿಂದ ಸೈಕಲ್ ಸವಾರರಿಗೆ ಸುರಕ್ಷೆ ಮತ್ತು ಸುಗಮ ಸಂಚಾರಕ್ಕೆ ಅನುಕೂಲವಾಗುತ್ತದೆ. ಆದರೆ ಈಗ ಅಧಿಕಾರಿಗಳ ನಿರ್ಲಕ್ಷ್ಯತೆಯಿಂದಾಗಿ ಉದ್ದೇಶವೇ ನಿರರ್ಥಕವಾಗಿದೆ. ಸಿಂಥೆಟಿಕ್ ಸೈಕಲ್ ಟ್ರ್ಯಾಕ್ ಮಧ್ಯೆ ಕಾರು, ಬೈಕ್, ಸ್ಕೂಟರ್ ಸೇರಿದಂತೆ ಇತರೆ ವಾಹನಗಳನ್ನು ನಿಲ್ಲಿಸಲಾಗುತ್ತಿದೆ. ಸೈಕಲ್ ಸವಾರರಿಗೆ ಮೀಸಲಿದ್ದ ಸ್ಥಳ ಈಗ ಮೋಟಾರು ವಾಹನಗಳ ಪಾರ್ಕಿಂಗ್‌ಗೆ ಬಳಕೆಯಾಗುತ್ತಿದೆ. ವಾಹನಗಳ ನಿಲುಗಡೆಯಿಂದ ಸೈಕಲ್ ಸವಾರರು ಸಾಗಲು ಜಾಗವೇ ಇಲ್ಲದಿರುವಾಗ ಸಿಂಥೆಟಿಕ್ ಸೈಕಲ್ ಟ್ರ್ಯಾಕ್ ನಿರ್ಮಾಣ ಮಾಡಿ ಏನು ಪ್ರಯೋಜನ ಎಂಬ ಪ್ರಶ್ನೆ ಎದುರಾಗಿದೆ. ಸಿಂಥೆಟಿಕ್ ಸೈಕಲ್ ಟ್ರ್ಯಾಕ್ ಮಧ್ಯೆ ರಸ್ತೆಬದಿ ವ್ಯಾಪಾರಿಗಳು ತಮಗೆ ಬೇಕಾದಂತೆ ಅನುಕೂಲ ಪಡೆದುಕೊಳ್ಳುತ್ತಿದ್ದಾರೆ. ರಸ್ತೆಬದಿ ವ್ಯಾಪಾರಿಗಳು ಟ್ರಾಫಿಕ್ ಕೋನ್‌ಗಳನ್ನು ಕಿತ್ತು ಹಾಕಿದ್ದಾರೆ. ಇನ್ನು ಕೆಲವು ಸ್ಥಳಗಳಲ್ಲಿ ಕಾರು, ಸ್ಕೂಟರ್ ಹಾಗೂ ಬೈಕ್‌ಗಳನ್ನು ನಿಲ್ಲಿಸುವ ಸಂದರ್ಭದಲ್ಲಿ ಟ್ರಾಫಿಕ್ ಕೋನ್‌ಗಳ ಮುರಿದು ಹಾಕಿದ್ದಾರೆ. ಟ್ರಾಫಿಕ್ ಕೋನ್‌ಗಳಿಗೆ ರೇಡಿಯಂ ಸುತ್ತಿರುವ ಕಾರಣ ಅದನ್ನು ಕಳವು ಮಾಡಲಾಗಿದೆ. ಸಿಂಥೆಟಿಕ್ ಸೈಕಲ್ ಟ್ರ್ಯಾಕ್ ನಿರ್ಮಾಣ ಮಾಡಿ ಎರಡು ತಿಂಗಳಾಗಿದೆ. ಆಗಲೇ ನೂರಾರು ಟ್ರಾಫಿಕ್ ಕೋನ್‌ಗಳು ಹಾಳಾಗಿವೆ. ಸೈಕಲ್ ಸವಾರರಿಗಂತೂ ಯಾವುದೇ ರೀತಿಯಲ್ಲೂ ಪ್ರಯೋಜನವಿಲ್ಲದಂತಾಗಿದೆ. ಇದರಿಂದ ಮಾದರಿ ಯೋಜನೆಗೆ ವ್ಯಯ ಮಾಡಿದ ಕೋಟ್ಯಾಂತರ ರೂಪಾಯಿ ವ್ಯರ್ಥವಾಗಿದೆ. ನಗರ ಪಾಲಿಕೆ ಹಾಗೂ ಪೊಲೀಸ್ ಇಲಾಖೆ ಇದನ್ನು ಗಂಭೀರವಾಗಿ ಪರಿಗಣಿಸಬೇಕಿತ್ತು. ಆದರೆ ಇದರ ಗೋಜು ನಮಗಿಲ್ಲ ಎಂಬಂತೆ ಅಧಿಕಾರಿಗಳು ವರ್ತಿಸುತ್ತಿದ್ದಾರೆ. ತಕ್ಷಣ ಕ್ರಮ ಕೈಗೊಳ್ಳದೇ ಇದ್ದಲ್ಲಿ ಸಿಂಥೆಟಿಕ್ ಸೈಕಲ್ ಟ್ರ್ಯಾಕ್‌ನಲ್ಲಿ ಅಳವಡಿಸಿರುವ ಅಷ್ಟೋ ಇಷ್ಟು ಇರುವ ಟ್ರಾಫಿಕ್ ಕೋನ್‌ಗಳು ಕೂಡ ನಾಶವಾಗುತ್ತವೆ.

ತಮಗಾಗಿ ನಿರ್ಮಾಣ ಮಾಡಿರುವ ಸೈಕಲ್ ಟ್ರ್ಯಾಕ್ ತಮ್ಮ ಉಪಯೋಗಕ್ಕೆ ಬರುತ್ತಿಲ್ಲವೆಂದು ಸಹಜವಾಗಿಯೇ ಸೈಕಲ್ ಪ್ರಿಯರು ತೀವ್ರ ಬೇಸರ ವ್ಯಕ್ತಪಡಿಸಿದ್ದಾರೆ.

ಪೊಲೀಸರಿಗೆ ಇತ್ತ ಗಮನವೇ ಇಲ್ಲ...!

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿ ನಿರ್ಮಾಣ ಮಾಡಿರುವ ಸಿಂಥೆಟಿಕ್ ಸೈಕಲ್ ಟ್ರ್ಯಾಕ್‌ನಲ್ಲಿ ಸೈಕಲ್ ಸವಾರರು ಸಾಗಲು ಜಾಗವೇ ಇಲ್ಲದಂತೆ ವಾಹನಗಳ ನಿಲ್ಲಿಸಲಾಗಿದೆ. ಹೆಚ್ಚಾಗಿ ಆರ್‌ಟಿಓಗೆ ಎಫ್‌ಸಿಗಾಗಿ ಬರುವ ವಾಹನಗಳನ್ನು ಸಾಲಾಗಿ ನಿಲ್ಲಿಸಲಾಗುತ್ತಿದೆ. ಜೊತೆಗೆ ಸೈಕಲ್ ಟ್ರ್ಯಾಕ್ ಪಕ್ಕ ಅಡ್ಡಾದಿಡ್ಡಿಯಾಗಿ ಇನ್ನಿತರೆ ವಾಹನಗಳನ್ನು ನಿಲ್ಲಿಸಲಾಗುತ್ತಿದೆ. ಲಕ್ಷ್ಮಿಪುರಂ ಸಂಚಾರಿ ಪೊಲೀಸ್ ಠಾಣೆ ಎದುರೇ ಸೈಕಲ್ ಟ್ರ್ಯಾಕ್‌ನಲ್ಲಿ ಅಡ್ಡಾದಿಡ್ಡಿಯಾಗಿ ವಾಹನಗಳನ್ನು ನಿಲ್ಲಿಸಿದ್ದರೂ ಪೊಲೀಸರು ಇತ್ತ ಗಮನ ಹರಿಸದಿರುವುದು ದುರದೃಷ್ಟಕರ ಸಂಗತಿ.

ಜನರ ಬೇಜಾವಾಬ್ದಾರಿ ಇದಕ್ಕೆ ಕಾರಣ

ಸಿಂಥೆಟಿಕ್ ಸೈಕಲ್ ಟ್ರ್ಯಾಕ್ ಯೋಜನೆ ನಿರರ್ಥಕವಾಗಲು ನಗರ ಪಾಲಿಕೆ ಅಥವಾ ಪೊಲೀಸ್ ಇಲಾಖೆಯನ್ನು ದೂರಿದರೆ ಪ್ರಯೋಜನವಿಲ್ಲ. ಏಕೆಂದರೆ ಜನರ ಬೇಜವಾಬ್ದಾರಿಯೂ ಇದಕ್ಕೆ ಕಾರಣವಾಗಿದೆ. ಸರ್ಕಾರ ಕೋಟ್ಯಾಂತರ ರೂಪಾಯಿ ವೆಚ್ಚ ಮಾಡಿ ಮಾದರಿ ಯೋಜನೆ ರೂಪಿಸಿದೆ. ಅದನ್ನು ಉಳಿಸಿಕೊಳ್ಳಬೇಕಾಗಿರುವುದು ನಮ್ಮ ಜವಾಬ್ದಾರಿ ಎಂಬುದು ಜನರಿಗೆ ಮನವರಿಕೆಯಾಗಬೇಕು. ಸಿಂಥೆಟಿಕ್ ಸೈಕಲ್ ಟ್ರ್ಯಾಕ್ ನಲ್ಲಿ ಸೈಕಲ್ ಮಾತ್ರ ಸಾಗಬೇಕಾಗಿರುವ ಕಾರಣ ತಮ್ಮ ವಾಹನ ನಿಲ್ಲಿಸಬಾರದು ಎಂಬ ಕನಿಷ್ಠ ಸಾಮಾನ್ಯ ಜ್ಞಾನ ಜನರಲ್ಲಿ ಇರಬೇಕು. ಇದರ ಹೊರತು ಇಂತಹ ಯಾವುದೇ ಯೋಜನೆ ಯಶಸ್ವಿಯಾಗುವುದಿಲ್ಲ.

ಸೈಕಲ್ ಟ್ರ್ಯಾಕ್‌ನಲ್ಲಿ ಜನರು ವಾಹನ ನಿಲ್ಲಿಸಬಾರದೆಂದು ಪೊಲೀಸರಾಗಲೀ ಅಥವಾ ನಗರ ಪಾಲಿಕೆಯವರಾಗಲೀ ದಿನದ 24 ಗಂಟೆ ತಿಳಿ ಹೇಳುತ್ತಾ ಕೂರಲು ಸಾಧ್ಯವಿಲ್ಲ. ಟ್ರ್ಯಾಕ್ ಉದ್ದಕ್ಕೂ ಪೊಲೀಸರನ್ನು ನಿಲ್ಲಿಸಿ ದಂಡಾಸ್ತ್ರ ಪ್ರಯೋಗಿಸಲು ಸಾಧ್ಯವಿಲ್ಲ. ಆದ ಕಾರಣ ನಮಗಾಗಿ ರೂಪಿಸಿರುವ ಯೋಜನೆಯನ್ನು ನಾವು ಉಳಿಸಿಕೊಳ್ಳಬೇಕೆಂಬ ಪರಿಜ್ಞಾನ ಜನರಲ್ಲಿ ಇರಬೇಕು.

ಡಿಸಿಎಂ ಮತ್ತೆ ಮುನ್ನೆಲೆಗೆ

ಗಳಿಕೆ ಹೆಚ್ಚಿ 28 ರಲ್ಲಿ ಕನಿಷ್ಠ 20 ಸ್ಥಾನಗಳನ್ನು ಗೆಲ್ಲಲು ಸಾಧ್ಯವಾಗುತ್ತದೆ ಎಂಬ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ವಿರುದ್ಧ ಸದಾ ಕತ್ತಿ ಮಸೆಯುತ್ತಿರುವ ಜಾರಕಿಹೊಳಿ ಕುಟುಂಬ ಇದೀಗ ಸಿದ್ದರಾಮಯ್ಯ ಸಂಪುಟದಲ್ಲಿ ಅವರ ಬಲವನ್ನು ಕುಗ್ಗಿಸಲು ಹೊರಟಿದೆ.

ಸರ್ಕಾರದಲ್ಲಿ ಶಿವಕುಮಾರ್ ಪ್ರಾಬಲ್ಯ ಸಾಧಿಸಿ ಮುಖ್ಯಮಂತ್ರಿ ಅವರ ಮೇಲೆಯೇ ಹಿಡಿತ ಸಾಧಿಸಲು ಹೊರಟಿರುವುದು ಜಾರಕಿಹೊಳಿ ಕುಟುಂಬಕ್ಕೆ ಸಹಿಸಲಾಗುತ್ತಿಲ್ಲ.

ಶಿವಕುಮಾರ್ ಅಧಿಕಾರವನ್ನು ಕುಗ್ಗಿಸುವ ಉದ್ದೇಶದಿಂದ ಹೆಚ್ಚುವರಿಯಾಗಿ ಮೂರು ಉಪಮುಖ್ಯಮಂತ್ರಿ ಸ್ಥಾನಗಳನ್ನು ಸೃಷ್ಟಿಸಿ ಎಂದು ಜಾರಕಿಹೊಳಿ ರಾಜಕೀಯ ದಾಳ ಹಾಕಿದ್ದಾರೆ. ಸತೀಶ್ ಹಿಂದೆ ಸರ್ಕಾರದಲ್ಲಿರುವ ಮತ್ತು ರಾಜ್ಯ ಕಾಂಗ್ರೆಸ್ ಪ್ರಭಾವಿಗಳು ಬೆನ್ನೆಲುಬಾಗಿ ನಿಂತಿರುವುದು ವರಿಷ್ಠರಿಗೆ ನುಂಗಲಾರದ ತುತ್ತಾಗಿದೆ.

ಸತೀಶ್ ದೆಹಲಿಗೆ ತೆರಳುವುದಕ್ಕೂ ಮುನ್ನ ಪರಿಶಿಷ್ಟ ಜಾತಿ ಹಾಗೂ ವರ್ಗದ ಪಕ್ಷದ ಶಾಸಕರ ಜೊತೆ ಮತ್ತು ತಮ್ಮ ಹೋರಾಟಕ್ಕೆ ತೆರೆಮರೆಯಲ್ಲಿ ಬೆಂಬಲವಾಗಿ ನಿಂತವರ ಜೊತೆಯಲ್ಲೂ ಸಭೆಗಳನ್ನು ನಡೆಸಿದ್ದರು ಎನ್ನಲಾಗಿದೆ. ಲೋಕಸಭಾ ಚುನಾವಣೆಯನ್ನು ಪ್ರತಿಷ್ಠೆಯಾಗಿ ತೆಗೆದುಕೊಂಡಿರುವ ಎಐಸಿಸಿ, ಸತೀಶ್ ದಾಳವನ್ನು ಹೇಗೆ ನಿಭಾಯಿಸುತ್ತದೆ ಎಂಬುದನ್ನು ಕಾದು ನೋಡಬೇಕಿದೆ.

ಹೊಸಕೋಟೆ ದೇವಸ್ಥಾನದ ಪ್ರಸಾದ ಸೇವಿಸಿ 70 ಮಂದಿ ಅಸ್ವಸ್ಥ; ಓರ್ವ ಮಹಿಳೆ ಸಾವು

ಬೆಂಗಳೂರು: ಬೆಂಗಳೂರು ಗ್ರಾಮಾಂತರ ವ್ಯಾಪ್ತಿಯ ಹೊಸಕೋಟೆಯಲ್ಲಿ ವಿಷ ಆಹಾರ ಸೇವಿಸಿದ ಪ್ರಕರಣದಲ್ಲಿ ಮಹಿಳೆಯೊಬ್ಬರು ಸಾವನ್ನಪ್ಪಿದ್ದು, 70 ಮಂದಿ ಆಸ್ಪತ್ರೆಗೆ ದಾಖಲಾಗಿದ್ದಾರೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ.

ದೇವಸ್ಥಾನದ ಪ್ರಸಾದ ಸೇವಿಸಿ ಅಸ್ವಸ್ಥರಾಗಿ ಹೊಸಕೋಟೆಯ ಸಿಲಿಕಾನ್ ಸಿಟಿ ಆಸ್ಪತ್ರೆಗೆ ದಾಖಲಾಗಿದ್ದ ಮಹಿಳೆಯೊಬ್ಬರು ಮೃತಪಟ್ಟಿರುವ ದಾರುಣ ಘಟನೆ ನಡೆದಿದೆ. ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ಇನ್ನೂ 15 ಮಂದಿ ಆರೋಗ್ಯ ಗಂಭೀರವಾಗಿದೆ ಎಂದು ಹೇಳಲಾಗಿದೆ. ಹೊಸಕೋಟೆಯ ಕಾವೇರಿನಗರದ ನಿವಾಸಿ 60 ವರ್ಷದ ಸಿದ್ದಗಂಗಮ್ಮ ಮೃತ ದುರ್ದೈವಿ.

ಆಸ್ಪತ್ರೆಗೆ ದಾಖಲಾದವರಲ್ಲಿ ಕೆಲವರು ಡಿಸ್ಚಾರ್ಜ್ ಆಗಿದ್ದು, ಇನ್ನು ಕೆಲವರು ಚಿಕಿತ್ಸೆ ಪಡೆಯುತ್ತಿದ್ದಾರೆ. ಆರೋಗ್ಯ ಇಲಾಖೆ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ.

ಪ್ರಕರಣದ ತನಿಖೆ ಆರಂಭಿಕ ಹಂತದಲ್ಲಿರುವುದರಿಂದ, ಸದ್ಯಕ್ಕೆ ನಿಖರವಾದ ಕಾರಣವನ್ನು ಕಂಡುಹಿಡಿಯಲಾಗುವುದಿಲ್ಲ, ಶನಿವಾರ ಬಹುತೇಕರು ಹೊಸಕೋಟೆ ಪಟ್ಟಣದ ದೇವಸ್ಥಾನಕ್ಕೆ ತೆರಳಿ ಪ್ರಸಾದ ಸೇವಿಸಿದ್ದರು ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ಒಂದು ದಿನದ ನಂತರ, ಕೆಲವರು ಭೇದಿ ಮತ್ತು ವಾಂತಿ ಎಂದು ದೂರಿದರು ಮತ್ತು ನಂತರ ಅವರು ಚಿಕಿತ್ಸೆಗಾಗಿ ಆಸ್ಪತ್ರೆಗಳಿಗೆ ಧಾವಿಸಿದರು. ಅದೇ ರೋಗಲಕ್ಷಣಗಳಿದ್ದ ಮಹಿಳೆಯನ್ನು ಭಾನುವಾರ ಮಧ್ಯಾಹ್ನ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಇಂದು ಬೆಳಿಗ್ಗೆ ಸಾವನ್ನಪ್ಪಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಸುಮಾರು 70 ಮಂದಿಯನ್ನು ವಿವಿಧ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ ಎಂಬ ಮಾಹಿತಿ ನಮಗಿದೆ. ಗರಿಷ್ಠ ರೋಗಿಗಳು ದಾಖಲಾಗಿರುವ ಐದು ಆಸ್ಪತ್ರೆಗಳನ್ನು ಆರೋಗ್ಯ ಇಲಾಖೆ ಗುರುತಿಸಿದೆ. ಪರಿಸ್ಥಿತಿ ನೋಡಿದರೆ ಆಸ್ಪತ್ರೆಯೊಂದರಲ್ಲಿ ಐಸಿಯು ಚಿಕಿತ್ಸೆಗೆ ಸಂಪೂರ್ಣ ಮಹಡಿಯನ್ನು ಮೀಸಲಿಟ್ಟಿದ್ದಾರೆ.

ನಾವು ಈ ರೋಗಿಗಳ ಹೇಳಿಕೆಗಳನ್ನು ದಾಖಲಿಸಲು ಪ್ರಾರಂಭಿಸಿದ್ದೇವೆ. ಇಲ್ಲಿಯವರೆಗೆ ನಾವು ಯಾವುದೇ ದೂರು ದಾಖಲಿಸಿಕೊಂಡಿಲ್ಲ. ನಮ್ಮ ತನಿಖೆ ಆರಂಭಿಕ ಹಂತದಲ್ಲಿದೆ. ನಾವು ಆರೋಗ್ಯ ಇಲಾಖೆ ಮತ್ತು ಆಹಾರ ಸುರಕ್ಷತಾ ಅಧಿಕಾರಿಯಿಂದ ದೂರಿಗಾಗಿ ಕಾಯುತ್ತಿದ್ದೇವೆ. ಹೇಳಿಕೆಗಳು ಮತ್ತು ಅವರ ದೂರುಗಳ ಆಧಾರದ ಮೇಲೆ, ಶೀಘ್ರದಲ್ಲೇ ಪ್ರಕರಣ ದಾಖಲಿಸಿಕೊಂಡು ಅಗತ್ಯ ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿದರು.

ಸ್ಕೂಟರ್‌ನಿಂದ ಬಿದ್ದು ಯುವಕ ಸಾವು

ಮೈಸೂರು, ಡಿ. 25(ಆರ್‌ಕೆ)– ಸ್ಕೂಟರ್‌ನಿಂದ ಆಯತಪ್ಪಿ ಬಿದ್ದು ಯುವಕನೋರ್ವ ಸಾವನ್ನಪ್ಪಿರುವ ಘಟನೆ ಮೈಸೂರಿನ ಪಾಳ್ಯ ಗೇಟ್ ಬಳಿ ಬನ್ನೂರು ರಸ್ತೆಯಲ್ಲಿ ಭಾನುವಾರ ರಾತ್ರಿ ಸಂಭವಿಸಿದೆ.



ಮೈಸೂರಿನ ದೇವರಾಜ ಮೊಹಲ್ಲಾ, ಬೋಟಿ ಬಜಾರ್ ನಿವಾಸಿ ಸುರೇಶ್ ಅವರ ಮಗ ಎಸ್. ಪವನ್(22) ದುರಂತ ಸಾವಿಗೀಡಾದ ಯುವಕ. ಸೋದರತ್ತೆ ಮನೆಯಲ್ಲಿ ಊಟ ಮಾಡಿಕೊಂಡು ಸುಜುಕಿ ಅಕ್ಸೆಸ್ ಸ್ಕೂಟರ್‌ನಲ್ಲಿ ದೇವೇಗೌಡ ಸರ್ಕಲ್ ಕಡೆಯಿಂದ ಬರುತ್ತಿದ್ದಾಗ ಜಿಲ್ಲಾಧಿಕಾರಿಗಳ ನೂತನ ಕಚೇರಿ ಸಮೀಪ ಪಾಳ್ಯ ಗೇಟ್ ಬಳಿ ಬನ್ನೂರು ರಸ್ತೆಯಲ್ಲಿ ನಿಯಂತ್ರಣ ತಪ್ಪಿ ಭಾನುವಾರ ರಾತ್ರಿ ಸುಮಾರು 11.30 ಗಂಟೆ ವೇಳೆಗೆ ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದಿದ್ದಾನೆ.

ಪರಿಣಾಮ ತಲೆಗೆ ತೀವ್ರವಾಗಿ ಪೆಟ್ಟು ಬಿದ್ದು ನರಳುತ್ತಿದ್ದ ಪವನ್‌ನನ್ನು ಸಿದ್ಧಾರ್ಥ ಬಡಾವಣೆಯ ಶ್ರೀ ಮಹದೇಶ್ವರ ನರ್ಸಿಂಗ್ ಹೋಂಗೆ ಕರೆದೊಯ್ಯಲಾಯಿತಾದರೂ, ಚಿಕಿತ್ಸೆ ಫಲಕಾರಿಯಾಗದೇ ರಾತ್ರಿ 11.50 ಗಂಟೆಗೆ ಕೊನೆಯುಸಿರೆಳೆದ ಎಂದು ಪೊಲೀಸರು ತಿಳಿಸಿದ್ದಾರೆ. ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಸಿದ್ಧಾರ್ಥನಗರ ಸಂಚಾರ ಠಾಣೆ ಇನ್ಸ್‌ಪೆಕ್ಟರ್ ಯೋಗೇಶ್ ಹಾಗೂ ಸಿಬ್ಬಂದಿ ಮಹಜರು ನಡೆಸಿ ಮೃತದೇಹವನ್ನು ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಶವಾಗಾರಕ್ಕೆ ಸ್ಥಳಾಂತರಿಸಿದರು. ಇಂದು ಮರಣೋತ್ತರ ಪರೀಕ್ಷೆ ನಡೆಸಿದ ನಂತರ ವಾರಸುದಾರರಿಗೆ ದೇಹ ಒಪ್ಪಿಸಲಾಯಿತು.

ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್‌ವೇನಲ್ಲಿ ಅಪಘಾತ ಇಳಿಮುಖ

- 2023ರ ಮೇ-ಜೂನ್‌ನಲ್ಲಿ 92 ಅಪಘಾತ; ನವೆಂಬರ್‌ನಲ್ಲಿ ಬರೀ 12!
- ಇದು ಕೈಗೊಂಡ ಹಲವು ಕಠಿಣ ಮುನ್ನೆಚ್ಚರಿಕಾ ಕ್ರಮದ ಫಲಶ್ರುತಿ

ಮೈಸೂರು, ಡಿ. 25(ಆರ್‌ಕೆ)– ಕೆಲವು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡ ಹಿನ್ನೆಲೆಯಲ್ಲಿ ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್‌ವೇನಲ್ಲಿ ಅಪಘಾತಗಳ ಸಂಖ್ಯೆ ಗಣನೀಯವಾಗಿ ಇಳಿಮುಖವಾಗಿವೆ.

2023ರ ಸೆಪ್ಟೆಂಬರ್‌ನಿಂದ ನವೆಂಬರ್‌ವರೆಗೆ ಅತೀ ವೇಗವಾಗಿ ಚಾಲನೆ ಮಾಡುವವರ ವಿರುದ್ಧ 5,000 ಪ್ರಕರಣ ದಾಖಲಿಸಲಾಗಿದ್ದು, ನಿರ್ಲಕ್ಷ್ಯ ಚಾಲನೆಗೆ ಕಡಿವಾಣ ಹಾಕಿದ ಪರಿಣಾಮ ಎಕ್ಸ್‌ಪ್ರೆಸ್‌ವೇನಲ್ಲಿ ಅಪಘಾತಗಳ ಸಂಖ್ಯೆ ಕಡಿಮೆಯಾಗಿವೆ ಎಂದು ಸಂಚಾರ ಮತ್ತು ರಸ್ತೆ ಸುರಕ್ಷತಾ ಎಡಿಜಿಪಿ ಸೀಮಂತಕುಮಾರ್ ಸಿಂಗ್ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ (ಎಐ) ತಂತ್ರಜ್ಞಾನ ಹೊಂದಿರುವ ಕ್ಯಾಮರಾಗಳ ಅಳವಡಿಕೆ, ಮೈಸೂರು, ಮಂಡ್ಯ ಹಾಗೂ ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲಿ ಪೊಲೀಸ್ ಸಿಬ್ಬಂದಿ ನಿಯೋಜನೆ, ಹ್ಯಾಂಡ್–ಹೆಲ್ಡ್ ಮತ್ತು ವೆಹಿಕಲ್ ಮೌಂಟೆಡ್ ಕ್ಯಾಮರಾಗಳು ಸೇರಿದಂತೆ 100 ಕಿ.ಮೀ. ಗಿಂತ ಹೆಚ್ಚು ವೇಗದಲ್ಲಿ ಚಲಿಸುವ ವಾಹನಗಳ ವೇಗ ಮಿತಿಗೆ ಕೈಗೊಂಡಿರುವ ಕ್ರಮದ ಹಿನ್ನೆಲೆಯಲ್ಲಿ ಅಪಘಾತಗಳ ಸಂಖ್ಯೆಯಲ್ಲಿ ಗಣನೀಯ ಇಳಿಕೆಯಾಗಿದೆ ಎಂದು ಅವರು ತಿಳಿಸಿದರು.



2023ರ ಮೇ–ಜೂನ್ ತಿಂಗಳಲ್ಲಿ ಸಂಭವಿಸಿದ್ದ 92 ಅಪಘಾತಗಳು, ನವೆಂಬರ್ 2023ಕ್ಕೆ 12ಕ್ಕೆ ಇಳಿಕೆಯಾಗಿದೆ. ಅದೇ ರೀತಿ 2023ರ ಮೇನಲ್ಲಿ 29 ಇದ್ದ ಸಾವಿನ ಸಂಖ್ಯೆ ಸಹ 2023ರ ನವೆಂಬರ್ ವೇಳೆಗೆ 6ಕ್ಕೆ ಇಳಿಕೆಯಾಗಿದೆ. 2023ರ ಜೂನ್ ತಿಂಗಳಲ್ಲಿ 28 ಮಂದಿ ಸಾವನ್ನಪ್ಪಿದ್ದರೆ, ಜುಲೈನಲ್ಲಿ 8 ಹಾಗೂ ಆಗಸ್ಟ್ ತಿಂಗಳಲ್ಲಿ ಕೇವಲ 6 ಮಂದಿ ಸಾವನ್ನಪ್ಪಿದ್ದಾರೆ ಎಂದು ಪೊಲೀಸ್ ಅಂಕಿ–ಅಂಶಗಳಿಂದ ತಿಳಿದುಬಂದಿದೆ.

ಆಟೋ, ದ್ವಿಚಕ್ರ ವಾಹನ ಸಂಚಾರ ನಿಷೇಧ: 2023ರ ಸೆಪ್ಟೆಂಬರ್–ಅಕ್ಟೋಬರ್‌ನಲ್ಲಿ ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್‌ವೇನಲ್ಲಿ ಆಟೋರಿಕ್ಷಾ, ಟ್ರಾಕ್ಟರ್, ದ್ವಿಚಕ್ರ ವಾಹನ ಸಂಚಾರ ನಿಷೇಧಿಸಲಾಯಿತು. ವೇಗದ ಮಿತಿಯನ್ನು ಗಂಟೆಗೆ 100 ಕಿ.ಮೀ.ಗೆ ಮಿತಿಗೊಳಿಸಿದ ಕಾರಣ ಸರಾಸರಿ ಶೇ. 65ರಿಂದ 75ರಷ್ಟು ಅಪಘಾತಗಳು ಕಡಿಮೆಯಾದಂತಾಗಿದೆ ಎಂದು ಎಡಿಜಿಪಿ ಸೀಮಂತಕುಮಾರ್ ಸಿಂಗ್ ತಿಳಿಸಿದ್ದಾರೆ. ವೇಗಕ್ಕೆ ಬ್ರೇಕ್ ಹಾಕಿದ ಮೇಲೆ ಎಕ್ಸ್‌ಪ್ರೆಸ್‌ವೇ ಮೇನ್ ಕ್ಯಾರಿಯೇಜ್‌ನಲ್ಲಿ ಅಪಘಾತಗಳ ಸಂಖ್ಯೆ ಕಡಿಮೆಯಾಯಿತು ಎಂದು ಅವರು ತಿಳಿಸಿದರು.

ಅತೀ ವೇಗದ ಚಾಲನೆ ನಿಧಾನವಾಗಿ ಚಲಿಸುವ ಆಟೋ, ಸರಕು ತುಂಬಿದ ವಾಹನಗಳು, ದ್ವಿಚಕ್ರ ವಾಹನಗಳ ಸಂಚಾರ ಹಾಗೂ ನಿರ್ಲಕ್ಷ್ಯದ ಚಾಲನೆಗಳೇ ಅಪಘಾತಗಳಿಗೆ ಪ್ರಮುಖ ಕಾರಣಗಳೆಂದು ಭಾರತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ನಡೆಸಿದ ಸಮೀಕ್ಷೆಯಲ್ಲಿ ಕಂಡುಬಂದ ಹಿನ್ನೆಲೆಯಲ್ಲಿ ಮೈಸೂರು, ಮಂಡ್ಯ, ರಾಮನಗರ ಹಾಗೂ ಬಿಡದಿ ಪೊಲೀಸರು ಕೈಗೊಂಡ ಮುಂಜಾಗ್ರತಾ ಕ್ರಮದಿಂದಾಗಿ ಈಗ ಅಪಘಾತಗಳ ಸಂಖ್ಯೆ ಕಡಿಮೆಯಾಗಿದೆ ಎಂದು ಸೀಮಂತಕುಮಾರ್ ಸಿಂಗ್ ತಿಳಿಸಿದರು.

ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್‌ವೇನಲ್ಲಿ ಗಂಟೆಗೆ ಗರಿಷ್ಠ 100 ಕಿ.ಮೀ. ವೇಗದಲ್ಲಿ ಚಲಿಸಬೇಕು ಎಂದು ವೇಗ ಮಿತಿ ಹಾಗೂ ಸಿಸಿ ಕ್ಯಾಮರಾ ಕಣ್ಗಾವಲು, ಪೊಲೀಸರ ತಪಾಸಣಾ ಕಾರ್ಯಗಳೂ ಅಪಘಾತಗಳು ಇಳಿಕೆಯಾಗಲು ಪ್ರಮುಖ ಕಾರಣ ಎಂದು ತಿಳಿಸಿದ್ದಾರೆ. ಸುರಕ್ಷಾ ಪ್ರಯಾಣಕ್ಕಾಗಿ ರಾಷ್ಟ್ರೀಯ ಹೆದ್ದಾರಿಗಳ ಪ್ರಾಧಿಕಾರ ಹಾಗೂ ಪೊಲೀಸರು ಜಾರಿ ಮಾಡುವ ನಿಯಮಗಳನ್ನು ಪಾಲಿಸುವ ಮೂಲಕ ಜನರ ಪ್ರಾಣ ರಕ್ಷಿಸಲು ಸಹಕರಿಸಬೇಕೆಂದು ಎಡಿಜಿಪಿ ಸೀಮಂತಕುಮಾರ್ ಸಿಂಗ್ ಸಾರ್ವಜನಿಕರಿಗೆ ಸಲಹೆ ನೀಡಿದ್ದಾರೆ.

ಮೈಸೂರು ಮಿತ್ರ ಮಂಗಳವಾರ 26 ಡಿಸೆಂಬರ್ 2023

ಹಾರ್ಡ್ವಿಕ್ ಚರ್ಚ್‌ನಲ್ಲಿ ಸೌಹಾರ್ದ ಕ್ರಿಸ್‌ಮಸ್ ಆಚರಣೆ



ಮೈಸೂರು, ಡಿ. 25–ಮೈಸೂರಿನ ಎಂಜಿ ರಸ್ತೆಯಲ್ಲಿರುವ ಹಾರ್ಡ್ವಿಕ್ ಚರ್ಚ್‌ನಲ್ಲಿ ಕ್ರಿಸ್‌ಮಸ್ ಸೌಹಾರ್ದ ಕಾರ್ಯಕ್ರಮದಲ್ಲಿ ಹಾರ್ಡ್ವಿಕ್ ಚರ್ಚ್ ಫಾದರ್ ಜಾನ್ಸನ್ ಪಾಲ್ ಅವರಿಗೆ ಪ್ರಜ್ಞಾವಂತ ಅಹಿಂದ ವೇದಿಕೆ ವತಿಯಿಂದ ಹೂಗುಚ್ಛ ನೀಡಿ, ಕ್ರಿಸ್‌ಮಸ್ ಕೇಕ್ ಕತ್ತರಿಸಿ ಪರಸ್ಪರ ಶುಭ ಕೋರಿ ಏಕತಾ ಸಂದೇಶ ನೀಡಿದರು.

ಫಾದರ್ ಜಾನ್ಸನ್ ಪಾಲ್ ಮಾತನಾಡಿ, ಎಲ್ಲಾ ಧರ್ಮಗಳು ಪ್ರೀತಿ, ಶಾಂತಿ ಮತ್ತು ಸಮಾನತೆಯನ್ನು ಕಲಿಸುತ್ತವೆ. ಯಾವ ಧರ್ಮವೂ ಹಿಂಸೆಯನ್ನು ಪ್ರತಿಪಾದಿಸುವುದಿಲ್ಲ ಎಂದು ಹೇಳಿದರು.

ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್ ಮಾತನಾಡಿ, ನಮ್ಮ ನಡೆ ಮತ್ತು ನುಡಿ ಒಂದೇ ಆಗಿರಬೇಕು. ಸಾಧನೆ ಮಾಡಬೇಕಾದರೆ ಕಷ್ಟಪಟ್ಟು ಕೆಲಸ ಮಾಡಬೇಕು. ಆಗ ಗುರಿಮುಟ್ಟಲು ಸಾಧ್ಯ. ಯಾವುದೇ ಕೆಲಸ ಆರಂಭಿಸುವ ಮುನ್ನ ಕೆಲ ನಿಮಿಷ ಧ್ಯಾನ ಮಾಡಬೇಕು ಎಂದರು. ಕಾರ್ಯದರ್ಶಿ ರೊನಾಲ್ಡ್ ಜೋಸೆಫ್, ಎನ್ಸೋಷ್, ಅಬ್ರಾಹಿಂ ಲಿಂಕನ್, ಕಾಂಗ್ರೆಸ್ ಮೈನಾರಿಟಿ ಉಪಾಧ್ಯಕ್ಷ ಸೈಯದ್ ಆರಿಫ್, ಮುಸ್ತಫಾ, ಆಯುಬ್ ಖಾನ್, ಪ್ರಜ್ಞಾವಂತ ಅಹಿಂದ ವೇದಿಕೆ ಅಧ್ಯಕ್ಷ ವರುಣ ಮಹದೇವ್, ಮರಟಿ ಕ್ಯಾತನಹಳ್ಳಿ ಮಂಜು, ಜಟ್ಟಿ ಹುಂಡಿ ಗೋಪಾಲ್, ಗಣೇಶ್, ಗೋವಿಂದ, ಜ್ಞಾನ ಕೋಮಲ, ಗೀತ ಸುಗುಣ, ಹಾಗೂ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರಿನ ಇರ್ವಿನ್ ರಸ್ತೆಯಲ್ಲಿರುವ ಪಂಚಮುಖಿ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಹನುಮ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ದೇವಸ್ಥಾನದ ಪ್ರಧಾನ ಅರ್ಚಕರಾದ ವಿದ್ವಾನ್ ಕೃಷ್ಣಮೂರ್ತಿ ನೇತೃತ್ವದಲ್ಲಿ ಪವಮಾನ ಹೋಮ, ಶ್ರೀರಾಮ ತಾರಕ ಹೋಮ, ಸ್ವಾಮಿಗೆ ಪಂಚಾಮೃತ ಅಭಿಷೇಕ, ವಿಶೇಷ ಪೂಜೆ ಸಲ್ಲಿಸಲಾಯಿತು. ನಂತರ ಭಕ್ತಾದಿಗಳಿಗೆ ಪ್ರಸಾದ ವಿನಿಯೋಗ ಮಾಡಲಾಯಿತು. ಶಿವಕುಮಾರ್ ,ಕಸ್ತೂರಿ ಶಿವಕುಮಾರ್, ರಶ್ಮಿ ಹಾಗೂ ಭಕ್ತಾದಿಗಳು ಹಾಜರಿದ್ದರು.



ಮೈಸೂರಿನ ಬೋಗಾದಿ ಮುಖ್ಯ ರಸ್ತೆಯಲ್ಲಿರುವ ಬೋಗಾದಿ ಪಬ್ಲಿಕ್ ಶಾಲೆಯಲ್ಲಿಂದು ಕ್ರಿಸ್‌ಮಸ್ ಹಬ್ಬವನ್ನು ಸಡಗರ, ಸಂಭ್ರಮದಿಂದ ಆಚರಿಸಲಾಯಿತು. ಚಿತ್ರದಲ್ಲಿ ಶಾಲಾ ಆಡಳಿತಾಧಿಕಾರಿ ಕಾಂತಿನಾಯಕ್, ಮುಖ್ಯೋಪಾಧ್ಯಾಯ ಮೊಹಮ್ಮದ್ ಫಾರೂಕ್, ಶಿಕ್ಷಕ ವೃಂದ ಹಾಗೂ ಮಕ್ಕಳನ್ನು ಕಾಣಬಹುದು. ವೇದಿಕೆ ಕಾರ್ಯಕ್ರಮದ ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಕ್ರಿಸ್‌ಮಸ್ ಹಬ್ಬದ ಗೀತೆಗಳನ್ನು ವಿದ್ಯಾರ್ಥಿಗಳಿಂದ ಪ್ರಸ್ತುತಪಡಿಸಲಾಯಿತು.

ಮಕ್ಕಳ ಆಸಕ್ತಿ ಗುರುತಿಸಿ ಪೋಷಕರು, ಶಿಕ್ಷಕರು ಪ್ರೋತ್ಸಾಹಿಸುವುದು ಸೂಕ್ತ

ತರಳಬಾಳು ಶಿಕ್ಷಣ ಕೇಂದ್ರದ ವಾರ್ಷಿಕೋತ್ಸವದಲ್ಲಿ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಕಿವಿಮಾತು



ಮೈಸೂರು, ಡಿ. 25–ಮಕ್ಕಳಿಗೆ ಕೇವಲ ಎಂಜಿನಿಯರಿಂಗ್, ಮೆಡಿಕಲ್ ಓದುವಂತೆ ಒತ್ತಡ ಹೇರದೆ ಅವರ ಆಸಕ್ತಿಯ ವಿಷಯ ಗುರುತಿಸಿ ಪೋಷಕರು ಹಾಗೂ ಶಿಕ್ಷಕರು ಪ್ರೋತ್ಸಾಹಿಸಬೇಕು ಎಂದು ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಸಲಹೆ ನೀಡಿದರು.

ನಗರದ ಕಲಾಮಂದಿರದಲ್ಲಿ ಭಾನುವಾರ ನಡೆದ ತರಳಬಾಳು ಶಿಕ್ಷಣ ಕೇಂದ್ರದ ವಾರ್ಷಿಕೋತ್ಸವದಲ್ಲಿ ಸಮಾರೋಪ ಭಾಷಣ ಮಾಡಿದ ಅವರು, ಕಲಾ, ವಾಣಿಜ್ಯ, ವಿಜ್ಞಾನ– ಹೀಗೆ ಎಲ್ಲದಕ್ಕೂ ಅದರದೇ ಆದ ಮಹತ್ವವಿದೆ. ಮೂಲ ವಿಜ್ಞಾನ ಕೋರ್ಸುಗಳು, ಐಟಿ– ಬಿಟಿ ಕೋರ್ಸುಗಳು ಕೂಡ ಇವೆ. ಹೀಗಾಗಿ ಮಕ್ಕಳಿಗೆ ಯಾವುದರಲ್ಲಿ ಆಸಕ್ತಿ ಇದೆ ಎಂಬುದನ್ನು ತಿಳಿದು ಅದೇ ಕೋರ್ಸಿಗೆ ಸೇರಿಸಿ ಎಂದರು.

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿ ಜೀವನದ ಪ್ರಮುಖ ಘಟ್ಟ, ಅದರಲ್ಲೂ ಮುಂದೆ ನಾವೇನು ಆಗಬೇಕು ಎಂಬುದನ್ನು ನಿರ್ಧರಿಸುವುದು ಪಿಯುಸಿ. ಆದ್ದರಿಂದ ವಿದ್ಯಾರ್ಥಿಗಳು ಗುರಿ ಇಟ್ಟುಕೊಂಡು ಗುರುವಿನ ಮಾರ್ಗದರ್ಶನ ಹಾಗೂ ಪೋಷಕರ ಬೆಂಬಲದಿಂದ ಉತ್ತಮವಾಗಿ ಓದಬೇಕು. ಸಾಧನೆ ಮಾಡುವ ಮನಸ್ಸಿದ್ದರೆ ಏನು ಬೇಕಾದರೂ ಸಾಧಿಸಬಹುದು ಎಂದು ಅವರು ಹೇಳಿದರು. ಜಾಗತೀಕರಣ, ಉದಾರೀಕರಣ ಹಾಗೂ ಖಾಸಗೀಕರಣದ ಪರಿಣಾಮವಾಗಿ ಈಗ ಅವಕಾಶಗಳು ಹೆಚ್ಚಿವೆ. ಉತ್ತಮವಾಗಿ ಓದಿದರೆ ಪ್ರಪಂಚದ ಮೂಲೆಮೂಲೆಗಳಲ್ಲಿ ಉದ್ಯೋಗ ಸಿಗುತ್ತದೆ. ಆದ್ದರಿಂದ ವಿದ್ಯಾರ್ಥಿಗಳು ಮೊಬೈಲ್, ಟಿವಿಗೆ ಜೋತುಬೀಳದೆ ಪುಸ್ತಕಗಳ ಕಡೆ ಗಮನಹರಿಸಬೇಕು. ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಭಾಗವಹಿಸಿ, ಸಂಪೂರ್ಣವಾಗಿ ವ್ಯಕ್ತಿತ್ವ ವಿಕಸನ ಮಾಡಿಕೊಳ್ಳಬೇಕು ಎಂದರು. ದೇಶದ ಕಲೆ, ಸಾಹಿತ್ಯ, ಸಂಸ್ಕೃತಿ, ಪರಂಪರೆಯ ಬಗ್ಗೆ ತಿಳಿದುಕೊಳ್ಳಬೇಕು. ಪರಿಸರ ಕಾಳಜಿಯನ್ನು ಕೂಡ ಹೊಂದಿರಬೇಕು ಎಂದು ಅವರು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಿ.ನಾಗೇಂದ್ರಪ್ಪ ಮಾತನಾಡಿ, ವಿದ್ಯಾರ್ಥಿಗಳ ವ್ಯಾಸಂಗದಲ್ಲಿ ಶಿಕ್ಷಕರು ಹಾಗೂ ಪೋಷಕರ ಪಾತ್ರ ತಲಾ ಶೇ.50ರಷ್ಟು ಇರುತ್ತದೆ. ಆದ್ದರಿಂದ ಶಾಲಾ– ಕಾಲೇಜಿಗೆ ಸೇರಿಸಿದರೆ ನಮ್ಮ ಜವಾಬ್ದಾರಿ ಮುಗಿಯಿತು ಎಂದು ಪೋಷಕರು ಭಾವಿಸಬಾರದು. ಆಗಾಗ್ಗೆ ಶಾಲಾ– ಕಾಲೇಜಿಗೆ ಭೇಟಿ ನೀಡಿ, ಮಕ್ಕಳ ಶೈಕ್ಷಣಿಕ ಪ್ರಗತಿಯ ಬಗ್ಗೆ ಶಿಕ್ಷಕರೊಂದಿಗೆ ಸಂವಾದಿಸಬೇಕು ಎಂದು ಹೇಳಿದರು.

ಎಸ್‌ಎಸ್‌ಎಲ್‌ಸಿಯಲ್ಲಿ ಅತ್ಯುತ್ತಮ ಅಂಕ ಗಳಿಸಿದ ಪ್ರಂಜೋಗ್ ರಾಜ್, ಜೆ. ಲಕ್ಷ್ಮಿ ಚರಿತಾ, ಪಿಯುಸಿ ವಾಣಿಜ್ಯ ವಿಭಾಗದಲ್ಲಿ ಹೆಚ್ಚು ಅಂಕ ಗಳಿಸಿದ ಸುಪ್ರಿಯಾ ಹಾಗೂ ವಿಜ್ಞಾನ ವಿಭಾಗದಲ್ಲಿ ಹೆಚ್ಚು ಅಂಕ ಗಳಿಸಿದ ಎಂ. ತೇಜಸ್ವಿನಿ ಅವರನ್ನು ಸನ್ಮಾನಿಸಲಾಯಿತು.

ತರಳುಬಾಳು ಶಿಕ್ಷಣ ಕೇಂದ್ರದ ಸ್ಥಳೀಯ ಸಲಹಾ ಸಮಿತಿ ಅಧ್ಯಕ್ಷ ಡಾ. ಜಿ.ಆರ್. ಶಿವಮೂರ್ತಿ, ಮುಖ್ಯ ಶಿಕ್ಷಕ ವಿ.ಆನಂದಪ್ಪ ಇದ್ದರು. ಸಹಶಿಕ್ಷಕ ಗಣೇಶ್ ಕುಮಾರ್ ವರದಿ ಓದಿದರು. ವಿದ್ಯಾರ್ಥಿಗಳಾದ ಸಾನ್ವಿ ಹೆಬ್ಬಾರ್ ಮತ್ತು ಸಂಗಡಿಗರು ಪ್ರಾರ್ಥಿಸಿದರು. ಮಹೇಶ್ವರಿ ಸ್ವಾಗತಿಸಿದರು. ಸಿ.ಎಸ್.ನಿಶ್ಚಲ್ ವಂದಿಸಿದರು. ಅನ್ನಪೂರ್ಣ ಹಾಗೂ ಮೌರ್ಯ ಲೋಕೇಶ್ ಕಾರ್ಯಕ್ರಮ ನಿರೂಪಿಸಿದರು. ನಂತರ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು.

ರಾಜಕೀಯ ಲಾಭಕ್ಕೆ ಅಹಿಂದ ಹೆಸರು ಬಳಕೆ

ಕಾಂಗ್ರೆಸ್ ಸರ್ಕಾರದ ವಿರುದ್ಧ ರಘು ಕೌಟಿಲ್ಯ ಕಿಡಿ

ಮೈಸೂರು, ಡಿ.25(ಬಿಎಲ್‌ಯು)– ರಾಜ್ಯ ಕಾಂಗ್ರೆಸ್ ಸರ್ಕಾರ ಅಹಿಂದ ಹೆಸರನ್ನು ರಾಜಕೀಯ ಲಾಭಕ್ಕೆ ಬಳಸಿಕೊಂಡು ಹಿಂದುಳಿದ ವರ್ಗಗಳ ಶೋಷಣೆ ಮಾಡುತ್ತಿದೆ ಎಂದು ರಾಜ್ಯ ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ನೂತನ ಅಧ್ಯಕ್ಷ ರಘು ಕೌಟಿಲ್ಯ ಆರೋಪಿಸಿದ್ದಾರೆ.

ಮೈಸೂರಿನ ಚಾಮರಾಜಪುರಂನ ಬಿಜೆಪಿ ಕಚೇರಿಯಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದುಳಿದ ವರ್ಗದಲ್ಲಿ 800 ಉಪ ಜಾತಿಗಳಿದ್ದು, ಇದೂವರೆಗೆ ಆ ವರ್ಗದ ಜನರನ್ನು ಆರ್ಥಿಕ ಮತ್ತು ಸಾಮಾಜಿಕವಾಗಿ ಮೇಲೆತ್ತಲು ಯಾವ ಯೋಜನೆಯನ್ನೂ ರೂಪಿಸಿಲ್ಲ. ಅಲ್ಲದೆ ಒಬ್ಬರಿಗೂ ರಾಜಕೀಯ ಅಧಿಕಾರ ನೀಡಿಲ್ಲ ಎಂದು ಆಪಾದಿಸಿದರು.

ನಾಲ್ಕು ಬಾರಿ ಮುಖ್ಯಮಂತ್ರಿ ಆಗಿದ್ದ ಬಿ.ಎಸ್.ಯಡಿಯೂರಪ್ಪ ಮಾತ್ರ ಹಿಂದುಳಿದ ವರ್ಗದವರಿಗೆ ಶಕ್ತಿ ತುಂಬಿದರು. ಈಗ ಪ್ರಧಾನಮಂತ್ರಿ ನರೇಂದ್ರ ಮೋದಿ ವಿಶ್ವಕರ್ಮ ಸಮುದಾಯದವರಿಗೆ ಅನುಕೂಲವಾಗುವ ಯೋಜನೆ ಘೋಷಣೆ ಮಾಡಿದ್ದಾರೆ. ಆದರೆ ಹಿಂದುಳಿದ ವರ್ಗದವರ ಏಳಿಗೆಗೆ ಕಾಂಗ್ರೆಸ್ ಸರ್ಕಾರದ ಕೊಡುಗೆ ಶೂನ್ಯ ಎಂದು ದೂರಿದರು.

ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದು ಏಳು ತಿಂಗಳಾಗಿದ್ದು, ಗ್ಯಾರಂಟಿ ಯೋಜನೆ ಮೂಲಕ ಬೊಕ್ಕಸ ಬರಿದು ಮಾಡಿದೆ. ಆದರೆ ರೈತರಿಗೆ ಅನುಕೂಲವಾಗುವ ಯಾವುದೇ ಯೋಜನೆ ರೂಪಿಸಿಲ್ಲ. ಮುಂಗಾರು, ಹಿಂಗಾರು ವೈಫಲ್ಯದಿಂದ ರೈತರು ಸಂಕಷ್ಟಕ್ಕೀಡಾಗಿದ್ದರೂ ಅವರ ನೆರವಿಗೆ ಧಾವಿಸಿಲ್ಲ. ರಾಜ್ಯದಲ್ಲಿ ಇಷ್ಟೆಲ್ಲಾ ಸಂಕಷ್ಟ ಪರಿಸ್ಥಿತಿ ಇದ್ದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಐಷಾರಾಮಿ ವಿಮಾನ ದಲ್ಲಿ ಓಡಾಡುತ್ತಾ ಮೋಜು–ಮಸ್ತಿ ಯಲ್ಲಿ ಕಾಲ ಕಳೆಯುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಕ್ಕರೆ ಸಚಿವರ ವಿರುದ್ಧ ಆಕ್ರೋಶ: ಸಾಲ ಮನ್ನಾ ಆಸೆಗಾಗಿ ಬರಗಾಲ ಬರಲೆಂದು ರೈತರು ಕಾಯುತ್ತಾರೆ ಎಂಬ ಸಕ್ಕರೆ ಸಚಿವ ಶಿವಾ ನಂದ್ ಪಾಟೀಲ್ ಹೇಳಿಕೆಗೆ ಕಿಡಿಕಾರಿದ ರಘು ಕೌಟಿಲ್ಯ, ರೈತರ ಬಗ್ಗೆ ಲಘು ವಾಗಿ ಮಾತನಾಡುವ ಇಂತಹ ಮಂತ್ರಿಯನ್ನು ಕೂಡಲೇ ಸಚಿವ ಸಂಪುಟದಿಂದ ವಜಾ ಮಾಡಬೇಕು. ಇಲ್ಲದಿದ್ದರೆ ಹೀಗೆ ಮಾತನಾಡುವವರನ್ನು ಉದ್ದೇಶಪೂರ್ವಕವಾಗಿ ಸಂಪುಟದಲ್ಲಿ ಇಟ್ಟುಕೊಂಡಿದ್ದೇವೆ ಎಂದು ಒಪ್ಪಿಕೊಂಡಂತಾಗುತ್ತದೆ ಎಂದು ಹೇಳಿದರು. ರಾಜ್ಯ ಬಿಜೆಪಿಯಲ್ಲಿ ಪಕ್ಷ ಸಂಘಟನೆಗೆ ಚೈತನ್ಯ ತುಂಬುವ ಸಲುವಾಗಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಪದಾಧಿಕಾರಿಗಳ ಹೊಸ ತಂಡ ರಚಿಸಿದ್ದಾರೆ. ಈ ಮೂಲಕ ಸಮರ್ಥರನ್ನು ಆಯ್ಕೆ ಮಾಡಲಾಗಿದ್ದು, ಮೈಸೂರು ಭಾಗಕ್ಕೆ ದೊಡ್ಡ ಅವಕಾಶ ನೀಡಿದ್ದಾರೆ. ಎಲ್ಲರೂ ರಾಜ್ಯಾದ್ಯಂತ ಪ್ರವಾಸ ಮಾಡಿ ಲೋಕಸಭಾ ಚುನಾವಣೆಯಲ್ಲಿ 28 ಸ್ಥಾನಗಳನ್ನು ಗೆಲ್ಲಿಸುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ರಾಜ್ಯ ಬಿಜೆಪಿ ಪದಾಧಿಕಾರಿಗಳ ತಂಡದಲ್ಲಿ ವಿಜಯೇಂದ್ರ ತಮ್ಮ ಪಟಾಲಂಗಳಿಗೆ ಅವಕಾಶ ನೀಡಿದ್ದಾರೆ ಎಂಬ ಆರೋಪ ಶುದ್ಧ ಸುಳ್ಳು. ಯಾರೋ ಒಬ್ಬರು ಹಾಗೆ ಆರೋಪಿಸಬಹುದು. ನಮ್ಮಲ್ಲಿ ಆಪ ರೇಷನ್ ಥಿಯೇಟರ್ ಇದ್ದು, ಶಸ್ತ್ರ ಚಿಕಿತ್ಸೆ ಮಾಡಿ ಅವರ ಅಸಮಾಧಾನ ಹೋಗ ಲಾಡಿಸುತ್ತಾರೆ ಎಂದು ರಘು ಕೌಟಿಲ್ಯ ಸ್ಪಷ್ಟಪಡಿಸಿದರು. ಇದೇ ವೇಳೆ ಮಾತ ನಾಡಿದ ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ಲೋಕಸಭಾ ಚುನಾವಣೆ ನಂತರ ಮುಖ್ಯಮಂತ್ರಿ ಸ್ಥಾನ ಅಲಂಕರಿಸಲು ಕಾಂಗ್ರೆಸ್‌ನಲ್ಲಿ ಪೈಪೋಟಿ ಆರಂಭವಾಗಲಿದೆ. ಆಗ ಸಹಜವಾಗಿಯೇ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ. ಇದರಿಂದ ನಾವು ಆಪರೇಷನ್ ಕಮಲ ಮಾಡುವ ಪ್ರಮೇಯ ವಿಲ್ಲ ಎಂದು ತಿಳಿಸಿದರು.

ಮಾಜಿ ಮೇಯರ್ ಶಿವಕುಮಾರ್, ಮುಡಾ ಮಾಜಿ ಅಧ್ಯಕ್ಷ ಯಶಸ್ವಿ ಸೋಮಶೇಖರ್, ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷ ಶಿವಕುಮಾರ್, ಮಾಧ್ಯಮ ಸಂಚಾಲಕರಾದ ಮಹೇಶ್ ರಾಜೇ ಅರಸ್ ಹಾಗೂ ಮಹೇಶ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.



ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಸೋಮವಾರ ರಾಜ್ಯ ಬಿಜೆಪಿ ಉಪಾಧ್ಯಕ್ಷರಾಗಿ ನೇಮಕಗೊಂಡಿರುವ ರಾಜೇಂದ್ರ ಹಾಗೂ ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷರಾಗಿ ನೇಮಕಗೊಂಡಿರುವ ರಘು ಕೌಟಿಲ್ಯ ಅವರನ್ನು ಅಭಿನಂದಿಸಲಾಯಿತು. ಮಾಜಿ ಮೇಯರ್ ಶಿವಕುಮಾರ್, ಮಾಜಿ ಉಪ ಮೇಯರ್ ಡಾ.ರೂಪ, ಮುಡಾ ಮಾಜಿ ಅಧ್ಯಕ್ಷ ಯಶಸ್ವಿ ಸೋಮಶೇಖರ್, ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷ ಶಿವಕುಮಾರ್ ಸೇರಿದಂತೆ ಇತರರನ್ನು ಚಿತ್ರದಲ್ಲಿ ಕಾಣಬಹುದು.

ರಾಜ್ಯದಲ್ಲಿ ಒಟ್ಟಾರೆ 35 ಜೆಎನ್.1 ಪ್ರಕರಣ ಪತ್ತೆ

ಮತ್ತೆ 125 ಜನರಿಗೆ ಕೊರೊನಾ ಪಾಸಿಟಿವ್; ಮೂವರು ಸಾವು

ಬೆಂಗಳೂರು: ರಾಜ್ಯದಲ್ಲಿ ಕೋವಿಡ್–19 ಪ್ರಕರಣಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಇಂದು ಒಂದೇ ದಿನ 125 ಜನರಿಗೆ ಕೊರೋನಾ ಪಾಸಿಟಿವ್ ದೃಢಪಟ್ಟಿದ್ದು ಮೂವರು ಸಾವನ್ನಪ್ಪಿದ್ದಾರೆ.

ಕಳೆದ 24 ಗಂಟೆಗಳಲ್ಲಿ 125 ಹೊಸ ಕೋವಿಡ್–19 ಪಾಸಿಟಿವ್ ಪ್ರಕರಣಗಳು ವರದಿಯಾಗಿದ್ದು, ಇದರೊಂದಿಗೆ ಒಟ್ಟು ಕೋವಿಡ್ ಪ್ರಕರಣಗಳ ಸಂಖ್ಯೆ 4,089,587 ಮತ್ತು ಸಕ್ರಿಯ ಪ್ರಕರಣಗಳ ಸಂಖ್ಯೆ 436ಕ್ಕೆ ಏರಿಕೆಯಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಿಳಿಸಿದೆ. ರಾಜ್ಯದಲ್ಲಿ ಕೊರೊನಾ ಪಾಸಿಟಿವಿ ರೇಟ್ ಶೇಕಡಾ 3.96ರಷ್ಟಿದೆ ಎಂದು ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಾಹಿತಿ ತಿಳಿಸಿದೆ. ಬೆಂಗಳೂರಿನಲ್ಲಿಯೇ ಬರೋಬ್ಬರಿ 94 ಜನರಿಗೆ ಕೋವಿಡ್ ಪಾಸಿಟಿವ್ ಬಂದಿದ್ದರೆ ದಕ್ಷಿಣ ಕನ್ನಡ–5, ಹಾಸನ–5, ಮೈಸೂರು–13, ಶಿವಮೊಗ್ಗ–2, ವಿಜಯಪುರ–2, ದಾವಣಗೆರೆ, ಚಿಕ್ಕಮಗಳೂರು, ಬಳ್ಳಾರಿ ಹಾಗೂ ಚಿಕ್ಕಬಳ್ಳಾಪುರದಲ್ಲಿ ತಲಾ ಒಬ್ಬರಲ್ಲಿ ವೈರಸ್ ಪತ್ತೆಯಾಗಿದೆ.

ಕರ್ನಾಟಕಕ್ಕೂ ಓಮಿಕ್ರಾನ್ ಉಪತಳಿ ಜೆಎನ್.1 ವೈರಸ್ ಎಂಟ್ರಿ, 35 ಕೇಸ್ ಪತ್ತೆ: ಕೊರೊನಾ ರೂಪಾಂತರಿ ಜೆಎನ್.1 ವೈರಸ್ ಕರ್ನಾಟಕಕ್ಕೂ ಎಂಟ್ರಿ ಕೊಟ್ಟಿದ್ದು, 35 ಪ್ರಕರಣಗಳು ಪತ್ತೆಯಾಗಿವೆ. ಕೇವಲ ಕೇರಳದಲ್ಲಿ ಓಮಿಕ್ರಾನ್ ಉಪತಳಿ ಜೆಎನ್.1 ವೈರಸ್ ಪತ್ತೆಯಾಗಿತ್ತು.

ಆದರೆ ಇದೀಗ ರಾಜ್ಯಕ್ಕೂ ಎಂಟ್ರಿ ಕೊಟ್ಟಿದೆ. ರಾಜ್ಯದ ಹಲವು ಜಿಲ್ಲೆಗಳಲ್ಲಿ ಹೊಸ ಕೋವಿಡ್ ಉಪ ತಳಿ ಜೆಎನ್.1 ಪತ್ತೆಯಾಗಿದ್ದು, 35ಕ್ಕೂ ಹೆಚ್ಚು ಜನರಲ್ಲಿ ಸೋಂಕು ಪತ್ತೆಯಾಗಿದೆ ಎಂದು ತಿಳಿದುಬಂದಿದೆ.

ಕೊರೊನಾ ರೂಪಾಂತರಿ ಜೆಎನ್–1 ವೈರಸ್‌ಗೆ ಕರ್ನಾಟಕದಲ್ಲಿ ಮೊದಲ ಬಲಿ



ಹಾಸನ, ಡಿ. 25– ಕೋವಿಡ್‌ಉಪ ತಳಿ ಜೆಎನ್–1ಗೆ ಕರ್ನಾಟಕದಲ್ಲಿ ಮೊದಲ ಬಲಿಯಾಗಿದೆ. ಹಾಸನ ಜಿಲ್ಲೆಯಲ್ಲಿ ಐವರಲ್ಲಿ ಓಮ್ರಿಕಾನ್ ಜೆಎನ್–1 ರೂಪಾಂತರಿ ತಳಿ ಪತ್ತೆಯಾಗಿದ್ದು, ಈ ಪೈಕಿ ಓರ್ವ ವ್ಯಕ್ತಿ ಸಾವನ್ನಪ್ಪಿದ್ದಾನೆ. ಓರ್ವ ಜೆಎನ್–1 ಸೋಂಕಿನಿಂದ ಬಳಲುತ್ತಿದ್ದ ಚನ್ನರಾಯಪಟ್ಟಣ ಮೂಲದ ವ್ಯಕ್ತಿ ಮೃತಪಟ್ಟಿದ್ದಾನೆ. ಉಸಿರಾಟದ ಸಮಸ್ಯೆಯಿಂದ ಬಳಲುತ್ತಿದ್ದ ವ್ಯಕ್ತಿಗೆ ಜೆಎನ್–1 ಸೋಂಕು ತಗುಲಿತ್ತು. ಆದರೆ, ಆ ವ್ಯಕ್ತಿ ಸಾವನ್ನಪ್ಪಿದ ಬಳಿಕ ಆತನಿಗೆ ಜೆಎನ್–1 ಸೋಂಕು ತಗುಲಿರುವುದು ವರದಿಯಲ್ಲಿ ತಿಳಿದುಬಂದಿದೆ. ಆರೋಗ್ಯ ಇಲಾಖೆ ಅಧಿಕಾರಿಗಳು ಸ್ಯಾಂಪಲ್‌ಗಳನ್ನು ಜೆನಾಮಿಕ್‌ಗೆ ಕಳುಹಿಸಿತ್ತು. ಇಂದು (ಡಿಸೆಂಬರ್ 25) ಐವರಲ್ಲಿ ಜೆಎನ್–1 ಸೋಂಕು ದೃಢಪಟ್ಟಿದ್ದು, ಅದರಲ್ಲಿ ಚನ್ನರಾಯಪಟ್ಟಣದ ವ್ಯಕ್ತಿ ಈಗಾಗಲೇ ಸಾವನ್ನಪ್ಪಿದ್ದಾನೆ. ಇನ್ನುಳಿದ ನಾಲ್ವರು ಹೋಂ ಐಸೋಲೇಷನ್‌ನಲ್ಲಿದ್ದು, ಜನರು ಭಯಪಡದಂತೆ ಅಧಿಕಾರಿಗಳ ತಿಳಿಸಿದ್ದಾರೆ.

ರಾಷ್ಟ್ರೀಯ ಗ್ರಾಹಕರ ದಿನಾಚರಣೆ

ಮೋಸವಾದಾಗ ಗ್ರಾಹಕರು ಪ್ರಶ್ನಿಸುವುದನ್ನು ಕಲಿಯಿರಿ

ನಿವೃತ್ತ ಡಿವೈಎಸ್‌ಪಿ ಜೆ.ಬಿ.ರಂಗಸ್ವಾಮಿ ಕರೆ

ಮೈಸೂರು, ಡಿ.25–ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಮೈಸೂರು ಘಟಕದ ವತಿಯಿಂದ ಗ್ರಾಹಕರಲ್ಲಿ ಅರಿವು ಮೂಡಿಸುವಂತಹ 'ಗ್ರಾಹಕನೇ ರಾಜ' ಪುಸ್ತಕವನ್ನು ಬಿಡುಗಡೆ ಮಾಡಲಾಯಿತು.

ಜೆಪಿ ನಗರದಲ್ಲಿರುವ ಪಂಡಿತ್ ಗವಾಯಿ ಸ್ಟೇಡಿಯಂ ಆವರಣದಲ್ಲಿ ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಹಾಗೂ ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಸುವರ್ಣ ಮಹೋತ್ಸವ ಅಂಗವಾಗಿ ಗ್ರಾಹಕನೇ ರಾಜ ಪುಸ್ತಕವನ್ನು ಹೊರತರಲಾಗಿದ್ದು, ನಿವೃತ್ತ ಡಿವೈಎಸ್‌ಪಿ ರಂಗಸ್ವಾಮಿ ಅವರು ಲೋಕಾರ್ಪಣೆ ಮಾಡಿದರು.

ಈ ವೇಳೆ ಮಾತನಾಡಿದ ರಂಗಸ್ವಾಮಿ ಅವರು, ಮೊದಲಿಗೆ ಪ್ಲಾಸ್ಟಿಕ್ ಬಳಕೆಯಿಂದ ಆಗುವ ದುಷ್ಪರಿಣಾಮಗಳನ್ನು ವಿವರಿಸಿದರು. ಮೈಸೂರು ದಸರಾ ಪಂಜಿನ ಕವಾಯತು ಸಮಯದಲ್ಲಿ ರಾಣಾ ಪ್ರತಾಪ ಕುದುರೆ ಪ್ಲಾಸ್ಟಿಕ್ ತಿಂದು ದಿಢೀರನೆ ಕುಸಿದು ಬಿದ್ದು, ಮೃತಪಟ್ಟಿದ್ದನ್ನು ಉದಾಹರಣೆ ಸಹಿತ ಅವರು ತಿಳಿಸಿಕೊಟ್ಟರು. ಗ್ರಾಹಕರ ಹಕ್ಕುಗಳು ಏನು, ಅವುಗಳನ್ನು ಏಕೆ ನಾವು ತಿಳಿದುಕೊಳ್ಳಬೇಕು ಎಂಬುದರ ಬಗ್ಗೆ ಸಾರ್ವಜನಿಕರಲ್ಲಿ ಮೊದಲು ಅರಿವು ಮೂಡಬೇಕು ಎಂದು ಹೇಳಿದರು.

ಗ್ರಾಹಕರ ಹಕ್ಕುಗಳ ಬಗ್ಗೆ ಗ್ರಾಹಕನೇ ರಾಜ ಎಂಬ ಈ ಪುಸ್ತಕ ಎಲ್ಲವನ್ನು ವಿವರಿಸುತ್ತದೆ. ಹೇಗೆ ನಮಗೆ ಮೋಸ ಆಗುತ್ತಿದೆ, ಅಂಗಡಿಗಳಲ್ಲಿ ಎಂಆರ್‌ಪಿ ಹಾಕಿರುತ್ತಾರೆ ಆದರೆ ಅದರಲ್ಲಿ ಎಲ್ಲ ಟ್ಯಾಕ್ಸ್ ಸೇರಿದ್ದರು ಮತ್ತೆ ಇನ್ನೇನೋ ಸೇರಿಸಿ ಹೆಚ್ಚಿನ ಬೆಲೆ ಪಡೆಯುತ್ತಾರೆ. ಯಾವುದೇ ವಸ್ತುಗಳಾಗಲೀ ಅದು ಡ್ಯೂಪ್ಲಿಕೇಟ್ ಅಥವಾ ಒರಿಜಿನಲ್ಲಾ ಎಂಬುದನ್ನು ನಾವು ಪರಿಶೀಲನೆಯನ್ನೇ ಮಾಡುವುದಿಲ್ಲ. ಎಷ್ಟೋ ಆಸ್ಪತ್ರೆಗಳಲ್ಲಿ ಹೆಚ್ಚಿನ ಹಣ ಪಡೆದು ಲೂಟಿ ಹೊಡೆಯುತ್ತಿದ್ದಾರೆ. ಆದರೆ ನಾವು ಗ್ರಾಹಕರು ಇದೆಲ್ಲ ಗೊತ್ತಿದ್ದರೂ ಸುಮ್ಮನೆ ಇರುತ್ತೇವೆ. ಅದನ್ನು ಪ್ರಶ್ನೆ ಮಾಡುವುದಿಲ್ಲ ಎಂದು ತಮ್ಮ ಮನೆಯದೇ ಒಂದು ಉದಾಹರಣೆಯನ್ನು ನೀಡಿದರು.

ಜೆನರಿಕ್ ಔಷಧಿ ಅಂಗಡಿಗಳಲ್ಲಿ ಔಷಧಿಗಳು ಬಹಳ ಕಡಿಮೆ ಬೆಲೆಗೆ ಸಿಗುತ್ತವೆ. ಆದರೆ ಕೆಲವರು ಇದು ಕ್ವಾಲಿಟಿ ಇಲ್ಲ ಎಂದು ಏನೇನೋ ಹೇಳುತ್ತಾರೆ. ಆದರೆ ಅದೆಲ್ಲ ಸರಿಯಲ್ಲ ಇವು ಬಹಳ ಉಪಯುಕ್ತ. ಕಡಿಮೆ ಬೆಲೆಗೆ ಸಿಗುತ್ತದೆ ಎಂಬ ಕೀಳರಿಮೆ ಬೇಡ ಎಂದು ಸಲಹೆ ನೀಡಿದರು.

ಎಲ್ಲೇ ಆಗಲಿ, ಯಾರೇ ಆಗಲಿ ಮೋಸ ಆಗುತ್ತಿರುವುದು ಕಂಡಾಗ ಪ್ರಶ್ನಿಸಬೇಕು, ನಮ್ಮ ಹಕ್ಕುಗಳ ಬಗ್ಗೆ ತಿಳಿದುಕೊಳ್ಳಬೇಕು, ಸಾರ್ವಜನಿಕರಲ್ಲಿ ಇದೆಲ್ಲದರ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ನಿವೃತ್ತ ಡಿವೈಎಸ್‌ಪಿ ರಂಗಸ್ವಾಮಿ ಯುವ ಜನತೆಗೆ ಕರೆ ನೀಡಿದರು. ಕಾರ್ಯಕ್ರಮದಲ್ಲಿ ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಮೈಸೂರು ಘಟಕದ ಅಧ್ಯಕ್ಷ ಚಂದ್ರಶೇಖರ್, ನಿವೃತ್ತ ಬ್ಯಾಂಕ್ ಉದ್ಯೋಗಿ ಹಾಗೂ ಹಿರಿಯ ವಕೀಲರಾದ ರವೀಂದ್ರ, ಪ್ರಾಂತ ಕಾರ್ಯಕಾರಣಿಯ ಸದಸ್ಯರಾದ ಡಾ. ಜಿ.ವಿ.ರವಿ ಶಂಕರ್, ಜೆಪಿ ನಗರದ ಹಿರಿಯ ನಾಗರಿಕ ವೇದಿಕೆಯ ಅಧ್ಯಕ್ಷ ಬಸವರಾಜ್, ಪ್ರಧಾನ ಕಾರ್ಯದರ್ಶಿ ವಿಕ್ರಮ ಅಯ್ಯಂಗಾರ್, ಉಪಾಧ್ಯಕ್ಷ ಜಯಕುಮಾರ್, ದೊರೆಸ್ವಾಮಿ, ಮಹಿಳಾ ಪ್ರಮುಖ್ ನಾಗಮಣಿ, ದರ್ಶನ್ ಮೂರ್ತಿ ಮತ್ತಿತರರು ಪಾಲ್ಗೊಂಡಿದ್ದರು.



ಅರಣ್ಯ–ಅನನ್ಯ ವಿಷಯ ಕುರಿತು ಚಿತ್ರಕಲಾ ಸ್ಪರ್ಧೆ

ಮೈಸೂರು, ಡಿ. 25– ಸಖಿ ಫೌಂಡೇಶನ್ ಮತ್ತು ಸೂರ್ಯ ಚಾರಿಟಬಲ್ ಟ್ರಸ್ಟ್ ತನ್ನ ವಾರ್ಷಿಕೋತ್ಸವದ ಅಂಗವಾಗಿ ಅರಣ್ಯ–ಅನನ್ಯ ಎಂಬ ವಿಷಯದ ಕುರಿತು ಚಿತ್ರ ಕಲಾ ಸ್ಪರ್ಧೆಯನ್ನು ಆಯೋಜಿಸಿದೆ.

1ನೇ ತರಗತಿಯಿಂದ 10ನೇ ತರಗತಿಯವರೆಗೆ ಮೂರು ವಿಭಾಗಗಳಿಗೆ ಪ್ರತ್ಯೇಕವಾಗಿ ಸ್ಪರ್ಧೆಗಳು ನಡೆಯಲಿವೆ. ಸ್ಪರ್ಧಿಗಳಿಗೆ ಸಂಸ್ಥೆಯ ವತಿಯಿಂದಲೇ ಡ್ರಾಯಿಂಗ್ ಹಾಳೆಯನ್ನು ನೀಡಲಾಗುತ್ತದೆ ಉಳಿದ ಸಾಮಗ್ರಿಗಳನ್ನು ಸ್ಪರ್ಧಿಗಳೇ ತರಬೇಕಾಗುತ್ತದೆ. ಸ್ಪರ್ಧೆಯು ಮುಂಬರುವ ಜನವರಿ 7ನೇ ತಾರೀಖು ಭಾನುವಾರದಂದು ನೃಪತುಂಗ ಕನ್ನಡ ಶಾಲೆಯ ಆವರಣದಲ್ಲಿ ಬೆಳಗ್ಗೆ 9.30ಕ್ಕೆ ನಡೆಯಲಿದೆ.

ಭಾಗವಹಿಸಲು ಆಸಕ್ತಿ ಇರುವವರು ಇದೇ ಡಿಸೆಂಬರ್ 31 ರೊಳಗೆ ತಮ್ಮ ಹೆಸರು,ವಯಸ್ಸು, ತರಗತಿ, ಶಾಲೆಯ ಹೆಸರು ಮುಂತಾದ ಮಾಹಿತಿಗಳೊಂದಿಗೆ ಮೊಬೈಲ್ ದೂರವಾಣಿ ಸಂಖ್ಯೆ 99647 90442, 8310306882 ಕರೆಮಾಡಿ ನೋಂದಾಯಿಸಿಕೊಳ್ಳಬಹುದಾಗಿದೆ.

ವಚನ ಸಾಹಿತ್ಯಕ್ಕೆ ವಿಶ್ವವನ್ನು ಪ್ರಭಾವಿಸುವ ಶಕ್ತಿ ಇದೆ

ಶರಣು ದಿನಚರಿ, ಬಸವಭಾನು ಸಂಚಿಕೆ, ಶರಣ ಸೌರಭ ಕೃತಿ ಬಿಡುಗಡೆ, ಸಾಧಕರಿಗೆ ವಿವಿಧ ಪ್ರಶಸ್ತಿಗಳ ಪ್ರದಾನ

ಮೈಸೂರು, ಡಿ. 25–ವಚನ ಸಾಹಿತ್ಯಕ್ಕೆ ಇಡೀ ವಿಶ್ವವನ್ನು ಪ್ರಭಾವಿಸುವ ಶಕ್ತಿ ಇದೆ ಎಂದು ಟಿ. ನರಸೀಪುರ ವಿದ್ಯೋದಯ ಕಾಲೇಜಿನ ನಿವೃತ್ತ ಪ್ರಾಧ್ಯಾಪಕಿ, ಲೇಖಕಿ ಡಾ.ಸಿ.ಜಿ. ಉಷಾದೇವಿ ಹೇಳಿದರು.

ನಗರದ ಶರಣು ವಿಶ್ವವಚನ ಫೌಂಡೇಷನ್ ವತಿಯಿಂದ ಶ್ರೀ ನಟರಾಜ ಸಭಾಭವನದಲ್ಲಿ ಸೋಮವಾರ ನಡೆದ ಕಾರ್ಯಕ್ರಮದಲ್ಲಿ 2024ರ ಶರಣು ದಿನಚರಿ, ಬಸವಭಾನು ಸಂಚಿಕೆ ಮತ್ತು ಶರಣ ಸೌರಭ ಕೃತಿ ಬಿಡುಗಡೆ, ರಾಜ್ಯಮಟ್ಟದ ಚಿನ್ಮಯ ಜ್ಞಾನಿ ಶಿಕ್ಷಕ ಪ್ರಶಸ್ತಿ, ಆದರ್ಶ ಶರಣ ದಂಪತಿ ಕಾಯಕಯೋಗಿ, ಕಾಯಕ ರತ್ನ, ಶರಣ ಶಾಂತರಸ, ವಚನ ಸೇವಾರತ್ನ ಮತ್ತು ವಚನ ಕೋಗಿಲೆ ಪ್ರಶಸ್ತಿ ಪ್ರದಾನ ಹಾಗೂ ಅಂತರ್ಜಾಲ ವಚನ ಗಾಯನ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ ಸಂಸ್ಥೆಯ ದತ್ತಿದಾಸೋಹಿಗಳು, ಆಜೀವ ಸದಸ್ಯರು, ಪ್ರೋತ್ಸಾಹದಾಯಕರಿಗೆ ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ವಚನ ಸಾಹಿತ್ಯಕ್ಕೆ ಅನೇಕ ಸಮಸ್ಯೆಗಳನ್ನು ನಿವಾರಿಸುವ ಶಕ್ತಿ ಇದೆ. ಅದು ಯಾವತ್ತೋ ವಿಶ್ವಮಟ್ಟಕ್ಕೆ ಏರಬೇಕಿತ್ತು. ಅದು ವಿಳಂಬವಾಗಿದೆ. ಆದರೆ ಹನ್ನೆರಡನೇಯ ಶತಮಾನದಲ್ಲಿ ಬಸವಾದಿ ಪ್ರಮಥರಿಂದ ರಚನೆಯಾದ ವಚನ ಸಾಹಿತ್ಯ ಇಂದಿಗೂ ಪ್ರಸ್ತುತವಾಗಿದೆ. ಲೋಕ ಕಲ್ಯಾಣದ ಗುಣಗಳಿರುವುದು ಇದಕ್ಕೆ ಕಾರಣ. ಆದ್ದರಿಂದ ಪ್ರತಿಯೊಬ್ಬರೂ ಪ್ರತಿದಿನ, ಪ್ರತಿಕ್ಷಣ ವಚನ ಸಾಹಿತ್ಯವನ್ನು ನೆನೆಯಬೇಕು ಎಂದರು.

ವಚನ ಸಾಹಿತ್ಯ, ಶರಣ ಸಾಹಿತ್ಯಕ್ಕೆ ಉತ್ತರ ಕರ್ನಾಟಕ ಸಾಧನಾ ಭೂಮಿಯಾಗಿತ್ತು. ಸತ್ಯಶೋಧನೆಗೆ ಒತ್ತುಕೊಟ್ಟು ಅವರು ಸಾಹಿತ್ಯ ರಚಿಸಿದರು. ಶರಣ ಧರ್ಮದ ಸಾರವನ್ನು ಪ್ರತಿಯೊಬ್ಬರೂ ಅರ್ಥೈಸಿಕೊಂಡು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಹೈಕೋರ್ಟಿನ ವಿಶ್ರಾಂತ ನ್ಯಾಯಮೂರ್ತಿ ಅರಳಿ ನಾಗರಾಜ ಮಾತನಾಡಿ, ಪ್ರತಿಯೊಬ್ಬರಿಗೂ ಸಂಸ್ಕಾರ ಮುಖ್ಯ. ಬಸವಣ್ಣ ಅವರನ್ನು ಯಾರಿಗೂ ಹೋಲಿಕೆ ಮಾಡಲಾಗದು. ಇನ್ನೊಬ್ಬ ಬಸವಣ್ಣ ಮತ್ತೆ ಸಿಗಲಾರರು ಎಂದರು. ಬಸವಣ್ಣ, ಚನ್ನಬಸವಣ್ಣ, ಅಕ್ಕಮಹಾದೇವಿ ಜೊತೆಗೆ ಇತ್ತೀಚಿನ ಸಾಧಕರನ್ನು ಗುರುತಿಸಿ, ಪುಸ್ತಕ ಪ್ರಕಟಿಸುವ ಮೂಲಕ ಜನಜಾಗೃತಿ ಮೂಡಿಸಬೇಕು. ಮಹಾತ್ಮಗಾಂಧಿ, ಸರ್ ಎಂ. ವಿಶ್ವೇಶ್ವರಯ್ಯ, ಅಣ್ಣಾ ಹಜಾರೆ ಮೊದಲಾದವರ ಬಗ್ಗೆಯೂ ತಿಳಿಸಿಕೊಡಬೇಕು. ಇಲ್ಲದಿದ್ದಲ್ಲಿ ಯುವಪೀಳಿಗೆಗೆ ಇವರ ಬಗ್ಗೆ ಅರಿವಿರುವುದಿಲ್ಲ ಎಂದರು.

ಶ್ರೀ ಹೊಸಮಠದ ಶ್ರೀ ಚಿದಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ದಿನಚರಿ, ಶರಣ ಸೌರಭ ಕೃತಿ ಬಿಡುಗಡೆ ಮಾಡಿದರು. ಪ್ರಶಸ್ತಿ ಪುರಸ್ಕೃತರು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.


ಫೌಂಡೇಷನ್ ಅಧ್ಯಕ್ಷ ವಚನ ಕುಮಾರಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ರೂಪಾ ಕುಮಾರಸ್ವಾಮಿ ಪ್ರಾಸ್ತಾವಿಕ ಭಾಷಣ ಮಾಡಿದರು. ಜಿಲ್ಲಾಧ್ಯಕ್ಷ ಅನಿಲ್‌ಕುಮಾರ್ ವಾಜಂತ್ರಿ ಕಾರ್ಯಕ್ರಮ ನಿರೂಪಿಸಿದರು. ವಚನ ಚೂಡಾಮಣಿ ಪ್ರಾರ್ಥಿಸಿದರು. ಅನಿತಾ ನಾಗರಾಜ್ ವಂದಿಸಿದರು.

ಸಮಾರೋಪ ಸಮಾರಂಭ: ಸಮಾರೋಪ ಸಮಾರಂಭದಲ್ಲಿ ಶ್ರೀ ಇಮ್ಮಡಿ ಗುರುಲಿಂಗ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ನಿವೃತ್ತ ಡಿಡಿಪಿಐ ಸ್ವಾಮಿ, ಪಿ. ನಿಂಗಪ್ಪ ಇತರರು ಭಾಗವಹಿಸಿದ್ದರು.

ಸಮಾರಂಭದಲ್ಲಿ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಅವರಿಗೆ ಶರಣ ಶಾಂತರಸ, ಡಾ.ಸಿ.ಜಿ.ಉಷಾದೇವಿ ಅವರಿಗೆ ಕಾಯಕರತ್ನ, ಅಪರ್ಣ ಶಿವಕುಮಾರ್ ಮತ್ತು ಎಂ. ಶಿವಕುಮಾರ್ ಅವರಿಗೆ ಕಾಯಕಯೋಗಿ, ಹೈದರಾಬಾದಿನ ಟಿ.ಎಸ್. ಬಸವಕೇಂದ್ರದ ಅಧ್ಯಕ್ಷ ಜಗದೇವಿ ಮಶಸ್ತೆ ಮತ್ತು ಡಾ. ನಾಗನಾಥ್ ಮಶತ್ತೆ, ಮೈಸೂರಿನ ಯು.ಎಂ. ಉಮಾ ಮಹದೇವಸ್ವಾಮಿ ಮತ್ತು ಕೆ.ಜಿ. ಮಹದೇವಸ್ವಾಮಿ, ನಿವೃತ್ತ ಶಿಕ್ಷಕ ನಾಗಮ್ಮ ಮತ್ತು ಎಂ.ಜಡೆ ಮಾದಪ್ಪ ಅವರಿಗೆ ಆದರ್ಶ ಶರಣ ದಂಪತಿ, ಯು.ಎಂ. ಉಮಾ ಮಹದೇವಸ್ವಾಮಿ ಅವರಿಗೆ ವಚನ ಕೋಗಿಲೆ, ನೀಲಾಂಬಿಕೆ ಅವರಿಗೆ ವಚನ ಸೇವಾರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಬೆಂಗಳೂರಿನ ಪ್ರೊ.ಕೆ.ಎಂ.ಮಹದೇವಪ್ಪ, ಜಮಖಂಡಿಯ ಡಾ.ಲಿಂಗಾನಂದ ಕೊಟ್ರಯ್ಯ ಗವಿಮಠ, ಸಿಂಗಟಗೆರೆಯ ಡಾ.ಬಿ.ವಿ. ಮಂಜುನಾಥ, ಮಂಗಳೂರಿನ ಬಿ.ಪಿ.ಗಿರೀಶ್ ಬಾಬು, ಚಿಕ್ಕಬಳ್ಳಾಪುರದ ಎನ್. ಲಕ್ಷ್ಮೀದೇವಿ, ಹುಲ್ಲೇಗೌಡನ ಹಳ್ಳಿಯ ಜಿ.ಎಸ್. ಸಂಪತ್‌ಕುಮಾರ್, ಅರೇಹಳ್ಳಿಯ ಎಂ.ಗೀತಾ, ಕುಂಬಾರಕೊಪ್ಪಲಿನ ಲೋಹಿತೇಶ್, ಭಾರತೀಪುರದ ಎಂ.ಸಿ. ಲೋಕೇಶ್, ಅರೆಬೈಲ್‌ನ ಶಿವಲೀಲಾ ಹುಣಸಗಿ, ಹುತ್ತೂರಿನ ಕೆ.ವಿ.ವಿಜಯ, ರುದ್ರಪಟ್ಟಣದ ಹೊ.ರಾ. ಪರಮೇಶ್, ಜಮನಾಳ ತೋಟದ ಕಾಳಪ್ಪ ಈಶ್ವರಪ್ಪ ಬಡಿಗೇರ ಅವರಿಗೆ ಚಿನ್ಮಯಜ್ಞಾನಿ ಶಿಕ್ಷಕ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಅಂತರ್ಜಾಲ ವಚನ ಗಾಯನ ಸ್ಪರ್ಧೆ ವಿಜೇತರಾದ ದಾವಣಗೆರೆಯ ಸುಶೀಲಾ ಗುರುಬಸವರಾಜ್, ಬೆಂಗಳೂರಿನ ಎನ್. ಖುಷಿಕ್, ಮೈಸೂರಿನ ಮೀನಾ ನಿರಂಜನ್ ಅವರಿಗೆ ಬಹುಮಾನ ವಿತರಿಸಲಾಯಿತು. ದತ್ತಿ ದಾಸೋಹಿಗಳು, ಆಜೀವ ಸದಸ್ಯರು, ಪ್ರೋತ್ಸಾಹದಾಯಕರನ್ನು ಗೌರವಿಸಲಾಯಿತು.



ಇಂದು ಹುಣಸೂರಲ್ಲಿ ಅದ್ಧೂರಿ ಹನುಮಂತೋತ್ಸವ

• ಕಲಾತಂಡಗಳು, ಸ್ತಬ್ಧ ಚಿತ್ರಗಳು, ಸೀತಾ-ರಾಮ, ದತ್ತಾತ್ರೇಯ ವಿಗ್ರಹಗಳ ಮೆರವಣಿಗೆ • ಸಾವಿರಾರು ಹನುಮ ಭಕ್ತರು ಸೇರುವ ಸಾಧ್ಯತೆ • ಹುಣಸೂರು ಪಟ್ಟಣದಾದ್ಯಂತ ಪೊಲೀಸ್ ಸರ್ಪಗಾವಲು

ಹುಣಸೂರು, ಡಿ.25– ಹನುಮ ಜಯಂತಿ ಅಂಗವಾಗಿ ನಾಳೆ (ಡಿ.26) ಪಟ್ಟಣದಲ್ಲಿ ವೈಭವದ ಹನುಮಂತೋತ್ಸವ ಮೆರವಣಿಗೆ ನಡೆಯಲಿದ್ದು, ಸಕಲ ರೀತಿಯಲ್ಲೂ ನಗರ ಸಜ್ಜಾಗಿದೆ.


ಮಂಗಳವಾರ ಬೆಳಿಗ್ಗೆ 11 ಗಂಟೆಗೆ ನಗರದ ರಂಗನಾಥ ಬಡಾವಣೆಯಿಂದ ಆಂಜನೇಯ ಸ್ವಾಮಿಯ ಭವ್ಯ ಮೆರವಣಿಗೆ ಪ್ರಾರಂಭವಾಗಲಿದ್ದು, ಮಠಾಧಿಪತಿಗಳು, ಸ್ವಾಮೀಜಿಗಳು, ಶಾಸಕರು, ಜನಪ್ರತಿನಿಧಿಗಳು, ಗಣ್ಯರು, ಅಧಿಕಾರಿಗಳು ಚಾಲನೆ ನೀಡಲಿದ್ದಾರೆ. ಮೆರವಣಿಗೆಯಲ್ಲಿ ಜಾತಿ, ಮತ ಪಕ್ಷ ಭೇದವಿಲ್ಲದೆ ಪುರುಷರು–ಮಹಿಳೆಯರಾದಿಯಾಗಿ ಸಾವಿರಾರು ಹನುಮ ಭಕ್ತರು ಭಾಗವಹಿಸಲಿದ್ದಾರೆ.

ಮೆರವಣಿಗೆಯಲ್ಲಿ 19 ಕಲಾ ತಂಡಗಳು, 8 ರಿಂದ 10 ಸ್ತಬ್ಧ ಚಿತ್ರಗಳು, 12 ಹನುಮ ವಿಗ್ರಹಗಳು, ಜೋಡಿ ಎತ್ತುಗಳು, 12 ಅಡಿ ಎತ್ತರದ ಓಂ ವಿಗ್ರಹ, ದತ್ತಾತ್ರೇಯ ವಿಗ್ರಹ, ರಾಮ ಲಕ್ಷ್ಮಣ, ಸೀತೆಯ 6 ಅಡಿ ಎತ್ತರದ ಪಂಚಲೋಹ ವಿಗ್ರಹ, ಡೊಳ್ಳು ಕುಣಿತ, ನಗಾರಿ, ನಾಸಿಲ್ ಡೋಲ್, ವೀರಗಾಸೆ, ಚಂಡೆವಾದ್ಯ ಸೇರಿದಂತೆ ವಿವಿಧ ಜಾನಪದ ತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಲಿವೆ ಹಾಗೂ 15 ರಿಂದ 20 ಸಾವಿರ ಹನುಮ ಭಕ್ತರು ಮೆರವಣಿಗೆಯಲ್ಲಿ ಭಾಗವಹಿಸುವ ಸಾಧ್ಯತೆ ಇದೆ.

ಮೆರವಣಿಗೆಯು ರಂಗನಾಥ ಬಡಾವಣೆಯಿಂದ ಹೊರಟು ಕಲ್ಕುಣಿಕೆ ಸರ್ಕಲ್, ಶಬರಿ ವೃತ್ತ, ದೇವಿಪ್ರಸಾದ್, ಸಂವಿಧಾನ ಸರ್ಕಲ್, ಎಸ್‌ಜೆ ರಸ್ತೆ ಮೂಲಕ ಹೆಚ್.ಡಿ. ಕೋಟೆ ಸರ್ಕಲ್, ಜೆಎಲ್‌ಬಿ. ರಸ್ತೆ ಕಾರ್ಖಾನೆ ರಸ್ತೆ, ಅಕ್ಷಯ ಭಂಡಾರ್, ಕಲ್ಪತರು ವೃತ್ತದ ಮೂಲಕ ಆಂಜನೇಯ ಸ್ವಾಮಿ ದೇವಸ್ಥಾನವನ್ನು ಸಂಜೆ 6 ಗಂಟೆಗೆ ತಲುಪಲಿದೆ.

ಅದ್ಧೂರಿ ಹನುಮಂತೋತ್ಸವದ ಹಿನ್ನೆಲೆಯಲ್ಲಿ ಪಟ್ಟಣದಾದ್ಯಂತ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ಈಗಾಗಲೇ ನಗರದ ವಿವಿಧ ಬಡಾವಣೆಗಳು ಸರ್ಕಲ್‌ಗಳು ಮತ್ತು ಮಸೀದಿ, ಮಂದಿರ ಹಾಗೂ ಚರ್ಚ್‌ಗಳ ಬಳಿ ಪೊಲೀಸರ ಸರ್ಪಗಾವಲು ಹಾಕಲಾಗಿದೆ.

ಆರು ಮಂದಿ ಎಸ್ಪಿಗಳು, 12 ಮಂದಿ ಡಿವೈಎಸ್ಪಿಗಳು, 16 ಮಂದಿ ಇನ್ಸ್‌ಪೆಕ್ಟರ್‌ಗಳು, 81 ಮಂದಿ ಪಿಎಸ್‌ಐಗಳು, 152 ಮಂದಿ ಎಎಸ್ಐಗಳು, 954 ಮಂದಿ ಮುಖ್ಯಪೇದೆ ಮತ್ತು 10 ಕೆ.ಎಸ್.ಆರ್.ಪಿ ತುಕಡಿಗಳು, 11 ಡಿಎಆರ್ ತುಕಡಿಗಳು, 8 ಡ್ರೋನ್‌ಗಳು, 20 ಜನ ವಿಡಿಯೊಗ್ರಾಫರ್‌ಗಳನ್ನು ಬಂದೋಬಸ್ತ್‌ಗೆ ನಿಯೋಜಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.



ಮಂಗಳವಾರ ಹನುಮಂತೋತ್ಸವದ ಹಿನ್ನೆಲೆಯಲ್ಲಿ ಪೊಲೀಸರು ಸೋಮವಾರ ಹುಣಸೂರು ಪಟ್ಟಣದಲ್ಲಿ ಪಥಸಂಚಲನ ನಡೆಸಿದರು.

ಇಂದು ಶಾಲಾ–ಕಾಲೇಜುಗಳಿಗೆ ರಜೆ

ಹುಣಸೂರು: ಭಾನುವಾರದಿಂದ ಅರಂಭವಾಗಿರುವ ಹನುಮ ಜಯಂತಿ ಡಿ.26ರ ವರೆಗೆ ನಡೆಯಲಿದ್ದು, ಕೊನೆ ದಿನವಾದ ಮಂಗಳವಾರ ವೈಭವದ ಹನುಮಂತೋತ್ಸವ ಮೆರವಣಿಗೆ ನಡೆಯಲಿದ್ದು, ಹುಣಸೂರು ನಗರದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಶಾಲಾ ಕಾಲೇಜುಗಳಿಗೆ ಡಿ.26 ರಂದು ರಜಾ ಘೋಷಿಸಿ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಅವರು ಆದೇಶ ಹೊರಡಿಸಿದ್ದಾರೆ.



ತಿ.ನರಸೀಪುರ ಪಟ್ಟಣದ ಶ್ರೀ ಗುಂಜಾ ನರಸಿಂಹಸ್ವಾಮಿ ದೇವಾಲಯದಲ್ಲಿ ಶನಿವಾರ ನಡೆದ ವೈಕುಂಠ ಏಕಾದಶಿಯ ಪ್ರಯುಕ್ತ ವಿಶೇಷ ಪೂಜಾ ಕೈಂಕರ್ಯಗಳೊಂದಿಗೆ ವೈಕುಂಠ ದ್ವಾರಕ್ಕೆ ಪೂಜೆ ಸಲ್ಲಿಸಿ ಪ್ರವೇಶ ಮಾಡುವ ಮೂಲಕ ಸಾರ್ವಜನಿಕರ ದರ್ಶನಕ್ಕೆ ಅವಕಾಶ ಕಲ್ಪಿಸಿಕೊಡಲಾಯಿತು ಎಂದು ದೇವಸ್ಥಾನದ ಪಾರ್ ಪತ್ತೆಗಾರ್ ತಿರುಮಕೂಡಲು ದೀಪು ತಿಳಿಸಿದರು,

ನಿವೇಶನಕ್ಕೆ ತಂತಿ ಬೇಲಿ ಹಾಕಲು ಅಡ್ಡಿ ಆರೋಪ

ತಮ್ಮ ಅಜ್ಜಿಯೊಂದಿಗೆ ಪ್ರತಿಭಟನೆ ನಡೆಸಿದ ಗ್ರಾಪಂ ಸದಸ್ಯ

ಸರಗೂರು, ಡಿ.25– ತಮಗೆ ಸೇರಿದ ಖಾಲಿ ಜಾಗದಲ್ಲಿ ತಂತಿ ಬೇಲಿ ಹಾಕಲು ಅವಕಾಶ ನೀಡದೆ ದುಷ್ಕರ್ಮಿಗಳು ತೊಂದರೆ ಕೊಡುತ್ತಿದ್ದು, ಪೊಲೀಸರು ಸೂಕ್ತ ರಕ್ಷಣೆ ನೀಡಬೇಕೆಂದು ಒತ್ತಾಯಿಸಿ ಗ್ರಾಮ ಪಂಚಾಯಿತಿ ಸದಸ್ಯ ಎ.ಎಸ್.ನಂದ ಕುಮಾರ್ ತಮ್ಮ ಅಜ್ಜಿಯ ಜೊತೆ ಇಲ್ಲಿನ ಪೊಲೀಸ್ ಠಾಣೆ ಮುಂದೆ ಆಮರಣಾಂತ ಉಪವಾಸ ಸತ್ಯಾಗ್ರಹ ನಡೆಸಿದರು.

ಶನಿವಾರ ಪಟ್ಟಣದ ಪೊಲೀಸ್ ಠಾಣೆ ಎದುರು ತಮ್ಮ ಅಜ್ಜಿ ದೇವಮ್ಮ ಅವರೊಂದಿಗೆ ಧರಣಿ ಕುಳಿತ ನಂದಕುಮಾರ್ ಅವರು, ತಮ್ಮ ಅಜ್ಜಿ ಹೆಸರಿನಲ್ಲಿರುವ ಜಾಗಕ್ಕೆ ತಂತಿ ಬೇಲಿ ಹಾಕಲು ಅಧಿಕಾರಿಗಳು ಅಳತೆ ಮಾಡಿಸಿಕೊಡಬೇಕು. ಈ ಸಂದರ್ಭದಲ್ಲಿ ಪೊಲೀಸ್ ಇಲಾಖೆ ಸೂಕ್ತ ರಕ್ಷಣೆ ನೀಡಬೇಕು. ನ್ಯಾಯಾಲಯವೂ ತಮ್ಮ ಪರ ನ್ಯಾಯ ನೀಡಿದ್ದರೂ ಪೊಲೀಸರು ಸಮರ್ಪಕವಾಗಿ ರಕ್ಷಣೆ ನೀಡಲು ಮುಂದಾಗುತ್ತಿಲ್ಲ ಎಂದು ಆರೋಪಿಸಿದರು.



ತಾಲೂಕಿನ ಅಡ್ಡಹಳ್ಳಿ ಗ್ರಾಮದಲ್ಲಿ ತಮ್ಮ ಅಜ್ಜಿ ದೇವಮ್ಮ ಎಂಬುವರ ಹೆಸರಿನಲ್ಲಿರುವ 99X126 ಅಡಿ ಖಾಲಿ ನಿವೇಶನಕ್ಕೆ ಹಾಕಲಾಗಿದ್ದ ಬೇಲಿಯನ್ನು ಕೆಲವರು ಕಿತ್ತು ಹಾಕಿದ್ದಾರೆ. ಇದಲ್ಲದೆ 9 ಅಡಿ ಓಣಿ ಇರುವುದು ಪತ್ರದಲ್ಲಿ ದಾಖಲಾಗಿದೆ. ಆದರೆ, 15 ಅಡಿ ಜಾಗ ಬೇಕು ಎಂದು ಕೇಳುತ್ತಾ ವಿನಾಕಾರಣ ಮಾನಸಿಕ ಹಿಂಸೆ ನೀಡುತ್ತಿದ್ದಾರೆ. ಅಲ್ಲದೆ ಅಳತೆ ವೇಳೆ ಕೆಲವರು ಅವಾಚ್ಯ ಶಬ್ದಗಳಿಂದ ನಿಂದಿಸುತ್ತಿದ್ದಾರೆ ಎಂದು ದೂರಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ತಹಶೀಲ್ದಾರ್ ರುಕಿಯಾ ಬೇಗಂ ಮನವಿ ಸ್ವೀಕರಿಸಿ ಮಾತನಾಡಿ, ಸ್ಥಳ ಪರಿಶೀಲಿಸಿ ಸಮಸ್ಯೆಯನ್ನು ಆಯಾಯ ಇಲಾಖಾಧಿಕಾರಿಗಳ ಸಮ್ಮುಖದಲ್ಲಿ ಬಗೆಹರಿಸುವ ಭರವಸೆ ನೀಡಿದರು. ಈ ಹಿನ್ನೆಲೆಯಲ್ಲಿ ಪ್ರತಿಭಟನೆ ಹಿಂಪಡೆಯಲಾಯಿತು. ಆಮರಣಾಂತ ಸತ್ಯಾಗ್ರಹ ವೇಳೆ ಅಜ್ಜಿ ದೇವಮ್ಮ, ರೈತ ಮುಖಂಡ ಕುಮಾರಸ್ವಾಮಿ, ವೃತ್ತ ನಿರೀಕ್ಷಕ ಎಂ.ಲಕ್ಷ್ಮಿಕಾಂತ್, ಪಿಎಸ್‌ಐ ನಂದೀಶ್ ಕುಮಾರ್ ಹಾಜರಿದ್ದರು.

ಗ್ರಾಮದ ಕೆಲವು ಮುಖಂಡರು ಕುಮ್ಮಕ್ಕು ನೀಡುತ್ತಿದ್ದಾರೆ. ಹೀಗಾಗಿ ನಮ್ಮ ಕುಟುಂಬಕ್ಕೆ ಸೂಕ್ತ ರಕ್ಷಣೆ ಒದಗಿಸಬೇಕು. ನಿವೇಶನದಲ್ಲಿ ಬೆಲೆಬಾಳುವ ವಸ್ತುಗಳಿದ್ದು, ಅವುಗಳಿಗೂ ರಕ್ಷಣೆ ನೀಡಬೇಕು. ಘಟನೆ ಸಂಬಂಧ ಸರಗೂರು ಪೊಲೀಸ್ ಠಾಣೆಯಲ್ಲಿ 15 ಮಂದಿ ಮೇಲೆ ದೂರು ದಾಖಲಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ತನಿಖೆ ನಡೆಸಿ ಸೂಕ್ತ ನ್ಯಾಯ ನೀಡಬೇಕು. ಜತೆಗೆ ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕು ಎಂದು ನಂದಕುಮಾರ್ ಅವರು ಮನವಿ ಮಾಡಿದ್ದಾರೆ.

ಚರ್ಚ್‌ಗಳಿಗೆ ಶಾಸಕ ಅನಿಲ್ ಚಿಕ್ಕಮಾದು ಭೇಟಿ, ಕೇಕ್ ವಿತರಿಸಿ ಶುಭಾಶಯ ಕೋರಿಕೆ



ಹೆಚ್.ಡಿ.ಕೋಟೆ, ಡಿ.25– ಪವಿತ್ರ ಹೃದಯ ದೇವಾಲಯವಾದ ನಾಗನಹಳ್ಳಿ ಚರ್ಚಿಗೆ ಶಾಸಕ ಅನಿಲ್ ಚಿಕ್ಕಮಾದು ಕ್ರಿಸ್ಮಸ್ ಹಬ್ಬದ ಪ್ರಯುಕ್ತ ಭೇಟಿ ನೀಡಿ, ಕ್ರೈಸ್ತ ಬಾಂಧವರಿಗೆ ಕ್ರಿಸ್ಮಸ್ ಹಬ್ಬದ ಶುಭಾಶಯ ಕೋರಿದರು.

ಬಳಿಕ ಮಾತನಾಡಿದ ಅವರು, ಮೈಸೂರು ಹೊರತುಪಡಿಸಿ ಜಿಲ್ಲೆಯಲ್ಲೇ ಇದು ಅತ್ಯಂತ ದೊಡ್ಡ ಚರ್ಚ್ ಆಗಿದೆ. ಪ್ರತಿಯೊಂದು ಧರ್ಮಕ್ಕೂ ಅದರದ್ದೇ ಆದ ಧ್ಯೇಯ ಉದ್ದೇಶವಿರುತ್ತದೆ. ಹಾಗೆಯೇ ಕ್ರೈಸ್ತ ಧರ್ಮದ ಪವಿತ್ರ ಗ್ರಂಥ ಬೈಬಲ್ ಮೂಲ ಉದ್ದೇಶ ಕ್ಷಮಾಗುಣವಾಗಿದೆ. ಈ ಧರ್ಮದ ಅನುಯಾಯಿಗಳಲ್ಲಿ ಹೆಚ್ಚಾಗಿ ಶಾಂತಿ, ಸಹಬಾಳ್ವೆ, ಕಾಣಬಹುದು ಎಂದರು.

ಇದೆ ಸಂದರ್ಭದಲ್ಲಿ ತಾಲೂಕಿನಲ್ಲಿ ಸುಮಾರು 70 ಚರ್ಚ್‌ಗಳಿಗೆ ಭೇಟಿ ನೀಡಿ ಸರಿ ಸುಮಾರು 750 ಕೆಜಿಗೂ ಹೆಚ್ಚು ಕೇಕ್‌ಗಳನ್ನು ವಿತರಣೆ ಮಾಡಿ, ಕ್ರೈಸ್ತ ಬಾಂಧವರಿಗೆ ಶುಭಾಶಯ ಕೋರಿದರು.

ಶಾಸಕ ಅನಿಲ್ ಚಿಕ್ಕಮಾದು ಚರ್ಚ್‌ಗಳಿಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಕ್ರೈಸ್ತ ಬಾಂಧವರು, ಅವರನ್ನು ಸನ್ಮಾನಿಸಿ ಗೌರವಿಸಿದರು.

ಇದೇ ಸಂದರ್ಭದಲ್ಲಿ ಜೈ ಕರ್ನಾಟಕ ರಾಜ್ಯ ಉಪಾಧ್ಯಕ್ಷ ಸತೀಶ್ ಗೌಡ, ಜಿ.ಪಂ. ಮಾಜಿ ಸದಸ್ಯ ಚಿಕ್ಕವೀರ ನಾಯಕ, ಪುರಸಭೆ ಸದಸ್ಯರುಗಳ ರಾಜು ಕುಲುಮೆ, ಮಧು, ಡಿಸಿಸಿ ಸದಸ್ಯ ಪರಶಿವಮೂರ್ತಿ, ಮುಖಂಡರುಗಳಾದ ನಾಗನಹಳ್ಳಿ ಪ್ರದೀಪ, ಕ್ಯಾತನಹಳ್ಳಿ ನಾಗರಾಜು, ರಾಜನಾಯಕ, ಬಾಲರಾಜು, ಆಂತೋನಿ, ಚೆನ್ನಪ್ಪ, ಜೇಮ್ಸ್, ರವಿ, ಗಣೇಶ್ ಆಚಾರ್, ಸೋಮು, ಜಾನ್, ಶಿವಮಲ್ಲಪ್ಪ ಸೇರಿದಂತೆ ಕ್ರೈಸ್ತ ಬಾಂಧವರು ಹಾಜರಿದ್ದರು.



ನಂಜನಗೂಡು ತಾಲೂಕು ಪತ್ರಕರ್ತರ ಸಂಘದ ಕ್ಯಾಲೆಂಡರ್ ಬಿಡುಗಡೆ ಸಮಾರಂಭದಲ್ಲಿ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಸುತ್ತೂರು ನಂಜುಂಡನಾಯಕ ಅವರನ್ನು ಸನ್ಮಾನಿಸಲಾಯಿತು. ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಪದಾಧಿಕಾರಿಗಳನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರಿನಿಂದ ನಂಜನಗೂಡಿಗೆ ಅಯ್ಯಪ್ಪಸ್ವಾಮಿ ಭಕ್ತರ ಪಾದಯಾತ್ರೆ



ನಂಜನಗೂಡು: ಇಲ್ಲಿನ ಕಪಿಲಾ ನದಿಯ ತೀರದಲ್ಲಿರುವ ಶ್ರೀ ಅಯ್ಯಪ್ಪಸ್ವಾಮಿ ದೇವಾಲಯದ 26ನೇ ವರ್ಷದ ಬ್ರಹ್ಮೋತ್ಸವದ ಅಂಗವಾಗಿ 250ಕ್ಕೂ ಹೆಚ್ಚು ಇರುಮುಡಿ ಹೊತ್ತ ಅಯ್ಯಪ್ಪಸ್ವಾಮಿ ಭಕ್ತರು ಮೈಸೂರಿನ ಶ್ರೀ ದತ್ತ ವೆಂಕಟೇಶ್ವರಸ್ವಾಮಿ ದೇವಾಲಯದಿಂದ ಶ್ರೀಅಯ್ಯಪ್ಪಸ್ವಾಮಿ ದೇವಾಲಯದವರೆಗೆ ಪಾದಯಾತ್ರೆ ನಡೆಸಿ 18 ಮೆಟ್ಟಿಲುಗಳನ್ನು ಹತ್ತಿ ದೇವರ ದರ್ಶನ ಪಡೆದು ಪುನೀತರಾದರು.

ಬ್ರಹ್ಮೋತ್ಸವ ಅಂಗವಾಗಿ ಭಾನುವಾರ ಅಯ್ಯಪ್ಪಸ್ವಾಮಿ ದೇವಾಲಯದ ವತಿಯಿಂದ ಸುಮಾರು 250ಕ್ಕೂ ಹೆಚ್ಚು ವ್ರತಾಧಾರಿ ಮಾಲಾಧಾರಿ ಅಯ್ಯಪ್ಪಸ್ವಾಮಿ ಭಕ್ತಾದಿಗಳಿಗೆ ದೇವಾಲಯದ ಆವರಣದಲ್ಲಿ ಇರುಮುಡಿಯನ್ನು ಕಟ್ಟಲಾಯಿತು. ನಂತರ ಸೋಮವಾರ ಬೆಳಿಗ್ಗೆ 4ಕ್ಕೆ ಮೈಸೂರಿನ ದತ್ತ ವೆಂಕಟೇಶ್ವರಸ್ವಾಮಿ ದೇವಾಲಯಕ್ಕೆ ತೆರಳಿದರು. ಬೆಳಿಗ್ಗೆ 4.30 ರಿಂದ ಪ್ರಾರಂಭವಾದ ಅಯ್ಯಪ್ಪಸ್ವಾಮಿ ಮಾಲಾಧಾರಿ ಭಕ್ತರ ಪಾದಯಾತ್ರೆಯು ಬೆಳಿಗ್ಗೆ 12 ರ ವೇಳೆಗಾಗಲೇ ಶ್ರೀ ಅಯ್ಯಪ್ಪಸ್ವಾಮಿ ದೇವಾಲಯವನ್ನು ತಲುಪಿತು. ಮಾರ್ಗ ಮಧ್ಯದಲ್ಲಿ ಅಯ್ಯಪ್ಪ ಮಾಲೆಧಾರಿ ಭಕ್ತರಿಗೆ ವಿವಿಧ ಸಂಘ–ಸಂಸ್ಥೆಗಳು ಹಾಗೂ ಅಂಗಡಿ ಮಾಲೀಕರು, ಅವರನ್ನು ಪುಷ್ಪಹಾರಗಳಿಂದ ಸ್ವಾಗತಿಸಿ, ಭಕ್ತರಿಗೆ ಕುಡಿಯಲು ಪಾನೀಯ, ಫಲಹಾರ ನೀಡಿ ಸತ್ಕರಿಸಿದರು. ನಂತರ ಶ್ರೀಕ್ಷೇತ್ರ ಮಲ್ಲನಮೂಲೆ ಮಠದ ಶ್ರೀ ಚೆನ್ನಬಸವ ಸ್ವಾಮಿಗಳು ಪಾದಯಾತ್ರೆಯನ್ನು ಆಧಾರದಿಂದ ಸ್ವಾಗತಿಸಿ ಬೆಳಿಗಿನ ತಿಂಡಿಯನ್ನು ಊಟ ಬಡಿಸಿ ಫಲಹಾರದಿಂದ ಸತ್ಕರಿಸಿ ಆಶೀರ್ವದಿಸಿದರು. ದೇವಾಲಯದ ಗುರುಸ್ವಾಮಿಗಳಾದ ಪಿ.ದೇವರಾಜು ಮಾತನಾಡಿ ಬ್ರಹ್ಮೋತ್ಸವದ ಅಂಗವಾಗಿ ಶಬರಿಮಲೆಗೆ ಹೋಗಲು ಆಗದ ಮಾಲಾಧಾರಿ ಭಕ್ತರ ಅನುಕೂಲಕ್ಕಾಗಿ ದೇವಾಲಯದ ವತಿಯಿಂದಲೇ ಭಕ್ತರಿಗೆ ಇರುಮುಡಿಯನ್ನು ಕಟ್ಟಿ ಮೈಸೂರಿನಿಂದ ನಂಜನಗೂಡಿಗೆ ಪಾದಯಾತ್ರೆ ಮೂಲಕ ಸಾಗಿ ಬಂದು ದೇವಾಲಯದ 18 ಮೆಟ್ಟಿಲುಗಳನ್ನು ಹತ್ತಿ ಸೇವೆ ಮಾಡಿಸಲಾಗುತ್ತದೆ. ಬುಧವಾರ ಬೆಳಿಗ್ಗೆ 8ರ ವೇಳೆಗೆ ದೇವಾಲಯದಲ್ಲಿ ಇರುಮುಡಿಯನ್ನು ಒಡೆದು ಅಯ್ಯಪ್ಪಸ್ವಾಮಿಯವರಿಗೆ ಮಂಡಲಾಭಿಷೇಕ ನೆರವೇರಿಸಲಾಗುತ್ತದೆ. ನಂತರ ದೇವರ ದರ್ಶನಕ್ಕೆ ಅನುವು ಮಾಡಿಕೊಡಲಾಗುವುದು ಎಂದರು.

ಹಕ್ಕಿಗಾಗಿ ಹೋರಾಟಕ್ಕೆ ಮಾದಿಗ ಸಮುದಾಯ ನಿರ್ಧಾರ

ಮಾದಿಗರ ಬೇಡಿಕೆ, ಹಕ್ಕು ಈಡೇರಿಸಲು ಅಧಿಕಾರಿಗಳು, ಜನಪ್ರತಿನಿಧಿಗಳು ವಿಫಲ ಆರೋಪ

ಶವ ಹೂಳಲು ಸ್ಮಶಾನಗಳಿಲ್ಲ!: ಸಮುದಾಯದ ಸಮಸ್ಯೆಗಳು ಬಹು ದೊಡ್ಡದಿವೆ. ಹಲವಾರು ಗ್ರಾಮಗಳಲ್ಲಿ ಶವ ಹೂಳಲು ಸ್ಮಶಾನಗಳೇ ಇಲ್ಲ.ಈ ಬಗ್ಗೆ ಅಧಿಕಾರಿಗಳ ಗಮನ ಸೆಳೆದರೆ ಸಾವಾದಾಗ ಬಂದು ಯಾವುದೋ ಒಂದು ಜಾಗದಲ್ಲಿ ಹೆಣ ಹೂಳಿಸಿ ಹೋಗುತ್ತಿದ್ದಾರೆಯೇ ಹೊರತು ಶಾಶ್ವತ ಪರಿಹಾರಕ್ಕೆ ಪ್ರಯತ್ನವನ್ನೇ ಮಾಡಿಲ್ಲ. ಡಾ.ಬಾಬು ಜಗಜೀವನರಾಂ ಭವನ ಹಲವೆಡೆ ಶಿಥಿಲಾವಸ್ಥೆಯಲ್ಲಿದೆ. ಕೆಲವೆಡೆ ಇಲ್ಲವೇ ಇಲ್ಲ. ದುರಸ್ತಿ ಮಾಡಲು ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ದೂರಿದ ಅವರು ಸ್ಮಶಾನಕ್ಕೆ ಜಾಗ ಕೊಡಿ ಎಂದರೆ ಅಧಿಕಾರಿಗಳು ನೀವೇ ಜಾಗ ತೋರಿಸಿ ಮೂರು ಪಟ್ಟು ಹಣ ನೀಡುತ್ತೇವೆ ಎಂದು ಬೇಜವಾಬ್ದಾರಿ ಹೇಳಿಕೆ ನೀಡುತ್ತಾರೆ. ನಾವು ವಾಸ ಮಾಡಲು ಜಾಗ ಕೇಳುತ್ತಿಲ್ಲ. ಸಾವು ಸಂಭವಿಸಿದಾಗ ಹೂಳಲು ಜಾಗ ಕೇಳುತ್ತಿದ್ದೇವೆ. ನಮಗೆ ಜಾಗ ಗೊತ್ತಿದ್ದರೆ ನಾವೇಕೆ ಸರ್ಕಾರದವರನ್ನು ಕೇಳಬೇಕಿತ್ತು. ನಾವೇ ನಾಲ್ಕು ಪಟ್ಟು ಹಣ ನೀಡಿ ಖರೀದಿ ಮಾಡುತ್ತಿದ್ದೆವು.

–ಮಲಿಯೂರು ಡಿ.ಶಂಕರ್

ತಿ.ನರಸೀಪುರ, ಡಿ.25– ಮಾದಿಗ ಸಮುದಾಯದವರ ಬೇಡಿಕೆಗಳನ್ನು ಈಡೇರಿಸಲು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ವಿಫಲರಾಗಿರುವ ಹಿನ್ನೆಲೆಯಲ್ಲಿ ಹೋರಾಟದ ಮೂಲಕ ಹಕ್ಕು ಪಡೆಯಲು ಡಾ.ಬಾಬು ಜಗಜೀವನರಾಂ ಜನಕಲ್ಯಾಣ ಸಂಘ ಅಸ್ತಿತ್ವಕ್ಕೆ ತರಲಾಗಿದೆ ಎಂದು ಸಂಘದ ನೂತನ ಅಧ್ಯಕ್ಷ ಮಲಿಯೂರು ಡಿ.ಶಂಕರ್ ತಿಳಿಸಿದ್ದಾರೆ.

ತಾಲೂಕಿನ ವಡ್ಗಲ್ ರಂಗನಾಥ ಸ್ವಾಮಿ ಬೆಟ್ಟದ ತಪ್ಪಲಿನಲ್ಲಿ ಕರೆಯಲಾಗಿದ್ದ ಸಮುದಾಯದ 28 ಗ್ರಾಮಗಳ ಮುಖಂಡರ ಸಭೆಯಲ್ಲಿ ಸಂಘಕ್ಕೆ ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳನ್ನು ಸನ್ಮಾನಿಸಿ ಅವರು ಮಾತನಾಡಿದರು.

ತಿ.ನರಸೀಪುರ ತಾಲೂಕು ಮೀಸಲು ವಿಧಾನ ಸಭಾ ಕ್ಷೇತ್ರದಲ್ಲಿ 25 ಸಾವಿರಕ್ಕೂ ಹೆಚ್ಚು ಮಾದಿಗ ಸಮುದಾಯದವರಿದ್ದು, ಸಮಾಜದಲ್ಲಿ ನೊಂದವರಿಗೆ ರಕ್ಷಣೆ ಸಿಗುತ್ತಿಲ್ಲ, ನಮಗೆ ಸೇರಬೇಕಾದ ಸವಲತ್ತು ಹಾಗೂ ಹಕ್ಕುಗಳನ್ನು ನೀಡಲು ಜನಪ್ರತಿ ನಿಧಿಗಳು ಸೇರಿದಂತೆ ಅಧಿಕಾರಿಗಳು ಮೀನಾಮೇಷ ಎಣಿಸುತ್ತಿದ್ದಾರೆ. ಹಾಗಾಗಿ ಹೋರಾಟದ ಮೂಲಕ ಹಕ್ಕುಗಳನ್ನು ಪಡೆಯಲು ನಿರ್ಧರಿಸಿದ್ದು ಸಂಘ ರಚನೆ ಮಾಡಲಾಗಿದೆ ಎಂದರು.



ಚಾಮರಾಜನಗರ ಮೀಸಲು ವಿಧಾನಸಭಾ ಕ್ಷೇತ್ರದಲ್ಲಿ ಎನ್.ರಾಚಯ್ಯ ಅವರನ್ನು ಹೊರತುಪಡಿಸಿದರೆ ಇದುವರೆವಿಗೆ ಸಮಾಜಕ್ಕೆ ರಾಷ್ಟ್ರೀಯ ಪಕ್ಷಗಳಾಗಲಿ, ಪ್ರಾದೇಶಿಕ ಪಕ್ಷಗಳಾಗಲಿ ಟಿಕೆಟ್ ನೀಡಿಲ್ಲ. ಒಂದು ವೇಳೆ ನೀಡಿದ್ದೇವೆ ಎಂದು ಬೆರಳು ಮಾಡಿ ತೋರಿಸಿದರೆ ಅದು ಸೋಲುವ ಅಭ್ಯರ್ಥಿ ಎಂದು ಗೊತ್ತಿದ್ದು ಟಿಕೆಟ್ ನೀಡಲಾಗಿದೆ. ಮೀಸಲು ವಿಧಾನ ಸಭಾ ಕ್ಷೇತ್ರದಲ್ಲೂ ಇದನ್ನೇ ಮುಂದುವರೆಸಲಾಗಿದೆ.ಅಕಸ್ಮಾತ್ ಸಮಾಜದ ಅಭ್ಯರ್ಥಿಗೆ ಟಿಕೆಟ್ ಕೊಡುತ್ತಿದ್ದಾರೆಂದರೆ ಅಲ್ಲಿ ಬಿ ಫಾರಂ ಕೈತಪ್ಪಿಸುವ ಕೆಲಸ ಮಾಡಲಾಗುತ್ತಿದೆ ಎಂದು ಶಂಕರ್ ಆರೋಪಿಸಿದರು.

'ತೊಂದರೆ ಆದರೆ ಸಂಘದ ಗಮನಕ್ಕೆ ತನ್ನಿ': ಸಮುದಾಯದರಿಗೆ ಏನೇ ಕಷ್ಟ ತೊಂದರೆ ಉಂಟಾದರೆ ಸಂಘದ ಗಮನಕ್ಕೆ ತನ್ನಿ, ಅದೆಷ್ಟೇ ಕಷ್ಟವಾಗಲೀ,ಅದ್ಯಾವುದೇ ಅಧಿಕಾರಿಯಾಗಲಿ, ಶ್ರೀಮಂತರೇ ಆಗಲಿ ನಿಮ್ಮ ಕಷ್ಟ ಪರಿಹರಿಸುವ ಕೆಲಸ ಮಾಡುತ್ತೇವೆ ಎಂದು ಶಂಕರ್ ಮನವಿ ಮಾಡಿದರು.

ಇದೇ ವೇಳೆ ಸಂಘದ ನೂತನ ಪದಾಧಿಕಾರಿಗಳ ಪಟ್ಟಿ ಬಿಡುಗಡೆ ಮಾಡಲಾಯಿತು.

ಮಲಿಯೂರು ಶಂಕರ್(ಅಧ್ಯಕ್ಷ), ಸಿದ್ದನಹುಂಡಿ ಗೋವಿಂದರಾಜು(ಉಪಾಧ್ಯಕ್ಷ), ವಾಟಾಳು ಜಿ.ಎನ್.ಪುಟ್ಟಸ್ವಾಮಿ (ಪ್ರಧಾನ ಕಾರ್ಯದರ್ಶಿ), ಬನ್ನೂರು ಚಿಕ್ಕಣ್ಣ(ಖಜಾಂಚಿ), ಹೊಸಹಳ್ಳಿ ಮಾದೇಶ್ (ಸಹ ಕಾರ್ಯದರ್ಶಿ) ನಿರ್ದೇಶಕರುಗಳಾಗಿ ದೊಡ್ಡಮುಲಗೂಡು ಡಿ.ಎನ್.ರಮೇಶ್, ನಂಜಾಪುರ ಡಿ.ರಮೇಶ್, ಮಾಕನಹಳ್ಳಿ ರಾಚಯ್ಯ, ಕಳ್ಳೀಪುರ ವಸಂತ್ ಕುಮಾರ್,ಮರಡೀಪುರ ಸಿದ್ದರಾಜು, ಹೊಸ ನರೀಪುರ ರಾಚಪ್ಪ, ಹ್ಯಾಕನೂರು ಬಸವರಾಜು,ಮೂಗೂರು ಎಂ.ಎಂ.ಗಿರೀಶ್, ಮಂಗಿಪಚ್ಚನ ಹುಂಡಿ ಸಿ. ಲಿಂಗರಾಜು, ನಾಗಯ್ಯ, ಕೇತಹಳ್ಳಿ ಲಿಂಗರಾಜು, ಬೈರಾಪುರ ಮಹದೇವಣ್ಣ, ವಿಜಯಪುರ ಸಿದ್ದರಾಜು, ಹುಣಸೂರು ಲಿಂಗರಾಜು, ಗೋಪಾಲಪುರ ತಬಲ ಮೂರ್ತಿ, ಜಗಜೀವನ್ ಗ್ರಾಮದ ಮಲ್ಲೇಶ್ ಆಯ್ಕೆ ಮಾಡಲಾಯಿತು.

ಈ ವೇಳೆ ಎಂಪಿ ಟೆಕ್ನಾಲಜಿಯ ಆರ್.ಮಂಜುನಾಥ್, ಉದ್ಯಮಿ ಶಿವಕುಮಾರ್, ಮಲಿಯೂರು ನಾಗು ಸೇರಿದಂತೆ 28 ಗ್ರಾಮಗಳ ಮಾದಿಗ ಸಮುದಾಯದ ಮುಖಂಡರು ಹಾಜರಿದ್ದರು.

ಇಂದು ಹನುಮ ಜಯಂತಿ ಉತ್ಸವ



ಬೆಟ್ಟದಪುರ, ಡಿ.25– ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರದ ಪ್ರಕೃತಿ ಸೌಂದರ್ಯದಲ್ಲಿ ನೆಲೆಸಿರುವ ಏಣಿ ಆಂಜನೇಯ ಸ್ವಾಮಿ ಎಂದೇ ಪ್ರಸಿದ್ಧಿ ಪಡೆದಿರುವ ಶ್ರೀ ಆಂಜನೇಯ ಸ್ವಾಮಿಯವರ ಜಯಂತೋತ್ಸವ ಹಾಗೂ ಹನುಮ ಜಯಂತಿ ಉತ್ಸವ ಮಂಗಳವಾರ (ಡಿ.26) ಬೆಳಿಗ್ಗೆ 6 ಗಂಟೆಗೆ ನಡೆಯಲಿದೆ.



ಹೆಚ್.ಡಿ. ಕೋಟೆ ತಾಲೂಕು ಹಂಪಾಪುರದ ಸೆಂಟ್ ಪಾಲ್ಸ್ ಮಿಷನ್ ಹೈಸ್ಕೂಲ್‌ನ 26ನೇ ವರ್ಷದ ವಾರ್ಷಿಕೋತ್ಸವವನ್ನು ಆಚರಿಸಲಾಯಿತು. ಮೈಸೂರು ಜಿಲ್ಲಾ ಅಲ್ಪ ಸಂಖ್ಯಾತ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಆರ್. ಕೃಷ್ಣಮೂರ್ತಿ, ಶಾರದಾ ವಿಲಾಸ್ ಶಿಕ್ಷಕರ ತರಬೇತಿ ಕಾಲೇಜು ಪ್ರಿನ್ಸಿಪಾಲ್ ಡಾ. ಕೆ.ಎಸ್. ಲೀಲಾ, ಫಾದರ್ ರೇ, ವಿಲಿಸ್ ಕುಮಾರ್, ಕಾಲೇಜಿನ ಕಾರ್ಯದರ್ಶಿ ಬಿಜಿನ್ ಜಾನ್ ವರ್ಗೀಸ್, ಮುಖ್ಯ ಶಿಕ್ಷಕಿ ಅಮಿತಾ ಸುಸನ್ ಮ್ಯಾಥ್ಯೂ, ಸಿಆರ್‌ಪಿ ಸುನಿತಾ, ಸಿಬ್ಬಂದಿಗಳಾದ ಮಹದೇವಸ್ವಾಮಿ, ರಾಮಮೂರ್ತಿ ಅವರುಗಳು ಭಾಗವಹಿಸಿದ್ದರು. ಮಕ್ಕಳು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮ ಎಲ್ಲರ ಗಮನ ಸೆಳೆಯಿತು.

ಜವರಮ್ಮ ನಿಧನ



ಭೇರ್ಯ, ಡಿ.25– ಸಾಲಿಗ್ರಾಮ ತಾಲೂಕು ವಡ್ಡರಕೊಪ್ಪಲು ಗ್ರಾಮದ ಶ್ರೀಮತಿ ಜವರಮ್ಮ (80) ಸೋಮವಾರ ಸಾಲಿಗ್ರಾಮ ತಾಲೂಕಿನ ವಡ್ಡರಕೊಪ್ಪಲು ಗ್ರಾಮದ ಸ್ವಗೃಹದಲ್ಲಿ ನಿಧನರಾದರು.

ದಿವಂಗತರು ಪತಿ ಚಲುವೇಗೌಡ, ಕೆಆರ್.ನಗರ ತಾಲೂಕು ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ವಡ್ಡರಕೊಪ್ಪಲು ಶಿವರಾಮು ಸೇರಿದಂತೆ ಇಬ್ಬರು ಪುತ್ರರು ಹಾಗೂ ಓರ್ವ ಪುತ್ರಿ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಇಂದು ಮಧ್ಯಾಹ್ನ 3.30 ಗಂಟೆಗೆ ಸ್ವಗ್ರಾಮ ವಡ್ಡರಕೊಪ್ಪಲು ಗ್ರಾಮದ ತೋಟದ ಜಮೀನಿನಲ್ಲಿ ನಡೆಯಿತು.

ಹೊಸ ಕ್ರಿಮಿನಲ್ ಕಾನೂನು ಮಸೂದೆಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅಂಕಿತ

ನವದೆಹಲಿ: ಸಂಸತ್‌ನಲ್ಲಿ ಅಂಗೀಕಾರ ಪಡೆದಿರುವ ಕ್ರಿಮಿನಲ್ ಅಪರಾಧಗಳಿಗೆ ಸಂಬಂಧಿಸಿದ ಕಾನೂನುಗಳಲ್ಲಿ ಆಮೂಲಾಗ್ರ ಬದಲಾವಣೆಯನ್ನು ತರುವ ಉದ್ದೇಶ ಹೊಂದಿರುವ ಮೂರು ಮಸೂದೆಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸೋಮವಾರ ಅಂಕಿತ ಹಾಕಿದ್ದಾರೆ.

ಭಾರತೀಯ ನ್ಯಾಯ (ಎರಡನೆಯ) ಸಂಹಿತಾ ಮಸೂದೆ, ಭಾರತೀಯ ನಾಗರಿಕ ಸುರಕ್ಷಾ (ಎರಡನೆಯ) ಸಂಹಿತಾ ಮಸೂದೆ ಮತ್ತು ಭಾರತೀಯ ಸಾಕ್ಷ್ಯ (ಎರಡನೆಯ) ಮಸೂದೆಗಳಿಗೆ ರಾಷ್ಟ್ರಪತಿ ಸಹಿ ಹಾಕಿದ್ದಾರೆ. ಈ ಮಸೂದೆಗಳು ಕಾನೂನಾಗಿ ಪರಿವರ್ತನೆಗೊಂಡಿವೆ. ಹೊಸ ಕ್ರಿಮಿನಲ್ ಕಾನೂನು ಮಸೂದೆಗಳ ವಿಚಾರವಾಗಿ ಇತ್ತೀಚೆಗೆ ಲೋಕಸಭೆಯಲ್ಲಿ ಮಾತನಾಡಿದ್ದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಹೊಸ ಮಸೂದೆಗಳು ದೇಶದ ಜನರನ್ನು ವಸಾಹತು ಕಾಲದ ಮನಃಸ್ಥಿತಿಯಿಂದ ಮುಕ್ತಗೊಳಿಸಲಿವೆ ಎಂದು ಹೇಳಿದ್ದರು. ಈ ಮೂರು ಮಸೂದೆಗಳು ಭಾರತೀಯ ದಂಡ ಸಂಹಿತೆ (ಐಪಿಸಿ), ಅಪರಾಧ ದಂಡಪ್ರಕ್ರಿಯಾ ಸಂಹಿತೆ ಮತ್ತು ಭಾರತೀಯ ಸಾಕ್ಷ್ಯ ಕಾಯ್ದೆಯ ಬದಲಿಗೆ ಜಾರಿಗೆ ಬರಲಿವೆ. 'ಬ್ರಿಟಿಷರ ಕಾಲದಲ್ಲಿ ಈ ಮೂರು ಕಾನೂನುಗಳನ್ನು ರಚಿಸಲಾಯಿತು. ಈ ಕಾನೂನುಗಳನ್ನು ತೆಗೆದುಹಾಕುವವರೆಗೆ ಬ್ರಿಟನ್ನಿನ ಕಾನೂನುಗಳು ದೇಶದಲ್ಲಿ ಮುಂದುವರಿಯುತ್ತವೆ' ಎಂದು ಶಾ ತಿಳಿಸಿದ್ದರು.



ಮೂರು ಮಸೂದೆಗಳು 'ಸಂತ್ರಸ್ತರನ್ನು ಕೇಂದ್ರೀಕರಿಸಿಕೊಂಡ', 'ಸಾಕ್ಷ್ಯ ಆಧಾರಿತ' ಹಾಗೂ ನ್ಯಾಯ ಪಡೆಯುವುದನ್ನು ಸುಲಲಿತವಾಗಿಸುವ ವ್ಯವಸ್ಥೆಯನ್ನು ಸೃಷ್ಟಿಸಲಿವೆ ಎಂದು ಶಾ ಹೇಳಿದ್ದರು. ಸುಪ್ರೀಂಕೋರ್ಟ್, ಹೈಕೋರ್ಟ್‌ಗಳು, ಸಂಸದರು, ಶಾಸಕರು, ಐಪಿಎಸ್ ಅಧಿಕಾರಿಗಳು ಮತ್ತು ಜಿಲ್ಲಾಧಿಕಾರಿಗಳಿಂದ ಒಟ್ಟು 3,200ಕ್ಕೂ ಹೆಚ್ಚು ಸಲಹೆಗಳನ್ನು ಪಡೆದು ಇವುಗಳನ್ನು ರೂಪಿಸಲಾಗಿದೆ ಎಂಬ ಮಾಹಿತಿ ನೀಡಿದ್ದರು.

ಉಚಿತ ಆರೋಗ್ಯ ಶಿಬಿರ

ಮೈಸೂರು, ಡಿ.25–ಬೆಂಗಳೂರು ರೋಟರಿ ಹಾಗೂ ಮೈಸೂರು ರೋಟರಿ ಪ್ರಾಯೋಜಕತ್ವದಲ್ಲಿ ಸಾಹಸಸಿಂಹ ಡಾ.ವಿಷ್ಣುವರ್ಧನ್‌ರವರ 14ನೇ ಪುಣ್ಯ ಸ್ಮರಣೆಯ ಅಂಗವಾಗಿ ಉದ್ಬೂರ್ ಗೇಟ್‌ನಲ್ಲಿರುವ ಡಾ.ವಿಷ್ಣುವರ್ಧನ್ ಸ್ಮಾರಕ ಭವನದಲ್ಲಿ ಡಿ. 30 ರಂದು ಬೆಳಗ್ಗೆ 9ರಿಂದ ಸಂಜೆ 4ರವರೆಗೆ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿದೆ.

ಆರೋಗ್ಯ ತಪಾಸಣೆ, ಬಿಪಿ ಮತ್ತು ಮಧುಮೇಹ ತಪಾಸಣೆ, ಕ್ಯಾನ್ಸರ್ ತಪಾಸಣೆ, ಕಣ್ಣಿನ ತಪಾಸಣೆ, ಹೃದಯ ತಪಾಸಣೆ, ಗರ್ಭಿಣಿ ಸ್ತ್ರೀಯರ ತಪಾಸಣೆಯನ್ನು ಮೈಸೂರಿನ ಹೆಸರಾಂತ ಆಸ್ಪತ್ರೆ ವೈದ್ಯರು ನಡೆಸಿಕೊಡುತ್ತಾರೆ. ಅಲ್ಲದೇ ಉಚಿತ ರಕ್ತದಾನ ಶಿಬಿರವನ್ನು ಏರ್ಪಡಿಸಿದೆ. ಮೈಸೂರಿನ ಸುಯೋಗ್ ಆಸ್ಪತ್ರೆ, ನಾರಾಯಣ ಆಸ್ಪತ್ರೆ, ಅನ್ನ ಪೂರ್ಣ ಕಣ್ಣಿನ ಆಸ್ಪತ್ರೆ, ರೆಡ್‌ಕ್ರಾಸ್ ಬ್ಲಡ್ ಬ್ಯಾಂಕ್ ಇವರುಗಳ ಸಂಯುಕ್ತಾಶ್ರಯದಲ್ಲಿ ನಡೆಯಲಿದೆ. ಕಾರ್ಯಕ್ರಮದಲ್ಲಿ ಶ್ರೀಮತಿ ಭಾರತಿ ವಿಷ್ಣುವರ್ಧನ್, ಅನಿರುದ್ಧ, ರೋಟರಿ ಸಂಸ್ಥೆಯ ವಿ.ಶ್ರೀನಿವಾಸಮೂರ್ತಿ ಗಣ್ಯರು ಭಾಗವಹಿಸುವರು. ವಿವರಗಳಿಗೆ ಮೊ.9448732869 ಸಂಪರ್ಕಿಸಬಹುದು.

ಹಿಜಾಬ್ ನಿಷೇಧ ಆದೇಶ ವಾಪಸ್ ಪಡೆಯುವ ಬಗ್ಗೆ ಸರ್ಕಾರ ಯೋಚಿಸಿಯೇ ಇಲ್ಲ: ಡಿಕೆಶಿ


ಬೆಂಗಳೂರು: ಹಿಜಾಬ್ ನಿಷೇಧ ಆದೇಶವನ್ನು ವಾಪಸ್ ಪಡೆಯುವ ಕುರಿತು ಸರ್ಕಾರ ಯೋಚಿಸಿಯೇ ಇಲ್ಲ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.



ಹಿಜಾಬ್ ನಿಷೇಧ ಆದೇಶ ಹಿಂಪಡೆಯಲು ಸೂಚನೆ ನೀಡಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೀಡಿದ್ದ ಹೇಳಿಕೆ ಕುರಿತು ಸುದ್ದಿಗಾರರಿಗೆ ಸೋಮವಾರ ಪ್ರತಿಕ್ರಿಯಿಸಿದ ಅವರು, ನಾವು ಆ ಬಗ್ಗೆ ಯೋಚಿಸಿಯೇ ಇಲ್ಲ. ಮಾಧ್ಯಮಗಳೇ ಇದನ್ನು ದೊಡ್ಡ ವಿಷಯವನ್ನಾಗಿ ಮಾಡುತ್ತಿವೆ ಎಂದರು. ಹಿಜಾಬ್ ನಿಷೇಧ ವಿಷಯ ಚರ್ಚೆಗೆ ಬರುತ್ತಿದೆ ಎಂದು ಮಾಧ್ಯಮದವರೇ ಹೇಳುತ್ತಿದ್ದಾರೆ. ಸರ್ಕಾರದ ಮುಂದೆ ಅಂತಹ ಪ್ರಸ್ತಾವ ಎಲ್ಲಿದೆ ಎಂದು ಪ್ರಶ್ನಿಸಿದರು. ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್‌ಭೇಟಿ ಕುರಿತು ಕೇಳಿದಾಗ, ನಗರಾಭಿವೃದ್ಧಿ ಇಲಾಖೆಯ ವ್ಯಾಪ್ತಿಯಲ್ಲಿ ಕೆಲವು ಯೋಜನಾ ಪ್ರಾಧಿಕಾರಗಳಿವೆ. ಅವುಗಳಿಗೆ ಅಧ್ಯಕ್ಷರು ಮತ್ತು ಸದಸ್ಯರ ನಾಮನಿರ್ದೇಶನ ಕುರಿತು ಚರ್ಚಿಸಿದ್ದೇವೆ. ಸಚಿವರನ್ನು ವೀಕ್ಷಕರನ್ನಾಗಿ ನಿಯೋಜಿಸಿರುವ ಲೋಕಸಭಾ ಕ್ಷೇತ್ರದ ಸಂಭಾವ್ಯ ಅಭ್ಯರ್ಥಿಗಳ ಕುರಿತೂ ಚರ್ಚಿಸಿದ್ದೇವೆ ಎಂದರು. ನಿಗಮ, ಮಂಡಳಿ ನಾಮ ನಿರ್ದೇಶನಕ್ಕೆ ಪಕ್ಷದ ವರಿಷ್ಠರಿಗೆ ಪಟ್ಟಿ ನೀಡಲಾಗಿದೆ. ಯಾವುದೇ ಕ್ಷಣದಲ್ಲಿ ನೇಮಕಾತಿ ಆದೇಶ ಹೊರ ಬೀಳಬಹುದು ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಪರಿಹಾರಕ್ಕಾಗಿ ರೈತರು ಬರಗಾಲವನ್ನು ಬಯಸುತ್ತಾರೆ ಎಂಬ ಸಕ್ಕರೆ ಸಚಿವ ಶಿವಾನಂದ ಪಾಟೀಲ ಹೇಳಿಕೆ ಕುರಿತು ಪ್ರಶ್ನಿಸಿದಾಗ, ಈ ಬಗ್ಗೆ ನನಗೆ ಮಾಹಿತಿ ಇಲ್ಲ. ಅವರು ಯಾವ ಅರ್ಥದಲ್ಲಿ ಹೇಳಿದ್ದಾರೋ ಗೊತ್ತಿಲ್ಲ ಎಂದರು.

ಮಾಜಿ ಪ್ರೇಯಸಿಯಿಂದ ಮಾದಕ ವ್ಯಸನದ ಆರೋಪ

ವೈದ್ಯಕೀಯ ಪರೀಕ್ಷೆಗೆ ಸಿದ್ಧ ಎಂದ ಕ್ರಿಕೆಟಿಗ ಕೆ.ಸಿ.ಕಾರಿಯಪ್ಪ



ಬೆಂಗಳೂರು: ಮಾಜಿ ಪ್ರೇಯಸಿಯ ಆರೋಪಗಳ ಕುರಿತು ಪ್ರತಿಕ್ರಿಯಿಸಿರುವ ಕ್ರಿಕೆಟಿಗ ಕೆ.ಸಿ.ಕಾರಿಯಪ್ಪ ಯಾರು ಮಾದಕ ಪದಾರ್ಥ ಸೇವಿಸುತ್ತಿದ್ದರು ಎಂಬುದನ್ನು ತಿಳಿದುಕೊಳ್ಳಲು ವೈದ್ಯಕೀಯ ಪರೀಕ್ಷೆ ನಡೆಯಲಿ. ನಾನು ಈ ಸವಾಲು ಸ್ವೀಕರಿಸಲು ಸಿದ್ಧನಿದ್ದೇನೆ ಎಂದಿದ್ದಾರೆ. ತಮ್ಮ ವಿರುದ್ಧದ ಗಂಭೀರ ಆರೋಪಗಳ ಕುರಿತು ಪ್ರತಿಕ್ರಿಯಿಸಿರುವ ಅವರು, ಅವರು ಸಾಕಷ್ಟು ಆರೋಪಗಳನ್ನು ಮಾಡಿ ದ್ದಾರೆ. ಮಾದಕ ಪದಾರ್ಥ ಸೇವಿಸುತ್ತಿದ್ದೆ ಎಂದು ಹೇಳಿದ್ದಾರೆ. ಇವೆಲ್ಲವೂ ಸಹ ನನ್ನ ಕ್ರಿಕೆಟ್ ಜೀವನ ವನ್ನು ಅಂತ್ಯಗೊಳಿಸುವ ಯತ್ನ ಎಂದು ಹೇಳಿದರು.

ಅಹಮದಾಬಾದಿಗೆ ಬಂದಿದ್ದಾಗ ಅವರು ನನ್ನ ರೂಮಿಗೆ ಮಾದಕ ವಸ್ತುಗಳನ್ನು ತರಿಸಿಕೊಂಡು ಸೇವಿಸಿದ್ದಾರೆ. ಆ ಸಂದರ್ಭದಲ್ಲಿ ನಾನು ಎಷ್ಟೇ ಹೇಳಿದರೂ ಕೇಳದೆ, ನನ್ನ ಕ್ರಿಕೆಟ್ ಜೀವನ ಅಂತ್ಯ ಮಾಡುವುದಾಗಿಯೂ, ನನ್ನ ಹೆಸರು ಹಾಳು ಮಾಡುವುದಾಗಿಯೂ ಮಾದಕ ಸೇವನೆ ಮುಂದುವರೆಸಿದ್ದರು. ಓರ್ವ ಕ್ರೀಡಾಪಟುವಾಗಿ ನಾನು ಮಾದಕ ವಸ್ತುಗಳ ಸೇವನೆಯ ವಿರೋಧಿ. ಆದ್ದರಿಂದ ಆ ಸಂದರ್ಭದಲ್ಲಿ ನನ್ನ ರಕ್ಷಣೆಗಾಗಿ ಈ ವಿಡಿಯೋ ಚಿತ್ರೀಕರಣ ಮಾಡಿಕೊಂಡಿದ್ದು, ಅದನ್ನು ಪೊಲೀಸರಿಗೂ ನೀಡುತ್ತಿದ್ದೇನೆ. ಅದಷ್ಟೇ ಅಲ್ಲದೇ, ಬೇರೆಯವರ ಜೊತೆ ಹೋಟೆಲ್‌ಗಳಲ್ಲಿ ಮಾದಕ ಸೇವನೆ ಮಾಡುತ್ತಿರುವ ವಿಡಿಯೋಗಳೂ ಸಹ ನನಗೆ ದೊರೆತಿದ್ದು, ಅವುಗಳನ್ನೂ ಪೊಲೀಸರಿಗೆ ನೀಡುತ್ತೇನೆ. ಈ ವಿಚಾರದಲ್ಲಿ ಸುಳ್ಳು ಆರೋಪಗಳ ಮೂಲಕ ನನಗೆ ಸಾಕಷ್ಟು ಮಾನಸಿಕ ಹಿಂಸೆ ನೀಡಿದ್ದಾರೆ. ನನಗೆ ನ್ಯಾಯ ಬೇಕಿದೆ, ಆದ್ದರಿಂದ ಅಗತ್ಯ ದಾಖಲೆಗಳನ್ನು ನೀಡುತ್ತಿದ್ದೇನೆ ಎಂದಿದ್ದಾರೆ.

ಕೆ.ಸಿ.ಕಾರಿಯಪ್ಪ ಬಗಲಗುಂಟೆ ಪೊಲೀಸ್ ಠಾಣೆಗೆ ನೀಡಿದ ದೂರಿನಲ್ಲಿ, ಈ ಹಿಂದೆ ನಾನು ಅವರೊಂದಿಗೆ ಸಂಬಂಧದಲ್ಲಿದ್ದೆ. ನಂತರ ದೂರವಾಗಿದ್ದು, ಇದೀಗ ಮಾನಸಿಕ ಕಿರುಕುಳ ನೀಡುತ್ತಿದ್ದಾರೆ ಎಂದು ಉಲ್ಲೇಖಿಸಿದ್ದಾರೆ. ಇನ್ನೊಂದೆಡೆ, ಆರ್.ಟಿ.ನಗರ ಪೊಲೀಸ್ ಠಾಣೆಯಲ್ಲಿ ಮಾಜಿ ಪ್ರೇಯಸಿ ಕೂಡ ಕೆ.ಸಿ.ಕಾರಿಯಪ್ಪ ವಿರುದ್ಧ ಪ್ರತಿ ದೂರು ಸಲ್ಲಿಸಿದ್ದಾರೆ.

ಪ್ರತಿ ದೂರಿನಲ್ಲಿ, ನಾನು ಮತ್ತು ಕಾರಿಯಪ್ಪ ಇನ್ಸ್ಟಾಗ್ರಾಂ ಮೂಲಕ ಪರಿಚಯವಾದೆವು. ಇಬ್ಬರು ಒಂದೇ ಸಮುದಾಯದವರು. ಸಂಬಂಧದಲ್ಲಿದ್ದಾಗ ಇಬ್ಬರ ನಡುವೆ ಪರಸ್ಪರ ಸಮ್ಮತಿಯ ಮೇರೆಗೆ ದೈಹಿಕ ಸಂಪರ್ಕ ಬೆಳೆದು ನಾನು ಗರ್ಭ ಧರಿಸಿದ್ದೆ. ಅವರು ಬಲವಂತವಾಗಿ ಮಾತ್ರೆ ನೀಡಿ ಗರ್ಭಪಾತ ಮಾಡಿಸಿದ್ದರು. ಅಲ್ಲದೇ ನನ್ನಿಂದ ಹಂತ ಹಂತವಾಗಿ 2 ಲಕ್ಷ ರೂ. ಹಣ ಪಡೆದುಕೊಂಡರು. ನಂತರದಲ್ಲಿ ಅವರ ಪೋಷಕರು ನೀನು ವಿಚ್ಛೇದಿತೆ. ನಮ್ಮ ಮಗನನ್ನು ಮದುವೆಯಾಗಬೇಡ ಎಂದು ಅವಾಚ್ಯವಾಗಿ ನಿಂದಿಸಿದರು. ಡಿಸೆಂಬರ್ 18ರಂದು ದಿಣ್ಣೂರು ಮುಖ್ಯ ರಸ್ತೆಯಲ್ಲಿರುವ ನಮ್ಮ ಮನೆಗೆ ಬಂದಿದ್ದ ಕಾರಿಯಪ್ಪ ನೀನು ಈಗಾಗಲೇ ಡಿವೋರ್ಸ್ ಆದವಳು. ನಿನ್ನನ್ನು ಕಂಡರೆ ನನಗಿಷ್ಟವಿಲ್ಲ. ನಿನ್ನಿಂದ ನಾನು ಯಾವುದೇ ಹಣ ಪಡೆದಿಲ್ಲ ಎಂದು ನನ್ನ ಮೇಲೆ ಹಲ್ಲೆ ಮಾಡಿ, ಅವಾಚ್ಯವಾಗಿ ನಿಂದಿಸಿ, ಬೆದರಿಕೆ ಹಾಕಿದ್ದಾರೆ ಎಂದು ಉಲ್ಲೇಖಿಸಿದ್ದಾರೆ. ಇದೀಗ ಎರಡು ಪೊಲೀಸ್ ಠಾಣೆಗಳಲ್ಲಿ ಪ್ರತ್ಯೇಕ ಎಫ್‌ಐಆರ್ ದಾಖಲಾಗಿದೆ. ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಪ್ರಧಾನಿ ಮೋದಿ ವಿರುದ್ಧ ಮಾನಹಾನಿಕರ ಟೀಕೆ: ಕಾಂಗ್ರೆಸ್ ಸಂಸದನ ವಿರುದ್ಧ ಪ್ರಕರಣ

ಅಹ್ಮದಾಬಾದ್: ಪ್ರಧಾನಿ ಮೋದಿ ವಿರುದ್ಧ ಮಾನಹಾನಿಕರ ಟೀಕೆಗಳನ್ನು ಮಾಡಿದ್ದಕ್ಕಾಗಿ ಕಾಂಗ್ರೆಸ್‌ನ ಸಂಸದ ವಿರ್ಜಿ ತುಮ್ಮರ್ ವಿರುದ್ಧ ಪ್ರಕರಣ ದಾಖಲಾಗಿದೆ.

ಗುಜರಾತ್‌ನ ಅಮ್ರೇಲಿ ಜಿಲ್ಲೆಯಲ್ಲಿ ಸೋಮವಾರ ನಡೆದ ಕಾರ್ಯಕ್ರಮವೊಂದರಲ್ಲಿ ಸಂಸದ ಮಾನಹಾನಿಕರ ಟೀಕೆ ಮಾಡಿದ್ದಾರೆ. ಆದರೆ, ಯಾರನ್ನೂ ನೋಯಿಸುವುದು ನನ್ನ ಉದ್ದೇಶವಲ್ಲ, ಸಾರ್ವಜನಿಕರಿಗಾಗಿ ಧ್ವನಿ ಎತ್ತುವುದಾಗಿದೆ ಎಂದು ಎಂದು ತುಮ್ಮರ್ ಹೇಳಿದ್ದಾರೆ. ದೂರಿನ ಆಧಾರದ ಮೇಲೆ, ಅಮ್ರೇಲಿ ನಗರ ಪೊಲೀಸರು ತುಮ್ಮರ್ ವಿರುದ್ಧ ಕ್ರಿಮಿನಲ್ ಮಾನನಷ್ಟ ಮತ್ತು ಉದ್ದೇಶಪೂರ್ವಕ ಅವಮಾನಕ್ಕೆ ಸಂಬಂಧಿಸಿದಂತೆ ಭಾರತೀಯ ದಂಡ ಸಂಹಿತೆಯ (ಐಪಿಸಿ) 499, 500 ಮತ್ತು 504 ರ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ ಎಂದು ಉಪ ಪೊಲೀಸ್ ವರಿಷ್ಠಾಧಿಕಾರಿ ಜೆ.ಪಿ.ಭಂಡಾರಿ ತಿಳಿಸಿದ್ದಾರೆ.

ಡಿ.22ರ ಕಾರ್ಯಕ್ರಮದಲ್ಲಿ ಮಾತನಾಡಿದ್ದ ಕಾಂಗ್ರೆಸ್ ಸಂಸದ, ಮೋದಿ ಅವರನ್ನು ದಲಾಲ್ (ಮಧ್ಯವರ್ತಿ) ಎಂದು ಹೇಳಿದ್ದರು. ಈ ಹೇಳಿಕೆ ವಿರುದ್ಧ ಬಿಜೆಪಿಯ ಅಮ್ರೇಲಿ ಜಿಲ್ಲೆಯ ಪ್ರಧಾನ ಕಾರ್ಯದರ್ಶಿ ಮೆಹುಲ್ ಧೋರಾಜಿಯಾ ದೂರು ನೀಡಿದ್ದರು.

32ನೇ ವರ್ಷಕ್ಕೆ ಇಹಲೋಕ ತ್ಯಜಿಸಿದ ಜನಪ್ರಿಯ ಸ್ಟಾಂಡಪ್ ಕಾಮಿಡಿಯನ್ ನೀಲ್ ನಂದ

ಲಾಸ್ ಏಂಜಲೀಸ್: ಜನಪ್ರಿಯ ಸ್ಟಾಂಡಪ್ ಕಾಮಿಡಿಯನ್ ನೀಲ್ ನಂದ ನಿಧನರಾಗಿದ್ದಾರೆ. ಅವರಿಗೆ 32 ವರ್ಷ ವಯಸ್ಸಾಗಿತ್ತು. ಜಿಮ್ಮಿ ಕಿಮೆಲ್ ಲೈವ್ ಮತ್ತು ಕಾಮಿಡಿ ಸೆಂಟ್ರಲ್‌ನ ಅದಾಮ್ ಡಿವೈನ್ ಹೌಸ್ ಪಾರ್ಟಿ ಮುಂತಾದ ಕಾರ್ಯಕ್ರಮಗಳಿಂದ ಜನಪ್ರಿಯತೆ ಪಡೆದಿದ್ದರು. ನೀಲ್ ನಂದಾ ನಿಧನರಾಗಿರುವ ಬಗ್ಗೆ ಅವರ ಮ್ಯಾನೇಜರ್ ಗ್ರೆಗ್ ವೈಸ್ ಮಾಧ್ಯಮಕ್ಕೆ ಮಾಹಿತಿ ಹಂಚಿಕೊಂಡಿದ್ದಾರೆ. ನೀಲ್ ನಂದಾ ನಿಧನರಾಗಿರುವ ಕಾರಣ ಬಗ್ಗೆ ಇನ್ನೂ ಬಹಿರಂಗವಾಗಿಲ್ಲ. ಅವರ ನಿಧನದ ನಂತರ, ಹಲವಾರು ಖ್ಯಾತ ಹಾಸ್ಯಗಾರರು ಪೋಸ್ಟ್ ಮಾಡಿ ಸಂತಾಪ ಸೂಚಿಸುತ್ತಿದ್ದಾರೆ. ಅವರು ಜಾರ್ಜಿಯಾದ ಅಟ್ಲಾಂಟಾದಲ್ಲಿ ಭಾರತೀಯ ವಲಸಿಗ ದಂಪತಿಗೆ ಜನಿಸಿದ್ದರು.



ಪದಾಧಿಕಾರಿಗಳ ಆಯ್ಕೆಯಲ್ಲಿ ವಿಜಯೇಂದ್ರ ಆಪ್ತರಿಗೆ ಆದ್ಯತೆ; ಬಿಜೆಪಿಯಲ್ಲಿ ಆಂತರಿಕ ಬಿರುಕು

ಬೆಂಗಳೂರು: ರಾಜ್ಯ ಬಿಜೆಪಿ ಘಟಕದ ಪದಾಧಿಕಾರಿಗಳ ಆಯ್ಕೆ ವಿಚಾರ ಇದೀಗ ಆ ಪಕ್ಷದ ಆಂತರಿಕ ಬಿಕ್ಕಟ್ಟಿಗೆ ಕಾರಣವಾಗಿದ್ದು, ಬಿವೈ ವಿಜಯೇಂದ್ರ ವಿರುದ್ಧ ಅವರದ್ದೇ ಪಕ್ಷದ ಹಿರಿಯ ನಾಯಕರು ಬಂಡಾಯವೆದ್ದಿದ್ದಾರೆ. ಹಿರಿಯ ನಾಯಕರಾದ ಬಸನಗೌಡ ಪಾಟೀಲ್ ಯತ್ನಾಳ್ ಮತ್ತು ವಿ.ಸೋಮಣ್ಣ ಅವರಿಂದ ಬಿಜೆಪಿ ರಾಜ್ಯಾಧ್ಯಕ್ಷರನ್ನಾಗಿ ನೇಮಿಸಿದಾಗ ಭಿನ್ನಮತ ಎದುರಿಸಿದ್ದ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಪುತ್ರ ಬಿವೈ ವಿಜಯೇಂದ್ರ ಅವರು ಪಕ್ಷದ ಹಿರಿಯರನ್ನು ಬದಿಗೊತ್ತಿ ಮತ್ತೆ ಕೆಲವರ ಕೆಂಗಣ್ಣಿಗೆ ಗುರಿಯಾಗಿದ್ದಾರೆ.

ಮಾಜಿ ಮುಖ್ಯಮಂತ್ರಿ, ಸಂಸದ ಸದಾನಂದಗೌಡ ಮತ್ತು ಹಿರಿಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ನೂತನ ಪದಾಧಿಕಾರಿಗಳ ಪಟ್ಟಿ ಬಗ್ಗೆ ತಕಾರಾರು ಎತ್ತಿದ್ದು, ವರಿಷ್ಠರ ತೀರ್ಮಾನಕ್ಕೆ ಅಸಮಾಧಾನ ವ್ಯಕ್ತಪಡಿಸಿ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪರವರ ಆಪ್ತರಿಗೆ ಪದಾಧಿಕಾರಿಗಳ ಪಟ್ಟಿಯಲ್ಲಿ ಆದ್ಯತೆ ನೀಡಿರುವುದು ಇವರಿಬ್ಬರ ಸಿಟ್ಟಿಗೆ ಕಾರಣವಾಗಿ ನೂತನ ಪದಾಧಿಕಾರಿಗಳ ನೇಮಕಾತಿ ಬಗ್ಗೆ ಕೆಂಡಕಾರಿ ರಾಜ್ಯದ ಹಿರಿಯ ನಾಯಕರ ಜತೆ ಚರ್ಚಿಸದೆ ಪಟ್ಟಿಯನ್ನು ಅಂತಿಮಗೊಳಿಸಿರುವುದಕ್ಕೆ ಆಕ್ರೋಶ ಹೊರ ಹಾಕಿದ್ದಾರೆ, ಹಾಗೆಯೇ, ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪರವರನ್ನು ಗುರಿಯಾಗಿಸಿ ಈ ಇಬ್ಬರು ನಾಯಕರು ವಾಗ್ದಾಳಿ ನಡೆಸಿದ್ದಾರೆ.

ನೂತನ ಪದಾಧಿಕಾರಿಗಳ ಪಟ್ಟಿಯಲ್ಲಿ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪರವರ ಆಪ್ತ ವಲಯದಲ್ಲಿರುವವರಿಗೆ ಮಣೆ ಹಾಕಲಾಗಿದೆ. ಪಟ್ಟಿ ಬಿಡುಗಡೆಗೂ ಮುನ್ನ ಕೇಂದ್ರ ನಾಯಕರು ರಾಜ್ಯಕ್ಕೆ ಬಂದು ಕೋರ್ ಕಮಿಟಿ ಸಭೆಯಲ್ಲಿ ಚರ್ಚೆ ನಡೆಸಿ ಹಿರಿಯ ನಾಯಕರ ಅಭಿಪ್ರಾಯವನ್ನು ಗಣನೆಗೆ ತೆಗೆದುಕೊಂಡು ನೂತನ ಪದಾಧಿಕಾರಿಗಳ ಪಟ್ಟಿ ಬಿಡುಗಡೆ ಮಾಡಬೇಕಿತ್ತು ಎಂಬ ಮಾತುಗಳನ್ನು ಹೇಳಿದ್ದಾರೆ.



ಹಾಲಿ ನೇಮಕಗೊಂಡಿರುವ ಬಿಜೆಪಿಯ ಬಹುಪಾಲು ಪದಾಧಿಕಾರಿಗಳು ಅವರ ಅನುಯಾಯಿಗಳು ಮತ್ತು ಆಪ್ತರ ಎನ್ನಲಾಗಿದೆ. ಈ ಬೆಳವಣಿಗೆಯಿಂದ ರಾಜ್ಯ ಬಿಜೆಪಿಯ ಹಿರಿಯ ನಾಯಕರು ಬಿವೈ ವಿಜಯೇಂದ್ರ ವಿರುದ್ಧ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ. ಈಗಾಗಲೇ ಪದಾಧಿಕಾರಿಗಳ ಆಯ್ಕೆಯನ್ನು ಕೆಜೆಪಿ2 ಎಂದು ಜರಿದಿರುವ ಪಕ್ಷದ ಹಿರಿಯ ನಾಯಕ ಬಸನಗೌಡ ಪಾಟೀವ್ ಅವರು, ಬಿಜೆಪಿಯಲ್ಲಿ ಯಡಿಯೂರಪ್ಪ ವಿರೋಧಿ ಬಣದಲ್ಲಿ ಗುರುತಿಸಿಕೊಂಡು ಸಮಯ ಸಿಕ್ಕಾಗಲೆಲ್ಲ ಯಡಿಯೂರಪ್ಪ ಮತ್ತು ಅವರ ಕುಟುಂಬದ ವಿರುದ್ಧ ವಾಗ್ದಾಳಿ ನಡೆಸುತ್ತಿರುವ ಹಿರಿಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ನೂತನ ಪದಾಧಿಕಾರಿಗಳ ಪಟ್ಟಿ ನೋಡಿದರೆ ಕೆಜೆಪಿ 2 ಪಟ್ಟಿ ಇದ್ದಂತಿದೆ ಎಂದು ವ್ಯಂಗ್ಯವಾಡಿದ್ದಾರೆ. ಅಂತೆಯೇ ಯಡಿಯೂರಪ್ಪರವರದ್ದು ಕೆಜೆಪಿ 1 ಆದರೆ, ಮಗನದು ಕೆಜೆಪಿ 2, ಮುಂದೆ ಮೊಮ್ಮಗ ಬಂದರೆ ಕೆಜೆಪಿ 3 ಎಂದು ಬಸನಗೌಡ ಪಾಟೀಲ್ ಯತ್ನಾಳ್ ನೂತನ ಪದಾಧಿಕಾರಿಗಳ ಪಟ್ಟಿಗೆ ಆಕ್ರೋಶ ಹೊರ ಹಾಕಿ ಈ ಪಟ್ಟಿಯ ಆಯುಷ್ಯ 2024ರ ಲೋಕಸಭಾ ಚುನಾವಣೆಗೆ ಮಾತ್ರ. ಬಿವೈ ವಿಜಯೇಂದ್ರ ಎಲ್ಲ 28 ಸ್ಥಾನಗಳಲ್ಲೂ ಪಕ್ಷ ಗೆಲ್ಲುವ ಭರವಸೆ ನೀಡಿದ್ದಾರೆ. ಒಂದು ಸ್ಥಾನ ಕಡಿಮೆಯಾದರೆ ಅವರನ್ನು ಅಧ್ಯಕ್ಷ ಸ್ಥಾನದಿಂದ ಕೆಳಗಿಳಿಸಲಾಗುವುದು ಎಂದು ಯತ್ನಾಳ್ ಅಸಮಾಧಾನ ಹೊರಹಾಕಿದ್ದಾರೆ.

ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ತನ್ನ ಮಗನನ್ನು ಉದ್ಧಾರ ಮಾಡದಿದ್ದರೆ ನಾವು ಲೋಕಸಭೆಯಲ್ಲಿ ಕೆಲಸ ಮಾಡುವುದಿಲ್ಲ ಎಂದು ಹೇಳಿದ್ದಾರೆ. ಅದಕ್ಕೆ ವರಿಷ್ಠರು ಹಾಳಾಗಿ ಹೋಗಲಿ ಅಂತ ಕಳ್ಳರ ಕೈಯಲ್ಲಿ ಬೀಗ ಕೊಟ್ಟಿದ್ದಾರೆ. ಈ ಬೀಗ 2024ರವರೆಗೆ ಮಾತ್ರ ಲೋಕಸಭೆಯಲ್ಲಿ 28 ಸೀಟು ಬರಲಿಲ್ಲ ಎಂದರೆ ಬೀಗ ಕಸಿದುಕೊಳ್ಳುತ್ತಾರೆ. ಈಗ ರಾಜಕೀಯದಲ್ಲಿ ಲಂಪಟರು ಬಹಳ ಇದ್ದಾರೆ. ಅವರೆಲ್ಲ ಹಲ್ಕಾ ಕೆಲಸ ಮಾಡುತ್ತಾರೆ. ಇವತ್ತು ಮೌಲ್ಯಾಧಾರಿತ ರಾಜಕಾರಣ ಇಲ್ಲ. ಎಲ್ಲ ಕಳ್ಳರು ಲಫಂಗರು ಹೆಚ್ಚು ಸೇರುತ್ತಿದ್ದಾರೆ. ಒಳ್ಳೆಯವರಿಗೆ ಬ್ಲ್ಯಾಕ್‌ಮೇಲ್ ಮಾಡುತ್ತಾರೆ. 2024ರ ಚುನಾವಣೆಯ ನಂತರ ಮೇಜರ್ ಆಪರೇಷನ್ ಮಾಡದೇ ಇದ್ದರೆ ಮುಂದಿನ ನಿರ್ಣಯ ನಾನು ಮಾಡುತ್ತೇನೆ ಎಂದರು.

2ನೇ ಹಂತದ ಭಾರತ್ ಜೋಡೋ ಯಾತ್ರೆಗೆ ರಾಹುಲ್ ಸಜ್ಜು

ಪ್ರಿಯಾಂಕಾ ವಾದ್ರಾ ಸಾಥ್?

ನವದೆಹಲಿ: ಲೋಕಸಭಾ ಚುನಾವಣೆಗೆ ದಿನಗಣನೆ ಆರಂಭವಾಗಿರುವಂತೆಯೇ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ತಮ್ಮ 2ನೇ ಹಂತದ ಭಾರತ್ ಜೋಡೋ ಯಾತ್ರೆಗೆ ಸಜ್ಜಾಗಿದ್ದು, ಈ ಬಾರಿ ರಾಹುಲ್ ಜೊತೆ ಅವರ ಸಹೋದರಿ ಪ್ರಿಯಾಂಕಾ ವಾದ್ರಾ ಕೂಡ ಹೆಜ್ಜೆ ಹಾಕುವ ಸಾಧ್ಯತೆ ಇದೆ ಎನ್ನಲಾಗಿದೆ.

ಕನ್ಯಾಕುಮಾರಿಯಿಂದ ಶ್ರೀನಗರದ ತನಕ 150 ದಿನಗಳ ಕಾಲ ಭಾರತ್ ಜೋಡೋ ಯಾತ್ರೆ ನಡೆಸಿ ಅಭೂತಪೂರ್ವ ಯಶಸ್ಸು ಕಂಡ ಬೆನ್ನಲ್ಲೆ ಕಾಂಗ್ರೆಸ್ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಅವರು ಜನವರಿಯಿಂದ ಎರಡನೇ ಹಂತದ ಭಾರತ್ ಜೋಡೋ ಯಾತ್ರೆ ಆರಂಭಿಸಲು ಸಜ್ಜಾಗಿದ್ದಾರೆ. ಲೋಕಸಭಾ ಚುನಾವಣೆ ಸಮೀಸುತ್ತಿರುವ ಬೆನ್ನಲ್ಲೇ ರಾಹುಲ್ ಅವರು ಎರಡನೇ ಹಂತದ ಭಾರತ ಜೋಡೋ ಯಾತ್ರೆಗೆ ಕೈಗೊಳ್ಳಲು ಮುಂದಾಗಿದ್ದಾರೆ.

ಲೋಕಸಭೆ ಚುನಾವಣೆಗೂ ಮುನ್ನ ಈ ಬಾರಿ ಭಾರತ್ ಜೋಡೋ ಯಾತ್ರೆಯ ಎರಡನೇ ಹಂತದಲ್ಲಿ ಪೂರ್ವ ಭಾಗದಿಂದ ಪಶ್ಚಿಮ ಭಾಗದವರೆಗೆ ಪಾದಯಾತ್ರೆ ನಡೆಸಲಿದ್ದಾರೆ. ಈ ಬಾರಿ ಸಹೋದರಿ ಪ್ರಿಯಾಂಕಾ ಗಾಂಧಿ ಯಾತ್ರೆ ಯುದ್ದಕ್ಕೂ ರಾಹುಲ್ ಗಾಂಧಿ ಜೊತೆಯಾಗುವ ಸಾಧ್ಯತೆಗಳಿವೆ ಎನ್ನಲಾಗಿದೆ. ಭಾರತ್ ಜೋಡೋ ಯಾತ್ರೆ ಎಲ್ಲಿಂದ ಎಲ್ಲಿಗೆ ನಡೆಸಬೇಕು ಎನ್ನುವುದೂ ಸೇರಿದಂತೆ ಪಾದಯಾತ್ರೆಯ ಮಾರ್ಗ ಸೇರಿದಂತೆ ವಿವಿಧ ರೂಪರೇಷೆ ಸಿದ್ದಪಡಿಸಲಾಗುತ್ತಿದೆ ಎಂದು ಕಾಂಗ್ರೆಸ್ ಉನ್ನತ ಮೂಲಗಳು ತಿಳಿಸಿವೆ. 2022ರ ಸೆಪ್ಟೆಂಬರ್‌ರಿಂದ 2023 ರ ಜನವರಿ ವರೆಗೆ ಸುಮಾರು 150 ದಿನಗಳಲ್ಲಿ ರಾಹುಲ್ ಗಾಂಧಿ ಅವರು ಕನ್ಯಾಕುಮಾರಿಯಿಂದ ಶ್ರೀನಗರದ ಕಾಲ್ನಡಿಗೆ ನಡೆಸಿದ್ದರು. ಈ ವೇಳೆ ವಿರೋಧ ಪಕ್ಷಗಳ ಹಲವು ನಾಯಕರು ಆಯಾ ರಾಜ್ಯಗಳಲ್ಲಿ ರಾಹುಲ್ ಗಾಂಧಿ ಜೊತೆಯಾಗಿ ಬೆಂಬಲ ಸೂಚಿಸಿದ್ದರು, ಜೊತೆಗೆ ರಾಜ್ಯಗಳಲ್ಲಿ ಜನರಿಂದಲೂ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿತ್ತು. ಇದೀಗ ಈ ಯಾತ್ರೆಯ 2ನೇ ಹಂತ ಆರಂಭವಾಗುತ್ತಿದ್ದು, ಭಾರತ್ ಜೋಡೋ ಯಾತ್ರೆ ಪೂರ್ವದಿಂದ ಪಶ್ಚಿಮ ಭಾಗದ ವರೆಗೆ ನಡೆಯಲಿದ್ದು ಯಾತ್ರೆಯ ಸ್ಥಳ, ದಿನಾಂಕ, ಮಾರ್ಗ ಸೇರಿದಂತೆ ಮತ್ತಿತರ ವಿಷಯಗಳನ್ನು ಅಂತಿಮಗೊಳಿಸಲಾಗುತ್ತಿದೆ ಎಂದು ಹಿರಿಯ ನಾಯಕರೊಬ್ಬರು ಮಾಹಿತಿ ನೀಡಿದ್ದಾರೆ. ಈ ಬಾರಿ ಪಾದಯಾತ್ರೆಯಲ್ಲಿ ಪ್ರಿಯಾಂಕಾ ಭಾಗಿಯಾಗಲಿದ್ದು ಮಹಿಳೆಯರು, ಯುವಜನರು ಮತ್ತು ಗ್ರಾಮೀಣ ಜನತೆಯನ್ನು ಒಳಗೊಳ್ಳುವಿಕೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆಗಳಿವೆ. ಈ ವಾರ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ನಡೆಯಲಿದ್ದು ಭಾರತ್ ಜೋಡೋ ಯಾತ್ರೆಯ ರೂಪುರೇಷೆ ಸಿದ್ಧಪಡಿಸುವ ಸಾಧ್ಯತೆಗಳಿವೆ. ಪಾದಯಾತ್ರೆ ವೇಳೆ ನಗರಗಳು ಮತ್ತು ಪಟ್ಟಣಗಳಲ್ಲಿನ ಪ್ರಮುಖ ಗುರಿ ತಾಣಗಳಲ್ಲಿ ಮತ್ತು ಸುತ್ತಮುತ್ತಲಿನ ನಡಿಗೆಯಲ್ಲಿ ಸಮಾವೇಶ, ಜನರೊಂದಿಗೆ ಸಂವಾದ ನಡೆಯಲಿದೆ.



2ನೇ ವರ್ಷದ ಸವಿನೆನಪು



ನೀವು ನಮ್ಮನ್ನಗಲಿ ಇಂದಿಗೆ 2 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ

ದುಃಖತಪ್ತರು: ಪತ್ನಿ, ಮಕ್ಕಳು, ಸೊಸೆ, ಮೊಮ್ಮಕ್ಕಳು, ಕುಟುಂಬ ವರ್ಗದವರು ಹಾಗೂ ಬಂಧು ಮಿತ್ರರು

ಭಾಸ್ಕರಯ್ಯ ಕೆ (ನಾಗಣ್ಣ)
ನಿವೃತ್ತ ಸರ್ಕಾರಿ ನೌಕರರು (ಕಾರ್ಮಿಕ ಇಲಾಖೆ)

4ನೇ ವರ್ಷದ ಪುಣ್ಯಸ್ಮರಣೆ



ನೀವು ನಮ್ಮನ್ನಗಲಿ ಇಂದಿಗೆ 4 ವರ್ಷ ಕಳೆದರೂ ಸದಾ ನಿಮ್ಮ ಪ್ರೀತಿ ಆದರ್ಶಗಳು ನಮಗೆ ದಾರಿದೀಪವಾಗಿದೆ. ಸದಾ ನಿಮ್ಮ ಸವಿನೆನಪು ನಮ್ಮ ಮನದಲ್ಲಿ ಹಚ್ಚ ಹಸಿರಾಗಿದೆ.ಸದಾ ನಿಮ್ಮ ನೆನಪಿನಲ್ಲಿರುವ ಪತ್ನಿ, ಪುತ್ರರು, ಪುತ್ರಿ, ಅಳಿಯ ಸೊಸೆಯಂದಿರು, ಮೊಮ್ಮಕ್ಕಳು ಮತ್ತು ಕುಟುಂಬವರ್ಗದವರು ಬಿ.ಇ.ಎಂ.ಎಲ್ ಲೇಔಟ್ ರಾಜರಾಜೇಶ್ವರಿ ನಗರ, ಮೈಸೂರು.

ಶ್ರೀ ಪಟ್ಟಡ.ಡಿ.ಚೆಟ್ಟಿಚ
ಜನನ:29.6.1933
ಮರಣ.26.12.2019

12ನೇ ವರ್ಷದ ಸವಿನೆನಪು



ನೀವು ನಮ್ಮನ್ನಗಲಿ ಇಂದಿಗೆ 12 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ,

ಶ್ರೀಮತಿ ನಿಂಗಮ್ಮ ಹಾಗೂ ಕುಟುಂಬ ವರ್ಗದವರು ಕೆ.ಜಿ. ಕೊಪ್ಪಲು, ಮೈಸೂರು.

ಕಬ್ಬೇರಿ ಪಾಪಣ್ಣ
ನಿಧನ: 26–12–2011

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, 1] ಶ್ರೀ ಎಸ್.ಟಿ. ಬುದ್ದಿಸಾಗರ್ ಬಿನ್ ಎಸ್. ಪಿ. ತಮ್ಮಯ್ಯ ಮತ್ತು, 2] ಶ್ರೀ. ಪ್ರಭಾಕರ್ ರಾವ್ ಬೋಬಡೆ ಬಿನ್ ಲೇಟ್ ಯಶವಂತ ರಾವ್ ಬೋಬಡೆ ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತಿನ ಮಾಲೀಕರಾಗಿದ್ದು, ಸದರಿ ಸ್ವತ್ತುಗಳನ್ನು ನನ್ನ ಕಕ್ಷಿದಾರರಿಗೆ ಮಾರಾಟ ಮಾಡಲು ಅಪೇಕ್ಷಿಸಿರುತ್ತಾರೆ. ಅದರಂತೆ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆಯಲು ಸಿದ್ಧರಿರುವುದರಿಂದ ಸದರಿ ಸ್ವತ್ತಿನ ಮೇಲೆ ಯಾರಿಗಾದರೂ, ಬ್ಯಾಂಕ್ ಮತ್ತು ಆರ್ಥಿಕ ಸಂಸ್ಥೆಗಳನ್ನು ಒಳಗೊಂಡಂತೆ, ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ ಆಕ್ಷೇಪಣೆ, ಸಿವಿಲ್ ವ್ಯಾಜ್ಯ, ತಂಟೆ–ತಕರಾರುಗಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟವಾದ ದಿನದಿಂದ 10 (ಹತ್ತು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ಲಿಖಿತ ರೂಪದಲ್ಲಿ ಅಥವಾ ಖುದ್ದಾಗಿ ಸೂಕ್ತ ದಾಖಲಾತಿಗಳೊಂದಿಗೆ ಈ ಕೆಳಗೆ ನಮೂದಿಸಿರುವ ಕಛೇರಿ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ತಪ್ಪಿದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧ ಕ್ರಯಕ್ಕೆ ಪಡೆದುಕೊಳ್ಳುತ್ತಾರೆ. ಮೇಲ್ಕಂಡ ಅವಧಿಯ ನಂತರ ಬರುವ ಆಕ್ಷೇಪಣೆ, ತಂಟೆ–ತಕರಾರುಗಳಿಗೆ ನನ್ನ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ: ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ವರುಣ ಹೋಬಳಿ, ಹಾರೋಹಳ್ಳಿ ಗ್ರಾಮದಲ್ಲಿರುವ ಜಮೀನುಗಳ ಒಟ್ಟು ವಿಸ್ತೀರ್ಣ 04 ಎಕರೆ 12 ½ ಗುಂಟೆಯ, ಮಾಲೀಕರ ಹೆಸರು, ಸರ್ವೆ ನಂಬರ್, ವಿಸ್ತೀರ್ಣ ಹಾಗೂ ಚಕ್ಕುಬಂದಿ, ವಿವರ ಈ ಕೆಳಕಂಡಂತಿದೆ:

ಸರ್ವೆ ನಂ.	ಖಾತೆ ಸಂ.	ವಿಸ್ತೀರ್ಣ		ಚಕ್ಕುಬಂದಿ			
		ಎ	ಗು	ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ
83/1	615	00	30	ಸರ್ವೆ ನಂ. 84/3	ಸರ್ವೆ ನಂ. 1101	ಸರ್ವೆ ನಂ. 82 & 81	ಸರ್ವೆ ನಂ. 83/2
1101	2360	00	37.8	ಸರ್ವೆ ನಂ. 83/1	ಸರ್ವೆ ನಂ. 113	ಸರ್ವೆ ನಂ. 1101 ರ ಉಳಿಕೆ ಜಮೀನು	ಸರ್ವೆ ನಂ. 1101 ರ ಉಳಿಕೆ ಜಮೀನು
ಮಾಲೀಕರು: ಎಸ್.ಟಿ. ಬುದ್ದಿಸಾಗರ್							
122/1	79	01	01	ಸರ್ವೆ ನಂ. 1102	ಸರ್ವೆ ನಂ.129	ಸರ್ವೆ ನಂ. 121	ಸರ್ವೆ ನಂ. 122/2
122/2	456	00	34	ಸರ್ವೆ ನಂ. 123 & 1102	ಸರ್ವೆ ನಂ. 129	ಸರ್ವೆ ನಂ. 122/1	ಸರ್ವೆ ನಂ. 122/3
84/2	53	00	30	ಸರ್ವೆ ನಂ. 87 &88	ಸರ್ವೆ ನಂ. 84/3	ಸರ್ವೆ ನಂ. 84/1	ಸರ್ವೆ ನಂ. 85
ಮಾಲೀಕರು: ಪ್ರಭಾಕರ್ ರಾವ್ ಬೋಬಡೆ							

ಸಹಿ/– ಶ್ರೀಲತಾ ದೀಕ್ಷಿತ್, ವಕೀಲರು, ಎಸ್‌ಎಲ್‌ಡಿ ಲಾ ಫರ್ಮ್

ನಂ. 1458/ಎ, ನಾರಾಯಣಶಾಸ್ತ್ರಿ ರಸ್ತೆ, ಸಪ್ನ ಬುಕ್ ಹೌಸ್ ಸಮೀಪ, ಮೈಸೂರು. ಮೊ: 9844640641